



ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡವೇ ಸತ್ಯ, ಕನ್ನಡವೇ ನಿತ್ಯ

ಸಂಪುಟ: 22, ಸಂಚಿಕೆ: 46, ಪುಟಗಳು: 8, ಮಂಗಳವಾರ, 26 ನವೆಂಬರ್ 2024 RNI NO. KARKAN/2002/08054

epaper: www.sanjemugilu.com

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3


ಸುಭಾಷಿತ

ಬಲಿಷ್ಟ ಸಂಬಂಧಗಳು ಪರಸ್ಪರ ಅರ್ಥ ಮಾಡಿಕೊಂಡದ್ದರ ಫಲವಲ್ಲ; ಅಪಾರ್ಥಗಳನ್ನು ಮೆಟ್ಟಿ ನಿಂತು ಸಂಬಂಧಗಳ ಕಾಯ್ದುಕೊಂಡದ್ದರ ಫಲವಾಗಿದೆ.

## ಪಂಚಾಂಗ

(ಮಂಗಳವಾರ 26, ನವೆಂಬರ್-2024)

- ಶ್ರೀ ಕ್ರೋಧಿನಾಮ ಸಂವತ್ಸರ,
- ದಕ್ಷಿಣಾಯನ, ಶರದ್ ಋತು
- ಕಾರ್ತಿಕ ಮಾಸ, ಕೃಷ್ಣ ಪಕ್ಷ,
- ತಿಥಿ: ಏಕಾದಶಿ, • ನಕ್ಷತ್ರ: ಹಸ್ತ
- ರಾಹುಕಾಲ: 3:02 ರಿಂದ 4:28
- ಗುಳಿಕಕಾಲ: 12:10 ರಿಂದ 1:36
- ಯಮಗಂಡಕಾಲ: 9:18 ರಿಂದ 10:44

## ಸಂಕ್ಷಿಪ್ತ ಸುದ್ದಿ

### ಶಕ್ತಿಕಾಂತ್ ದಾಸ್ ಆರೋಗ್ಯದಲ್ಲಿ ಏರುಪೇರು, ಚೆನ್ನೈನ ಆಸ್ಪತ್ರೆಗೆ ದಾಖಲು

**ಚೆನ್ನೈ:** ಭಾರತೀಯ ರಿಸರ್ವ್ ಬ್ಯಾಂಕ್‌ನ ಗವರ್ನರ್ ಶಕ್ತಿಕಾಂತ್ ದಾಸ್‌ಗೆ ಅನಾರೋಗ್ಯ ಕಾಡಿದ್ದು, ಚೆನ್ನೈನ ಖಾಸಗಿ ಆಸ್ಪತ್ರೆಗೆ ದಾಖಲಾಗಿದ್ದಾರೆ ಎನ್ನುವ ಮಾಹಿತಿ ಲಭ್ಯವಾಗಿದೆ.



ಶಕ್ತಿಕಾಂತ್ ದಾಸ್ ಅವರಿಗೆ ಆಯಸಿಡಿಟಿ ಸಮಸ್ಯೆ ಎದುರಾಗಿತ್ತು, ಅವರು ಆರೋಗ್ಯವಾಗಿದ್ದಾರೆ, ಮುಂದಿನ 2-3 ಗಂಟೆಗಳಲ್ಲಿ ಆಸ್ಪತ್ರೆಯಿಂದ ಬಿಡುಗಡೆಯಾಗಲಿದ್ದಾರೆ ಎನ್ನುವ ಮಾಹಿತಿ ಲಭ್ಯವಾಗಿದೆ. 1960 ರ ನಂತರ ಸುದೀರ್ಘ ಸೇವೆ ಸಲ್ಲಿಸಿದ ಖಿಖಿ ಮುಖ್ಯಸ್ಥರೆಂಬ ಖ್ಯಾತಿ ಗಳಿಸಿದ್ದಾರೆ. ಅವರ ನಾಯಕತ್ವದಲ್ಲಿ, RBI ಹಣದುಬ್ಬರದ ಒತ್ತಡಗಳು ಮತ್ತು ಜಾಗತಿಕ ಆರ್ಥಿಕ ಅನಿಶ್ಚಿತತೆಗಳು ಸೇರಿದಂತೆ ವಿವಿಧ ಆರ್ಥಿಕ ಸವಾಲುಗಳನ್ನು ನ್ಯಾವಿಗೇಟ್ ಮಾಡಿದೆ.

ಪುಟ 2

### ಅದಾನಿಯ 100 ಕೋಟಿ ದೇಣಿಗೆ ಬೇಡ ಎಂದ ತೆಲಂಗಾಣ ಸಿಎಂ



**ಹೈದರಾಬಾದ್:** ಯಂಗ್ ಇಂಡಿಯಾ ಸ್ಕಿಲ್ಸ್ ಯೂನಿವರ್ಸಿಟಿಗೆ ಅದಾನಿ ಫೌಂಡೇಶನ್ ವಾಗ್ದಾನ ಮಾಡಿದ್ದ 100 ಕೋಟಿ ರೂ. ದೇಣಿಗೆಯನ್ನು ತಮ್ಮ ಸರ್ಕಾರ ನಿರಾಕರಿಸಿದೆ ಎಂದು ತೆಲಂಗಾಣ ಮುಖ್ಯಮಂತ್ರಿ ಎ ರೇವಂತ್ ರೆಡ್ಡಿ ತಿಳಿಸಿದ್ದಾರೆ. ಸೌರಶಕ್ತಿ ಪೂರೈಕೆ ಯೋಜನೆ ಗುತ್ತಿಗೆ ಪಡೆದುಕೊಳ್ಳಲು ಭಾರತೀಯ ಸರ್ಕಾರಿ ಅಧಿಕಾರಿಗಳಿಗೆ ಲಂಚ ನೀಡಿದ ಆರೋಪದ ಮೇಲೆ ಯುನೈಟೆಡ್ ಸ್ಟೇಟ್ಸ್‌ನಲ್ಲಿ ಗೌತಮ್ ಅದಾನಿ ವಿರುದ್ಧ ದೋಷಾರೋಪಣೆಯನ್ನು ಗಮನದಲ್ಲಿಟ್ಟುಕೊಂಡು ಈ ನಿರ್ಧಾರ ಕೈಗೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

ಪುಟ 2




ದಶಪ್ರಮತಿ ಮುದ್ರಣಾಲಯ

dashapramathi mudranalaya

PRE-PRESS PRINTERS

Contact: +91 9483589085 | e-mail: dashapramathimudranalaya@gmail.com

We Undertake Printing of Newspapers | Tabloids | Magazines




## ಅಂಡಮಾನ್-ನಿಕೋಬಾರ್ ದ್ವೀಪದ ಬಳಿ 25,000 ಕೋಟಿ ರೂ. ಮೌಲ್ಯದ ಡ್ರಗ್ಸ್ ಜಪ್ತಿ

**ಅಂಡಮಾನ್ :** ಭಾರತೀಯ ಕೋಸ್ಟ್ ಗಾರ್ಡ್ ಅಂಡಮಾನ್ ಜಲಪ್ರದೇಶದಲ್ಲಿ ಮೀನುಗಾರಿಕಾ ದೋಣಿಯಿಂದ ಸುಮಾರು 5500 ಕೆಜಿ (ಸುಮಾರು 5 ಟನ್) ತೂಕದ ಮಾದಕವಸ್ತುಗಳನ್ನು ವಶಪಡಿಸಿಕೊಂಡಿದ್ದಾರೆ. ಇದರ ಬೆಲೆ 25000 ಕೋಟಿ ರೂ. ಆಗಿದೆ. ಈ ಸರಕು ಎಲ್ಲಿಂದ ಬರುತ್ತಿತ್ತು ಮತ್ತು ಯಾರಿಗೆ ಮತ್ತು ಎಲ್ಲಿಗೆ ಸರಬರಾಜು ಮಾಡಬೇಕಿತ್ತು ಎಂಬುದರ ಕುರಿತು ತನಿಖೆ ನಡೆಸಲಾಗುತ್ತಿದೆ.

ಕೇಂದ್ರ ಗೃಹ ಸಚಿವ ಅಮಿತ್ ಶಾ ಮಾತನಾಡಿ, ವಶಪಡಿಸಿಕೊಂಡ ದೊಡ್ಡ ಪ್ರಮಾಣದ ಮಾದಕ ದ್ರವ್ಯವು ಸರ್ಕಾರದ ಬದ್ಧತೆ ಮತ್ತು ಅದರ ಏಜೆನ್ಸಿಗಳ ನಡುವಿನ ಸಮನ್ವಯಕ್ಕೆ ಉತ್ತಮ ಉದಾಹರಣೆಯಾಗಿದೆ ಎಂದು ಹೇಳಿದರು. ಎರಡು ಕಿಲೋ ತೂಕದ ಡ್ರಗ್ಸ್‌ನ ಮೂರು ಸಾವಿರ ಪ್ಯಾಕೆಟ್‌ಗಳನ್ನು ವಶಪಡಿಸಿಕೊಂಡಿದ್ದು, ಕೋಸ್ಟ್‌ಗಾರ್ಡ್‌ನ ಡೋರ್ನಿಯರ್ ವಿಮಾನವು ಅನುಮಾನಾಸ್ಪದ ದೋಣಿಯನ್ನು ಗುರುತಿಸಿತು ಮತ್ತು ತಕ್ಷಣ ಹತ್ತಿರದ ಕಮಾಂಡ್‌ಗೆ ತಿಳಿಸಿತು.

ಪುಟ 2



## 6 ಜನರಿದ್ದ ವಿಮಾನ ಪತನ, ಪ್ರಯಾಣಿಕರಿಗಾಗಿ ಶೋಧ

**ಕೋಸ್ಟರಿಕಾ:** ಮಧ್ಯ ಅಮೆರಿಕದ ಕೋಸ್ಟರಿಕಾದಲ್ಲಿ 6 ಮಂದಿ ಪ್ರಯಾಣಿಸುತ್ತಿದ್ದ ವಿಮಾನ ಪತನಗೊಂಡಿದೆ. ಸದ್ಯ ವಿಮಾನದಲ್ಲಿದ್ದವರ ಗುರುತು ಪತ್ತೆಯಾಗಿಲ್ಲ. ಕೋಸ್ಟರಿಕಾದ ರಾಜಧಾನಿ ಸ್ಯಾನ್ ಜೋಸ್‌ನ ಆಗ್ನೇಯಕ್ಕೆ ಈ ಅಪಘಾತ ಸಂಭವಿಸಿದೆ ಎಂದು ಹೇಳಲಾಗಿದೆ. ನವೆಂಬರ್ 25 ರಂದು ಮಧ್ಯಾಹ್ನದ ನಂತರ ಮೌಂಟ್ ಪಿಕೊ ಬ್ಲಾಂಕೊ ಬಳಿ ಅಪ್ಪಳಿಸಿತು.

ಶೋಧ ಮತ್ತು ರಕ್ಷಣಾ ಅಧಿಕಾರಿಗಳು ಬೆಟ್ಟದ ಮೇಲೆ ಅವಶೇಷಗಳನ್ನು ಕಂಡುಕೊಂಡಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ವಿಮಾನವನ್ನು ಪರ್ವತದ ತುದಿಯಲ್ಲಿ ಗುರುತಿಸಲಾಗಿದೆ. ಕೋಸ್ಟರಿಕಾದ ಉತ್ತರ ಕೆರಿಬಿಯನ್



ಕರಾವಳಿಯಲ್ಲಿರುವ ಟೋರ್ಟುಗುರೊದಿಂದ ವಿಮಾನವು ಟೇಕ್ ಆಫ್ ಆಗಿದ್ದು ಸ್ಯಾನ್ ಜೋಸ್‌ಗೆ ಹೋಗುತ್ತಿತ್ತು ಎಂದು ವರದಿಯಾಗಿದೆ.

ಪುಟ 2

## ಒಂದು ರಾಷ್ಟ್ರ, ಒಂದು ಚಂದಾದಾರಿಕೆ ಯೋಜನೆ

# ಕೇಂದ್ರ ಅನುಮೋದನೆ

**ನವದೆಹಲಿ:** ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸಚಿವ ಸಂಪುಟವು ಒಂದು ರಾಷ್ಟ್ರ ಒಂದು ಚಂದಾದಾರಿಕೆಗೆ ಹಸಿರು ನಿಶಾನೆ ತೋರಿದೆ. ಒನ್ ನೇಷನ್ ಒನ್ ಸಬ್ ಸ್ಕ್ರಿಪ್ಷನ್ ಯೋಜನೆ ಜಾರಿಯಿಂದ ವಿದ್ಯಾರ್ಥಿಗಳಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂದು ಹೇಳಲಾಗುತ್ತಿದೆ. ಈ ಯೋಜನೆಗೆ ಅಂದಾಜು 6,000 ಕೋಟಿ ರೂ. ಆಗಿದೆ. ವಿದ್ಯಾರ್ಥಿಗಳು ಮತ್ತು ಶಿಕ್ಷಕರಿಗೆ ಪ್ರಪಂಚದಾದ್ಯಂತದ ಸಂಶೋಧನಾ ಪ್ರಬಂಧಗಳು ಮತ್ತು ಜರ್ನಲ್‌ಗಳನ್ನು ಪ್ರವೇಶಿಸಲು ಸುಲಭವಾಗಲಿದೆ.

ಎಲ್ಲಾ ವಿಶ್ವವಿದ್ಯಾನಿಲಯಗಳು ತಮ್ಮ ಸಂಪನ್ಮೂಲಗಳನ್ನು ಒಂದು ರಾಷ್ಟ್ರ ಒಂದು ಚಂದಾದಾರಿಕೆಯ ಮೂಲಕ ಹಂಚಿಕೊಳ್ಳುತ್ತವೆ. 'ಒಂದು ರಾಷ್ಟ್ರ ಒಂದು ಚಂದಾದಾರಿಕೆ'ಯಲ್ಲಿ ಒಟ್ಟು 30 ಪ್ರಮುಖ ಅಂತಾರಾಷ್ಟ್ರೀಯ ಜರ್ನಲ್ ಪ್ರಕಾಶಕರನ್ನು ಸೇರಿಸಲಾಗಿದೆ ಎಂದು ಕೇಂದ್ರ ಸಚಿವರು ಹೇಳಿದರು. ಈ ಪ್ರಕಾಶಕರು ಪ್ರಕಟಿಸಿದ ಸುಮಾರು 13,000 ಇ-ಜರ್ನಲ್‌ಗಳನ್ನು ಈಗ 6,300 ಕ್ಕೂ ಹೆಚ್ಚು ಸರ್ಕಾರಿ ಉನ್ನತ ಶಿಕ್ಷಣ ಸಂಸ್ಥೆಗಳು ಮತ್ತು ಕೇಂದ್ರ ಸರ್ಕಾರದ ಖಿಆ ಸಂಸ್ಥೆಗಳು ಬಳಸಿಕೊಳ್ಳಬಹುದಾಗಿದೆ.

ವಿದ್ಯಾರ್ಥಿಗಳು ಇನ್ನು ಮುಂದೆ ಸಂಶೋಧನಾ ಪ್ರಬಂಧಗಳು ಮತ್ತು ಜರ್ನಲ್‌ಗಳನ್ನು ಹುಡುಕಲು




ಪ್ರಪಂಚದಾದ್ಯಂತ ಅಲೆದಾಡಬೇಕಾಗಿಲ್ಲ, ಬದಲಿಗೆ ಅವರು ಒಂದೇ ಸ್ಥಳದಲ್ಲಿ ಪಡೆಯುತ್ತಾರೆ. ಎರಡನೇ ದೊಡ್ಡ ಘೋಷಣೆ ಅಟಲ್ ಇನ್ನೋವೇಶನ್ ಮಿಷನ್‌ನ ಹೊಸ ಹಂತವನ್ನು ಪ್ರಾರಂಭಿಸುವುದು. ಇದರ ಅಡಿಯಲ್ಲಿ, ಅಂತಹ 30 ಹೊಸ ಆವಿಷ್ಕಾರ ಕೇಂದ್ರಗಳನ್ನು ಸ್ಥಾಪಿಸಲಾಗುವುದು, ಇದರಲ್ಲಿ ಯಾವುದೇ ಭಾಷೆಯ ನಿರ್ಬಂಧ ಇರುವುದಿಲ್ಲ.

ಇದರರ್ಥ ಯಾವುದೇ ವಿದ್ಯಾರ್ಥಿ ಸ್ಥಳೀಯ ಭಾಷೆಯಲ್ಲಿಯೂ ಇಲ್ಲಿ ಕೆಲಸ ಮಾಡಲು ಸಾಧ್ಯವಾಗುತ್ತದೆ. ಸೋಮವಾರ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸಂಪುಟ ಸಭೆಯಲ್ಲಿ ಕೈಗೊಂಡ ನಿರ್ಧಾರಗಳ ಕುರಿತು ಸಚಿವ ಅಶ್ವಿನಿ ವೈಷ್ಣವ್, ಈ ಎರಡೂ ಉಪಕ್ರಮಗಳು ವಿದ್ಯಾರ್ಥಿಗಳು ಮತ್ತು ಯುವಕರು ಸಂಶೋಧನೆ ಮತ್ತು ಆವಿಷ್ಕಾರ ಕ್ಷೇತ್ರದಲ್ಲಿ ವೇಗವಾಗಿ ಮುನ್ನಡೆಯಲು ಸಹಾಯ ಮಾಡುತ್ತದೆ ಎಂದು ಹೇಳಿದರು.

ದೇಶದ ಎಲ್ಲಾ ಉನ್ನತ ಶಿಕ್ಷಣ ಸಂಸ್ಥೆಗಳು ಮತ್ತು ಸಂಶೋಧನಾ ಸಂಸ್ಥೆಗಳನ್ನು ಒಂದು ರಾಷ್ಟ್ರ-ಒಂದು ಚಂದಾದಾರಿಕೆ ಯೋಜನೆಗೆ ಜೋಡಿಸಲಾಗುವುದು ಎಂದು ಅವರು ಹೇಳಿದರು. ಈ ಯೋಜನೆಯ ಅಡಿಯಲ್ಲಿ, ಪ್ರಪಂಚದಾದ್ಯಂತದ ಎಲ್ಲಾ ಸಂಶೋಧನಾ ಪ್ರಬಂಧಗಳು ಮತ್ತು ಜರ್ನಲ್ ಗಳನ್ನು ಅವರಿಗೆ ಒದಗಿಸಲಾಗುತ್ತದೆ.

ಇದರಲ್ಲಿ ಒಟ್ಟು 30 ಪ್ರಮುಖ ಅಂತಾರಾಷ್ಟ್ರೀಯ

ಪುಟ 2



## ಕರ್ನಾಟಕದ ರೈಲುಗಳು ಎರಡು ದಿನ ರದ್ದು ಮತ್ತು ಮಾರ್ಗ ಬದಲಾವಣೆ

**ಬೆಂಗಳೂರು:** ಕರ್ನಾಟಕ ಕೆಲ ರೈಲುಗಳ ಸಂಚಾರ ಬುಧವಾರ ಮತ್ತು ಗುರುವಾರ ರದ್ದಾಗಲಿವೆ. ಸಾಮಾಜಿಕ ಮಾಧ್ಯಮ ಎಕ್ಸ್ ಮುಖಾಂತರ ನೈಋತ್ಯ ರೈಲ್ವೆ ತಿಳಿಸಿದೆ. ನೈಋತ್ಯ ರೈಲ್ವೆಯ ಬೆಂಗಳೂರು ವಿಭಾಗವು ನವೆಂಬರ್ 27 ಮತ್ತು 28 ರಂದು ಬೈಯ್ಯಪ್ಪನಹಳ್ಳಿ ಯಾರ್ಡ್‌ನಲ್ಲಿ ಸುರಕ್ಷತೆ ಸಂಬಂಧಿತ ಮತ್ತು ಸಿಗ್ನಲ್ ನಿರ್ವಹಣಾ ಕಾರ್ಯವನ್ನು ಕೈಗೊಳ್ಳಲಿದೆ. ಹೀಗಾಗಿ ಕೆಲ ರೈಲುಗಳ ಸಂಚಾರ ರದ್ದು, ಭಾಗಶಃ ರದ್ದು ಮತ್ತು ಮಾರ್ಗ ಬದಲಾವಣೆ ಮಾಡಿದೆ.

**ರೈಲುಗಳ ರದ್ದು:** ರೈಲು ಸಂಖ್ಯೆ 06538 ಬೆಂಗಳೂರು ಕಂಟೋನ್ಮೆಂಟ್-ಚಿಕ್ಕಬಳ್ಳಾಪುರ ಮೆಮು ವಿಶೇಷ, ಚಿಕ್ಕಬಳ್ಳಾಪುರ-ಬೆಂಗಳೂರು ಮೆಮು (ರೈಲು ಸಂಖ್ಯೆ 06532) ವಿಶೇಷ, ಮತ್ತು ಬಂಗಾರಪೇಟೆ-ಎಸ್ ಎಮ್




ವಿಟಿ ಬೆಂಗಳೂರು ಮೆಮು (ರೈಲು ಸಂಖ್ಯೆ 06527) ವಿಶೇಷ ರೈಲುಗಳು ನವೆಂಬರ್ 27 ರಂದು ರದ್ದಾಗಲಿದೆ.

ಪುಟ 2

## ಬಿಪಿಎಲ್ ಕಾರ್ಡ್ ರದ್ದಾದ ಅರ್ಹ ಫಲಾನುಭವಿಗಳಿಗೆ ಗುಡ್ ನ್ಯೂಸ್

**ಬೆಂಗಳೂರು:** ರಾಜ್ಯದಲ್ಲಿ ಬಿಪಿಎಲ್ ಕಾರ್ಡ್ ರದ್ದಾದ ಅರ್ಹ ಫಲಾನುಭವಿಗಳಿಗೆ ಸರ್ಕಾರ ಗುಡ್ ನ್ಯೂಸ್ ನೀಡಿದೆ. ರೇಷನ್ ಕಾರ್ಡ್ ಸಮಸ್ಯೆ ಪರಿಹಾರಕ್ಕೆ ಆಹಾರ ಇಲಾಖೆ ಅಧಿಕಾರಿಗಳಿಗೆ ಹೊಸ ಡೆಡ್‌ಲೈನ್ ನೀಡಿರುವ ರಾಜ್ಯ ಸರ್ಕಾರ, ಇದೇ ನವೆಂಬರ್ 28ರವರೆಗೆ ಸಮಸ್ಯೆಯನ್ನು ಸರಿಪಡಿಸಿ ಎಂದು ತಿಳಿಸಿದೆ.



ಯಾವುದೇ ಅರ್ಹ ಬಿಪಿಎಲ್ ರದ್ದಾಗಿಲ್ಲ ಅನರ್ಹರನ್ನ ಮಾತ್ರ ಎಪಿಎಲ್‌ಗೆ ಸೇರಿಸಲಾಗಿದೆ ಎಂದು ಇತ್ತೀಚೆಗೆ ಆಹಾರ ಸಚಿವ ಕೆ.ಹೆಚ್ ಮುನಿಯಪ್ಪ ತಿಳಿಸಿದ್ದರು. ಒಂದು ವೇಳೆ ಬಿಪಿಎಲ್‌ಗೆ ಅರ್ಹರಿದ್ದು, ಎಪಿಎಲ್ ಆಗಿದ್ರೆ, ಅಂತವರಿಗೆ ಪುನರ್ ಸ್ಥಾಪಿಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಇತ್ತಿಚೆಗೆ ಸಚಿವರು ತಿಳಿಸಿದ್ದರು.

**ಟೆನ್ಶನ್ ಬಿಡಿ ಎಂದ ಆಹಾರ ಸಚಿವರು:** ಇದೀಗ ಬಿಪಿಎಲ್ ಕಾರ್ಡ್ ಸಮಸ್ಯೆ ಪರಿಹಾರಕ್ಕೆ ಅಧಿಕಾರಿಗಳಿಗೆ ಹೊಸ ಸಮಯಾವಕಾಶವನ್ನು ಆಹಾರ ಸಚಿವ ಮುನಿಯಪ್ಪ ನೀಡಿದ್ದಾರೆ. ಇದೇ ನವೆಂಬರ್ 28ಕ್ಕೆ ಮತ್ತೆ ಡೆಡ್ ಲೈನ್ ಕೊಟ್ಟಿರುವ ಆಹಾರ ಸಚಿವರು, ಈ ಅವಧಿಯಲ್ಲಿ ಎಲ್ಲಾ ಸಮಸ್ಯೆಗಳನ್ನು ಪರಿಹರಿಸಿ ಎಂದು ಅಧಿಕಾರಿಗಳಿಗೆ ತಿಳಿಸಿದ್ದಾರೆ. ಅರ್ಹರಾಗಿದ್ದು ಬಿಪಿಎಲ್ ಕಾರ್ಡ್ ವಂಚಿತರಾದವರೆ ಟೆನ್ಶನ್ ಬಿಡಿ. ಇನ್ನೂ 3 ದಿನದ ಒಳಗಡೆ ಪಡಿತರ ಪಡೆಯಬಹುದು ಎಂದು ಆಹಾರ ಸಚಿವರು ತಿಳಿಸಿದ್ದಾರೆ.

ಪುಟ 2

## 7 ತಿಂಗಳಲ್ಲಿ 125 ನವಜಾತ ಶಿಶುಗಳು, 28 ಮಂದಿ ಬಾಣಂತಿಯರು ಮೃತ

**ದಾವಣಗೆರೆ:** ದಾವಣಗೆರೆಯಲ್ಲಿ ಕಳೆದ ಏಳು ತಿಂಗಳಲ್ಲಿ 125 ನವಜಾತ ಶಿಶುಗಳು ಮತ್ತು 28 ಮಂದಿ ಬಾಣಂತಿಯರು ಮೃತಪಟ್ಟಿದ್ದಾರೆ. ಸರ್ಕಾರಿ ಆಸ್ಪತ್ರೆಯಲ್ಲೇ ಹೆಚ್ಚು ಸಾವು ಆಗಿದ್ದರಿಂದ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಕಳವಳ ವ್ಯಕ್ತಪಡಿಸಿದ್ದಾರೆ.

2024ರ ಏಪ್ರಿಲ್ ನಿಂದ ನವೆಂಬರ್ ತನಕ ಒಟ್ಟು ಏಳು ತಿಂಗಳ ಕಾಲವಧಿಯಲ್ಲಿ ದಾವಣಗೆರೆಯಲ್ಲಿ ಬರೋಬ್ಬರಿ 125 ನವಜಾತ ಶಿಶುಗಳು, 28 ಮಂದಿ ಬಾಣಂತಿಯರು ಮೃತಪಟ್ಟಿದ್ದಾರೆ. ಚಿಗಟೇರಿ ಸರ್ಕಾರಿ ಆಸ್ಪತ್ರೆಯಲ್ಲಿ 111, ದಾವಣಗೆರೆ ನಗರದ ಚಾಮರಾಜ ಪೇಟೆಯಲ್ಲಿರುವ ಮಹಿಳಾ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ 24 ಶಿಶುಗಳು ಮೃತಪಟ್ಟಿವೆ. ಒಟ್ಟು 125 ನವಜಾತ ಶಿಶುಗಳು ಕೊನೆಯುಸಿರೆಳೆದಿವೆ.

ಸರ್ಕಾರಿ ಆಸ್ಪತ್ರೆಗಳಲ್ಲಿ 23 ಹಾಗೂ ಖಾಸಗಿ



ಹೆರಿಗೆ ಆಸ್ಪತ್ರೆಗಳಲ್ಲಿ 5 ಮಂದಿ ಬಾಣಂತಿಯರು ಮೃತಪಟ್ಟಿದ್ದಾರೆ. ಒಟ್ಟು 28 ಜನ ಬಾಣಂತಿಯರು ಸಾವಿಗೀಡಾಗಿದ್ದಾರೆ.

ಈ ಅಂಕಿ-ಸಂಖ್ಯೆ ನೋಡಿ ಆರೋಗ್ಯ ಸಚಿವ ದಿನೇಶ್ ಗುಂಡುರಾವ್ ಅಧಿಕಾರಿಗಳ ವಿರುದ್ಧ ಆಕ್ರೋಶಗೊಂಡರು. ''ನಿಮಗೆ ಏನು ಸೌಲಭ್ಯ ಬೇಕು ಎಷ್ಟು ಅನುದಾನಬೇಕು ಏನಾದರು ಮಾಡಿ ಮಕ್ಕಳನ್ನು ಉಳಿಸಿ. ಪ್ರತಿಯೊಂದು ಜೀವ ಕೂಡ ನಮಗೆ ಮುಖ್ಯ'' ಎಂದು ಗರಂ ಆಗಿದರು.

ಚಿಗಟೇರಿ ಆಸ್ಪತ್ರೆಯಲ್ಲಿ ಈ ಏಳು ತಿಂಗಳಲ್ಲಿ 1103 ಶಿಶುಗಳ ದಾಖಲಾಗಿದ್ದು, 882 ಶಿಶುಗಳು ಡಿಸ್ಚಾರ್ಜ್ ಆಗಿವೆ. 44 ಶಿಶುಗಳು ಬೇರೆ ಆಸ್ಪತ್ರೆಗೆ ಶಿಫ್ಟ್ ಮಾಡಲಾಗಿದೆ. ಮಕ್ಕಳ ಮತ್ತು ಮಹಿಳಾ ಆಸ್ಪತ್ರೆಯಲ್ಲಿ 732 ಮಕ್ಕಳು ದಾಖಲಾಗಿದ್ದು, 657 ಶಿಶುಗಳು ಡಿಸ್ಚಾರ್ಜ್ ಆಗಿವೆ. 34 ಶಿಶುಗಳನ್ನು ಬೇರೆ ಆಸ್ಪತ್ರೆಗೆ ಶಿಫ್ಟ್ ಮಾಡಲಾಗಿದೆ.

ದಾವಣಗೆರೆ ನಗರದ ಚಿಗಟೇರಿ ಆಸ್ಪತ್ರೆ, ಮಹಿಳಾ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ತಲಾ ಒಂದು ನ್ಯೂ ಬಾರ್ನ್ ಕೇರ್ ಯೂನಿಟ್ ಗಳು ಇವೆ. ದಾವಣಗೆರೆ ಅಕ್ಕಪಕ್ಕದ ಜಿಲ್ಲೆ, ತಾಲೂಕು ಆಸ್ಪತ್ರೆಗಳಲ್ಲಿ ನ್ಯೂ ಬಾರ್ನ್ ಕೇರ್ ಯೂನಿಟ್ ಇಲ್ಲದ ಕಾರಣ ದಾವಣಗೆರೆಯ ಆಸ್ಪತ್ರೆಗಳಿಗೆ ಕೊನೆ ಹಂತದಲ್ಲಿ ರೆಫರ್ ಮಾಡಲಾಗುತ್ತದೆ. ಆದ್ದರಿಂದ ಈ ಮರಣ ಪ್ರಮಾಣ ಹೆಚ್ಚಿದೆ ಎಂದು ಡಾ. ಷಣ್ಮುಖ ಮಾಹಿತಿ ನೀಡಿದರು.

ಪುಟ 2

## ಚಾಲಕರು, ನಿರ್ವಾಹಕರಿಗೆ ಸಿಹಿ ಸುದ್ದಿ ನೀಡಿದ ಬಿಎಂಟಿಸಿ ಅಧಿಕಾರಿಗಳು

**ಬೆಂಗಳೂರು:** ಇತ್ತೀಚಿಗೆ ಬಿಎಂಟಿಸಿ ಬಸ್ ಚಾಲಕ ಮತ್ತು ನಿರ್ವಾಹಕರ ಮೇಲೆ ನಿರಂತರವಾಗಿ ಹಲ್ಲೆ ಆಗಿದ್ದವು. ಇದಕ್ಕೆ ಪ್ರಮುಖ ಕಾರಣ ಚಾಲಕರಿಗೆ ನೀಡಿದ್ದ ಟೈಮ್ ಬಾಂಡ್ ಎಂದು ತಿಳಿದು ಬಂದಿದೆ. ಇದೀಗ, ಬಿಎಂಟಿಸಿ ಅಧಿಕಾರಿಗಳು ಪ್ರತಿ ಮಾರ್ಗದಲ್ಲೂ ಬಸ್ ಸಂಚಾರದ ಸಮಯ ಹೆಚ್ಚಳ ಮಾಡುವ ಮೂಲಕ ಚಾಲಕರ ಟೆನ್ಷನ್ ಕಡಿಮೆ ಮಾಡಿದ್ದಾರೆ.

ಬಿಎಂಟಿಸಿ ಬಸ್ ಸಂಚಾರ ಸಮಯವನ್ನು ಅಧಿಕಾರಿಗಳು ಏರಿಕೆ ಮಾಡಿದ್ದಾರೆ. ಇದರಿಂದ, ಕಡಿಮೆ ಸಮಯದಲ್ಲಿ ವೇಗವಾಗಿ ತೆರಳಲಿ ನಿಗದಿತ ನಿಲ್ದಾಣ ತಲುಪಬೇಕೆಂಬ ಟೆನ್ಷನ್ ನಿಂದ ಚಾಲಕರು ನಿರಾಳರಾಗಿದ್ದಾರೆ. ಬಿಎಂಟಿಸಿ ಬಸ್ ಗಳು ಸಂಚಾರ ಮಾಡುವ 1800 ಮಾರ್ಗಗಳಲ್ಲೂ ಟೈಮ್ ಲಿಮಿಟ್ ಕಡಿಮೆ ಮಾಡಲಾಗಿದೆ.

ಈ ಹಿಂದೆ ಮೆಜೆಸ್ಟಿಕ್ ನಿಲ್ದಾಣದಿಂದ ಉತ್ತರಹಳ್ಳಿಗೆ ಸಂಚಾರ ಮಾಡಲು 55 ನಿಮಿಷಗಳ ಕಾಲಾವಕಾಶ



ನೀಡಲಾಗಿತ್ತು. ಇನ್ಮುಂದೆ ಈ ಸಮಯವನ್ನು 01 ಗಂಟೆ 15 ನಿಮಿಷ ಏರಿಸಲಾಗಿದೆ. ಈ ಮಾರ್ಗದಲ್ಲಿ 20 ನಿಮಿಷಗಳ ಕಾಲ ಹೆಚ್ಚಿನ ಸಮಯ ನೀಡಲಾಗಿದೆ ಎಂದು ಬಿಎಂಟಿಸಿ ಚೀಫ್ ಟ್ರಾಫಿಕ್ ಮ್ಯಾನೇಜರ್ ಪ್ರಭಾಕರ್ ರೆಡ್ಡಿ ತಿಳಿಸಿದರು.

ಪ್ರತಿಯೊಂದು ಮರ್ಗಾದಲ್ಲೂ 15 ರಿಂದ 20 ನಿಮಿಷಗಳ ಕಾಲ ಹೆಚ್ಚಿನ ಸಮಯ ನೀಡಲಾಗುತ್ತದೆ. ಇದರಿಂದ ನಗರದಲ್ಲಿ ಆಗುತ್ತಿರುವ ಚಾಲಕ, ನಿರ್ವಾಹಕರ ಮೇಲಿನ ಹಲ್ಲೆ ಮತ್ತು ಅಪಘಾತಗಳು ಕಡಿಮೆ ಆಗಲಿವೆ. ಈ ಹಿಂದೆ ನಡೆದಿರುವ ಸಾಕಷ್ಟು ಹಲ್ಲೆ ಮತ್ತು ಅಪಘಾತಗಳಲ್ಲಿ ಬಿಎಂಟಿಸಿಯ ಚಾಲಕರು ಟೈಮ್ ಕವರ್ ಮಾಡಲು, ವೇಗವಾಗಿ ಬಸ್ ಚಲಾಯಿಸುತ್ತಿದ್ದರು. ಇದರಿಂದ ಅಪಘಾತಗಳು ಸಂಭವಿಸುತ್ತಿದ್ದವು. ಬಿಎಂಟಿಸಿಯ 58 ಸಾವಿರ ಟ್ರಿಪ್ ಗಳಲ್ಲೂ ಟೈಮ್ ಲಿಮಿಟ್ ಹೆಚ್ಚು ಮಾಡಲು ಬಿಎಂಟಿಸಿ ಮುಂದಾಗಿದೆ. ಈ ವಿಚಾರ ತಿಳಿದು ಪ್ರಯಾಣಿಕರು ಸಂತಸ ವ್ಯಕ್ತಪಡಿಸಿದ್ದಾರೆ.

ಒಟ್ಟಿನಲ್ಲಿ ಬಿಎಂಟಿಸಿಯ ಚಾಲಕ ಮತ್ತು ನಿರ್ವಾಹಕರಿಗೆ ಇಂತಿಷ್ಟು ಸಮಯದಲ್ಲಿ ಈ ರೂಟ್ ಕ್ಲಿಯರ್ ಮಾಡಬೇಕು ಅನ್ನೋ ಅಧಿಕಾರಿಗಳ ರೂಲ್ಸ್ ನಿಂದ ಬಿಎಂಟಿಸಿ ಬಸ್ಸುಗಳು ವೇಗವಾಗಿ ಸಂಚಾರ ಮಾಡುತ್ತಿದ್ದವು. ಆದರೆ ಈ ಟೈಮ್ ಲಿಮಿಟ್ ಹೆಚ್ಚಳದಿಂದ ಹಲ್ಲೆ ಮತ್ತು ಅಪಘಾತ ಕಡಿಮೆ ಆಗುತ್ತಾ ಎಂದು ಕಾದು ನೋಡಬೇಕಿದೆ.

## ಶ್ರೇಯಸ್ ಜತೆಗೆ ಹೊಳೆನರಸೀಪುರದ ಶ್ರೇಯಸ್ಸು

**ಹಾಸನ:** ಶ್ರೇಯಸ್ ಅವರೊಂದಿಗೆ ಹೊಳೆನರಸೀಪುರದ ಶ್ರೇಯಸ್ಸು ಕೂಡ ಅಡಗಿದೆ ಎಂದು ಮಾಜಿ ಶಾಸಕ ಪ್ರೀತಂ ಗೌಡ ಹೇಳಿದರು. ಜಿಲ್ಲೆಯ ಹೊಳೆನರಸೀಪುರದಲ್ಲಿ ನಡೆದ ಕನ್ನಡ ರಾಜ್ಯೋತ್ಸವ ಹಾಗೂ ಭುವನೇಶ್ವರಿ ರಥ ಕಾರ್ಯಕ್ರಮದಲ್ಲಿ ಮಾಜಿ ಸಚಿವ ಹೆಚ್.ಡಿ.ರೇವಣ್ಣ ವಿರುದ್ಧ ಪರೋಕ್ಷ ವಾಗ್ದಾಳಿ ನಡೆಸಿದ ಅವರು, ಶ್ರೇಯಸ್ ಅವರೊಂದಿಗೆ ಹೊಳೆನರಸೀಪುರದ ಶ್ರೇಯಸ್ಸು ಕೂಡ ಅಡಗಿದೆ. ಅದರ ಶ್ರೇಯಸ್ಸು ಶ್ರೇಯಸ್ ಪಟೇಲ್ ಅವರಿಗೆ ಸಲ್ಲುತ್ತದೆ. ನಿಮ್ಮನ್ನೆಲ್ಲಾ ನೋಡಿದ ಮೇಲೆ ಹೊಳೆನರಸೀಪುರಕ್ಕೆ ಸ್ವಾತಂತ್ರ್ಯ ಸಿಕ್ಕಿದೆ ಅನ್ನಿಸಿದೆ. 2024ರ ನಂತರ ವಾಸ್ತು, ದಿಕ್ಕು, ದಿಸೆ ಎಲ್ಲಾ ಬದಲಾಗಿದೆ ಎಂದು ಹೇಳಿದರು.

ಇಲ್ಲಿಯ ತನಕ ಯಾವುದೇ ಕಾರ್ಯಕ್ರಮ ನಡೆಯುವಾಗ ಯಾವುದೋ ಒಂದು ಮನೆಗೆ ಅಥವಾ ಒಂದು ತೋಟದಲ್ಲಿ ಲೈಟ್ ಇರುತ್ತಿತ್ತು. ಇಡೀ ಹೊಳೆನರಸೀಪುರದಲ್ಲಿ ಲೈಟ್ ಇರುವುದನ್ನು ನೋಡಿರಲಿಲ್ಲ, ಈಗ ಹೊಳೆನರಸೀಪುರ ಶ್ರೇಯಸ್ ಪಟೇಲ್ ಅವರ ತಾತನ ಕಾಲಕ್ಕೆ ಹೊಂದ್ಕೊಂಡಿದೆ. ಪುಟ್ಟಸ್ವಾಮಿಗೌಡರನ್ನು ಈ ಸಂದರ್ಭದಲ್ಲಿ ನೆನೆಯುತ್ತೇನೆ ಎಂದರು. ರಾಜಕಾರಣ ಬರುತ್ತದೆ. ಹೋಗುತ್ತದೆ. ನಾನು ಒಂದು ಪಕ್ಷದ ಪ್ರಮುಖ ಹುದ್ದೆಯಲ್ಲಿದ್ದೇನೆ. ಶ್ರೇಯಸ್ ಪಟೇಲ್ ಬೇರೆ ಪಕ್ಷದಿಂದ ಸಂಸದರಾಗಿದ್ದಾರೆ. ಮಾನವೀಯತೆ ಎನ್ನುವುದು ಬಹಳ ಮುಖ್ಯವಾದದ್ದು. ಇದೇ ರೀತಿ ಮುಂದುವರಿದುಕೊಂಡು ಹೋಗಲಿ. ಹೊಳೆನರಸೀಪುರದ ಮಾದರಿಯನ್ನಾಗಿ ಮಾಡೋಣ. ಎಲ್ಲಿಯ ತನಕ ಶ್ರೇಯಸ್ ಪಟೇಲ್ ಅವರಿಗೆ ಅಧಿಕಾರ ಕೊಡುತ್ತೀರೋ ನಾನು ಯಾವುದೇ ಪಕ್ಷದಲ್ಲಿರಲಿ ಇದೇ ತರ ಪ್ರತಿ ವರ್ಷ ಬರುತ್ತೇನೆ ಎಂದು ತಿಳಿಸಿದರು.



## ಸಿಎಂ ಬಂಪರ್ ಗಿಫ್ಟ್ : ಹೆಸ್ಕಾಂ ಅಧ್ಯಕ್ಷರಾಗಿ ಅಜ್ಜಂಪೀರ್ ಖಾದ್ರಿ ನೇಮಕ

**ಬೆಂಗಳೂರು:** ಶಿಗ್ಗಾಂವಿ ಉಪಚುನಾವಣೆಯಲ್ಲಿ ಕಾಂಗ್ರೆಸ್ ಗೆಲುವು ಬೆನ್ನಲ್ಲೇ ಮಾಜಿ ಶಾಸಕ ಅಜ್ಜಂಪೀರ್ ಖಾದ್ರಿಗೆ ಕಾಂಗ್ರೆಸ್ ಬಂಪರ್ ಗಿಫ್ಟ್ ನೀಡಿದೆ. ಹುಬ್ಬಳ್ಳಿ ವಿದ್ಯುತ್ ಸರಬರಾಜು ನಿಗಮದ ಅಧ್ಯಕ್ಷರಾಗಿ ಅಜ್ಜಂಪೀರ್ ಖಾದ್ರಿಯನ್ನು ಕಾಂಗ್ರೆಸ್ ನೇಮಕ ಮಾಡಿದೆ. ಶಿಗ್ಗಾಂವಿ ಉಪಚುನಾವಣೆಯಲ್ಲಿ ಟಿಕೆಟ್ ವಂಚಿತರಾಗಿದ್ದ ಖಾದ್ರಿ, ಪಕ್ಷೇತರರಾಗಿ ನಾಮಪತ್ರ ಸಲ್ಲಿಸಿದ್ದರು. ಖಾದ್ರಿಗೆ ಉತ್ತಮ ಸ್ಥಾನಮಾನದ ಭರವಸೆ ನೀಡಿ ಸಿಎಂ ಸಿದ್ದರಾಮಯ್ಯ ಹಾಗೂ ಸಚಿವ ಜಮೀರ್ ನಾಮಪತ್ರ ಹಿಂಪಡೆಯುವಂತೆ ಸೂಚಿಸಿದ್ದರು. ಭರವಸೆ ಬೆನ್ನಲ್ಲೇ ಖಾದ್ರಿ ನಾಮಪತ್ರ ಹಿಂಪಡೆದು ಕಾಂಗ್ರೆಸ್ ಅಭ್ಯರ್ಥಿ ಯಾಸೀರ್ ಪಠಾಣ್‌ಗೆ ಬೆಂಬಲ ಸೂಚಿಸಿದ್ದರು. ಅದರಂತೆಯೇ ಉಪಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಯಾಸೀರ್ ಖಾನ್ ಪಠಾಣ್ ಬೆನ್ನಿಗೆ ನಿಂತು ಗೆಲ್ಲಿಸಿದ್ದರು. ಇದೀಗ ಕೊಟ್ಟ ಮಾತಿನಂತೆಯೇ ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತಕ್ಕೆ ಅಧ್ಯಕ್ಷರನ್ನಾಗಿ ನೇಮಿಸಿ ಸಿಎಂ ಸಿದ್ದರಾಮಯ್ಯ ಆದೇಶ ಹೊರಡಿಸಿದ್ದಾರೆ.

# ಬಿಜೆಪಿ ಅವಧಿಯಲ್ಲಿ 2,900 ಎಕ್ರೆಗೆ ವಕ್ಫ್ ನೋಟಿಸ್



**ಬೆಂಗಳೂರು:** ಬಿಜೆಪಿ ಅಧಿಕಾರ ಅವಧಿಯಲ್ಲಿ 2,900 ಎಕರೆಗೆ ವಕ್ಫ್ ನೋಟಿಸ್ ಜಾರಿಯಾಗಿದೆ. ಇದು ಯಡಿಯೂರಪ್ಪ, ಬೊಮ್ಮಾಯಿ ಕಾಲದಲ್ಲಿ ಆಗಿತ್ತು. ಅದಕ್ಕಾಗಿ ಶಾಸಕ ಯತ್ನಾಳ್ ಅವರು ಬಿಜೆಪಿ ಹಾಗೂ ಯಡಿಯೂರಪ್ಪ, ಬೊಮ್ಮಾಯಿಗೆ ಮುಜುಗರ ಉಂಟುಮಾಡಲು ಹೋರಾಟಕ್ಕೆ ಹೊರಟಿದ್ದಾರೆ ಎಂದು ಗೃಹಸಚಿವ ಜಿ. ಪರಮೇಶ್ವರ್ ಕುಟುಕಿದ್ದಾರೆ.

ನಗರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಬಿಜೆಪಿ ಅವಧಿಯಲ್ಲಿ ಹೆಚ್ಚು ವಕ್ಫ್ ನೋಟೀಸ್ ಕೊಟ್ಟಿರುವ ವಿಚಾರ ಹಾಗೂ ವಕ್ಫ್ ವಿರೋಧಿಸಿ ಬಿಜೆಪಿ ರೆಬಲ್ಸ್ ಟೀಂ ಹೋರಾಟಕ್ಕೆ ಪ್ರತಿಕ್ರಿಯಿಸಿದರು. ಜಾಸ್ತಿ ದಿನ ಸತ್ಯ ಮುಚ್ಚಿಡಲು ಆಗಲ್ಲ. ಬಿಜೆಪಿಯವರು ನಮ್ಮ ಮೇಲೆ ನೋಟೀಸ್ ಕೊಟ್ಟಿರೋ ಬಗ್ಗೆ ಆರೋಪ ಮಾಡ್ತಿದ್ರು. ಇವರು ಅಧಿಕಾರದಲ್ಲಿ ಇದ್ದಾಗ ಏನು ಮಾಡಿದ್ರು? ಕುಮಾರ್ ಬಂಗಾರಪ್ಪ ಅಧ್ಯಕ್ಷತೆಯಲ್ಲಿ ಸಮಿತಿ ಮಾಡಿ ವಕ್ಫ್ ನೋಟೀಸ್ ಜಾರಿ ಮಾಡಿದ್ದಾರೆ. ಈ ಸಮಿತಿ 2,900 ಎಕರೆಗೆ ನೋಟೀಸ್ ಜಾರಿ ಮಾಡಿದೆ. ಸಿದ್ದರಾಮಯ್ಯ ಅವಧಿಯಲ್ಲಿ 300 ಎಕರೆಗೆ ನೋಟೀಸ್ ಜಾರಿ ಆಗಿದೆ. ಯಾರ ಅವಧಿಯಲ್ಲಿ ನೋಟೀಸ್ ಜಾಸ್ತಿ ಜಾರಿ ಮಾಡಿದ್ದಾರೆ ಅಂತ ಗೊತ್ತಾಯ್ತಲ್ಲ. ನಾವು ಯಾರ ಮೇಲೆ ಆರೋಪ ಮಾಡಬೇಕು? ಈಗ ಬಿಜೆಪಿಯವರು ವಕ್ಫ್ ವಿಚಾರದಲ್ಲಿ ರಾಜ್ಯ ಪ್ರವಾಸ ಮಾಡಲು ಹೊರಟಿದ್ದಾರಲ್ಲ, ಇದು ಮೊದಲು ಅವರಿಗೆ ಅರ್ಥ ಆಗಬೇಕು ಎಂದು ವಾಗ್ದಾಳಿ ನಡೆಸಿದ್ದಾರೆ.

ಬಹುಶಃ ಯತ್ನಾಳ್ ಟೀಮ್ ಹೊರಟಿರೋದು ಬಿಜೆಪಿಯವರಿಗೆ ಮುಖಭಂಗ ಮಾಡೋದಕ್ಕೆ. ಬಿಜೆಪಿಯವರು ಹೆಚ್ಚು ನೋಟೀಸ್ ಕೊಟ್ಟಿದ್ದಾರೆ ಎಂದು ಗೊತ್ತಾದ ಮೇಲೂ ಇವರು ಪ್ರವಾಸ ಹೊರಟಿದ್ದಾರೆ ಅಂದ್ರೆ, ಬಿಜೆಪಿಯವರಿಗೆ ಮುಜುಗರ ಮಾಡಲು ಹೊರಟಿದ್ದಾರೆ ಅಂತ ನನಗನ್ನಿಸುತ್ತೆ. ಇಲ್ಲ ಅಂದ್ರೆ ಯಾಕ್ ಹೋಗ್ತಾರೆ ಅವರು? ಬಿಜೆಪಿ ಕಾಲದಲ್ಲೇ ಹೆಚ್ಚು ವಕ್ಫ್ ನೋಟೀಸ್ ಕೊಟ್ಟಿದ್ದಾರಲ್ಲ, ಅದನ್ನೆಲ್ಲ ಎಕ್ಸ್‌ಪೋಸ್ ಮಾಡಲು ಯತ್ನಾಳ್ ಹೋಗ್ತಿದ್ದಾರೆ ಅಂತ ಅರ್ಥ. ಯಡಿಯೂರಪ್ಪ, ಬೊಮ್ಮಾಯಿ ಕಾಲದಲ್ಲಿ ಆಗಿತ್ತು ಅಂತ ಇದೆಯಲ್ಲ, ಆದ್ದರಿಂದ ಅವರಿಬ್ಬರನ್ನೂ ಎಕ್ಸ್‌ಪೋಸ್ ಮಾಡಲು ಹೊರಟಿದ್ದಾರೆ ಅನಿಸುತ್ತೆ. ಹಿಂದೆ ಬಿಜೆಪಿ ವಕ್ಫ್ ನೋಟೀಸ್ ಕೊಟ್ಟಿದ್ದು ನಮ್ಮ ಗಮನಕ್ಕೆ ಬಂದಿರಲಿಲ್ಲ ಆ ಸಂಧರ್ಭದಲ್ಲಿ. ಅದನ್ನ ನಾವು ಇಶ್ಯೂ ಆಗಿ ತೆಗೆದುಕೊಂಡಿರಲಿಲ್ಲ. ಈಗ ಎಚ್ಚರಿಕೆ ವಹಿಸಿಕೊಂಡು ಕೆಲಸ ಮಾಡ್ತೀವಿ ಎಂದು ಹೇಳಿದ್ದಾರೆ.

**ಇವಿಎಂ ಹ್ಯಾಕ್ ಸಮರ್ಥಿಸಿಕೊಂಡ ಸಚಿವರು:** ಇದೇ ವೇಳೆ ಮಹಾರಾಷ್ಟ್ರದಲ್ಲಿ ಇವಿಎಂ ಹ್ಯಾಕ್ ಟ್ಯಾಂಪರ್ ಮಾಡಿರುವ ಆರೋಪವನ್ನು ಗೃಹ ಸಚಿವರು ಸಮರ್ಥಿಸಿಕೊಂಡಿದ್ದಾರೆ. ನಾವು ಮೊದಲಿಂದಲೂ ಇದನ್ನು ಹೇಳಿಕೊಂಡೇ ಬರುತ್ತಿದ್ದೇವೆ. ಸೆಲೆಕ್ಟಿವ್ ಆಗಿ ರಾಜ್ಯ, ಕ್ಷೇತ್ರಗಳನ್ನು ಆಯ್ಕೆ ಮಾಡಿಕೊಂಡು ಇವಿಎಂ ಹ್ಯಾಕ್ ಮಾಡ್ತಾರೆ. 2014 ರಿಂದಲೂ ಇದು ನಡೆದುಕೊಂಡು ಬರ್ತಿದೆ. ಮಹಾರಾಷ್ಟ್ರದಲ್ಲೂ ಆರೀತಿ ಆಗಿದೆ ಅಂತ ಚರ್ಚೆ ಆಗ್ತಿದೆ, ಅದನ್ನೇ ನಾನು ಹೇಳಿದ್ದು. ಬಿಜೆಪಿಯವರಿಗೆ ನನ್ನ ಹೇಳಿಕೆ ಸರಿಯಾಗಿ ಅರ್ಥ ಮಾಡಿಕೊಳ್ಳಲು ಹೇಳಿ ಎಂದು ಕುಟುಕಿದ್ದಾರೆ. ಮುಡಾದಲ್ಲಿ ಐಎಎಸ್ ಅಧಿಕಾರಿಯೊಬ್ರು 144 ದಾಖಲೆ ತೆಗೆದುಕೊಂಡು ಹೋದ ವಿಚಾರಕ್ಕೆ ಉತ್ತರಿಸಿದ ಅವರು, ಮುಡಾ ಪ್ರಕರಣದಲ್ಲಿ ತನಿಖೆ ನಡೀತಿದೆ. ತನಿಖೆಯಲ್ಲಿ ಎಲ್ಲವೂ ಗೊತ್ತಾಗುತ್ತೆ, ದಾಖಲೆ ತಗೊಂಡು ಹೋಗಿದ್ದಾರಾ? ಯಾರು ತಗೊಂಡು ಹೋದ್ರು? ಐಎಎಸ್ಸಾ? ಐಪಿಎಸ್ಸಾ? ಎಲ್ಲವೂ ತನಿಖೆಯಲ್ಲಿ ಬಯಲಾಗುತ್ತೆ. ತಪ್ಪು ಮಾಡಿದ್ರೆ ಕ್ರಮ ಆಗುತ್ತೆ ಎಂದು ಸಹಜವಾಗಿಯೇ ಹಾರಿಕೆ ಉತ್ತರ ನೀಡಿದ್ದಾರೆ.

## ನಮ್ಮ ಅವಧಿಯಲ್ಲಿ ರೈತರಿಗೆ ವಕ್ಫ್ ನೋಟಿಸ್ ಕೊಟ್ಟವರ ವಿರುದ್ಧವೂ ಕ್ರಮ ಆಗಲಿ



**ಬೆಂಗಳೂರು:** ನಮ್ಮ ಅವಧಿಯಲ್ಲಿ ರೈತರಿಗೆ ನೋಟಿಸ್ ಕೊಟ್ಟಿದ್ದ ಅಧಿಕಾರಿಗಳ ವಿರುದ್ಧವೂ ಕ್ರಮ ಆಗಲಿ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ್ ಹೇಳಿದ್ದಾರೆ.

ನಗರದಲ್ಲಿ ಸುದ್ದಿಗಾರರೊಂದಿಗೆ ಬಿಜೆಪಿ ಅವಧಿಯಲ್ಲಿ ಹೆಚ್ಚು ವಕ್ಫ್ ನೋಟಿಸ್ ಕೊಟ್ಟಿದ್ದ ವಿಚಾರವಾಗಿ, ನಮ್ಮ ಸರ್ಕಾರದ ಅವಧಿಯಲ್ಲಿ ಅನ್ವರ್ ಮಾನ್ಪಾಡಿ ವರದಿಯನ್ನು ಆಧರಿಸಿ ನಾವು ನೋಟಿಸ್ ಕೊಟ್ಟಿದ್ದೇವು. ಈ ವರದಿಯಲ್ಲಿ ಬಹಳಷ್ಟು ಕಾಂಗ್ರೆಸ್‌ನ ದೊಡ್ಡ ದೊಡ್ಡ ನಾಯಕರು, ಕೇಂದ್ರ, ರಾಜ್ಯಗಳ ನಾಯಕರು ವಕ್ಫ್ ಭೂಮಿ ಒತ್ತುವರಿ ಮಾಡಿಕೊಂಡು ಮಾರಾಟ ಮಾಡಿಕೊಂಡಿದ್ದರು. ಇಂಥವರಿಗೆ ನಾವು ನೋಟಿಸ್ ಕೊಟ್ಟಿರಬಹುದು. ಕಾಂಗ್ರೆಸ್‌ನವರು ವಕ್ಫ್ ಬೋರ್ಡ್‌ನಲ್ಲಿ ಅಕ್ರಮ ಆಗಿದೆ ಎಂದು ಒಪ್ಪಿಕೊಳ್ಳಲು ತಯಾರಿಲ್ಲ. ಈಗ ಇರುವ ವಿಚಾರ ಕಾಂಗ್ರೆಸ್ ರೈತರಿಗೆ ನೋಟಿಸ್ ಕೊಟ್ಟಿದ್ದಾರೆ ಎಂದರು. ನಮ್ಮ ಅವಧಿಯಲ್ಲಿ ತಪ್ಪಾಗಿದ್ದರೂ ಕ್ರಮ ಆಗಲಿ. ಕಾಂಗ್ರೆಸ್ ಅವಧಿಯಲ್ಲಿ ತಪ್ಪಾಗಿದ್ದರೂ ಕ್ರಮ ಆಗಲಿ. ನಾವೇನು ಅಧಿಕಾರಿಗಳ ರಕ್ಷಣೆ ಮಾಡುತ್ತಿಲ್ಲ. ನಮ್ಮ ಅವಧಿಯಲ್ಲಿ ಅಥವಾ ಕಾಂಗ್ರೆಸ್ ಅವಧಿಯಲ್ಲಿ ಅಧಿಕಾರಿಗಳು ತಪ್ಪಾಗಿ ವಕ್ಫ್ ನೋಟಿಸ್ ಕೊಟ್ಟಿದ್ದರೆ ಕ್ರಮ ಆಗಲಿ. ಈಗ ಪ್ರಶ್ನೆಯಾಗಿರುವುದು ರೈತರನ್ನು ಒಕ್ಕಲೆಬ್ಬಿಸುವ ಪ್ರಯತ್ನ ನಡೆಯುತ್ತಿದೆ ಎಂದು ಆದರೆ ಇದು ತಪ್ಪು. ಕಾಂಗ್ರೆಸ್ ಅವಧಿಯಲ್ಲಿ ರೈತರಿಗೆ ನೋಟಿಸ್ ಕೊಡುತ್ತಿರುವುದು ಒಳ್ಳೆಯ ಬೆಳವಣಿಗೆ ಅಲ್ಲ. ಮಾನ್ಪಾಡಿ ವರದಿಯಲ್ಲಿ ಕಾಂಗ್ರೆಸ್ ನಾಯಕರು ಒತ್ತುವರಿ ಮಾಡಿಕೊಂಡಿದ್ದರರು. ಅದಕ್ಕೆ ನೋಟಿಸ್ ಕೊಟ್ಟಿದ್ದೇವೆ. ನಮ್ಮ ಕಾಲದಲ್ಲಿ ರೈತರಿಗೆ ನೋಟಿಸ್ ಕೊಟ್ಟಿದ್ದರೆ ಅದೂ ತಪು ಎಂದು ಕಿಡಿಕಾರಿದರು.

**ಐಎಎಸ್ ಅಧಿಕಾರಿ ಕೈವಾಡ ಕೇಳಿ ದಿಗ್ಭಮೆ ಆಗಿದೆ:** ಮುಡಾ ಕಚೇರಿಯಿಂದ ಐಎಎಸ್ ಅಧಿಕಾರಿ 144 ಫೈಲುಗಳನ್ನು ತೆಗೆದುಕೊಂಡು ಹೋಗಿರುವ ವಿಚಾರವಗಿ, ಈ ವಿಚಾರ ನಮಗೆ ದಿಗ್ಭಮೆ ಮೂಡಿಸಿದೆ. ಬೈರತಿ ಸುರೇಶ್ ಅವರು ಎಷ್ಟು ಫೈಲ್‌ಗಳನ್ನು ತೆಗೆದುಕೊಂಡು ಹೋಗಿದ್ದಾರೆ ಗೊತ್ತಿಲ್ಲ. ಅದಕ್ಕೂ ಮುಂಚೆ ಐಎಎಸ್ ಅಧಿಕಾರಿಯೊಬ್ಬರು ಮುಡಾ ಫೈಲ್‌ಗಳನ್ನು ತೆಗೆದುಕೊಂಡು ಹೋಗಿದ್ದಾರೆ ಅಂದರೆ ರಾಜ್ಯದಲ್ಲಿ ಆಡಳಿತ ಯಾವ ಮಟ್ಟಕ್ಕೆ ಬಂದಿದೆ? ಅಧಿಕಾರಿಗಳೇ ಮುಡಾ ಅಕ್ರಮದಲ್ಲಿ ರಕ್ಷಣೆಗೆ ಮುಂದಾಗಿರುವುದು ಸರಿಯಲ್ಲ. ಈ ಪ್ರಕರಣ ಸಿಬಿಐಗೆ ತನಿಖೆಗೆ ಕೊಡಬೇಕು ಎಂದು ಆಗ್ರಹಿಸುತ್ತೇನೆ. ಮುಡಾ ಅಕ್ರಮ ಈ ರಾಜ್ಯ ಕಂಡ ದೊಡ್ಡ ಹಗರಣ. ಸಿಎಂ, ಮತ್ತವರ ಕುಟುಂಬ ಶಾಮೀಲಾಗಿದ್ದಾರೆ. 14 ಸೈಟುಗಳಷ್ಟೇ ಅಲ್ಲ ಬಡವರ ಸೈಟುಗಳನ್ನು ಕೂಡ ಲೂಟಿ ಮಾಡಲಾಗಿದೆ. ಮುಡಾದಲ್ಲಿ 3-4 ಸಾವಿರ ಕೋಟಿ ರೂ. ಅಕ್ರಮ ಆಗಿದೆ. ಐಎಎಸ್ ಅಧಿಕಾರಿಗಳು ಮಾಡಿರುವ ತಪ್ಪನ್ನು ಸರಿಪಡಿಸಲು ದಾಖಲೆ ತಿದ್ದಿರುತ್ತಾರೆ. ವೈಟ್ನರ್ ಹಾಕಿ, ದಾಖಲೆಗಳನ್ನು ಮಾಯ ಮಾಡಿರುತ್ತಾರೆ. ಇದನ್ನು ಸಿಬಿಐ ತನಿಖೆಗೆ ಒಳಪಡಿಸಿದರೆ ಆದರೆ ಇನ್ನಷ್ಟು ಹಗರಣಗಳು ಹೊರಗೆ ಬರುತ್ತದೆ ಎಂದು ತಿಳಿಸಿದರು.

ಇನ್ನೂ ಚುನಾವಣಾ ಫಲಿತಾಂಶ ವಿಚಾರವಾಗಿ ಮಾತನಾಡಿ, ಫಲಿತಾಂಶದಿಂದ ನಮ್ಮ ಮೇಲೆ, ಪಕ್ಷದ ಮೇಲೆ ಯಾವುದೇ ಪರಿಣಾಮ ಬೀರಲ್ಲ. ಹಿಂದೆ ನಮ್ಮ ಸರ್ಕಾರ ಇದ್ದಾಗ 18 ಉಪಚುನಾವಣೆ ಗೆದ್ದಿದ್ದೇವು. ನಂತರ ಸಾರ್ವತ್ರಿಕ ಚುನಾವಣೆ ಸೋತಿದ್ದೇವು. ಈ ಫಲಿತಾಂಶ ಕಾಂಗ್ರೆಸ್ ಅಕ್ರಮಗಳಿಗೆ ಕ್ಲೀನ್‌ಚಿಟ್ ಅಲ್ಲ. ಅದೇ ಬೇರೆ ಇದೇ ಬೇರೆ, ಉಪಚುನಾವಣೆ ಸ್ಥಳೀಯ ವಿಚಾರಗಳ ಮೇಲೆ ನಡೆದಿದೆ. ಇದು ರಾಜ್ಯದ ತೀರ್ಪಲ್ಲ. ಸರ್ಕಾರದ ವಿರುದ್ಧ ನಮ್ಮ ಹೋರಾಟ ನಿಲ್ಲಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು. ಮುಸ್ಲಿಂ ವೋಟುಗಳು ಬರದೇ ಸೋಲಾಯ್ತು ಎಂಬ ನಿಖಿಲ್ ಹೇಳಿಕೆ ವಿಚಾರವಾಗಿ, ನಿಖಿಲ್ ಸತ್ಯವನ್ನೇ ಹೇಳಿದ್ದಾರೆ. ಬೂತ್‌ಗಳಲ್ಲಿ ಬೆರಳೆಣಿಕೆಯಷ್ಟು ಮುಸ್ಲಿಂ ಮತಗಳು ಜೆಡಿಎಸ್‌ಗೆ ಬಂದಿದೆ. ಆ ಸಮುದಾಯ ನಿಖಿಲ್‌ನನ್ನು ಸೋಲಿಸಲು ಮತ ಹಾಕಿಲ್ಲ. ಉಳಿದ ಸಮುದಾಯಗಳೂ ಒಟ್ಟಾಗಿ ಮತ ಚಲಾಯಿಸಿಲ್ಲ. ಮಹಾರಾಷ್ಟ್ರದಲ್ಲಿ ಆದಂತೆ ಒಟ್ಟಾಗಿ ಆಗಲಿಲ್ಲ. ಇಲ್ಲಿ ಮುಸ್ಲಿಂ ಸಮುದಾಯ ಒಟ್ಟಾಗಿ ಉಳಿದ ಸಮುದಾಯ ಒಟ್ಟಾಗಲಿಲ್ಲ. ಮುಸ್ಲಿಂ ಸಮುದಾಯದ ಥರ ಉಳಿದ ಸಮುದಾಯಗಳೂ ನಿಖಿಲ್ ಪರ ಒಟ್ಟಾಗಿ ನಿಲ್ಲಬೇಕಿತ್ತು ಎಂದು ಹೇಳಿದರು.

## ನಿಖಿಲ್ ಚುನಾವಣೆಯಲ್ಲಿ ಸೋತಿದ್ದಾನೆಯೇ ಹೊರತು ಮನುಷ್ಯನಾಗಿ ಸೋತಿಲ್ಲ

**ಬೆಂಗಳೂರು:** ನನ್ನ ಮಗ ಮೂರನೇ ಸಲ ಸೋತಿದ್ದಾನೆ. ಅವನು ಚುನಾವಣೆಯಲ್ಲಿ ಮಾತ್ರ ಸೋತಿದ್ದಾನೆಯೇ ಹೊರತು ಮನುಷ್ಯನಾಗಿ ಸೋತಿಲ್ಲ. ಅವನ ಮಾನವೀಯತೆ, ಸಹೃದಯತೆ ಸೋತಿಲ್ಲ ಎಂದು ಅನಿತಾ ಕುಮಾರಸ್ವಾಮಿ ಪುತ್ರ ನಿಖಿಲ್ ಕುಮಾರಸ್ವಾಮಿಗೆ ಧೈರ್ಯ ತುಂಬಿದ್ದಾರೆ. ಎಕ್ಸ್ ಜಾಲತಾಣದಲ್ಲಿ ಭಾವನಾತ್ಮಕ ಪೋಸ್ಟ್ ಮಾಡಿರುವ ಅವರು ತಮ್ಮ ಭಾವನೆಗಳನ್ನು ಹಂಚಿಕೊಂಡಿದ್ದಾರೆ.

**ಟ್ವೀಟ್ ಏನು?:** ನನ್ನ ಪುತ್ರ ನಿಖಿಲ್ ಕುಮಾರಸ್ವಾಮಿ, ಚನ್ನಪಟ್ಟಣ ವಿಧಾನಸಭೆ ಕ್ಷೇತ್ರದ ಉಪಚುನಾವಣೆಯಲ್ಲಿ ಪರಾಜಯ ಹೊಂದಿದ್ದಾನೆ, ಒಪ್ಪುತ್ತೇನೆ. ಚುನಾವಣೆ ವ್ಯವಸ್ಥೆಯಲ್ಲಿ ಸೋಲು ಗೆಲುವು ಇದ್ದೇ ಇರುತ್ತದೆ ಹಾಗೂ ಒಬ್ಬರು ಗೆಲ್ಲಬೇಕಾದರೆ ಇನ್ನೊಬ್ಬರು ಸೋಲಲೇಬೇಕಾಗುತ್ತದೆ. ಆದರೆ ಸೋಲಿಗೆ ಅನೇಕ ಕಾರಣಗಳಿರುತ್ತವೆ. ಹಾಗೆಂದು ನಿಖಿಲ್ ಸೋಲಿನ ಕಾರಣಗಳ ಬಗ್ಗೆ ಚರ್ಚಿಸುವುದು ನನ್ನ ಉದ್ದೇಶವಲ್ಲ. ರಾಜಕಾರಣದಲ್ಲಿ ನನಗಾಗಲಿ, ನನ್ನ ಪತಿಗಾಗಲಿ ಅಥವಾ ನನ್ನ ಪೂಜ್ಯ ಮಾವನವರಿಗೇ ಆಗಲಿ ಗೆಲುವು, ಸೋಲು ಹೊಸದೇನಲ್ಲ. ಎರಡನ್ನೂ ಸಮಚಿತ್ತದಿಂದ ಸ್ವೀಕರಿಸಿದ್ದೇವೆ. ಗೆದ್ದಾಗ ಬೀಗಿಲ್ಲ, ಸೋತಾಗ ಕುಗ್ಗಿಲ್ಲ. ಸೋತ ಹತಾಶೆಯಲ್ಲಿ ಅನ್ಯರನ್ನು ಹೀಗಳೆದಿಲ್ಲ. ನನ್ನ ಮಗನಿಗೂ ಇದೇ ಅನ್ವಯ ಆಗುತ್ತದೆ. ನನ್ನ ಮಗನ ಬಗ್ಗೆ ರಾಜ್ಯದ ಜನತೆಗೆ ಹೆಚ್ಚೇನೂ ಹೇಳುವ ಅಗತ್ಯವಿಲ್ಲ. ಅವನು ಒಳ್ಳೆಯ ಮಗ, ಒಳ್ಳೆಯ ಪತಿ, ಒಳ್ಳೆಯ ತಂದೆ. ರಾಜಕಾರಣಕ್ಕೆ ಬರುವ ಮುನ್ನ ಒಳ್ಳೆಯ ನಾಯಕ ನಟ. ಅವನಂಥ ಒಳ್ಳೆಯ ಮಗನನ್ನು ಪಡೆದಿದ್ದಕ್ಕಾಗಿ ನಾನೂ ನನ್ನ ಪತಿ ಹೆಮ್ಮೆಪಡುತ್ತೇವೆ. ತಾಯಿಯಾಗಿ ಅವನ ಯಶಸ್ಸನ್ನು ಸಂಭ್ರಮಿಸುತ್ತೇನೆ. ಅವನಿಗೆ ಕಷ್ಟ ಎದುರಾದಾಗ ಕಣ್ಣೀರಿಟ್ಟಿದ್ದೇನೆ. ನನ್ನ ಕರುಳಬಳ್ಳಿಯ ಮೇಲೆ ನನಗಷ್ಟು ಮಮಕಾರ ಇರುತ್ತದಲ್ಲವೇ? ಎಲ್ಲಾ ತಾಯಂದಿರಿಗೂ ನನ್ನ ಭಾವನೆಗಳು ಅರ್ಥವಾಗುತ್ತವೆ ಎನ್ನುವ ವಿಶ್ವಾಸ ನನ್ನದು. ನನ್ನ ಮಗ 3ನೇ ಸಲ ಸೋತಿದ್ದಾನೆ. ಅವನು ಚುನಾವಣೆಯಲ್ಲಿ ಮಾತ್ರ ಸೋತಿದ್ದಾನೆಯೇ ಹೊರತು ಮನುಷ್ಯನಾಗಿ ಸೋತಿಲ್ಲ, ಅವನ ಮಾನವೀಯತೆ, ಸಹೃದಯತೆ ಸೋತಿಲ್ಲ. ಅವನ ಮನಸ್ಸು, ಹೃದಯ ವೈಶಾಲ್ಯತೆ ಏನೆಂದು ನನಗೆ ಚನ್ನಾಗಿ ಗೊತ್ತು. ನಾನು ಸದಾ ಆ ಭಗವಂತನಲ್ಲಿ ನಂಬಿಕೆ ಇಟ್ಟಿದ್ದೇನೆ. ನನ್ನ ಮಗನ ಮೇಲೆ ಆ ದೈವದ ಕರುಣೆ, ಅನುಗ್ರಹವಿದೆ ಹಾಗೂ ಚನ್ನಪಟ್ಟಣ ಜನತೆಯ ಪ್ರೀತಿ ವಿಶ್ವಾಸವೂ ಸದಾ ಅವನ ಮೇಲಿರುತ್ತದೆ. ಇಂದಲ್ಲ ನಾಳೆ ಜನಸೇವೆ ಮಾಡುವ ಅವಕಾಶ ಅವನಿಗೆ ಸಿಕ್ಕೇ ಸಿಗುತ್ತದೆ ಎನ್ನುವ ಅಚಲ ನಂಬಿಕೆ ನನ್ನದು ಎಂದು ಅನಿತಾ ಕುಮಾರಸ್ವಾಮಿ ಎಕ್ಸ್‌ನಲ್ಲಿ ಬರೆದುಕೊಂಡಿದ್ದಾರೆ.

## ವಕ್ಫ್ ಆಸ್ತಿ ಭೂಕಬಳಿಕೆ ಹೆಚ್ಚಿದ್ದಕ್ಕೆ ಬಿಜೆಪಿಯಿಂದ ಹೆಚ್ಚು ನೋಟಿಸ್

**ಬೀದರ್:** ಅಂದು ಬೆಂಗಳೂರಿನಲ್ಲಿ ವಕ್ಫ್ ಆಸ್ತಿ ಭೂ ಕಬಳಿಕೆ ಹೆಚ್ಚಾಗಿತ್ತು ಹೀಗಾಗಿ ಬಿಜೆಪಿಯಿಂದ ಹೆಚ್ಚು ನೋಟಿಸ್‌ಗಳನ್ನು ನೀಡಲಾಗಿದೆ ಎಂದು ಆಗಿನ ವಿಧಾನ ಮಂಡಳ ಸಮಿತಿ ಅಧ್ಯಕ್ಷ ಹಾಗೂ ಮಾಜಿ ಸಚಿವ ಕುಮಾರ್ ಬಂಗಾರಪ್ಪ ಹೇಳಿದರು. ಗಡಿ ಜಿಲ್ಲೆಯಲ್ಲಿ ಬಿಜೆಪಿ ರೆಬಲ್ಸ್ ಟೀಂ ನಿನ್ನೆಯಿಂದ ವಕ್ಫ್ ವಿರುದ್ಧ ಹೋರಾಟ ಆರಂಭಿಸಿದೆ. ವಕ್ಫ್ ಹಟಾವೋ ಭಾರತ್ ದೇಶ್ ಬಚಾವೋ' ಘೋಷವಾಕ್ಯದಡಿ ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಹಾಗೂ ತಂಡ ಹೋರಾಟ ನಡೆಸಿದೆ. ಈ ವೇಳೆ ಹೋರಾಟದಲ್ಲಿ ಭಾಗವಹಿಸಿ ಮಾತನಾಡಿದರು.

ಮಾಧ್ಯಮದ ಜೊತೆ ಮಾತನಾಡಿದ ಅವರು, ಮೊದಲು ಬೆಂಗಳೂರಿನಲ್ಲಿ ವಕ್ಫ್ ಆಸ್ತಿ ಭೂ ಕಬಳಿಕೆ ಹೆಚ್ಚಾಗಿತ್ತು ಹೀಗಾಗಿ ಬಿಜೆಪಿ ಸರ್ಕಾರ ಹೆಚ್ಚು ನೋಟಿಸ್‌ಗಳನ್ನು ನೀಡಿದೆ. ಅದರಲ್ಲಿಯೂ ವಾಣಿಜ್ಯ ಉದ್ದೇಶಕ್ಕಾಗಿ, ರಸ್ತೆಗಾಗಿ, ಹೋಟೆಲ್ ನಿರ್ಮಾಣ ಮಾಡಲು ವಕ್ಫ್ ಆಸ್ತಿಯನ್ನು ಕಬಳಿಕೆ ಮಾಡಿದವರಿಗೆ ನೋಟಿಸ್ ನೀಡಲಾಗಿದೆ. ಇನ್ನೂ ಕಾಂಗ್ರೆಸ್ ಸಮಯದಲ್ಲಿ ಅವರು ನೋಟಿಸ್ ನೀಡಿದ್ದಾರೆ ಎಂದು ಪ್ರತಿಕ್ರಿಯೆ ನೀಡಿದ್ದಾರೆ.

## ಕೇಂದ್ರ ಅನುಮೋದನೆ

ನಿಯತಕಾಲಿಕೆ ಪ್ರಕಾಶಕರನ್ನು ಸೇರಿಸಲಾಗಿದೆ. ಈ ಪ್ರಕಾಶಕರು ಪ್ರಕಟಿಸಿದ ಸುಮಾರು 13,000 ಇ-ಜರ್ನಲ್‌ಗಳು ಈಗ 6,300 ಕ್ಕೂ ಹೆಚ್ಚು ಸರ್ಕಾರಿ ಉನ್ನತ ಶಿಕ್ಷಣ ಸಂಸ್ಥೆಗಳು ಮತ್ತು ಕೇಂದ್ರ ಸರ್ಕಾರದ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆಗಳಿಗೆ ಪ್ರವೇಶಿಸಬಹುದು.

ಇದರೊಂದಿಗೆ ಅಟಲ್ ಇನ್ನೋವೇಶನ್ ಮಿಷನ್‌ನ ಹೊಸ ಹಂತವನ್ನು ಪ್ರಾರಂಭಿಸಲು ಕ್ಯಾಬಿನೆಟ್ ಅನುಮೋದನೆ ನೀಡಿದೆ ಎಂದು ಅಶ್ವಿನಿ ವೈಷ್ಣವ್ ಹೇಳಿದರು. ಈ ಕಾರ್ಯಾಚರಣೆಗೆ ಸರ್ಕಾರ 2,750 ಕೋಟಿ ರೂ. ಇದರೊಂದಿಗೆ ಜಮ್ಮು-ಕಾಶ್ಮೀರ ಮತ್ತು ಈಶಾನ್ಯ ರಾಜ್ಯಗಳಲ್ಲಿ ಸುಮಾರು ಒಂದು ಸಾವಿರ ಹೊಸ ಇನ್ನೋವೇಶನ್ ಲ್ಯಾಬ್‌ಗಳನ್ನು ಸ್ಥಾಪಿಸಲಾಗುವುದು.

## ಪ್ರಯಾಣಿಕರಿಗಾಗಿ ಶೋಧ

ನಾಗರಿಕ ವಿಮಾನಯಾನ ಉಪನಿರ್ದೇಶಕ ಲೂಯಿಸ್ ಮಿರಾಂಡಾ ಕೂಡ ಇದನ್ನು ಖಚಿತಪಡಿಸಿದ್ದಾರೆ. ಆದರೆ ಪ್ರಯಾಣಿಕರ ಸ್ಥಿತಿ ಅಥವಾ ಅವರ ಗುರುತಿನ ಬಗ್ಗೆ ಹೆಚ್ಚಿನ ಮಾಹಿತಿ ಇನ್ನೂ ಬಂದಿಲ್ಲ. ಈ ವಿಚಾರದಲ್ಲಿ ಕೋಸ್ಟರಿಕಾದ ರೆಡ್‌ಕ್ರಾಸ್ ಸಂಸ್ಥೆಯು ಮಧ್ಯಾಹ್ನ 3 ಗಂಟೆ ಸುಮಾರಿಗೆ ವಿಮಾನ ಪತ್ತೆಯಾಗಿದೆ ಎಂದು ತಿಳಿಸಿದೆ.

ಸೆಸ್ನಾ 206 8.6 ಮೀಟರ್ ಉದ್ದ ಮತ್ತು 11 ಮೀಟರ್ ರೆಕ್ಕೆಗಳನ್ನು ಹೊಂದಿರುವ ಲಘು ವಿಮಾನವಾಗಿದೆ ಎಂದು ಹೇಳಲಾಗುತ್ತದೆ. ಇದನ್ನು ಸಾಮಾನ್ಯವಾಗಿ ಕಡಿಮೆ ದೂರದ ಪ್ರಯಾಣಕ್ಕೆ ಬಳಸಲಾಗುತ್ತದೆ.

ನೇಪಾಳ ವಿಮಾನ ಅಪಘಾತದಲ್ಲಿ 18 ಮಂದಿ ಸಾವು ಇತ್ತೀಚೆಗೆ, ನೇಪಾಳದ ರಾಜಧಾನಿಯಲ್ಲಿ ದೊಡ್ಡ ವಿಮಾನ ಅಪಘಾತ ನಡೆದಿತ್ತು. ತ್ರಿಭುವನ್ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಟೇಕ್ ಆಫ್ ಆಗುವ ವೇಳೆ ವಿಮಾನ ಪತನಗೊಂಡಿದೆ. ಈ ಅಪಘಾತದಲ್ಲಿ 18 ಮಂದಿ ಸಾವನ್ನಪ್ಪಿದ್ದಾರೆ. ವಿಮಾನವು ಕಠ್ಮಂಡುವಿನಿಂದ ಪೋಖರಾಗೆ ಹೋಗುತ್ತಿತ್ತು. ಈ ಸೌರ್ಯ ಏರ್‌ಲೈನ್ಸ್ ವಿಮಾನದಲ್ಲಿ 19 ಮಂದಿ ಇದ್ದರು. ಇದರಲ್ಲಿ 17 ಪ್ರಯಾಣಿಕರು ಮತ್ತು ಇಬ್ಬರು ಸಿಬ್ಬಂದಿ ಸೇರಿದ್ದಾರೆ.

## ಡ್ರಗ್ಸ್ ಜಪ್ತಿ

ಅದರ ಹಿನ್ನೆಲೆಯಲ್ಲಿ ಗಸ್ತು ಹಡಗುಗಳು ತಕ್ಷಣವೇ ಧಾವಿಸಿವೆ. ಹಡಗನ್ನು ತಕ್ಷಣವೇ ಹತ್ತಿರದ ದ್ವೀಪಕ್ಕೆ ಎಳೆಯಲಾಯಿತು. ಇದರಲ್ಲಿ ಆರು ಮಂದಿ ಮ್ಯಾನ್ಮಾರ್ ಪ್ರಜೆಗಳನ್ನು ಬಂಧಿಸಲಾಗಿದೆ. ವಶಪಡಿಸಿಕೊಂಡ ಡ್ರಗ್ಸ್ ಮೆಥಾಂಫೆಟಮೈನ್ ಎಂದು ನಂಬಲಾಗಿದೆ. ಜಂಟಿ ವಿಚಾರಣೆಗಾಗಿ ಅಂಡಮಾನ್ ನಿಕೋಬಾರ್ ಪೊಲೀಸರಿಗೆ ಮಾಹಿತಿ ನೀಡಲಾಗಿದೆ.

ಸಾಗರ್ ಮಂಥನ್-4 ಹೆಸರಿನ ಅಭಿಯಾನವು ಗುಪ್ತಚರ ಸಂಸ್ಥೆಗಳ ಸುಳಿವು ಆಧರಿಸಿದೆ ಎಂದು ಹೇಳಿದೆ. ಕರಾವಳಿ ಕಾವಲು ಪಡೆ ಕಡಲಾಚೆಯ ಗಸ್ತು ನೌಕೆಗಳನ್ನು ಬಳಸಿ ಹಡಗನ್ನು ಗುರುತಿಸಿ ತಡೆದಿದೆ. ಎನ್‌ಸಿಬಿ, ನೌಕಾಪಡೆ ಮತ್ತು ಗುಜರಾತ್ ಪೊಲೀಸ್‌ನ ಭಯೋತ್ಪಾದನಾ ನಿಗ್ರಹ ದಳ ಜಂಟಿಯಾಗಿ ಕಾರ್ಯಾಚರಣೆ ನಡೆಸಿದೆ.

ಇದಲ್ಲದೇ ನವೆಂಬರ್ 15 ರಂದು ಗುಜರಾತ್‌ನ ಪೋರಬಂದರ್ ಕರಾವಳಿಯಲ್ಲಿ ಭಾರತೀಯ ಕೋಸ್ಟ್ ಗಾರ್ಡ್ ಮತ್ತು ಗುಜರಾತ್ ಎಟಿಎಸ್ 500 ಕೆಜಿ ಡ್ರಗ್ಸ್ ವಶಪಡಿಸಿಕೊಂಡಿದೆ.

## ಮಾರ್ಗ ಬದಲಾವಣೆ

ರೈಲು ಸಂಖ್ಯೆ 06528 ಎಮ್ ವಿಟಿ ಬೆಂಗಳೂರು-ಬಂಗಾರಪೇಟೆ ಮೆಮು ವಿಶೇಷ ರೈಲು ನವೆಂಬರ್ 28 ರದ್ದಾಗಲಿದೆ.

**ಭಾಗಶಃ ರದ್ದು:** ರೈಲು ಸಂಖ್ಯೆ 16521 ಬಂಗಾರಪೇಟೆ-ಕೆಎಸ್ ಆರ್ ಬೆಂಗಳೂರು ಕಾಯ್ದಿರಿಸದ ಮೆಮು ಎಕ್ಸ್‌ಪ್ರೆಸ್ ನವೆಂಬರ್ 27 ರಂದು ಕೃಷ್ಣರಾಜಪುರಂ ಮತ್ತು ಕೆಎಸ್ ಆರ್ ಬೆಂಗಳೂರು ನಿಲ್ದಾಣಗಳ ನಡುವೆ ಭಾಗಶಃ ರದ್ದಾಗಲಿದೆ. ರೈಲು ಸಂಖ್ಯೆ 16530 ಕಾರೈಕಲ್ -ಎಸ್ ಎಮ್ ವಿಟಿ ಬೆಂಗಳೂರು ಡೈಲಿ ಎಕ್ಸ್‌ಪ್ರೆಸ್ ಬೆಳಂದೂರು ರಸ್ತೆ ಮತ್ತು ಎಸ್ ಎಮ್ ವಿಟಿ ಬೆಂಗಳೂರು ನಿಲ್ದಾಣಗಳ ನಡುವೆ ಭಾಗಶಃ ರದ್ದಾಗಲಿದೆ.

ರೈಲು ಸಂಖ್ಯೆ 06270 ಎಸ್ ಎಮ್ ವಿಟಿ ಬೆಂಗಳೂರು-ಮೈಸೂರು ಡೈಲಿ ಪ್ಯಾಸೆಂಜರ್ ವಿಶೇಷ ರೈಲು ಎಸ್ ಎಮ್ ವಿಟಿ ಬೆಂಗಳೂರು ಮತ್ತು ಕೆಎಸ್ ಆರ್ ಬೆಂಗಳೂರು ನಡುವೆ ಭಾಗಶಃ ರದ್ದಾಗಲಿದೆ. ಮತ್ತು ಇದು ಎಸ್ ಎಮ್ ವಿಟಿ ಬದಲಿಗೆ ಕೆಎಸ್ ಆರ್ ಬೆಂಗಳೂರಿನಿಂದ 30 ನಿಮಿಷ ತಡವಾಗಿ ಹೊರಡಲಿದೆ.

**ಮಾರ್ಗ ಬದಲಾವಣೆ:** ರೈಲು ಸಂಖ್ಯೆ 11021 ದಾದರ್-ತಿರುನೆಲ್ವೇಲಿ ಟ್ರೈ-ವೀಕ್ಲಿ ಎಕ್ಸ್‌ಪ್ರೆಸ್, ನವೆಂಬರ್ 26 ರಂದು ಚಿಕ್ಕಬಾಣಾವರ, ಬಾಣಸವಾಡಿ, ಬೈಯ್ಯಪ್ಪನಹಳ್ಳಿ, ಕರ್ಮೇಲರಂ ಮತ್ತು ಹೊಸೂರು

## ಮೊದಲನೇ ಪುಟದಿಂದ...

ಮೂಲಕ ಸಂಚರಿಸುತ್ತದೆ. ಎಸ್ ಎಮ್ ವಿಟಿ ಬೆಂಗಳೂರಿನಲ್ಲಿ ನಿಲ್ಲುವುದಿಲ್ಲ. ಅಂದು ಈ ರೈಲು ಬಾಣಸವಾಡಿ ನಿಲ್ದಾಣದಲ್ಲಿ ನಿಲುಗಡೆಯಾಗುತ್ತದೆ. (ರಾತ್ರಿ 08:50ಕ್ಕೆ ನಿಲ್ದಾಣಕ್ಕೆ ಆಗಮಿಸಿ ಮತ್ತು ರಾತ್ರಿ08:52ಕ್ಕೆ ನಿರ್ಗಮಿಸುತ್ತದೆ) ಮಾರ್ಗ ಬದಲಿಸಲಾಗಿದೆ.

ರೈಲು ಸಂಖ್ಯೆ 11302 ಕೆಎಸ್ ಆರ್ ಬೆಂಗಳೂರು-ಛತ್ರಪತಿ ಶಿವಾಜಿ ಮಹಾರಾಜ್ ಟರ್ಮಿನಲ್ , ಮುಂಬೈ ಡೈಲಿ ಎಕ್ಸ್‌ಪ್ರೆಸ್, ನವೆಂಬರ್ 27 ಕೆಎಸ್ ಆರ್ ಬೆಂಗಳೂರು, ಯಶವಂತಪುರ ಮತ್ತು ಯಲಹಂಕ ಮೂಲಕ ಸಂಚರಿಸುತ್ತದೆ.

ರೈಲು ಸಂಖ್ಯೆ 16236 ಮೈಸೂರು-ತುಟಿಕೋರಿನ್ ಡೈಲಿ ಎಕ್ಸ್‌ಪ್ರೆಸ್, ನವೆಂಬರ್ 27 ರಂದು ಕೆಎಸ್‌ಆರ್ ಬೆಂಗಳೂರು, ಯಶವಂತಪುರ, ಬಾಣಸವಾಡಿ ಮತ್ತು ಕರ್ಮೇಲಾರಂ ನಿಲ್ದಾಣಗಳ ಮೂಲಕ ಸಂಚರಿಸುತ್ತದೆ. ರೈಲು ಸಂಖ್ಯೆ 06269 ಮೈಸೂರು-ಎಸ್ ಎಮ್ ವಿಟಿ ಬೆಂಗಳೂರು ಡೈಲಿ ಪ್ಯಾಸೆಂಜರ್ ವಿಶೇಷ, ನವೆಂಬರ್ 27 ರಂದು ಕೆಎಸ್ ಆರ್ ಬೆಂಗಳೂರು, ಯಶವಂತಪುರ, ಹೆಬ್ಬಾಳ, ಬಾಣಸವಾಡಿ, ಮತ್ತು ಎಸ್ ಎಮ್ ವಿಟಿ ಮೂಲಕ ಸಂಚರಿಸುತ್ತದೆ.

ರೈಲು ಸಂಖ್ಯೆ 15227 ಎಸ್ ಎಮ್ ವಿಟಿ ಬೆಂಗಳೂರು-ಮುಜಫರ್ ಪುರ ವೀಕ್ಲಿ ಎಕ್ಸ್‌ಪ್ರೆಸ್, ನವೆಂಬರ್ 28 ರಂದು ಪ್ರಾರಂಭವಾಗುವ ಪ್ರಯಾಣವನ್ನು ಎಸ್ ಎಮ್ ವಿಟಿ ಬೆಂಗಳೂರಿನಿಂದ 225 ನಿಮಿಷಗಳವರೆಗೆ ಮರುಹೊಂದಿಸಲಾಗುತ್ತದೆ.

**ರೈಲುಗಳ ನಿಯಂತ್ರಣ:** ರೈಲು ಸಂಖ್ಯೆ 12835 ಹಟಿಯಾ-ಎಸ್ ಎಮ್ ವಿಟಿ ಬೆಂಗಳೂರು ಬೈ-ವೀಕ್ಲಿ ಎಕ್ಸ್‌ಪ್ರೆಸ್, ನವೆಂಬರ್ 26 ರಂದು ಮಾರ್ಗದಲ್ಲಿ 60 ನಿಮಿಷಗಳ ಕಾಲ ನಿಯಂತ್ರಿಸಲಾಗುತ್ತದೆ.

ರೈಲು ಸಂಖ್ಯೆ 16021 ಡಾ. ಎಂಜಿಆರ್ ಚೆನ್ನೈ ಸೆಂಟ್ರಲ್ -ಮೈಸೂರು ಬೈ-ವೀಕ್ಲಿ ಎಕ್ಸ್‌ಪ್ರೆಸ್, ನವೆಂಬರ್ 27 ರಂದು ಮಾರ್ಗದಲ್ಲಿ 60 ನಿಮಿಷಗಳ ಕಾಲ ನಿಯಂತ್ರಿಸಲಾಗುತ್ತದೆ.

ರೈಲು ಸಂಖ್ಯೆ 16594 ನಾಂದೇಡ್-ಕೆಎಸ್‌ಆರ್ ಬೆಂಗಳೂರು ಡೈಲಿ ಎಕ್ಸ್‌ಪ್ರೆಸ್, 16220 ತಿರುಪತಿ-ಚಾಮರಾಜನಗರ ಡೈಲಿ ಎಕ್ಸ್‌ಪ್ರೆಸ್, 12683 ಎರ್ನಾಕುಲಂ-ಎಸ್‌ಎಂವಿಟಿ ಬೆಂಗಳೂರು ಟ್ರೈ-ವೀಕ್ಲಿ ಎಕ್ಸ್‌ಪ್ರೆಸ್, ಮತ್ತು 12657 ಡಾ. ಎಂಜಿಆರ್ ಚೆನ್ನೈ ಸೆಂಟ್ರಲ್-ಕೆಎಸ್ ಆರ್ ಬೆಂಗಳೂರು ಡೈಲಿ ಸೂಪರ್‌ಫಾಸ್ಟ್ ನವೆಂಬರ್ 27 ರಂದು 30 ನಿಮಿಷಗಳವರೆಗೆ ನಿಯಂತ್ರಿಸಲಾಗುತ್ತದೆ.

## ಗುಡ್ ನ್ಯೂಸ್

**3 ದಿನದಲ್ಲಿ ಸಮಸ್ಯೆ ಪರಿಹಾರ ಸಾಧ್ಯನಾ?:** ಸ್ಥಳ ಪರಿಶೀಲನೆ ಮಾಡಿ ಅರ್ಹರಿಗೆ ಬಿಪಿಎಲ್ ಕಾರ್ಡ್ ವಾಪಸ್ ಆಗುತ್ತೆ. ನವೆಂಬರ್ 28ರ ಒಳಗಡೆ ಸಮಸ್ಯೆಗೆ ಪರಿಹಾರ ಕೊಡಲು ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ ಎಂದು ಸಚಿವರು ಹೇಳಿದ್ದಾರೆ. ಆದ್ರೆ, ಸಚಿವರು ಡೆಡ್ ಲೈನ್ ಮೇಲೆ ಡೆಡ್ ಲೈನ್ ಕೊಡುತ್ತಿರುವುದು ಅಧಿಕಾರಿಗಳು ಸಕಷ್ಟ ತಂದಿದೆ ಎನ್ನಲಾಗುತ್ತಿದೆ. ಈಗಾಗಲೆ ರಜೆ, ಟೈಮಿಂಗ್ ಕೂಡ ನೋಡದೆ ಅಧಿಕಾರಿಗಳು ಹಗಲು ರಾತ್ರಿ ಕೂಡ ಕೆಲಸ ಮಾಡುತ್ತಿದ್ದಾರೆ. ಇನ್ನು 3 ದಿನದಲ್ಲಿ ಸಮಸ್ಯೆ ಪರಿಹಾರ ಸಾಧ್ಯನಾ ಎನ್ನುವ ಪ್ರಶ್ನೆ ಎದುರಾಗಿದೆ.

**ಯಾವುದೇ ಕಾರ್ಡ್ ರದ್ದಾಗಿಲ್ಲ ಅನರ್ಹ ಮಾತ್ರ:** ರೇಷನ್ ಕಾರ್ಡ್ ರದ್ದಾದ ವಿಚಾರವಾಗಿ ಈ ಹಿಂದೆ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ್ದ ಸಚಿವ ಮುನಿಯಪ್ಪ, ಯಾವುದೇ ಅರ್ಹ ಬಿಪಿಎಲ್, ಎಪಿಎಲ್ ಕಾರ್ಡ್‌ಗಳನ್ನು ರದ್ದುಪಡಿಸುವುದಿಲ್ಲ. 66% ಬಿಪಿಎಲ್ ಕಾಡ್‌ಗಳಲ್ಲಿ ಅನರ್ಹರನ್ನ ಮಾತ್ರ ಎಪಿಎಲ್‌ಗೆ ಸೇರಿಸಲಾಗಿದೆ. ತೆರಿಗೆ ಪಾವತಿದಾರರು, ಸರ್ಕಾರಿ ನೌಕರರ ಕುಟುಂಬಗಳ ಬಿಪಿಎಲ್ ಕಾರ್ಡ್‌ಗಳನ್ನ ಮಾತ್ರ ಎಪಿಎಲ್‌ಗೆ ಸೇರಿಸಲಾಗಿದೆ. ಅನರ್ಹ ಇರಬಹುದೆನ್ನುವ ಕಾರ್ಡ್‌ಗಳನ್ನ ಮಾತ್ರ ಅಮಾನತ್ತಿನಲ್ಲಿಡಲಾಗಿದೆ ಎಂದು ಹೇಳಿದ್ದರು. ಅಲ್ಲದೆ ಒಂದು ವೇಳೆ ಬಿಪಿಎಲ್ ಗೆ ಅರ್ಹರಿದ್ದು, ಎಪಿಎಲ್ ಆಗಿದ್ರೆ, ಅಂತವರಿಗೆ ಪುನರ್ ಸ್ಥಾಪಿಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ತಿಳಿಸಿದ್ದರು.

ಕೇಂದ್ರ ಸರ್ಕಾರದ ಮಾನದಂಡಗಳ ಪ್ರಕಾರ ಅನರ್ಹರ ಕಾಡ್‌ಗಳನ್ನು ಪರಿಷ್ಕರಿಸಲಾಗಿದೆ. ರಾಜ್ಯದಲ್ಲಿ ಒಟ್ಟು 1,50,59,431 ಒಟ್ಟು ಕಾರ್ಡ್‌ಗಳಿವೆ. ಅವರಲ್ಲಿ ಆದಾಯ ತೆರಿಗೆ ಹಾಗೂ ಸರ್ಕಾರಿ ನೌಕರರು ಹೊಂದಿರೋ ಒಟ್ಟು ಎಪಿಎಲ್ ಕಾರ್ಡ್ 1,02,509 ಕಾರ್ಡ್‌ಗಳಿವೆ. ಈ ಪೈಕಿ 8447 ಮಾತ್ರ ಕಾರ್ಡ್ ಗಳು ಮಾತ್ರ ಅಮಾನತು ಮಾಡಲಾಗಿದೆ. ಆದಾಯ ತೆರಿಗೆ ಪಾವತಿ ಮಾಡೋ 98473 ಕಾರ್ಡ್, ಸರ್ಕಾರಿ ನೌಕರರದ್ದು 4036. ಕಾರ್ಡ್ ಗಳು, ಇದನ್ನ ಹೊರತು ಪಡಿಸಿ ಬೇರೆ ಕಾರ್ಡ್ ಗಳ ಪರಿಷ್ಕರಣೆ ಇಲ್ಲ ಎಂದು ಸಚಿವರು ತಿಳಿಸಿದರು.

## ಬಾಣಂತಿಯರು ಮೃತ

ಇದು ಸರ್ಕಾರಿ ಆಸ್ಪತ್ರೆಗಳ ಅಂಕಿ ಅಂಶಗಳಾಗಿದ್ದು, ಖಾಸಗಿ ಆಸ್ಪತ್ರೆಗಳ ಅಂಕಿ ಅಂಶಗಳು ತೆಗೆದುಕೊಂಡರೆ ಈ ಮರಣ ಪ್ರಮಾಣ ಏರಿಕೆ ಆಗಬಹುದು. ನ್ಯೂ ಬಾರ್ನ್ ಕೇರ್ ಯೂನಿಟ್ ಗಳು ಇಲ್ಲದ ಕಾರಣ ಬಾಣಂತಿಯರು ಸಾವಿಗೀಡಾಗುತ್ತಿದ್ದಾರೆ. 2024ರ ಏಪ್ರಿಲ್ ನಿಂದ ನವೆಂಬರ್ ತನಕ ಒಟ್ಟು 28 ಬಾಣಂತಿಯರು ಮೃತಪಟ್ಟಿದ್ದಾರೆ. 23 ಸರ್ಕಾರಿ ಆಸ್ಪತ್ರೆಗಳಾದರೆ, 05 ಖಾಸಗಿ ಹೆರಿಗೆ ಆಸ್ಪತ್ರೆಯಲ್ಲಿ ಸಾವಾಗಿದೆ.

ಹೊರ ಜಿಲ್ಲೆಯಿಂದ ಬರುವ ಬಾಣಂತಿಯರೇ ಹೆಚ್ಚು ಸಾವಿಗೀಡಾಗಿದ್ದಾರೆ. ಚಿತ್ರದುರ್ಗ, ವಿಜಯನಗರ ಜಿಲ್ಲೆಯ ಹರಪನಹಳ್ಳಿ, ಹಾವೇರಿ ಜಿಲ್ಲೆಯ ರಾಣೇಬೆನ್ನೂರು, ಶಿವಮೊಗ್ಗ ಗಡಿ ಭಾಗದಿಂದ ರೆಫರ್ ಆಗಿ ಬಂದು ಸಾವನಪ್ಪಿರುವ ಪ್ರಕರಣಗಳೆ ಹೆಚ್ಚಿವೆ.

ದಾವಣಗೆರೆ ಜಿಲ್ಲೆಯ ಅಂಕಿ-ಅಂಶಗಳನ್ನು ನೋಡಿದರೆ ಸಾವಿನ ಪ್ರಮಾಣ ಶೇ 69 ರಷ್ಟು ಕಡಿಮೆ ಇದೆ. ಬೇರೆ ಜಿಲ್ಲೆಗಳಿಂದ ಬರುವ ಬಾಣಂತಿಯರ ಸಾವು ಆಗುತ್ತಿದೆ. ವೈದ್ಯರು ಸಕಾಲಕ್ಕೆ ಆಸ್ಪತ್ರೆಗೆ ಹಾಜರಾಗಿ. ಹೆರಿಗೆ ಅಂದರೆ ಅದೊಂದು ಟೆಲಿಮೆಡಿಸನ್ ವಿಭಾಗವಲ್ಲ ಎಂದು ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ ಸೂಚನೆ ನೀಡಿದರು.

ಹುಟ್ಟಿದ ಮಕ್ಕಳು ಮೆಕನೆಮ್ ಸ್ಟೈಲ್, ಪ್ರೀ ಮೆಚ್ಯೂರ್ ಡೆಲಿವರಿ, 500-600 ಗ್ರಾಮ್ ತೂಕದ ಮಕ್ಕಳು ಹುಟ್ಟಿರುವುದು, ಬರ್ತ್ ಅನಾಮೆಲಿಸ್ ನಂತಹ ಪ್ರಕರಣಗಳು ಚಿಕಿತ್ಸೆ ಫಲಕಾರಿ ಆಗದೆ ಸಾವಾಗುತ್ತಿವೆ ಎಂದು ಆಡಳಿತ ವರ್ಗ ಹೇಳುತ್ತಿದೆ. ಆದರೆ, ಅಮೂಲ್ಯ ಜೀವಗಳನ್ನು ಉಳಿಸಲು ಸರ್ಕಾರ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

## ದಾಖಲು

ಇತ್ತೀಚಿನ ಸಂದರ್ಶನವೊಂದರಲ್ಲಿ, ಗವರ್ನರ್ ದಾಸ್ ಅವರು ಭಾರತದ ಆರ್ಥಿಕ ಸ್ಥಿತಿಸ್ಥಾಪಕತ್ವದಲ್ಲಿ ವಿಶ್ವಾಸ ವ್ಯಕ್ತಪಡಿಸಿದ್ದಾರೆ, ರಕ್ಷಣಾವಾದ, ವ್ಯಾಪಾರ ಯುದ್ಧಗಳು ಮತ್ತು ಭೌಗೋಳಿಕ ರಾಜಕೀಯ ಉದ್ವಿಗ್ನತೆಗಳನ್ನು ಒಳಗೊಂಡಂತೆ ಬಾಹ್ಯ ಆಘಾತಗಳನ್ನು ನಿಭಾಯಿಸಲು ದೇಶವು ಉತ್ತಮವಾಗಿ ಸಿದ್ಧವಾಗಿದೆ ಎಂದು ಹೇಳಿದ್ದಾರೆ.

ಶಕ್ತಿಕಾಂತ್ ದಾಸ್ ಅವರನ್ನು RBI ಗವರ್ನರ್ ಆಗಿ ಮೂರು ವರ್ಷದ ಅವಧಿಗೆ ಕೇಂದ್ರ ಸರ್ಕಾರ 2021ರಲ್ಲಿ ಮರು ನೇಮಕ ಮಾಡಿತ್ತು.

ಶಕ್ತಿಕಾಂತ್ ದಾಸ್‌ರವರನ್ನು ಡಿಸೆಂಬರ್ 10, 2021ರಿಂದ ಡಿಸೆಂಬರ್ 10,2024ರವರೆಗೆ ಮೂರು ವರ್ಷಗಳ ಅವಧಿಗೆ ನೇಮಿಸಲಾಗಿತ್ತು.ಶಕ್ತಿಕಾಂತ ದಾಸ್‌ರವರು 2018ರ ಡಿಸೆಂಬರ್‌ನಲ್ಲಿ RBI ಗವರ್ನರ್ ಆಗಿ ನೇಮಕಗೊಂಡಿದ್ದರು. ಇದೇ ಡಿಸೆಂಬರ್‌ಗೆ ಅವರ ಅಧಿಕಾರವಧಿ ಮುಕ್ತಾಯವಾಗಲಿದ್ದ ಹಿನ್ನೆಲೆಯಲ್ಲಿ ಅವರನ್ನು ಮರುನೇಮಕ ಮಾಡಲಾಗಿತ್ತು.

ಎನ್‌ಡಿಎ ಸರ್ಕಾರದಲ್ಲಿ ಎರಡನೇ ಬಾರಿಗೆ ಖಃಖ ಗವರ್ನರ್ ಆಗಿ ನೇಮಕಗೊಂಡ ಮೊದಲ ವ್ಯಕ್ತಿ ಶಕ್ತಿಕಾಂತ ದಾಸ್ ಆಗಿದ್ದಾರೆ. ಈ ಮೊದಲಿದ್ದ ಗವರ್ನರ್ ಊರ್ಜಿತ್ ಪಟೇಲ್‌ರವರು ಸರ್ಕಾರದೊಂದಿಗಿನ ಭಿನ್ನಾಭಿಪ್ರಾಯದ ಕಾರಣಕ್ಕಾಗಿ ಈ ಹುದ್ದೆಗೆ ರಾಜೀನಾಮೆ ನೀಡಿ ಹೊರಬಂದಿದ್ದರು.

## ಸಿಎಂ

ವಿಶೇಷ ಮುಖ್ಯ ಕಾರ್ಯದರ್ಶಿ ಮತ್ತು ಕೈಗಾರಿಕಾ ಉತ್ತೇಜನ, ಕೈಗಾರಿಕೆಗಳು ಮತ್ತು ವಾಣಿಜ್ಯ ಇಲಾಖೆ ಆಯುಕ್ತ ಜಯೇಶ್ ರಂಜನ್ ಅವರು ಡಾ.ಪ್ರೀತಿ ಅದಾನಿಗೆ ಬರೆದ ಪತ್ರದಲ್ಲಿ, 'ನಿಮ್ಮ ಪ್ರತಿಷ್ಠಾನದ ಪರವಾಗಿ ಯಂಗ್ ಇಂಡಿಯಾ ಸ್ಕಿಲ್ಸ್ ಯೂನಿವರ್ಸಿಟಿಗೆ 100 ಕೋಟಿ ರೂ. ನೀಡಿದ್ದಕ್ಕಾಗಿ ನಾವು ನಿಮಗೆ ಧನ್ಯವಾದ ತಿಳಿಸುತ್ತೇವೆ. ಪ್ರಸ್ತುತ ಸಂದರ್ಭದಲ್ಲಿ ಉದ್ಭವಿಸಿರುವ ವಿವಾದಗಳನ್ನು ಗಮನದಲ್ಲಿಟ್ಟುಕೊಂಡು ಹಣ ವರ್ಗಾವಣೆ ಮಾಡದಂತೆ ಮಾನ್ಯ ಮುಖ್ಯಮಂತ್ರಿಗಳು ನನಗೆ ಸೂಚನೆ ನೀಡಿದ್ದಾರೆ ಎಂದು ಸ್ಪಷ್ಟಪಡಿಸಿದೆ.

ಯುಎಸ್‌ನಲ್ಲಿ ಅದಾನಿ ವಿರುದ್ಧ ದೋಷಾರೋಪಣೆ ಮಾಡಿದ ನಂತರ, ತೆಲಂಗಾಣ ಸರ್ಕಾರ ಮತ್ತು ಮುಖ್ಯಮಂತ್ರಿ ರೆಡ್ಡಿ ಅವರು ಭಾರತ್ ರಾಷ್ಟ್ರ ಸಮಿತಿ ಮತ್ತು ಬಿಜೆಪಿಯಿಂದ ಟೀಕೆಗೆ ಗುರಿಯಾದರು.

ತೆಲಂಗಾಣದ ಗೌರವ ಮತ್ತು ಘನತೆಯನ್ನು ರಕ್ಷಿಸಲು, ನಾನು ಮತ್ತು ನನ್ನ ಕ್ಯಾಬಿನೆಟ್ ಸಹೋದ್ಯೋಗಿಗಳನ್ನು ಒಳಗೊಂಡ ಯಾವುದೇ ಅನಗತ್ಯ ವಿವಾದಗಳನ್ನು ತಪ್ಪಿಸಲು, ನಾವು ಅದಾನಿ ಅವರ ದೇಣಿಗೆಯನ್ನು ತಿರಸ್ಕರಿಸಲು ನಿರ್ಧರಿಸಿದ್ದೇವೆ. ನಾವು ಯಾರಿಂದಲೂ ಒಂದು ರೂಪಾಯಿ ಕೂಡ ತೆಗೆದುಕೊಂಡಿಲ್ಲ ಎಂದು ಸಿಎಂ ಸ್ಪಷ್ಟಪಡಿಸಿದ್ದಾರೆ.

## ಕಾಯಿಲೆ ಹುಷಾರಾಗ್ಲಿ ಅಂತ ಅಜ್ಜಿ ಮೇಲೆ ಮೊಮ್ಮಗನಿಂದಲೇ ಅತ್ಯಾಚಾರಕ್ಕೆ ಯತ್ನಿಸಿ ಹತ್ಯೆ!



**ಚಿಕ್ಕಮಗಳೂರು:** ತಾಲೂಕಿನ ಕೊಳಗಾಮೆ ಗ್ರಾಮದಲ್ಲಿ ನಡೆದಿದ್ದ ವೃದ್ಧ ದಂಪತಿಯ ಜೋಡಿ ಕೊಲೆ ಕೇಸ್‌ಗೆ ಬಿಗ್ ಟ್ವಿಸ್ಟ್ ಸಿಕ್ಕಿದೆ. ತನಗಿರುವ ಕಾಯಿಲೆ ಹುಷಾರಾಗಲಿ ಎಂದು ತನ್ನ ಅಜ್ಜಿಯ ಮೇಲೆ ಮೊಮ್ಮಗನೇ ಅತ್ಯಾಚಾರಕ್ಕೆ ಯತ್ನಿಸಿ, ಕೊಲೆಗೈದಿದ್ದಾನೆ. ಇನ್ನೂ ಅತ್ಯಾಚಾರಕ್ಕೆ ಯತ್ನಿಸುವ ಮುನ್ನವೇ ಆರೋಪಿ ತನ್ನ ಅಜ್ಜನನ್ನು ಕೊಲೆಗೈದಿದ್ದ ಎಂದು ತನಿಖೆ ವೇಳೆ ಬಯಲಾಗಿದೆ.

ನ.21 ರಂದು ಕೊಳಗಾಮೆ ಗ್ರಾಮದಲ್ಲಿ ಡಬಲ್ ಮರ್ಡರ್ ನಡೆದಿತ್ತು. ಕರಿಬಸವಯ್ಯ (65) ಅವರ ಪತ್ನಿ ಲಲಿತಮ್ಮ (60) ಎಂಬವರ ಕೊಲೆಯಾಗಿತ್ತು. ಪ್ರಕರಣ ನಡೆದ 48 ಗಂಟೆಯಲ್ಲಿ ಮಲ್ಲಂದೂರು ಪೊಲೀಸರು ಆರೋಪಿಯನ್ನು ಬೆಂಗಳೂರಿನಲ್ಲಿ ಬಂಧಿಸಿದ್ದರು. ಇದೀಗ ಆರೋಪಿಯ ಬಾಯಿಯಿಂದ ಕೊಲೆಗೆ ಕಾರಣ ಏನು ಎಂಬುದನ್ನು ಬಾಯಿ ಬಿಡಿಸಿದ್ದಾರೆ.

ನಿಶಾಂತ್ ಬೆಂಗಳೂರಿನಲ್ಲಿ ಫುಡ್ ಡೆಲಿವರಿ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದ. ಅವನಿಗೆ ಮಹಿಳೆಯರ ಬಳಿ ಹೋಗುವ ಅಭ್ಯಾಸ ಇತ್ತಂತೆ. ಇತ್ತೀಚೆಗೆ ಆತನ ಮೈನಲ್ಲಿ ಸಾಕಷ್ಟು ಕಜ್ಜಿಗಳಾಗಿದ್ದವು. ಆತನ ಸ್ನೇಹಿತರು, ನೀನು ಮಹಿಳೆಯರ ಬಳಿ ಹೋದಾಗ ಕಾಂಡೋಮ್ ಬಳಸಬೇಡ. ಆಗ ಕಜ್ಜಿ ಹೋಗುತ್ತೆ ಎಂದು ಹೇಳಿದ್ದರಂತೆ. ಅದಕ್ಕೆ ಬೆಂಗಳೂರಿನಲ್ಲಿ ಯಾರು ಒಪ್ಪದ ಕಾರಣ ಅಜ್ಜ-ಅಜ್ಜಿಯ ಮನೆಗೆ ಬಂದಿದ್ದನು. ಅಜ್ಜಿಯ ಮೇಲೆ ಅತ್ಯಾಚಾರ ಮಾಡುವುದು ಆತನ ಮೂಲ ಉದ್ದೇಶವಾಗಿತ್ತು. ಹಾಗಾಗಿ, ಮೊದಲಿಗೆ ಅಜ್ಜನನ್ನ ಕಲ್ಲಿನಿಂದ ಚಚ್ಚಿ, ಕೊಲೆ ಮಾಡಿ ನಂತರ ಅಜ್ಜಿಯ ಮೇಲೆ ಅತ್ಯಾಚಾರಕ್ಕೆ ಯತ್ನಿಸಿದ್ದಾನೆ. ಈ ವೇಳೆ ಅಜ್ಜಿ ವಿರೋಧ ವ್ಯಕ್ತಪಡಿಸಿದಾಗ ಆಕೆಯ ಬಾಯಿಯನ್ನು ಬಿಗಿಯಾಗಿ ಹಿಡಿದಿದ್ದರಿಂದ ಆಕೆಯು ಸಾವನ್ನಪ್ಪಿದ್ದಳು ಎಂದು ತಿಳಿದು ಬಂದಿದೆ.

ಕೊಲೆಯಾದ ದಂಪತಿಗೆ ಮಕ್ಕಳಿರಲಿಲ್ಲ. ಮೃತ ಲಲಿತಮ್ಮನ ತಂಗಿಯ ಮೊಮ್ಮಗ ನಿಶಾಂತ್ (21) ಎಂಬ ಯುವಕ ಆಗಾಗ ಮನೆಗೆ ಬಂದು ಹೋಗುತ್ತಿದ್ದ. ಆತ ಅಜ್ಜ ಅಜ್ಜಿಯ ಬಳಿ ಒಡವೆ ಹಾಗೂ ಹಣವನ್ನೂ ಪಡೆದುಕೊಂಡು ಅಡವಿಟ್ಟಿದ್ದ. ಒಡವೆ ಬಿಡಿಸಿಕೊಡದ ಹಿನ್ನೆಲೆ ಆಗಾಗ ಗಲಾಟೆ ಕೂಡ ನಡೆಯುತ್ತಿತ್ತು. ಹಣಕ್ಕಾಗಿ ಅಜ್ಜ ಅಜ್ಜಿಯನ್ನು ಕೊಲೆ ಮಾಡಿದ್ದಾನೆ ಎಂದು ಆರಂಭದಲ್ಲಿ ಹೇಳಲಾಗಿತ್ತು. ಪೊಲೀಸರು ಕೂಡ ಅದೇ ದೃಷ್ಟಿಕೋನದಲ್ಲಿ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದರು. ಇದೀಗ ಕೊಲೆಗೆ ಅಸಲಿ ಕಾರಣ ತಿಳಿದು ಪೊಲೀಸರು ಸಹ ಕಂಗಾಲಾಗಿದ್ದಾರೆ.

## ನರ್ಸ್ ವೇಷದಲ್ಲಿ ಬಂದ ಮಹಿಳೆಯರಿಂದ ಹಸುಗೂಸು ಕಿಡ್ನ್ಯಾಪ್



**ಕಲಬುರಗಿ:** ನರ್ಸ್ ವೇಷದಲ್ಲಿ ಬಂದ ಇಬ್ಬರು ಮಹಿಳೆಯರು ಹಸುಗೂಸು ಅಪಹರಣ ಮಾಡಿರುವ ಘಟನೆ ಕಲಬುರಗಿ ಜಿಲ್ಲಾಸ್ಪತ್ರೆಯಲ್ಲಿ ನಡೆದಿದೆ.

ಜಿಲ್ಲಾಸ್ಪತ್ರೆ ವಾರ್ಡ್ ನಂಬರ್ 115 ರಲ್ಲಿ ಕಸ್ತೂರಿ ಎಂಬವರಿಗೆ ಹೆರಿಗೆಯಾಗಿತ್ತು. ನಿನ್ನೆ ನಸುಕಿನ ಜಾವ 4 ಗಂಟೆಗೆ ಗಂಡು ಮಗುವಿಗೆ ಜನ್ಮ ನೀಡಿದ್ದರು. ನರ್ಸ್ ವೇಶದಲ್ಲಿ ಬಂದು ಇಬ್ಬರು ಮಹಿಳೆಯರು ಮಗು ಕಿಡ್ನ್ಯಾಪ್ ಮಾಡಿದ್ದಾರೆ.

ರಕ್ತ ತಪಾಸಣೆಗಾಗಿ ಮಗುವನ್ನ ಕರೆದುಕೊಂಡು ಬನ್ನಿ ಅಂತಾ ನಕಲಿ ನರ್ಸ್‌ಗಳು ಹೇಳಿದ್ದರು. ನರ್ಸ್‌ಗಳು ಸಂಪೂರ್ಣವಾಗಿ ಮುಖ ಮುಚ್ಚಿಕೊಂಡು ಬಂದಿದ್ದರು. ಅದರಂತೆ ಮಗುವಿನ ಚಿಕ್ಕಮ್ಮ ಚಂದ್ರಕಲಾ ಮಗುವನ್ನ ರಕ್ತ ತಪಾಸಣೆಗೆ ಕರೆದುಕೊಂಡು ಹೋಗಿದ್ದರು. ಈ ವೇಳೆ ಮಗುವನ್ನ ನಮಗೆ ಕೊಡಿ ಅಂತಾ ಹೇಳಿದರು. ಬಳಿಕ ಮಗುವನ್ನ ಎತ್ತಿಕೊಂಡು ಎಸ್ಕೇಪ್ ಆಗಿದ್ದಾರೆ.

ರಾಮಕೃಷ್ಣ ಮತ್ತು ಪತ್ನಿ ಕಸ್ತೂರಿ ದಂಪತಿ ಮಗು ಕಿಡ್ನ್ಯಾಪ್ ಆಗಿದೆ. ಸೈಯದ್ ಚಿಂಚೋಳಿ ಗ್ರಾಮದಿಂದ ದಂಪತಿ ಕಲಬುರಗಿ ಜಿಲ್ಲಾಸ್ಪತ್ರೆಯಲ್ಲಿ ಬಂದಿದ್ದರು. ಈ ಸಂಬಂಧ ಬ್ರಹ್ಮಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಸಿಬಿಐ ಅಂಗಳಕ್ಕೆ ತನಿಖೆ ಶಿಫ್ಟ್?

**ಬೆಂಗಳೂರು:** ಸಿಎಂ ಸಿದ್ದರಾಮಯ್ಯ ವಿರುದ್ಧದ ಮುಡಾ ನಿವೇಶನ ಹಗರಣ ಪ್ರಕರಣಕ್ಕೆ ಸಂಬಂಧಿಸಿದಂತೆ ಇಂದು ಹೈಕೋರ್ಟ್‌ನಲ್ಲಿ ಮಹತ್ವದ ವಿಚಾರಣೆ ನಡೆಯಲಿದೆ.

ಪ್ರಕರಣವನ್ನು ಸಿಬಿಐ ತನಿಖೆಗೆ ನೀಡಲು ಸಾಮಾಜಿಕ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ಕೋರಿದ್ದರು. ಕಳೆದ ವಿಚಾರಣೆಯಲ್ಲಿ ಲೋಕಾಯುಕ್ತ ತನಿಖೆಗೆ ಹೈಕೋರ್ಟ್ ಸೂಚಿಸಿತ್ತು. ಅಲ್ಲದೇ, ತನಿಖಾ ಪ್ರಗತಿ ವರದಿಯನ್ನು ನೀಡುವಂತೆ ಹೈಕೋರ್ಟ್ ಸೂಚನೆ ನೀಡಿತ್ತು.

ಇಂದು ಹೈಕೋರ್ಟ್‌ಗೆ ತನಿಖಾ ವರದಿಯ ಬಗ್ಗೆ ಮಾಹಿತಿ ನೀಡಲಿದ್ದಾರೆ. ಪ್ರಕರಣದ ನಾಲ್ವರು ಪ್ರಮುಖ ಆರೋಪಿಗಳ ವಿಚಾರಣೆಯನ್ನು ಲೋಕಾಯುಕ್ತ ನಡೆಸಿದೆ. ಸಿದ್ದರಾಮಯ್ಯ, ಪಾರ್ವತಿ, ಮಲ್ಲಿಕಾರ್ಜುನ ಸ್ವಾಮಿ, ದೇವರಾಜು ವಿಚಾರಣೆ ಆಗಿದೆ.

ಪ್ರಕರಣದಲ್ಲಿ ಅಧಿಕಾರಿಗಳಾದ ಕುಮಾರ್ ನಾಯ್ಕ್, ನಟೇಶ್ ಮತ್ತು ಪಾಲಾಯ್ಯ ವಿಚಾರಣೆ ಆಗಿದೆ. ಬಳಿಕ ಸಾಕ್ಷಿಗಳಿಂದ ಹೇಳಿಕೆಯನ್ನು ಕೂಡ ದಾಖಲಾಗಿದೆ.

## ಪರಮಾತ್ಮ ಮಂತ್ರಾಧೀನ

**ವಿಜಯಪುರ:** ಪರಮಾತ್ಮನು ಮಂತ್ರಾಧೀನನಾಗಿದ್ದು ಅದಕ್ಕಾಗಿ ಜಪತಪಗಳನ್ನು ಆಚರಿಸಬೇಕಾಗಿದ್ದು ಓಂ ನಮಃ ಶಿವಾಯ ಎಂಬ ಶಿವಪಂಚಾಕ್ಷರಿ ಮಹಾಮಂತ್ರವನ್ನು ಜಪಿಸುವುದರಿಂದ ಶಿವ ಪರಮಾತ್ಮ ಒಲಿಯಲಿದ್ದು, ಅದಕ್ಕಾಗಿಯೇ ಶ್ರೀಮಠದಲ್ಲಿ ಅಖಂಡ ಶಿವಪಂಚಾಕ್ಷರಿ ಮಹಾಮಂತ್ರ ಯಜ್ಞವನ್ನು ಏಳು ದಿನಗಳ ಕಾಲ ನೆರವೇರಿಸಲಾಗುತ್ತಿದೆ ಎಂದು ಶ್ರೀ ಬಸವಕಲ್ಯಾಣ ಮಠದ ಕಿರಿಯ ಸ್ವಾಮೀಜಿಗಳಾದ ಶ್ರೀ ಸದಾಶಿವ ಮಹಾಸ್ವಾಮೀಜಿ ತಿಳಿಸಿದರು. ಇಲ್ಲಿನ ಬಸವಕಲ್ಯಾಣ ಮಠದಲ್ಲಿ ಕಡೆ ಕಾರ್ತಿಕ ಸೋಮವಾರದ ಪ್ರಯುಕ್ತ ಏರ್ಪಡಿಸಲಾದ ಕಡಲೆಕಾಯಿ ಪರಿಷೆ ಹಾಗೂ ಅಖಂಡ ಶಿವ ಪಂಚಾಕ್ಷರಿ ಮಹಾ ಮಂತ್ರದ ಭಜನಾ ಸಮರೋಪ ಸಮಾರಂಭದಲ್ಲಿ ಸಾನಿಧ್ಯ ವಹಿಸಿ ಮಾತನಾಡುತ್ತಿದ್ದರು.

ಮುಖ್ಯ ಅತಿಥಿಗಳಾಗಿ ಸನ್ಮಾನ ಸ್ವೀಕರಿಸಿ ಮಾತನಾಡಿದ ತಾಲೂಕು ದಂಡಾಧಿಕಾರಿಗಳಾದ ಬಾಲಕೃಷ್ಣರವರು ಮಾತನಾಡಿ ಅಧಿಕಾರ ಎಂಬುದು ಕೇವಲ ಸೇವೆ ಮಾಡಲಿಕ್ಕೆ ಎಂಬುದನ್ನು ಅಧಿಕಾರಿಗಳು ಅರಿಯಬೇಕಾಗಿದ್ದು ತಮ್ಮ ಅಧಿಕಾರ ಅವಧಿಯಲ್ಲಿ ನಾವು ಮಾಡಿದ ಸೇವೆಯೇ ಶಾಶ್ವತವಾಗಿದ್ದು ಅಧಿಕಾರ ಶಾಶ್ವತವಲ್ಲವೆಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿದ ಶಿಡ್ಲಘಟ್ಟ ಕಾಲೇಜಿನ ನಿವೃತ್ತ ಉಪಾಧ್ಯಾಯರಾದ ಅಬ್ದುಲ್ ಖಾಸಿಂ ರವರು ಮಾತನಾಡುತ್ತ ಇಂದಿನ ಶಿಕ್ಷಣವು ಕೇವಲ ಸರ್ಟಿಫಿಕೇಟಿಗಳನ್ನು ನೀಡುವ ಕಾರ್ಖಾನೆಯಾಗಿದ್ದು ಎಲ್ಕೆಜಿ ಯುಕೆಜಿಗಳಿಂದಲೇ ಕೆಜಿಗಟ್ಟಲೆ ಪುಸ್ತಕಗಳನ್ನು ಮಕ್ಕಳಿಗೆ ಹೊರಿಸುತ್ತಿದ್ದು ಶಾಲೆಗಳಲ್ಲಿ ಸಂಸ್ಕಾರ ದೊರೆಯುವುದಕ್ಕಿಂತಲೂ ಕೇವಲ ಅಂಕಗಳ ಆಧಾರದಲ್ಲಿ ಸರ್ಟಿಫಿಕೇಟ್ಗಳು ದೊರೆಯುತ್ತಿರುವುದರ ಬಗ್ಗೆ ಖೇದ ವ್ಯಕ್ತಪಡಿಸಿದ್ದು ಇಂದಿನ ಕಾಲದ ಗುರುಗಳು ಅಂದಿನ ಕಾಲದಂತೆ ಇಲ್ಲದಿದ್ದು ವಿದ್ಯಾರ್ಥಿಗಳು ಸಹ ಕಾಲಕ್ಕೆ ತಕ್ಕಂತೆ ಬದಲಾಗಿರುವುದಾಗಿ ತಿಳಿಸಿದರು. ಬಸವಕಲ್ಯಾಣ ಮಠಾಧ್ಯಕ್ಷರಾದ ಮಹದೇವ ಸ್ವಾಮೀಜಿ, ರಾಮೋಹಳ್ಳಿ ಸಿದ್ದಾರೂಢ ಮಿಷನ್ ಆಶ್ರಮದ ಅಧ್ಯಕ್ಷರಾದ ಶ್ರೀ ಆರೂಢ ಭಾರತಿ ಸ್ವಾಮೀಜಿಗಳು, ನಾಡಕಚೇರಿಯ ಕಂದಾಯ ನಿರೀಕ್ಷಕರಾದ ಸತ್ಯನಾರಾಯಣ್, ಗ್ರಾಮ ಆಡಳಿತ ಅಧಿಕಾರಿಗಳಾದ ಮಡಿವಾಳಪ್ಪ, ಸುನಿಲ್, ಪುರಸಭಾ ಆರೋಗ್ಯ ಅಧಿಕಾರಿ ಲಾವಣ್ಯ, ಸಿಬ್ಬಂದಿಗಳಾದ ಲಿಂಗಣ್ಣ, ಮಮತಾ, ಜನಾರ್ಧನ್, ಮಠದ ಕಾರ್ಯದರ್ಶಿಗಳಾದ ಜಯ್ ಕುಮಾರ್, ಅಂಕತಟ್ಟಿ ನಾರಾಯಣಸ್ವಾಮಿ, ಬಸವರಾಜು ಉಪಸ್ಥಿತರಿದ್ದರು.



## ಧಾರ್ಮಿಕ ವಿಚಾರಧಾರೆಗಳು ಕಣ್ಮರೆಯಾಗುತ್ತಿವೆ

**ವಿಜಯಪುರ:** ಸಮಾಜದಲ್ಲಿ ಹೆಚ್ಚು ಬದಲಾವಣೆಗಳಾಗುತ್ತಿದ್ದಂತೆಲ್ಲಾ ಧಾರ್ಮಿಕವಾದ ವಿಚಾರಧಾರೆಗಳು ಕಣ್ಮರೆಯಾಗುತ್ತಿವೆ, ಪಾಶ್ಚಿಮಾತ್ಯ ಸಂಸ್ಕೃತಿಗೆ ಹೆಚ್ಚು ಮಾರುಹೋಗುತ್ತಿರುವ ಜನತೆ ಧಾರ್ಮಿಕವಾದ ವಿಚಾರಗಳ ಬಗ್ಗೆ ತಿಳಿಸಿಕೊಡಬೇಕಾಗಿದೆ ಎಂದು ರಾಷ್ಟ್ರೀಯ ಬಸವದಳದ ವಿ ಶಿವಣ್ಣ ಹೇಳಿದರು. ಪಟ್ಟಣದ ಅ.ಶಿ.ವೈ. ನಗರ್ತ ರುದ್ರಭೂಮಿಯ ಮುಂಭಾಗದಲ್ಲಿರುವ ಪ್ರಶಾಂತ ಬಸವಣ್ಣ ದೇವಾಲಯದಲ್ಲಿ ಕಾರ್ತೀಕ ಮಾಸ ಪ್ರಯುಕ್ತ 11ನೇ ವಾರ್ಷದ ವಾರ್ಷಿಕೋತ್ಸವ ಹಾಗೂ ಕಡಲೇ ಕಾಯಿ ಪರಿಷೇಯ ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ದೇವರ ಕಾರ್ಯ ಮಾಡುವುದರಿಂದ ಪ್ರತಿಯೊಬ್ಬರಲ್ಲೂ ಶಾಂತಿ ನೆಲೆಸುವುದರ ಜೊತೆಗೆ ದ್ವೇಶ ಭಾವನೆ ಕಳೆದು ಹೋಗಿ ಪ್ರೀತಿ ವಿಶ್ವಾಸ ಮೂಡಲು ಸಾಧ್ಯವಾಗುತ್ತದೆ ಎಂದರು.

ರೋಟರಿ ಸಂಸ್ಥೆ ಮಾಜಿ ಅಧ್ಯಕ್ಷರಾದ ವಿಸಿ ಸಿದ್ದರಾಜು ಮಾತನಾಡಿ, ಮನುಷ್ಯನ ಆಧುನಿಕ ಜೀವನವು ಅತಿಯಾದ ಆಸೆ, ಆಕಾಂಕ್ಷೆಗಳನ್ನು ಸೃಷ್ಟಿಸುತ್ತಿದೆ. ದುರಾಸೆಯು ಸಮಾಜದ ನೆಮ್ಮದಿಗೆ ಭಂಗ ತಂದು ಅನರ್ಥಗಳಿಗೆ ಕಾರಣವಾಗುತ್ತಿರುವುದರಿಂದ ಅಜ್ಞಾನ, ಅಂಧಕಾರ, ಪರಸ್ಪರ ಅಸೂಯೆ, ದ್ವೇಷ, ಕ್ರೌರ್ಯ, ಸ್ವಾರ್ಥ ಪ್ರವೃತ್ತಿಯ ಗುಣಗಳನ್ನು ದೂರಮಾಡಿಕೊಳ್ಳಲು ಧಾರ್ಮಿಕ ಕಾರ್ಯಗಳು ಎಂದರು. ನಿವೃತ್ತ ಪೌರಾಯುಕ್ತರಾದ ಪೌರಾಯುಕ್ತರಾದ ವಿ ಶಿವಕುಮಾರ್, ಮಹಾಂತಿನ ಮಠದ ಅಧ್ಯಕ್ಷರಾದ ಪುನೀತ್, ಕಾರ್ಯದರ್ಶಿ ವಿ ವಿಶ್ವನಾಥ್, ಗುಡಿಬಂಡೆ ಬೆಸ್ಕಾಂನ ಅಸಿಸ್ಟೆಂಟ್ ಎಕ್ಸಿಕ್ಯೂಟಿವ್ ಇಂಜಿನಿಯರ್ ಕೆ ವಿಶ್ವಾಸ್, ಮಹಾತಿನ ಮಠದ ಸಿ. ಸುರೇಶ್, ನಾಗರಾಜು, ಅಕ್ಕನ ಬಳಗದ ಮಾತೆಯರಾದ ಅಂಬಾಭವಾನಿ, ಮಹದೇವಮ್ಮಬಸವರಾಜಪ್ಪ, ಅನ್ನಪೂರ್ಣ, ಚಂದ್ರಪ್ರಭ, ಪಿ.ಜಯಶಂಕರ್, ಪಿ ಬಸವರಾಜು, ಕೆ ಮುರಳಿಧರ್,ರಮೇಶ್, ಮತ್ತಿತರರು ಉಪಸ್ಥಿತರಿದ್ದರು.



## ಸಂಗಮ ಬಸವೇಶ್ವರ ದೇವಾಲಯದಲ್ಲಿ ಗಂಧದ ಅಲಂಕಾರ

**ವಿಜಯಪುರ:** ಹೋಬಳಿಯಲ್ಲಿ ಕೊನೆಯ ಕಾರ್ತೀಕ ಸೋಮವಾರದಂದು ಎಲ್ಲಾ ದೇವಾಲಯಗಳಲ್ಲಿ ವಿಶೇಷ ಅಭಿಷೇಕ, ಹೂವಿನ ಅಲಂಕಾರ, ರುದ್ರಾಭಿಷೇಕ, ಮಹಾಮಂಗಳಾರತಿ, ಹಾಗೂ ಪ್ರಸಾದ ರೂಪದಲ್ಲಿ ಕಡಲೆಕಾಯಿಯನ್ನು ವಿತರಿಸಲಾಯಿತು. ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದರು.



ಎಲ್ಲೆಡೆ ವಿಶೇಷ ಪೂಜೆ; ಪಟ್ಟಣದ ಇತಿಹಾಸ ಪ್ರಸಿದ್ದ ಗಂಗಾತಾಯಿ, ಯಲ್ಲಮ್ಮ ದೇವಾಲಯ, ಕೊಮ್ಮಸಂದ್ರ ಗ್ರಾಮದ ಚಂದ್ರಮೌಳೇಶ್ವರ ದೇವಾಲಯ, ದುರ್ಗತಾಯಿ, ಸತ್ಯಮ್ಮ ದೇವಾಲಯ, ಸಪ್ಪಲಮ್ಮ ದೇವಾಲಯ, ಶ್ರೀ ಮುನೇಶ್ವರಸ್ವಾಮಿ, ಬಸವೇಶ್ವ ದೇವಾಲಯ, ಶ್ರೀ ಶನೇಶ್ವರಸ್ವಾಮಿ ದೇವಾಲಯಗಳಲ್ಲಿ ಹೋಮಾ ಹಾಗೂ ವಿಶೇಷ ಪೂಜಾ ಕಾರ್ಯಗಳು, ವಿಶೇಷ ಹೂವಿನ ಅಲಂಕಾರ, ವಿದ್ಯುತ್ ದೀಪಾಲಂಕಾರ, ದೀಪೋತ್ಸವ, ಭಜನೆ ಕಾರ್ಯಕ್ರಮಗಳು ನಡೆದವು.

ಬಸವ ಕಲ್ಯಾಣ ಮಠದ ಬಳಿವಿರುವ ಸಂಗಮ ಬಸವೇಶ್ವರ ದೇವಾಲಯದಲ್ಲಿ ಗಂಧದ ಅಲಂಕಾರ ಮಾಡಲಾಗಿತ್ತು. ಇತಿಹಾಸ ಪ್ರಸಿದ್ದ ಹರಿಹರ ಸಂಗಮ ಕ್ಷೇತ್ರ, ಶ್ರೀನಗರೇಶ್ವರ ದೇವಾಲಯದಲ್ಲಿ ಶ್ರೀ ಧರ್ಮಸ್ಥಳ ಮಂಜುನಾಥಸ್ವಾಮಿ ಅಲಂಕಾರ, ಸಂತೆ ಮೈದಾನದಲ್ಲಿನ ಚನ್ನಬಸವಣ್ಣ ದೇವಾಲಯ,ಬಯಲು ಬಸವೇಶ್ವರ ದೇವಸ್ಥಾನದಲ್ಲಿ, ಹೊಲೇರಹಳ್ಳಿಯ ಶ್ರೀ ಮುನೇಶ್ವರಸ್ವಾಮಿ, ದೊಡ್ಡಮುದ್ದೇನಹಳ್ಳಿಯ ಶ್ರೀ ಆಂಜನೇಯಸ್ವಾಮಿ, ಗಡ್ಡದನಾಯಕನಹಳ್ಳಿಯ ಶ್ರೀ ದುರ್ಗಾಮಹೇಶ್ವರಿ, ಗಾಂಧಿಚೌಕದಲ್ಲಿರುವ ರುದ್ರದೇವರ ದೇವಾಲಯದಲ್ಲಿ ರುದ್ರಾಭಿಷೇಕ, ಹೋಮಾದಿಕಾರ್ಯಗಳು ನಡೆದವು. ಭದ್ರಕಾಳಿ ಸಮೇತ ಶ್ರೀ ರುದ್ರದೇವರಿಗೆ ವಿಶೇಷ ಹೂವಿನ ಅಲಂಕಾರ, ಮಹಾಮಂಗಳಾರತಿ, ತೀರ್ಥಪ್ರಸಾದ ವಿನಿಯೋಗ ನಡೆಯಿತು. ಶ್ರೀ ಸೋಮೇಶ್ವರಸ್ವಾಮಿ ದೇವಾಲಯದಲ್ಲಿ ವಿಶೇಷ ಹೂವಿನ ಅಲಂಕಾರ ಮಾಡಲಾಗಿತ್ತು. ಮೇಲೂರು ಮುಖ್ಯರಸ್ತೆಯಲ್ಲಿರುವ ಸರೋವರ ಗಣಪತಿ ದೇವಾಲಯದಲ್ಲಿ ಗೋಧೂಳಿ ಲಗ್ನದಲ್ಲಿ ಶಿವಸ್ತೋತ್ರ, ಶಿವಸಹಸ್ರನಾಮ, ಭಜನೆ, ಶಿವಾನಂದಲಹರಿ, ಭಕ್ತಸುಧೆ, ಶಿವಸ್ತುತಿ ಪಾರಾಯಣ ಕಾರ್ಯಕ್ರಮಗಳು ಜರುಗಿದವು. ಶ್ರೀ ನಗರೇಶ್ವರ ಸ್ವಾಮಿ ರವರಿಗೆ ವಿಶೇಷ ಧರ್ಮಸ್ಥಳ ಶ್ರೀ ಮಂಜುನಾಥೇಶ್ವರ ನ ಅಲಂಕಾರ ದೊಂದಿಗೆ ಸ್ವತಃ ದೀಪ ಬೆಳಗುವ ಅವಕಾಶ ವನ್ನು ಕಲ್ಪಿಸಲಾಗಿತ್ತು. ಶ್ರೀ ಓಂಕಾರೇಶ್ವರಸ್ವಾಮಿ ದೇವಾಲಯದಲ್ಲಿ;-ಪುರಾಣ ಪ್ರಸಿದ್ದ ಗುರಪ್ಪನ ಮಠದ ಶ್ರೀ ಓಂಕಾರೇಶ್ವರಸ್ವಾಮಿ ದೇವಾಲಯದಲ್ಲಿಯೂ ಸಹ ಕಾರ್ತಿಕ ಮಾಸದ ಕಡೆಯ ಸೋಮವಾರದ ಪ್ರಯುಕ್ತ ವಿಶೇಷ ಪೂಜಾ ಕಾರ್ಯಕ್ರಮಗಳೊಂದಿಗೆ ಹಾಲಿನ ಅಭಿಷೇಕವು ನಡೆಯಿತು. ಶ್ರೀ ಸ್ವಾಮಿರವರನ್ನು ವಿಶೇಷವಾಗಿ ಅಲಂಕರಿಸಲಾಗಿತ್ತು. 101 ಶಿವಲಿಂಗಗಳನ್ನು ಹೊಂದಿರುವ ಖ್ಯಾತಿಯ ದೇವಾಲಯಕ್ಕೆ ಬೆಳಗಿನಿಂದಲೇ ತಂಡೋಪ ತಂಡಗಳಾಗಿ ಭಕ್ತಾದಿಗಳು ಆಗಮಿಸಿ ದರ್ಶನ ಪಡೆಯುತ್ತಿದ್ದರು.

## ಆಟೋ ಚಾಲಕರಿಂದ ಕನ್ನಡ ರಾಜ್ಯೋತ್ಸವ

**ಮಂಡ್ಯ:** ನಗರದ ಬನ್ನೂರು ರಸ್ತೆಯ ಶನೇಶ್ವರ ದೇವಾಲಯದ ಅವರಣದಲ್ಲಿ ಸಂಜೀವಿನಿ ಆಟೋ ಚಾಲಕರ ವತಿಯಿಂದ ಕನ್ನಡ ರಾಜ್ಯೋತ್ಸವ ಆಚರಣೆ ಮಾಡಿದರು.

ಜೆಡಿಎಸ್ ಮುಖಂಡ ಬಿ ಆರ್ ರಾಮಚಂದ್ರ ಮಾತನಾಡಿ ಕನ್ನಡ ರಾಜ್ಯೋತ್ಸವವನ್ನು ಎಲ್ಲೆಡೆ ಆಚರಿಸುತ್ತಿದ್ದು ಅದರಲ್ಲೂ ಆಟೋ ಚಾಲಕರು ಕನ್ನಡ ಪ್ರೇಮವನ್ನು ಬೆಳೆಸಿಕೊಂಡು ಬಂದಿದ್ದಾರೆ ಮಂಡ್ಯ ಜಿಲ್ಲೆ ಕನ್ನಡ ಮಾತನಾಡುವ ಶ್ರೀಮಂತ ಜಿಲ್ಲೆಯಾಗಿದೆ ಕನ್ನಡ ಬರೀ ಭಾಷೆಯಲ್ಲ ನಮ್ಮ ಉಸಿರಾಗಿಸಿಕೊಳ್ಳೋಣ ಎಂದರು. ಇದೇ ಸಂದರ್ಭದಲ್ಲಿ ಧ್ವಜಾರೋಹಣ ಮಾಡಿ ಕನ್ನಡಾಂಬೆಯ ಭಾವಚಿತ್ರಕ್ಕೆ ಗಣ್ಯರು ಪುಷ್ಪಾರ್ಚನೆ ಮಾಡಿದರು.

ಕಾರ್ಯಕ್ರಮದಲ್ಲಿ ನಗರ ಸಭೆ ಸದಸ್ಯ ಕುಮಾರ್ ಮುಖಂಡರಾದ ಮಹೇಶ್ ನಾಗರಾಜು, ನವೀನ್, ಕೊಮ್ಮೆರಹಳ್ಳಿ ಕೃಷ್ಣ, ರವಿ, ಮೋಹನ್ ಕುಮಾರ್ ಭಾಗವಹಿಸಿದ್ದರು.




### ಡಾ. ಎಂ. ಆರ್. ಜಯರಾಮ್ ಅಭಿಪ್ರಾಯ

## ಧರ್ಮ ಆಚರಿಸುವ ವ್ಯಕ್ತಿಗಳು ಅಗತ್ಯ

**ಕೈವಾರ(ಚಿಕ್ಕಬಳ್ಳಾಪುರ):** ಬೇರೆಯವರು ಏನೂ ಮಾಡುತ್ತಿಲ್ಲ ಎಂದು ಸುಮ್ಮನೆ ಗೊಣಗುವ ಬದಲಿಗೆ ನಮ್ಮಕೈಲಾದ ಕಾರ್ಯವನ್ನು ಮಾಡುತ್ತಿರಬೇಕು. ಭಾಷಣಗಳಲ್ಲಿ ವಿಚಾರವನ್ನು ತಿಳಿಸುವವರು ಇಂದು ಸಾಕಷ್ಟಿದ್ದಾರೆ, ಧರ್ಮಾಚರಣೆ ಮಾಡುವ ಮಾದರಿ ವ್ಯಕ್ತಿಗಳ ಅಗತ್ಯವಿದೆ ಎಂದು ಶ್ರೀ ಕ್ಷೇತ್ರ ಕೈವಾರದ ಧರ್ಮದರ್ಶಿ ಡಾ. ಎಂ.ಆರ್. ಜಯರಾಮ್ ಅವರು ತಿಳಿಸಿದರು.

ಅಖಿಲ ಭಾರತೀಯ ಸಾಹಿತ್ಯ ಪರಿಷದ್ ಕರ್ನಾಟಕ ವತಿಯಿಂದ ಶ್ರೀಕ್ಷೇತ್ರ ಕೈವಾರದ ಶ್ರೀ ಯೋಗಿನಾರೇಯಣ ಮಠದಲ್ಲಿ ಭಾನುವಾರ ಆಯೋಜಿಸಿದ್ದ 'ಆದಿಕವಿ ಹಾಗೂ ವಾಗ್ದೇವಿ ಪುರಸ್ಕಾರ ಪ್ರದಾನ ಕಾರ್ಯಕ್ರಮದಲ್ಲಿ ಮಾತನಾಡಿದರು.

ತಾಯಿಭಾಷೆ ಸಂಸ್ಕೃತದಿಂದ ಆರಂಭವಾಗಿ ಸಾವಿರಾರು ಭಾ?ಗಳು ಬೆಳೆದವು. ಸಾಮಾನ್ಯ ಜನರಿಗೆ ವಿಚಾರಗಳು ತಿಳಿಯಬೇಕು ಎಂಬ ಕಾರಣಕ್ಕಾಗಿ ಭಾಷೆಗಳು ಆರಂಭವಾದವು. ಉತ್ತಮ ವಿಚಾರಗಳನ್ನು ಹೆಚ್ಚು ಜನರು ಜೀವಿಸಿದಾಗ ಸಮಾಜ ಉತ್ತಮವಾಗುತ್ತದೆ. ಚಿಂತನೆಯನ್ನು ಆಚರಿಸದೇ ಇರುವವರು ಹೆಚ್ಚಾದರೆ ಕಾಲ ಕೆಟ್ಟಿತು ಎನ್ನುತ್ತೇವೆ. ಸಾಮಾನ್ಯ ಜನರಿಗೂ ಅರಿವಾಗುವಂತಹ ಭಾಷೆ, ವಿಚಾರ ನಮ್ಮಲ್ಲಿ ಈಗಾಗಲೆ ಇದೆ. ಹೊಸದಾಗಿ ಯಾವುದನ್ನೂ ಸೃಷ್ಟಿಸಬೇಕಾಗಿಲ್ಲ.

ಬೇರೆಯವರು ಕೆಲಸ ಮಾಡುತ್ತಿಲ್ಲ ಎಂದು ಸುಮ್ಮನೆ ಕೂರುವಹಾಗಿಲ್ಲ. ನಮ್ಮ ಕೈಲಾದ ಕಾರ್ಯ ಮಾಡಬೇಕು. ಇಂದು ಭಾಷಣದಲ್ಲಿ ವಿಚಾರ ಮಾತಾಡುವವರು ಬಹಳ ಜನರಿದ್ದಾರೆ, ಧರ್ಮಾಚರಣೆ ಮಾಡುವ ಮಾದರಿ ವ್ಯಕ್ತಿಗಳ ಅಗತ್ಯವಿದೆ. ಈ ನಿಟ್ಟಿನಲ್ಲಿ, ಹೆಚ್ಚಿನ ಜನರಿಗೆ ಉತ್ತಮ ವಿಚಾರಗಳು ಜನರಿಗೆ ತಲುಪಲಿ ಎಂಬ ಕಾರಣಕ್ಕೆ ಕಳೆದ 20-25 ವರ್ಷದಿಂದ ಐದು ಸಾವಿರ ಭಜನಾ ತಂಡಗಳನ್ನು ನಡೆಸುತ್ತಿರುವುದು ಸಾರ್ಥಕತೆ ಮೂಡಿಸಿದೆ ಎಂದರು.

ಆಕಾಶವಾಣಿ ನಿವೃತ್ತ ಅಧಿಕಾರಿ ಹಾಗೂ ಏಕವ್ಯಕ್ತಿ ತಾಳಮದ್ದಳೆ ಪ್ರಕಾರದ ರೂವಾರಿ ದಿವಾಕರ ಹೆಗಡೆ ಕೆರೆಹೊಂಡ ಅವರು ಮಾತನಾಡಿ, ಉತ್ಪನ್ನಗಳು ಮಾತ್ರ ಇದ್ದರೆ ಅದು ಮಾರುಕಟ್ಟೆ ಆಗುತ್ತದೆ. ಉತ್ಪನ್ನಗಳನ್ನು ಮೌಲ್ಯವರ್ಧನೆ ಮಾಡಬೇಕೆಂದರೆ ಶ್ರದ್ಧೆ ಮುಖ್ಯ. ಶ್ರದ್ಧೆ ಬಂದ ಕೂಡಲೆ ಹೂವು, ಹಣ್ಣು, ಅನ್ನ ಎಲ್ಲವೂ ಪ್ರಸಾದ ಆಗುತ್ತದೆ. ಹಾಗೆಯೇ ಸಾಹಿತ್ಯಕ್ಕೂ ಅಧ್ಯಾತ್ಮದ, ಶ್ರದ್ಧೆಯ ದೃಷ್ಟಿ ಅತ್ಯಗತ್ಯ. ಸಮಾಜದಲ್ಲಿ ಏನನ್ನು ಕಳೆದುಕೊಂಡರೂ ಬದುಕಬಹುದು. ಆದರೆ ಶ್ರದ್ಧೆಯನ್ನು ಕಳೆದುಕೊಂಡರೆ ಉಳಿಯಲಾಗದು. ಈಗಲೂ ನಮ್ಮ ಶ್ರದ್ಧಾಭಂಗ ಉಂಟುಮಾಡುವ ಪ್ರಯತ್ನಗಳು ನಡೆಯುತ್ತಿವೆ. ಜೀವನದಲ್ಲಿ ಸೌಂದರ್ಯ ಪ್ರಜ್ಞೆ ಮತ್ತು ಜ್ಞಾನದಾಹ ಇಂದಿನ ಅವಶ್ಯಕತೆ. ಜ್ಞಾನ ಎನ್ನುವುದು ಧಾನ್ಯದ ರೀತಿ. ಅದು ಶಾಶ್ವತವಾಗಿ ಉಳಿಯಬೇಕೆಂದರೆ ಮತ್ತೆಮತ್ತೆ ಬಿತ್ತಿ ಬೆಳೆಯಬೇಕು.



ಶ್ರದ್ಧಾವಂತರೇ ಕೋಟ್ಯಂತರ ಇರುವ ದೇಶದಲ್ಲಿ ಕೆಲವೇ ನೂರು ನಾಸ್ತಿಕರು ನಮ್ಮ ಬುದ್ಧಿಯನ್ನು ಆಳಲು ಬಿಟ್ಟುಕೊಟ್ಟಿದ್ದೇವೆ ಎನ್ನುವುದು ದುರಂತ. ಇದನ್ನು ನಾವೆಲ್ಲರೂ ಶ್ರದ್ಧೆಯಿಂದ ಎದುರಿಸಬೇಕು. ಶ್ರದ್ಧಾವಂತರು ಎರಡನೇ ದರ್ಜೆ ನಾಗರಿಕರಲ್ಲ. ಭಜನೆ, ಮಂತ್ರಗಳು, ಅಜ್ಜಿಯ ಕತೆಗಳು, ಜಾನಪದ ಗೀತೆಗಳು ಇಂದಿಗೂ ಪ್ರಸ್ತುತ ಎಂದರು.

ಆದಿಕವಿ ಪುರಸ್ಕಾರ ಸ್ವೀಕರಿಸಿ ಮಾತನಾಡಿದ ವೇ. ಮೂ. ವಿಷ್ಣು ಭಟ್ ಡೋಂಗ್ರೆ ಅವರು, ಸಾಹಿತ್ಯವು ಸಮಾಜದ ಪ್ರತಿಬಿಂಬ. ರಾಮಾಯಣವನ್ನು ಓದಿದರೆ ಆಗಿನ ಕಾಲದ ಸಾಮಾಜಿಕ, ಸಾಂಸ್ಕೃತಿಕ, ಧಾರ್ಮಿಕ ಸನ್ನಿವೇಶಗಳನ್ನು ತಿಳಿಯಬಹುದು. ಸನಾತನ ಧರ್ಮವು ಅಳಿವಿನ ಅಂಚಿನಲ್ಲಿದ್ದಾಗ ಗೋಸ್ವಾಮಿ ತುಳಸಿದಾಸರು ರಾಮಚರಿತಮಾನಸ ರಚಿಸಿ ಜನರಲ್ಲಿ ಧಾರ್ಮಿಕ ಮಾನಸಿಕತೆ ಮೂಡಿಸಿದರು. ತತ್ಕಾಲೀನ ಸಾಮಾಜಿಕ ಸನ್ನಿವೇಶ ಇಲ್ಲದಿದ್ದರೆ ಅದು ಉಪಯೋಗಕ್ಕೆ ಬಾರದು. ನನ್ನ ಸಾಹಿತ್ಯ ರಚನೆಯಲ್ಲೂ ಇದನ್ನೇ ಪಾಲಿಸುತ್ತ ಬಂದಿದ್ದೇನೆ ಎಂದು ತಿಳಿಸಿದರು.

ವಾಗ್ದೇವಿ ಪುರಸ್ಕಾರ ಸ್ವೀಕರಿಸಿದ ಡಾ. ಜಿ.ಬಿ. ಹರೀಶ ಮಾತನಾಡಿ, ಕಾರ್ಯ ಮಾಡುವುದು ನಮ್ಮ ಕರ್ಮ ಎಂದು ಜೀವಿಸಿದವರು ಬಹಳಷ್ಟು ಜನರಿದ್ದಾರೆ. ಆನಂದ ಕುಮಾರಸ್ವಾಮಿ ಅವರು ಹೇಳಿದ ವಿಚಾರವನ್ನೇ ನಾವೆಲ್ಲರೂ ಹೇಳುತ್ತಿದ್ದೇವೆ. ಜ್ಞಾನ ಕ್ಷೇತ್ರದಲ್ಲಿ ಕೆಲಸ ಮಾಡುವವರು, ತಮಗಿಂತ ದೊಡ್ಡವರಿದ್ದಾರೆ ಎಂದು ತಿಳಿದಿರುತ್ತಾರೆ. ಆದರೆ ಮಹಿಷಾಸುರನ ಹಬ್ಬ ಆಚರಿಸುವ ಚಿಂತಕರು ಈ ಮಾತನ್ನು ಹೇಳುವುದಿಲ್ಲ. ಜ್ಞಾನವಂತಿಕೆ ಜತೆಗೆ ಹೃದಯವಂತಿಕೆಯೂ ಬೇಕು. ಆಕಾಶಕ್ಕೆ ಏಣಿ ಹಾಕುವ ಮನುಷ್ಯನು ಇನ್ನೊಬ್ಬ ಮನುಷ್ಯನ ಹೃದಯವನ್ನು ಅರಿಯುವವರಲ್ಲಿ ಹಿಂದೆ ಬಿದ್ದಿದ್ದೇವೆ. ಅಧ್ಯಾತ್ಮಿಕ ಶಕ್ತಿ ಇಲ್ಲದೆ ಬರೆದ ಸಾಹಿತ್ಯವು ಅವರ ಶವದೊಂದಿಗೇ ಸ್ಮಶಾನಕ್ಕೆ ಹೋಗುತ್ತದೆ. ಅಧ್ಯಾತ್ಮ ಇರುವ ಸಾಹಿತ್ಯವು ಶಾಶ್ವತವಾಗಿ ಉಳಿಯುತ್ತದೆ ಎಂದರು.

ಅಖಿಲ ಭಾರತೀಯ ಸಾಹಿತ್ಯ ಪರಿಷದ್ ಹಾಗೂ ಕಾರ್ಯಕ್ರಮದ ಕುರಿತು ರಾಜ್ಯ ಪ್ರಧಾನ ಕಾರ್ಯದರ್ಶಿ ರಘುನಂದನ ಭಟ್ ಮಾತನಾಡಿದರು.

ವಾಗ್ದೇವಿ ಶಿಕ್ಷಣ ಸಂಸ್ಥೆಗಳ ಪದಾಧಿಕಾರಿ ರಂಜನ್, ಅಖಿಲ ಭಾರತೀಯ ಸಾಹಿತ್ಯ ಪರಿಷದ್ ಕರ್ನಾಟಕ ಖಜಾಂಚಿ ರಾಮಕೃಷ್ಣ ಶ್ರೌತಿ, ಸಹ ಖಜಾಂಚಿ ವಿಜಯ್ ಭರ್ತೂರು, ತುಮಕೂರು ವಿಭಾಗ ಸಂಯೋಜಕ್ ಅಶ್ವತ್ಥನಾರಾಯಣ ಉಪಸ್ಥಿತರಿದ್ದರು.

### ಪುರಸ್ಕಾರ ಪ್ರದಾನ

**ಸಾಮಾಜಿಕ ಕಾಳಜಿ ಮತ್ತು ರಾಷ್ಟ್ರೀಯ ದೃಷ್ಟಿಕೋನ ಹೊಂದಿರುವ ಹಿರಿಯ ಸಾಹಿತಿಗೆ ನೀಡಲಾಗುವ ಪುರಸ್ಕಾರವನ್ನು ವೇ.ಮೂ. ವಿಷ್ಣು ಭಟ್ ಡೋಂಗ್ರೆ ಅವರಿಗೆ ಪ್ರದಾನ ಮಾಡಲಾಯಿತು. ಸಾಮಾಜಿಕ ಕಾಳಜಿ ಮತ್ತು ರಾಷ್ಟ್ರೀಯ ದೃಷ್ಟಿಕೋನ ಹೊಂದಿರುವ ಯುವ ಸಾಹಿತಿಗೆ ನೀಡುವ ಪುರಸ್ಕಾರವನ್ನು ಖ್ಯಾತ ಚಿಂತಕ, ಲೇಖಕ ಡಾ. ಜಿ.ಬಿ. ಹರೀಶ ಅವರಿಗೆ ಪ್ರದಾನ ಮಾಡಲಾಯಿತು.**

## ಕಾಂಗ್ರೆಸ್‌ನಿಂದ ವಿಜಯೋತ್ಸವ

**ಹುಳಿಯಾರು:** ರಾಜ್ಯದ ಮೂರು ಕ್ಷೇತ್ರಗಳಿಗೆ ನಡೆದ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳು ಜಯಗಳಿಸಿದ ಹಿನ್ನೆಲೆಯಲ್ಲಿ ಹುಳಿಯಾರು ಬ್ಲಾಕ್ ಕಾಂಗ್ರೆಸ್ ವತಿಯಿಂದ ವಿಜಯೋತ್ಸವ ಆಚರಿಸಲಾಯಿತು. ಕಾರ್ಯಕರ್ತರು, ಮುಖಂಡರು ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಿಸಿದರು.

ಈ ವೇಳೆ ಮಾಜಿ ಶಾಸಕ ಕೆ.ಎಸ್. ಕಿರಣ್‌ಕುಮಾರ್ ಮಾತನಾಡಿ, ರಾಜ್ಯ ಕಾಂಗ್ರೆಸ್ ಸರ್ಕಾರ ಜಾರಿಗೊಳಿಸಿದ ಗ್ಯಾರಂಟಿ ಯೋಜನೆಗಳು ಫಲದಾಯಕವಾಗಿವೆ ಎಂಬುದಕ್ಕೆ ಈ ಉಪ ಚುನಾವಣೆ ಫಲಿತಾಂಶ ಸಾಕ್ಷಿ. ಬಿಜೆಪಿಯವರು ಏನೇ ಕುತಂತ್ರ ಮಾಡಿದರೂ ಮತದಾರ ಅದಕ್ಕೆ ಬೆಲೆ ಕೊಡದೆ ತಕ್ಕ ಪಾಠ ಕಲಿಸಿದ್ದಾನೆ ಎಂದರು.

ಕಾಂಗ್ರೆಸ್ ಪಕ್ಷದ ನಾಯಕರು, ಮುಖಂಡರು ಹಾಗೂ ಕಾರ್ಯಕರ್ತರು ಒಗ್ಗಟ್ಟಿನಿಂದ ಚುನಾವಣೆ ಎದುರಿಸಿದ ಪರಿಣಾಮ ನಮ್ಮ ಮೂವರು ಅಭ್ಯರ್ಥಿಗಳು ಭಾರಿ ಮತಗಳ ಅಂತರದಿಂದ ಗೆದ್ದಿದ್ದಾರೆ. ಈ ಗೆಲುವು ರಾಜ್ಯದ ಪ್ರತಿಯೊಬ್ಬ ಜನಸಾಮಾನ್ಯರ ಗೆಲುವಾಗಿದೆ. ವಿರೋಧ ಪಕ್ಷಗಳು ಅಭಿವೃದ್ಧಿಗೆ ಸಹಕರಿಸುವ ಬದಲು ಸುಳ್ಳು ಆರೋಪಗಳನ್ನು ಮಾಡುತ್ತ ಜನಪ್ರಚಾರ ಪಡೆಯಲು ಪ್ರಯತಿಸುತ್ತಿದ್ದಾರೆ. ಆದರೂ ಮತದಾರರು ಕಾಂಗ್ರೆಸ್ ಪಕ್ಷದ ಮೇಲೆ ನಂಬಿಕೆ ಇಟ್ಟಿರುವುದು ಸರ್ಕಾರಕ್ಕೆ ಮತ್ತಷ್ಟು ಆನೆ ಬಲದಂತಾಗಿದೆ ಎಂದರು.

ಹುಳಿಯಾರು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಚಿಕ್ಕಣ್ಣ ಮಾತನಾಡಿ ಸುಳ್ಳು ಆರೋಪಗಳ ಮೂಲಕ ರಾಜ್ಯದ ಜನರ ಹಾದಿಯನ್ನು ತಪ್ಪಿಸಲು ಪ್ರಯತ್ನಿಸುವ ಬಿಜೆಪಿ ನೇತೃತ್ವದ ಎನ್‌ಡಿಎ ಒಕ್ಕೂಟದ ಮೈತ್ರಿಗೆ ಮತದಾರ ಸರಿಯಾದ ಉತ್ತರ ನೀಡಿದ್ದಾರೆ ರೈತರು, ಬಡವರ ಅಭಿವೃದ್ಧಿಯೇ ದೇಶದ ಅಭಿವೃದ್ಧಿ ಎಂಬ ತತ್ವ ಸಿದ್ಧಾಂತದ ಮೇಲೆ ಸದಾ ಅಭಿವೃದ್ಧಿ ಮಂತ್ರವನ್ನು ಜಪಿಸುವ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳಿಗೆ ಮತದಾರರು ಅಮೂಲ್ಯ ಮತವನ್ನು ನೀಡಿ ಗೆಲುವು ತಂದುಕೊಟ್ಟಿದ್ದಾರೆ ಎಂದರು. ಪಪಂ ಸದಸ್ಯ ಜುಬೇರ್, ಸೈಯದ್ ನೂರ್, ಮುಖಂಡರಾದ ಬಡಗಿರಾಮಣ್ಣ, ನಾಗಣ್ಣ, ಪ್ರಸನ್ನಕುಮಾರ್, ದೇವರಾಜು, ರಾಜಕುಮಾರ್ ಸೇರಿದಂತೆ ಅನೇಕರಿದ್ದರು.





**ವಿಜಯಪುರ ಪಟ್ಟಣದ ಶ್ರೀ ಸಂಗಮ ಬಸವೇಶ್ವರ (ಸಂಗಮೇಶ್ವರ) ಸ್ವಾಮಿ ದೇವಾಲಯದಲ್ಲಿ ಕಾರ್ತೀಕ ಮಾಸದ ಕಡೇ ಸೋಮವಾರದ ಅಂಗವಾಗಿ ಸ್ವಾಮಿಯವರಿಗೆ(ಬಸವಣ್ಣನವರಿಗೆ ) ವಿಶೇಷ ಗಂಧದ ಅಲಂಕಾರದೊಂದಿಗೆ ಪೂಜೆಯನ್ನು ಶ್ರೀ ಸಂಗಮೇಶ್ವರ ಧರ್ಮಸಂಸ್ಥೆ ವತಿಯಿಂದ ಏರ್ಪಡಿಸಿದ್ದರು. ಆಗಮಿಸಿದ ಭಕ್ತಾದಿಗಳು ಸ್ವಾಮಿಯವರ ದಿವ್ಯ ದರ್ಶನ ಪಡೆದು ಸ್ವಾಮಿಯವರ ತೀರ್ಥ ಪ್ರಸಾದ ಸ್ವೀಕರಿಸಿ ಸ್ವಾಮಿ ಕೃಪೆಗೆ ಪಾತ್ರರಾದರು.**

## ವಿಶ್ವ ಶೌಚಾಲಯ ದಿನದ ಸಮಾರೋಪ

**ಹುಳಿಯಾರು:** ಪ್ರಸ್ತುತ ಸಾಲಿನ ವಿಶ್ವ ಶೌಚಾಲಯ ದಿನದ ಘೋಷಣೆ ಶಾಂತಿಗಾಗಿ ಸ್ವಚ್ಛತೆ ಈ ಘೋಷಣೆ ವೈಯಕ್ತಿಕ ಆರೋಗ್ಯಕ್ಕೆ ಹೆಚ್ಚು ಮಾನ್ಯತೆ ನೀಡಬೇಕೆಂಬುದನ್ನು ಸೂಚಿಸುತ್ತದೆ. ಆದುದರಂತೆ ಎಲ್ಲರೂ ಶೌಚಾಲಯ ಬಳಸುವುದು ಆರೋಗ್ಯಕರ ಮತ್ತು ನೆಮ್ಮದಿಯ ಜೀವನಕ್ಕೆ ಸಹಕಾರಿ ಎಂದು ಸೀಕೋ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ ಹಾಗೂ ವಿಜ್ಞಾನಿ ಡಾ.ಬಿ.ಕೆ.ಹರೀಶ್ ಕುಮಾರ್ ಹೇಳಿದರು.

ಹುಳಿಯಾರು ಹೋಬಳಿಯ ಬೋರನಕಣಿವೆ ಪದವಿ ಪೂರ್ವ ಕಾಲೇಜಿನ ಪ್ರೌಢಶಾಲಾ ವಿಭಾಗದಲ್ಲಿ ವಿಶ್ವ ಶೌಚಾಲಯ ದಿನದ ಸಮಾರೋಪ ಭಾಷಣವನ್ನು ಮಾಡುತ್ತಾ ಮೆಸೆಪಟೋಮಿಯಾ ನಾಗರಿಕತೆಯಿಂದ ಇಲ್ಲಿಯವರೆಗೆ ಸಮಾಜದಲ್ಲಿ ಸ್ವಚ್ಛತೆಯ ಬಗ್ಗೆ ನೀಡಿರುವ ಪ್ರಾಮುಖ್ಯತೆಯ ಇತಿಹಾಸದ ಬಗ್ಗೆ ತಿಳಿಸಿದರು. ಮಾಸ್ ಟ್ರಸ್ಟ್ ಸಂಸ್ಥೆಯ ಅಧ್ಯಕ್ಷೆ ಎನ್.ಇಂದಿರಮ್ಮ ವಿಶ್ರಾಂತ ಪ್ರಾಂಶುಪಾಲರಾದ ಯು.ಪಿ. ಉಮಾದೇವಿ ಹಾಗೂ ಮಾಸ್ ಟ್ರಸ್ಟ್ ಕಾರ್ಯದರ್ಶಿ ಮತ್ತು ಸುವರ್ಣ ವಿದ್ಯಾ ಚೇತನದ ಅಧ್ಯಕ್ಷ ರಾಮಕೃಷ್ಣಪ್ಪ ನೀರಿನ ಬಳಕೆ ಕುರಿತು ಮಾತನಾಡಿದರು. ಸಭೆಯ ಅಧ್ಯಕ್ಷತೆಯನ್ನು ಮುಖ್ಯ ಶಿಕ್ಷಕ ಟಿ.ಎನ್.ರಮೇಶ ವಹಿಸಿದ್ದರು. ಸಭೆಯಲ್ಲಿ ಎಸ್‌ಡಿಎಂಸಿ ಅಧ್ಯಕ್ಷ ಶಿವಕುಮಾರ್, ಸದಸ್ಯರಾದ ಮಂಜುಳಾ, ಗೋಪಾಲಯ್ಯ, ಕೋದಂಡರಾಮಯ್ಯ, ಕಾಂತರಾಜು, ರಂಗಸ್ವಾಮಿ, ಶಿಕ್ಷಕರಾದ ಓಂಕಾರ್, ಬಸವರಾಜು, ಅನಿತಾ, ರೇಖಾ, ರಮೇಶ್ ಮತ್ತು ವಿಜಯಮ್ಮ ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.



## ಬೃಹತ್ ಆರೋಗ್ಯ ತಪಾಸಣಾ ಶಿಬಿರ

**ಬೆಂಗಳೂರು:** ಮಹಾಲಕ್ಷ್ಮಿ ಲೇಔಟ್ ವಿಧಾನಸಭಾ ಕ್ಷೇತ್ರದ ನಂದಿನಿ ಲೇಔಟಿನ ಇಂಡಿಯನ್ ನ್ಯಾಷನಲ್ ಹೈ ಸ್ಕೂಲ್ನಲ್ಲಿ ಶಾಸಕ ಕೆ.ಗೋಪಾಲಯ್ಯರವರ ನೇತೃತ್ವದಲ್ಲಿ, ಬೃಹತ್ ಪ್ರಮಾಣದಲ್ಲಿ ಆರೋಗ್ಯ ತಪಾಸಣಾ ಶಿಬಿರವನ್ನು ಹಮ್ಮಿಕೊಳ್ಳಲಾಗಿತ್ತು. ಮಹಾಲಕ್ಷ್ಮೀ ಎಜುಕೇಷನಲ್ ಟ್ರಸ್ಟ್, ಮತ್ತು ಲಯನ್ಸ್ ಇಂಟರ್ನ್ಯಾಷನಲ್, ಮಾತೃ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆ, ಬಸವೇಶ್ವರನಗರ ಅಪೋಲೋ ಆಸ್ಪತ್ರೆ, ವೈಷ್ಣವಿ ಲಯನ್ಸ್ ಕ್ಲಬ್, ಪುಣ್ಯ ಆಸ್ಪತ್ರೆ,ಮೋದಿ ಕಣ್ಣಿನ ಆಸ್ಪತ್ರೆ, ಕರ್ನಾಟಕ ಕ್ಯಾನ್ಸರ್ ಸೊಸೈಟಿ ಇವರುಗಳ ಸಹಯೋಗದೊಂದಿಗೆ ಶಿಬಿರವನ್ನು ನಡೆಸಲಾಯಿತು. ಇಲ್ಲಿ ವಿಶೇಷವಾಗಿ ಬಿ.ಪಿ. ಡಯಾಬಿಟೀಸ್, ಲಿವರ್ ಫಂಕ್ಷನ್, ಥೈರಾಯ್ಡ್, ಮೂಳೆ ದಂತ, ಸ್ತ್ರೀರೋಗ,ಇನ್ನಿತರ ಖಾಯಿಲೆಗಳ ಪರೀಕ್ಷೆ ಮಾಡಿ ಉಚಿತ ಔಷಧಿ ವಿತರಿಸಲಾಯಿತು. ವಿಶೇಷವಾಗಿ ಸ್ತನ ಕ್ಯಾನ್ಸರ್ ಕಾಯಿಲೆಯ ತಪಾಸಣೆ ನಡೆಸಿ ಸಲಹೆ ಮತ್ತು ಔಷಧಿ ನೀಡಲಾಯಿತು. ಕಣ್ಣಿನ ದೋಷ ಇರುವವರಿಗೆ ಆಧುನಿಕ ತಂತ್ರಜ್ಞಾನದಲ್ಲಿ ಉಚಿತ ಕಣ್ಣಿನ ಶಸ್ತ್ರ ಚಿಕಿತ್ಸೆ ವ್ಯವಸ್ಥೆಯನ್ನು ಕಲ್ಪಿಸಲಾಯಿತು. ಸುಮಾರು 1500 ಕುಹೆಚ್ಚು ಜನ ಈ ಶಿಬಿರದ ಪ್ರಯೋಜನವನ್ನು ಪಡೆದರು ಎಲ್ಲರಿಗೂ ಉಪಹಾರದ ವ್ಯವಸ್ಥೆ ಕಲ್ಪಿಸಲಾಗಿತ್ತು.

ಇದೇ ಸಂದರ್ಭದಲ್ಲಿ ಕ್ಷೇತ್ರದ 70 ವರ್ಷ ವಯಸ್ಸಾದ ವೃದ್ಧರಿಗೆ ಆಯುಷ್ ಮಾನ್ ಕಾರ್ಡ್ ಉಚಿತವಾಗಿ ನೊಂದಾವಣೆ ಮಾಡಿಕೊಡಲಾಯಿತು,. ಮಾತೃ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯ ಮುಖ್ಯಸ್ಥರಾದ ಡಾ. ಮಹೇಂದ್ರ ರವರು ಶಾಸಕರ ಪುತ್ರರಾದ ಡಾ. ಜಿ ಮಂಜುನಾಥ್ ಗೌಡ, ಡಾ. ಜಿ.ಸಂಜಯ್ ಗೌಡರವರು, ಬಿಬಿಎಂಪಿ ವೈದ್ಯಕೀಯ ಸಿಬ್ಬಂದಿ ಪಾಲ್ಗೊಂಡಿದ್ದರು. ಮಾಜಿ ಉಪ ಮಹಾಪೌರರಾದ ಶ್ರೀಮತಿ ಹೇಮಲತಾ ಗೋಪಾಲಯ್ಯ, ಶ್ರೀ ಮಹಾಲಕ್ಷ್ಮಿ ಎಜುಕೇಶನಲ್ ಟ್ರಸ್ಟ್ ಅಧ್ಯಕ್ಷರಾದ ಜಯರಾಮ್, ಖಜಾಂಚಿ ವೆಂಕಟೇಶ್ ರವರು, ಕ್ಷೇತ್ರದ ಸ್ಥಳೀಯ ಮುಖಂಡರುಗಳಾದ ಮಾಜಿ ಬಿಬಿಎಂಪಿ ಸದಸ್ಯ ರಾಜೇಂದ್ರ, ಕುಮಾರ್ ,ರಾಘವೇಂದ್ರ ಶೆಟ್ಟಿ,ಪ್ರಸನ್ನ,ವೆಂಕಟೇಶ್ ಮೂರ್ತಿ, ಶಿವಾನಂದ, ಸುರಭಿ ನಾಗರಾಜ್,ಡಾಕ್ಟರ್ ನಾಗೇಂದ್ರ, ಪುಟ್ಟಣ್ಣ, ರಾಘವೇಂದ್ರ ನಾಗರಾಜ್ ,ಮತ್ತು ಕಾರ್ಯಕರ್ತರು ಶಿಬಿರದಲ್ಲಿ ಪಾಲ್ಗೊಳ್ಳುವುದರ ಜೊತೆಗೆ ಸ್ವಯಂ ಸೇವೆ ಸಲ್ಲಿಸಿದರು.



### ಪುಷ್ಪಗಿರಿ ಸಾಂಸ್ಕೃತಿಕ ಉತ್ಸವ

**ಮಹಾಲಕ್ಷ್ಮೀ ಲೇಔಟ್ ವಿಧಾನಸಭಾ ಕ್ಷೇತ್ರದ ರಾಣಿ ಅಬ್ಬಕ್ಕ ಆಟದ ಮೈದಾನದಲ್ಲಿ ಪುಷ್ಪಗಿರಿ ಸಾಂಸ್ಕೃತಿಕ ಉತ್ಸವ -2024 ಎಂಬ ಧಾರ್ಮಿಕ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಪುಷ್ಪಗಿರಿ ಸಂಸ್ಥಾನ ಮಠದ ಪೀಠಾಧಿಪತಿಗಳಾದ ಪರಮಪೂಜ್ಯ ಶ್ರೀ ಶ್ರೀ ಶ್ರೀ ಸೋಮಶೇಖರ್ ಮಹಾಸ್ವಾಮೀಜಿ ಗಳ ದಿವ್ಯ ಸಾನಿಧ್ಯದಲ್ಲಿ ನಡೆದ ಈ ಕಾರ್ಯಕ್ರಮಕ್ಕೆ ಬಿಜೆಪಿ ರಾಜ್ಯಾಧ್ಯಕ್ಷರಾದ ಬಿ ವೈ ವಿಜಯೇಂದ್ರ, ಮಾಜಿ ಸಚಿವರು ಹಾಗೂ ಮಹಾಲಕ್ಷ್ಮೀ ಲೇಔಟ್ ನ ಜನಪ್ರಿಯ ಶಾಸಕರಾದ ಕೆ, ಗೋಪಾಲಯ್ಯ, ಮಾಜಿ ಉಪ ಮಹಾಪೌರರಾದ ಹೇಮಲತಾ ಗೋಪಾಲಯ್ಯ, ಬೇಲೂರು ಶಾಸಕರಾದ ಎಚ್ ಕೆ ಸುರೇಶ್, ವಿಧಾನ ಪರಿಷತ್ ಸದಸ್ಯ ಕೆ ಎಸ್ ನವೀನ್, ಮಾಜಿ ಎಂ ಎಲ್ ಸಿ ಎಂ ಡಿ ಲಕ್ಷ್ಮೀ ನಾರಾಯಣ, ಬೆಂಗಳೂರು ಉತ್ತರ ಜಿಲ್ಲಾ ಬಿಜೆಪಿ ಅಧ್ಯಕ್ಷ ಎಸ್, ಹರೀಶ್, ಮಾಜಿ ಬಿಬಿಎಂಪಿ ಸದಸ್ಯ, ಕೆ ವಿ ರಾಜೇಂದ್ರ ಕುಮಾರ ಹಿರಿಯ ನಿವೃತ್ತ ಪೊಲೀಸ್ ಅಧಿಕಾರಿಗಳಾದ ಜ್ಯೋತಿ ಪ್ರಕಾಶ್ ಮಿರ್ಜಿ, ಸಿದ್ದರಾಮಪ್ಪ, ರಾಜ್ಯ ಕಾರ್ಯ ನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಶಿವಾನಂದ್ ತಗಡೂರ್ , ನಟ ಮೂಗೂರು ಸುರೇಶ, ಸಂದೀಪ್, ಸೇರಿದಂತೆ ಹಲವು ಗಣ್ಯರು, ಮುಖಂಡರು ಮತ್ತು ವೀರಶೈವ ಬಂಧುಗಳು ಭಾಗವಹಿಸಿದ್ದರು.**

## ಶಿಕ್ಷಕರು ಮಕ್ಕಳಿಗೆ ಕನ್ನಡ ಭಾಷಾಭಿಮಾನ ಬೆಳೆಸಿ

**ಹುಳಿಯಾರು:** ಶಿಕ್ಷಕರು ಕನ್ನಡದ ಕಟ್ಟಾಳುಗಳಾಗುವ ಮೂಲಕ, ಮಕ್ಕಳಿಗೆ ಮಾತೃ ಭಾಷೆ ಕನ್ನಡದ ಬಗ್ಗೆ ಅಭಿಮಾನ ಹುಟ್ಟುವಂತೆ ಮಾಡಿದಲ್ಲಿ ಭಾಷಾ ಬೆಳವಣಿಗೆ ಸಾಧ್ಯ ಎಂದು ಚಿಕ್ಕನಾಯಕನಹಳ್ಳಿ ಕ್ಷೇತ್ರ ಶಿಕ್ಷಣಾಧಿಕಾರಿ ಕಾಂತರಾಜು ಅಭಿಪ್ರಾಯಪಟ್ಟರು.

ಸ್ವಾಮಿ ವಿವೇಕಾನಂದ ಶಿಕ್ಷಣ ಮತ್ತು ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಅಡಿಯಲ್ಲಿ ಹುಳಿಯಾರಿನಲ್ಲಿ ನಡೆಯುತ್ತಿರುವ ವಿವೇಕಾನಂದ ಕಿಡ್ಜ್ ಶಾಲೆಯಿಂದ ಕೋಡಿಪಾಳ್ಯದ ಸೇವಾಲಾಲ್ ಸಾಂಸ್ಕೃತಿಕ ಸದನದಲ್ಲಿ ಏರ್ಪಡಿಸಿದ್ದ ಕನ್ನಡ ಕಲಾವೈಭವ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಇಂಗ್ಲೀಷ್ ಕಲಿಕೆಯಿಂದ ಮಾತ್ರ ನೌಕರಿ ಎಂದು ಜನರ ಮನದಲ್ಲಿ ಬೇರೂರಿದ್ದು, ಬಹುತೇಕ ಪೋಷಕರು ಕೂಡ ಮಕ್ಕಳಿಗೆ ಕನ್ನಡ ಪ್ರೀತಿ ಬೆಳೆಸುತ್ತಿಲ್ಲ. ಮಕ್ಕಳಲ್ಲಿ ಕನ್ನಡ ಬಗ್ಗೆ ತಿರಸ್ಕಾರ ಭಾವನೆ ಮೂಡಿಸಲಾಗುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದರಲ್ಲದೆ ನಾನು ಗ್ರಾಮೀಣ ಪ್ರದೇಶದ ವಿದ್ಯಾರ್ಥಿಯಾಗಿ ಕನ್ನಡ ಮಾಧ್ಯಮದಲ್ಲಿ ಕಲಿತು ಶಿಕ್ಷಕನಾಗಿ ಕಾರ್ಯನಿರ್ವಹಿಸಿ ಅನೇಕ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಬರೆದು ಇಂದು ಕ್ಷೇತ್ರ ಶಿಕ್ಷಣಾಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿರುವುದಕ್ಕೆ ಸಂತಸವಿದೆ ಎಂದರು. ಶಿಕ್ಷಣ ಸಂಯೋಜನಾಧಿಕಾರಿಯಾದ ಪ್ರಕಾಶ್ ಟಿ.ಜೆ ಮಾತನಾಡಿ ಕರ್ನಾಟಕದ ಮಣ್ಣಿನಲ್ಲಿ ಹುಟ್ಟಿದವರಲ್ಲಿ ಕನ್ನಡವೇ ಉಸಿರಾಗಬೇಕು. ಕನ್ನಡ ಕಲಿತರೆ, ಅನ್ಯಭಾಷೆಗಳನ್ನು ಸಲೀಸಾಗಿ ಕಲಿಯಬಹುದು. ಕನ್ನಡಕ್ಕೆ ಎರಡು ಸಾವಿರ ವರ್ಷಗಳ ಇತಿಹಾಸವಿದೆ. 8 ಜ್ಞಾನಪೀಠ ಪ್ರಶಸ್ತಿ ಪಡೆದಿರುವುದು ಎಲ್ಲರಿಗೂ ಆದರ್ಶವಾಗಬೇಕು. ಅಂತಹವರ ಕವಿತೆ, ಸಾಹಿತ್ಯಗಳನ್ನು ಓದಿಕೊಂಡರೆ, ಕನ್ನಡ ಪಾಂಡಿತ್ಯ ಪಡೆಯಬಹುದು ಎಂದರು.



ಹುಳಿಯಾರಿನ ಸಮೂಹ ಸಂಪನ್ಮೂಲ ವ್ಯಕ್ತಿಯಾದ ರವಿ ಮಾತನಾಡಿ ಕನ್ನಡವನ್ನು ಒಂದು ಭಾಷೆಯಾಗಿ ನೋಡಬಾರದು. ಕನ್ನಡ ನಮ್ಮ ಭಾಷೆಯಲ್ಲದೆ ಕನ್ನಡಿಗರ ಭಾವನೆ, ಕನ್ನಡಿಗರ ಬದುಕು. ಕನ್ನಡ ಭಾಷೆಯಲ್ಲಿ ಎಲ್ಲ ಭಾವನೆಗಳು ಮೇಳೈಸಿವೆ ಎಂದರಲ್ಲದೆ ವಿವೇಕಾನಂದ ಶಿಕ್ಷಣ ಸಂಸ್ಥೆಯ ಕನ್ನಡದ ಮೇಲಿರುವ ಅಭಿಮಾನವನ್ನು ಶ್ಲಾಘಿಸಿದರು.

ಈ ಕಾರ್ಯಕ್ರಮದ ಮುಖ್ಯ ಅತಿಥಿಗಳಾದ ಡಾ.ರವಿಕುಮಾರ್ ಸಿ ರವರು ಮಾತನಾಡಿ ಕನ್ನಡ ನಾಡು ಅತ್ಯಂತ ಶ್ರೀಮಂತ ಸಂಸ್ಕೃತಿ ಯನ್ನು ಹೊಂದಿದೆ. ಇದು ಹೃದಯ ಭಾಷೆ, ಕನ್ನಡ ಭಾಷೆಯನ್ನು ಪ್ರೀತಿಸುವ ಎಲ್ಲರ ಮೊದಲ ಆದ್ಯತೆ ಕನ್ನಡವಾಗಿರಲಿ ಎಂದು ಸಲಹೆ ನೀಡಿದರು.

ಸಂಸ್ಥೆಯ ಅಧ್ಯಕ್ಷರಾದ ಅಶೋಕ ಮೂರ್ತಿ, ನಿಕಟಪೂರ್ವ ಶಿಕ್ಷಣ ಸಂಯೋಜನಾಧಿಕಾರಿಯಾದ ಹನುಮಂತರಾಯ, ಶಾಲೆಯ ಮುಖ್ಯ ಶಿಕ್ಷಕರಾದ ಪ್ರದೀಪ್ ಎಸ್.ಆರ್, ಸಂಸ್ಥೆಯ ಸದಸ್ಯೆಯಾದ ಪ್ರೇಮಲತಾ ಎಚ್.ವಿ ಮುಂತಾದವರು ಉಪಸ್ಥಿತರಿದ್ದರು. ಶಿಕ್ಷಕಿ ರಜಿನಿ ಎಚ್.ಆರ್ ನಿರೂಪಿಸಿದರು. ಮೇಘನ ಸ್ವಾಗತಿಸಿದರು, ಮನು ಕೆ.ಎಸ್ ವಂದಿಸಿದರು. ಶಾಲೆಯ ಮಕ್ಕಳು ಕನ್ನಡ ನಾಡ ಸಂಸ್ಕೃತಿಯ ಹಾಡುಗಳಿಗೆ ನೃತ್ಯ ಮಾಡಿದರು. ಕಿರು ರೂಪಕಗಳನ್ನು ಪ್ರದರ್ಶಿಸಿದರು. ಕಾರ್ಯಕ್ರಮದಲ್ಲಿ ಕನ್ನಡ ಭಾಷಾ ವಿಷಯದ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು.

### ಭೂಮಿಕಾ ಅಸೋಸಿಯೇಟ್ಸ್ ಹಾಗೂ ದಿ.ಮೈಕ್ ಚಂದ್ರು ಗೆಳೆಯರ ಬಳಗದಿಂದ ಕಾರ್ಯಕ್ರಮ ಆಯೋಜನೆ

# ಕನ್ನಡ ರಾಜ್ಯೋತ್ಸವಕ್ಕೆ ಮೆರುಗು ನೀಡಿದ 'ಗೀತನಮನ'

**ಮೈಸೂರು:** ನಗರದ ಚಾಮುಂಡಿಪುರಂನಲ್ಲಿರುವ ಭೂಮಿಕಾ ಅಸೋಸಿಯೇಟ್ಸ್ ಹಾಗೂ ದಿವಂಗತ ಮೈಕ್ ಚಂದ್ರು ಗೆಳೆಯರ ಬಳಗ ಇವರ ಸಂಯುಕ್ತಾಶ್ರಯದಲ್ಲಿ ಜನಪ್ರಿಯ ಕನ್ನಡ ಚಲನಚಿತ್ರಗೀತೆಗಳ ನೈಜ ಸಂಗೀತ ಕಾರ್ಯಕ್ರಮವನ್ನು ಕನ್ನಡ 'ಗೀತನಮನ'ದ ಮೂಲಕ ರಾಜ್ಯೋತ್ಸವವನ್ನು ವಿಭಿನ್ನವಾಗಿ ಶಾರದಾವಿಲಾಸ ಶತಮಾನೋತ್ಸವ ಭವನದಲ್ಲಿ ಇತ್ತೀಚೆಗೆ ಆಯೋಜಿಸಲಾಗಿತ್ತು.

ಕಾರ್ಯಕ್ರಮದ ರೂವಾರಿ ಸುರೇಶ್ ಅವರು ಮಾತನಾಡಿ, ಇದು ಈ ವರ್ಷದ ನಮ್ಮ ಸಂಸ್ಥೆಯ ನಾಲ್ಕನೇ ಕಾರ್ಯಕ್ರಮವಾಗಿದ್ದು, ಮೂಲೆಗುಂಪಾಗಿರುವ 60, 70, 80, 90ರ ದಶಕದ ಗೀತೆಗಳನ್ನು ಪುನಃ ಬೆಳಕಿಗೆ ತಂದು ಪ್ರೇಕ್ಷಕರಿಗೆ ಕೇಳಿಸುವ ಸದುದ್ದೇಶದಿಂದ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು ಎಲ್ಲಾ ಕಾರ್ಯಕ್ರಮಕ್ಕೂ ಪ್ರೇಕ್ಷಕರಿಂದ ಉತ್ತಮ ಸ್ಪಂದನ ದೊರಕಿದೆ ಎಂದು ಹರ್ಷ ವ್ಯಕ್ತಪಡಿಸಿದರು. ಈ ಕಾರ್ಯಕ್ರಮಕ್ಕೆ ನಾವು ಮೂರು ತಿಂಗಳ ಮುಂಚೆಯೇ ಪೂರ್ವತಯಾರಿ ಮಾಡಿಕೊಳ್ಳುತ್ತೇವೆ ಎಂದು ತಿಳಿಸಿದರು.

ತಂಡದ ಗಾಯಕ ನಿತಿನ್ ರಾಜಾರಾಮಶಾಸ್ತ್ರಿ ಅವರು ಮಲಯ ಮಾರುತ ಚಿತ್ರದ 'ಶಾರದೆ ದಯೆತೋರಿದೆ' ಗೀತೆಯನ್ನು ಹಾಡುವುದರ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ನಂತರ ದಿವ್ಯ ಅವರ ಸಿರಿಕಂಠದಿಂದ 'ಮೂಡಲ ಮನೆಯ', ಶ್ರೀಕರ ಅವರ ಧ್ವನಿಯಿಂದ 'ಶರಣು ಕಾವೇರಿ ತಾಯೆ', ಹಂಸಿನಿ ಅವರು 'ಎಮ್ಮ ಮನೆಯಂಗಳದಿ', ಅತಿಶಯ್ ಅವರು 'ಕನ್ನಡ ನಾಡಿನ ಜೀವನದಿ' ಗೀತೆಯನ್ನು ಪ್ರಸ್ತುತಪಡಿಸಿದರು. ರೇವತಿಯವರು 'ನಮ್ಮ ಮನೆಯ ನಂದನ', ದಿವ್ಯ ಹಾಗೂ ನಿತಿನ್ 'ಪ್ರೀತಿನೇ ಆ ದ್ಯಾವ್ರು ತಂದ', ಹಂಸಿನಿ ಹಾಗೂ ಶ್ರೀಕರ 'ಉತ್ತರ ಧ್ರುವದಿಂ' ಯುಗಳ ಗೀತೆಯನ್ನು, ಅತಿಶಯ್ ಅವರು 'ಅನಿಯ ಭಾವ', ರೇವತಿಯವರು 'ಬಾನಲ್ಲು ನೀನೇ', ದಿವ್ಯ ಅವರು 'ನೇಸರ ನೋಡು', ನಿತಿನ್ ಅವರು 'ನಾವಾಡುವ ನುಡಿಯೇ ಕನ್ನಡ ನುಡಿ', ಹಂಸಿನಿ ಅವರು 'ಯಾವ ಜನ್ಮದ ಮೈತ್ರಿ', ರೇವತಿ ಹಾಗೂ ಶ್ರೀಕರ ಅವರು 'ಬಳ್ಳಿಗೆ ಹೂವು ಚೆಂದ', ಅತಿಶಯ್ ಹಾಗೂ ದಿವ್ಯ 'ಈ ಸುಂದರ ಬೆಳದಿಂಗಳ', 'ಕನ್ನಡದ ರವಿ ಮೂಡಿ ಬಂದ' ಗೀತೆಯನ್ನು ಸಮೂಹ ಕಲಾವಿದರು ಪ್ರಸ್ತುತಪಡಿಸಿದರು. ಸುಮಾರು ಮೂರುವರೆ ಗಂಟೆಗಳ ಕಾಲ ನಿರಂತರವಾಗಿ ವೇದಿಕೆ ಕಾರ್ಯಕ್ರಮವಿಲ್ಲದೇ ನಡೆದು ಅತ್ಯಂತ ಯಶಸ್ವಿಯಾಯಿತು ಎಂಬುದಕ್ಕೆ ಪ್ರೇಕ್ಷಕರು ಕಟ್ಟಕಡೆಯ ಹಾಡಿನವರೆಗೂ ಅಲುಗಾಡದೇ ಕುಳಿತಿದ್ದುದೇ ಸಾಕ್ಷಿಯಾಯಿತು. ಲಕ್ಷ್ಮೀ ಸೌಂಡ್ ಸಿಸ್ಟಂ ಧ್ವನಿವರ್ಧಕವೂ ಅಷ್ಟೇ ಮಧುರವಾಗಿತ್ತು.

ಮೈಸೂರಿನಲ್ಲಿ ಮನೆ ಮಾತಾಗಿರುವ ಅದ್ಭುತ ಪ್ರತಿಭೆ ಮೈಸೂರು ಆನಂದ್ ತಮ್ಮ ಮಿಮಿಕ್ರಿ, ಗಾಯನ ಹಾಗೂ ನೃತ್ಯದಿಂದ ಎಲ್ಲ ಪ್ರೇಕ್ಷಕರನ್ನು ತುಸು ಹೊತ್ತು ನಗೆಗಡಲಿನಲ್ಲಿ ಮುಳುಗಿಸಿದರು. ಮೈಸೂರು ಆಕಾಶವಾಣಿಯ ಹಿರಿಯ ನಿರೂಪಕ ಮಂಜುನಾಥ್ ಅವರ ನಿರೂಪಣೆ ಎಷ್ಟು ಸೊಗಸಾಗಿತ್ತೆಂದರೆ ಅವರು ಪ್ರತಿಯೊಂದು ಹಾಡಿನ ಗೀತ ರಚನೆ, ಸಂಗೀತ, ಹಿನ್ನೆಲೆ ಕಲಾವಿದರ ಹೆಸರು, ಚಿತ್ರದ ಹೆಸರು ಹಾಗೂ ಚಿತ್ರ ಯಾವ ವರ್ಷ ತೆರೆಕಂಡಿತ್ತು ಈ ಎಲ್ಲ ವಿವರಗಳನ್ನೂ ಅಚ್ಚುಕಟ್ಟಾಗಿ ವಿವರಿಸಿದರು. ಕಾರ್ಯಕ್ರಮಕ್ಕೆ ಮೊದಲು ತಾಯಿ ಭುವನೇಶ್ವರಿಗೆ ಪುಷ್ಪನಮನ ಸಲ್ಲಿಸಿ, ಮೈಸೂರು ಧ್ವನಿ ದಿವಂಗತ ಮೈಕ್ ಚಂದ್ರು ಅವರನ್ನು ನೆನಪಿಸಲಾಯಿತು.



# ಕನ್ನಡ ಉಳಿಸಿ ಬೆಳೆಸಬೇಕು

**ಕೋಲಾರ:** ನವ ಕರ್ನಾಟಕ ಸ್ವಾಭಿಮಾನ ವೇದಿಕೆ ರಾಜ್ಯ ಸಮಿತಿ ವತಿಯಿಂದ ಸಂಸ್ಥಾಪಕ ರಾಜ್ಯಾಧ್ಯಕ್ಷ ಎಂ. ಹೆಚ್. ರಾಮಾಂಜನಪ್ಪ ರವರ ಅಧ್ಯಕ್ಷತೆಯಲ್ಲಿ ಕನ್ನಡ ರಾಜ್ಯೋತ್ಸವ ರಾಜ್ಯ ಪ್ರಶಸ್ತಿ ಮತ್ತು ಅಭಿನಂದನ ಸಮಾರಂಭವನ್ನು ನಗರದ ಪತ್ರಕರ್ತರ ಭವನದಲ್ಲಿ ಏರ್ಪಡಿಸಲಾಗಿದ್ದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕಿ ವಿಜಯಲಕ್ಷ್ಮಿ ರವರು ಕಾರ್ಯಕ್ರಮವನ್ನು ಉದ್ಘಾಟಿಸಿದರು.

ನಂತರ ಅವರು ಮಾತನಾಡಿ ಕೋಲಾರ ಜಿಲ್ಲೆ ಗಡಿ ಜಿಲ್ಲೆಯಾಗಿದ್ದು ಒಂದು ಕಡೆ ಎನ್ನಡ ಇನ್ನೊಂದು ಕಡೆ ಎಕ್ಕಡ ಇರುವಂತ ಜಾಗದಲ್ಲಿ ನಮ್ಮ ಕನ್ನಡವನ್ನು ಉಳಿಸಿ ಬೆಳೆಸುವುದೇ ದೊಡ್ಡ ಕೆಲಸವಾಗಿದೆ ಆದರೆ ಇಂಥ ಗಡಿ ಭಾಗದಲ್ಲಿ ಹಲವಾರು ಸಂಘಟನೆಗಳಿದ್ದು ಎಲ್ಲಾ ಸಂಘಟನೆಗಳು ಕನ್ನಡಕ್ಕಾಗಿ ಹೋರಾಟ ಮಾಡುತ್ತಿವೆ ಎಂದರು.

ಸಂಘಟನೆಗಳು ಕಾರ್ಯನಿರ್ವಹಿಸಬೇಕಾದರೆ ಹಲವಾರು ಸಮಸ್ಯೆಗಳು ಎದುರಾಗುತ್ತಿದ್ದು ಅದನ್ನು ನಿಭಾಯಿಸಿಕೊಂಡು ಹೋಗುವುದೇ ದೊಡ್ಡ ಕೆಲಸವಾಗಿದ್ದು ಸಮಾಜಕ್ಕೆ ಏನಾದರೂ ಒಳ್ಳೆಯ ಕೆಲಸಗಳು ಮಾಡಲು ಮುಂದೆ ಹೋದರೆ ನಮ್ಮ ಕಾಲು ಎಳೆಯುವ ಅವಕಾಶವಾದಿಗಳು ಇರುತ್ತಾರೆ ತುಂಬಾ ಎಚ್ಚರದಿಂದಿರಬೇಕು ಎಂದರು.

ಉತ್ತಮ ಸಮಾಜ ನಿರ್ಮಾಣ ಮಾಡುವುದು ಸಂಘಟನೆಯ ಉದ್ದೇಶವಾಗಿವಾಗಬೇಕು ಎಲ್ಲಿ ಅನ್ಯಾಯಗಳಾದರೂ ಅದನ್ನು ಖಂಡಿಸಿ ಹೋರಾಟದ ಮುಖಾಂತರ ನ್ಯಾಯ ಕೊಡಿಸುವುದೇ ಸಂಘಟನೆಯ ಉದ್ದೇಶವಾಗಿರಬೇಕು ಆಗ ಮಾತ್ರ ಒಂದು ಉತ್ತಮ ಸಮಾಜ ನಿರ್ಮಾಣ ಮಾಡಲು ಸಾಧ್ಯವಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಕರ್ನಾಟಕ ರಾಜ್ಯಾದ್ಯಂತ ವಿವಿಧ ಕ್ಷೇತ್ರಗಳಲ್ಲಿ ಕನ್ನಡಕ್ಕಾಗಿ ಸೇವೆ ಸಲ್ಲಿಸಿರುವ ಪರಿಚಾರಕರಿಗೆ ಕರ್ನಾಟಕ ಸ್ವಾಭಿಮಾನ ವೇದಿಕೆ ವತಿಯಿಂದ ಸನ್ಮಾನಿಸಿ ಪ್ರಶಸ್ತಿ ಪ್ರಧಾನ ಮಾಡಿದರೂ ನಂತರ

ಕಾರ್ಯಕ್ರಮದಲ್ಲಿ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಿ ಅವರಿಗೆ ಜವಾಬ್ದಾರಿಗಳನ್ನು ನೀಡಿದರು.

ಈ ಸಂದರ್ಭದಲ್ಲಿ ಕೊಂಡ ರಾಜನಹಳ್ಳಿ ಮಂಜುಳಾ ರವರು ನಿರೂಪಣೆ ಮಾಡಿದರು, ಯುವ ಘಟಕದ ಅಧ್ಯಕ್ಷರಾದ ಚೈತ್ರ, ರಾಜ್ಯ ಉಪಾಧ್ಯಕ್ಷ ವಿಜಯಕುಮಾರ್, ರಾಜ್ಯ ಕಾರ್ಯದರ್ಶಿ ರಾಜಣ್ಣ, ಕಾರ್ಮಿಕ ಘಟಕ ಮಹಿಳಾ ಅಧ್ಯಕ್ಷ ಎಲ್ . ಎನ್. ಮಂಜುಳಾ, ನವೀನ್ ಇನ್ನೂ ಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಎನ್‌ಎಸ್‌ಎಸ್ ಅಧಿಕಾರಿಗಳಿಗೆ ಚರಕ ಪರಿಚಯಿಸಿ

**ಚಿತ್ರದುರ್ಗ:** ಎನ್‌ಎಸ್‌ಎಸ್ ಅಧಿಕಾರಿಗಳಿಗೆ ಚರಕದ ಮಹತ್ವ ಮತ್ತು ಎನ್‌ಎಸ್‌ಎಸ್ ನ ಜೊತೆ ಇರುವ ಸಂಬಂಧದ ಅರಿವಿರುವುದಿಲ್ಲ ಹಾಗಾಗಿ ಅವರಿಗೆ ಚರಕವನ್ನು ಪರಿಚಯಿಸಿ, ಹೇಗೆ ಗ್ರಾಮೀಣ ಅಭಿವೃದ್ಧಿಯನ್ನು ಚರಕದ ಮುಖಾಂತರ ಮಾಡಬಹುದು ಎಂದು ಕರ್ನಾಟಕ ಜ್ಞಾನ-ವಿಜ್ಞಾನ ಸಮಿತಿ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷರಾದ ಡಾ. ಎಚ್ ಕೆ ಎಸ್ ಸ್ವಾಮಿಯವರು ವಿನಂತಿಸಿಕೊಂಡಿದ್ದಾರೆ.

ದಕ್ಷಿಣ ಭಾರತದ ಗಣರಾಜ್ಯೋತ್ಸವ ಪಥಸಂಚಲಕ್ಕೆ ಆಗಮಿಸಿದಂತಹ ಬಹಳಷ್ಟು ಎನ್ ಎಸ್‌ಎಸ್ ಅಧಿಕಾರಿಗಳಿಗೆ ಚರಕದ ಪರಿಚಯ ಮಾಡಿಕೊಟ್ಟು, ಅದರಿಂದ ದಾರ ತೆಗೆಯುವುದು ಹೇಗೆ ಮತ್ತು ಅದರಿಂದ ಬಟ್ಟೆ ಹೇಗೆ ತಯಾರಾಗುತ್ತದೆ, ಖಾದಿ ಬಟ್ಟೆ ಬಗ್ಗೆ ಪರಿಚಯ ಮಾಡಿ ಕೊಡಲಾಯಿತು. ಬಹಳಷ್ಟು ಎನ್‌ಎಸ್‌ಎಸ್ ಅಧಿಕಾರಿಗಳಿಗೆ ಇದು ಹೊಸ ಪರಿಚಯವಾಯಿತು.

ಚರಕವನ್ನು ಮುಟ್ಟಿ, ಸ್ಪರ್ಶಿಸಿ ಅದರ ಜೊತೆಗೆ ಛಾಯಾಚಿತ್ರ ತೆಗೆಸಿಕೊಂಡು, ಅಧಿಕಾರಿಗಳು ತಮ್ಮ ಊರಿಗಳಿಗೆ ತೆರಳಿದನ್ನ ನೋಡಿದರೆ, ನಾವು ಎನ್ ಎಸ್ ಎಸ್ ಅಧಿಕಾರಿಗಳಿಗೆ ತರಬೇತಿ ನೀಡುವ ಸಮಯದಲ್ಲಿ ಚರಕವನ್ನ ಪರಿಚಯಿಸಬೇಕಾಗಿತ್ತು ಎಂದು ನುಡಿದರು. ಬಹಳಷ್ಟು ರಾಜ್ಯಗಳಾದ ತಮಿಳುನಾಡು, ಕೇರಳ, ಪಾಂಡಿಚೇರಿ, ಕರ್ನಾಟಕ ರಾಜ್ಯದ ವಿವಿಧ ಭಾಗಗಳಿಂದ ಆಗಮಿಸಿದಂತ ಎನ್‌ಎಸ್‌ಎಸ್ ಅಧಿಕಾರಿಗಳು ಚರಕವನ್ನು ಮುಟ್ಟಿ ನೋಡಿ, ಪರೀಕ್ಷಿಸಿ ಅದು ಹೇಗೆ ಕೆಲಸ ಮಾಡುತ್ತದೆ ಎಂಬುದನ್ನು ಹತ್ತಿರದಿಂದ ದೃಷ್ಟಿಸಿ, ಗಮನಹರಿಸಿ, ಮುಂದೊಂದು ದಿನ ಈ ಚರಕವನ್ನ ಗ್ರಾಮೀಣ ಅಭಿವೃದ್ಧಿಗೆ ಬಳಕೆ ಮಾಡಬಹುದೇನೋ ಎಂದು ವಿಚಾರ ವ್ಯಕ್ತಪಡಿಸಿ ಹೋಗಿದ್ದಾರೆ. ಹಾಗಾಗಿ ನಾವು ಆದಷ್ಟು ಶೀಘ್ರವಾಗಿ ಎಲ್ಲಾ ವಿಶ್ವವಿದ್ಯಾಲಯದಲ್ಲಿ, ಎಲ್ಲಾ ಕಾಲೇಜುಗಳಲ್ಲಿ ಎನ್‌ಎಸ್‌ಎಸ್ ಅಧಿಕಾರಿಗಳಿಗೆ ಚರಕವನ್ನ ಪರಿಚಯಿಸಿಕೊಡಬೇಕು ಎಂದು ವಿನಂತಿಸಿಕೊಂಡರು.

### ಹಿರಿಯ ಸಿವಿಲ್ ನ್ಯಾಯಾಧೀಶ ಈಶ್ವರ್ ಸಲಹೆ

# ದೌರ್ಜನ್ಯದ ವಿರುದ್ಧ ಧ್ವನಿ ಎತ್ತಿ

**ಚಾಮರಾಜನಗರ:** ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮಕ್ಕಳ ರಕ್ಷಣೆ ಘಟಕ ಹಾಗೂ ಆಸರೆ ಚಾರಿಟಬಲ್ ಟ್ರಸ್ಟ್ ಇವರ ಸಹಯೋಗದಲ್ಲಿ ಮಹಿಳೆಯರ ಮೇಲಿನ ದೌರ್ಜನ್ಯ ನಿರ್ಮೂಲನೆ ಅಂತರಾಷ್ಟ್ರೀಯ ದಿನಾಚರಣೆ ಕಾರ್ಯಕ್ರಮ ಚಾಮರಾಜನಗರ ಪಟ್ಟಣದ ಶ್ರೀ ಶಕ್ತಿ ಭವನ ನಡೆಯಿತು.



ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಈಶ್ವರ್ ಮಾತನಾಡಿ, ಹೆಣ್ಣು ವಿದ್ಯಾವಂತಳಾಗಿ, ಆರ್ಥಿಕವಾಗಿ ಸಬಲೆಯಾದರೂ ಭಾವನಾತ್ಮಕವಾಗಿ ಆಕೆಯ ಸ್ಪಂದಿಸುವಿಕೆಯನ್ನು ದುರುಪಯೋಗ ಪಡಿಸಿಕೊಳ್ಳುವುದೇ ಹೆಚ್ಚು. ಅಪರಿಚಿತರಿಗಿಂತಲೂ ಹೆತ್ತವರಿಂದ, ಒಡಹುಟ್ಟಿದವರಿಂದ, ಕಟ್ಟಿಕೊಂಡವನಿಂದ, ಆಪ್ತರಿಂದ ಕಡೆಗೆ ಮಕ್ಕಳಿಂದಲೂ ಆಕೆ ಶೋಷಣೆ ಅಥವಾ ದೌರ್ಜನ್ಯಕ್ಕೊಳಗಾಗುವುದು ಸಾಮಾನ್ಯ. ಇದರ ವಿರುದ್ಧ ಹೊರಡಲು ತಿಳಿಸುವ ಸಲುವಾಗಿ ಈ ದಿನ ಮಹಿಳೆಯರ ಮೇಲಿನ ದೌರ್ಜನ್ಯ ನಿರ್ಮೂಲನೆ ಅಂತರರಾಷ್ಟ್ರೀಯ ದಿನವನ್ನು ಆಚರಿಸಲಾಗುತ್ತದೆ ಎಂದರು.

ದೌರ್ಜನ್ಯಗಳನ್ನು ಶಾರೀರಿಕ, ಲೈಂಗಿಕ, ಮಾನಸಿಕ, ಭಾವನಾತ್ಮಕ, ಸಾಂಪ್ರದಾಯಿಕ ದೌರ್ಜನ್ಯಗಳಾಗಿ ವಿಂಗಡಿಸಬಹುದು. ಮಹಿಳೆಯರು ಮೌನವಹಿಸಿ ಸಹಿಸಿಕೊಂಡು ಕಾಲಕ್ರಮೇಣ ದೌರ್ಜನ್ಯವೂ ನಿಲ್ಲುತ್ತದೆ ಎಂಬ ತಪ್ಪು ತಿಳಿವಳಿಕೆಯಿಂದ ಹೊರಬರಲೇಬೇಕಿದೆ. ಇದರ ವಿರುದ್ಧ ಹೋರಾಟ ಮನೋಭಾವ ಬೆಳೆಸಿಕೊಳ್ಳಬೇಕಿದೆ ಎಂದರು. ಮಹಿಳೆಯರು ಎಲ್ಲ ರಂಗದಲ್ಲೂ ಪುರುಷ ಸಮಾನವಾಗಿ ಎಲ್ಲ ರಂಗದಲ್ಲೂ ಇದ್ದಾರೆ. ಮಹಿಳೆಯರ ರಕ್ಷಣೆಗಾಗಿ ಅನೇಕ ಕಾನೂನುಗಳು ಕೌಟುಂಬಿಕ ದೌರ್ಜನ್ಯ ತಡೆ ಕಾಯಿದೆ, ವರದಕ್ಷಿಣೆ ನಿಷೇಧ ಕಾಯ್ದೆ, ಸಮಾನ ಕೆಲಸಕ್ಕೆ ಸಮಾನ ವೇತನ, ಶಿಶುಪಾಲನ ರಜೆ ಇವೆಲ್ಲ ಮಹಿಳಾ ಸಬಲೀಕರಣಕ್ಕೆ ಬಂದ ಕಾನೂನುಗಳು. ಇದರ ಬಗ್ಗೆ ಅರಿವು ಹೊಂದಿ ಇತರರಿಗೂ ಮಾಹಿತಿ ನೀಡಿ ಎಂದರು.. ಹೆಚ್ಚಿನ ಮಾಹಿತಿ ಕಾನೂನಿನ ಬಗ್ಗೆ ನಮ್ಮ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಚೇರಿಗೆ ಬಂದು ಮಾಹಿತಿ ಹಾಗು ದೂರನ್ನು ನೀಡಬಹುದು ಅವರಿಗೆ ಉಚಿತವಾಗಿ ಕಾನೂನು ಅರಿವು ನೆರವು ನೀಡಲಾಗುವುದು ಎಂದರು .

ಬಾಲ ನ್ಯಾಯ ಮಂಡಳಿ ಸದಸ್ಯ ಟಿ ಜೇ ಸುರೇಶ್ ಮಾತನಾಡಿ ,ಮಹಿಳೆಯರು ಮೌನವಹಿಸಿ ಸಹಿಸಿಕೊಂಡು ಕಾಲಕ್ರಮೇಣ ದೌರ್ಜನ್ಯವೂ ನಿಲ್ಲುತ್ತದೆ ಎಂಬ ತಪ್ಪು ತಿಳಿವಳಿಕೆಯಿಂದ ಹೊರಬರಲೇಬೇಕಿದೆ ಮತ್ತು ದೌರ್ಜನ್ಯವನ್ನು ವಿರೋಧಿಸುವ ಮೂಲಕ ಎಚ್ಚೆತ್ತುಕೊಳ್ಳಬೇಕಿದೆ. ಮಹಿಳೆಯರು ಮನೆಯಲ್ಲಿ , ಸಮಾಜದಲ್ಲಿ, ಉದ್ಯೋಗ ಸ್ಥಳದಲ್ಲಿ ದೌರ್ಜನ್ಯ ಎದುರಿಸಬೇಕಾಗಿದೆ. ಹಾಗಲ್ಲದೇ ಮೌನವಾಗಿ ಸಹಿಸಿಕೊಂಡರೆ ದೌರ್ಜನ್ಯ ದೌರ್ಜನ್ಯವನ್ನೇ ಹುಟ್ಟು ಹಾಕುತ್ತದೆ. ಮಹಿಳೆಯರ ಮೇಲೆ ಆಗುವ ದೌರ್ಜನ್ಯಗಳ ಬಗ್ಗೆ ಅದರ ತಡೆಗಟ್ಟುವಿಕೆ ಬಗ್ಗೆ ತಿಳಿಸಲು ಪ್ರತಿ ವರ್ಷ ನವೆಂಬರ್ 25 ನ್ನು ಮಹಿಳೆಯರ ಮೇಲಿನ ದೌರ್ಜನ್ಯ ನಿರ್ಮೂಲನೆ ಅಂತರಾಷ್ಟ್ರೀಯ ದಿನಾಚರಣೆ ಆಚರಿಸಲಾಗುತ್ತಿದೆ .ಆದ್ದರಿಂದ ಮಹಿಳೆಯರ ಮೇಲೆ ದೌರ್ಜನ್ಯ ಕಂಡು ಬಂದರೆ ಮಹಿಳಾ ಸಾಂತ್ವನ ಕೇಂದ್ರ, ಸಹಾಯವಾಣಿ 1091 ಮತ್ತು 181 ಸಂಖೆಯನ್ನು ಬಳಸಿಕೊಂಡು ಮಹಿಳೆಯರ ರಕ್ಷಣೆಗೆ ಮುಂದಾಗಬೇಕು ಎಂದು ತಿಳಿಸಿದರು. ಮಕ್ಕಳ ಮೇಲೆ ಶೋಷಣೆ ಕಂಡು ಬಂದರೆ 1098ಕೆ ಕರೆ ಮಾಡಿ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ನಂಜಯ್ಯ ಮಾತನಾಡಿ, ಹೆಣ್ಣಿನ ಇಷ್ಟಾನಿಷ್ಟಗಳಿಗೆ ಬೆಲೆಕೊಡದೇ ಆಕೆಯ ಮೇಲೆ ಕಟ್ಟುಪಾಡುಗಳನ್ನು ಹೇರುವುದು; ಸಂಶಯಿಸುವುದು; ಕಟುವಾಗಿ ಟೀಕಿಸುವುದು; ಅವಹೇಳನ ಮಾಡುತ್ತಾ ಹೀಗಳೆಯುವುದು; ಅಶ್ಲೀಲ ಪದ ಬಳಕೆ; ಅಸಹ್ಯ ಹಾವಭಾವ; ಕಿರಿಕಿರಿಗೊಳಿಸುವ ಮೆಸೇಜುಗಳ ಮೂಲಕ ಲೈಂಗಿಕವಾಗಿ ಶೋಷಿಸುವುದು; ಆಕೆಯ ಅವಶ್ಯಕತೆಗಳನ್ನು ಕಡೆಗಣಿಸಿ ಆರ್ಥಿಕವಾಗಿಯೂ ಆಕೆಯನ್ನು ಅತಿಯಾಗಿ ಮಿತಿಗೊಳಿಸುವುದು; ಅಭಿಪ್ರಾಯಗಳನ್ನು ಆಕೆಯ ಮೇಲೆ ಬಲವಂತವಾಗಿ ಹೇರುವುದು. ಇದು ಮಹಿಳೆಯರ ಮೇಲೆ ನಡೆಯುವ ದೌರ್ಜನ್ಯಗಳು .ಇಂತಹ ದೌರ್ಜನ್ಯಗಳ ವಿರುದ್ಧ ಮಹಿಳೆಯರು ಹೋರಾಟ ಮಾಡಬೇಕೆಂದರು. ಮಕ್ಕಳ ರಕ್ಷಣೆಗೆ ಘಟಕದ ಆಪ್ತಸಮಾಲೋಚಕಿ ಮೇಘ ಮಾತನಾಡಿ ಇತ್ತೀಚೆಗೆ ಹೆಣ್ಣು ಮಕ್ಕಳ ಮೇಲೆ ಅನೇಕ ದೌರ್ಜನ್ಯಗಳಾಗುತ್ತಿದ್ದು. ಚಾಮರಾಜನಗರ ಜಿಲ್ಲೆಯಲ್ಲಿ ಪೋಕ್ಸೋ ಪ್ರಕರಣಗಳ ಸಂಖ್ಯೆ ಹೆಚ್ಚಾಗುತ್ತಿದೆ. ಆದ್ದರಿಂದ ಮನೆಯಲ್ಲಿ ಪೋಷಕರು ಹೆಣ್ಣುಮಕ್ಕಳಿಗೆ ಅವರ ರಕ್ಷಣೆ ಬಗ್ಗೆ ಅಗತ್ಯ ಗಮನವನ್ನು ನೀಡಬೇಕು. ಮಕ್ಕಳಿಗೆ ಮನೆಯಿಂದಲೇ ಸಂಸ್ಕಾರ ಒಳ್ಳೆಯ ಗುಣಗಳನ್ನು ತಿಳಿಸಿಕೊಡಬೇಕು ಬಾಲ್ಯ ವಿವಾಹಕ್ಕೆ ಯಾರು ಪ್ರೋತ್ಸಾಹ ಮಾಡಬಾರದು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮೇಲ್ವಿಚಾರಕ್ಕೆ ಶಿವಲೀಲಾ ಹಾಗೂ ಅಂಗನವಾಡಿ ಕಾರ್ಯಕರ್ತೆಯರು ಭಾಗವಹಿಸಿದ್ದರು.

# ಡಿ. 3ರಂದು ನಗರದಲ್ಲಿ ಜಿಲ್ಲಾಮಟ್ಟದ ಯುವಜನೋತ್ಸವ : ವಿವಿಧ ಸ್ಪರ್ಧಾ ಕಾರ್ಯಕ್ರಮ

**ಚಾಮರಾಜನಗರ:** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಸ್ವಾಮಿ ವಿವೇಕಾನಂದ ಜನ್ಮದಿನಾಚರಣೆಯ ಅಂಗವಾಗಿ ರಾಷ್ಟ್ರೀಯ ಯುವ ದಿನಾಚರಣೆ ಪ್ರಯುಕ್ತ ಜಿಲ್ಲಾಮಟ್ಟದ ಯುವಜನೋತ್ಸವ ಕಾರ್ಯಕ್ರಮವನ್ನು ಡಿಸೆಂಬರ್ 3 ರಂದು ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಹಮ್ಮಿಕೊಳ್ಳಲಾಗಿದ್ದು, ಜಿಲ್ಲೆಯ ಯುವಕ, ಯುವತಿಯರು ಹಾಗೂ ಶಾಲಾ, ಕಾಲೇಜು ವಿದ್ಯಾರ್ಥಿಗಳಿಗೆ ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಬಹುದಾಗಿದೆ.

ಕನ್ನಡ, ಆಂಗ್ಲ, ಹಿಂದಿ ಭಾಷೆಯಲ್ಲಿ ಜಾನಪದಗೀತೆ (10 ಜನರ ತಂಡ) ಸ್ಪರ್ಧೆಗೆ 7 ನಿಮಿಷ, ಕನ್ನಡ, ಆಂಗ್ಲ, ಹಿಂದಿ ಭಾಷೆಯಲ್ಲಿ ಜಾನಪದನೃತ್ಯ (10 ಜನರ ತಂಡ) ಸ್ಪರ್ಧೆಗೆ 15 ನಿಮಿಷ ಹಾಗೂ ಕನ್ನಡ, ಆಂಗ್ಲ, ಹಿಂದಿ ಭಾಷೆಯಲ್ಲಿ ಜಾನಪದಗೀತೆ, ಜಾನಪದ ನೃತ್ಯ ಸ್ಪರ್ಧೆಗೆ ವೈಯಕ್ತಿಕವಾಗಿ ಒಬ್ಬರಿಗೆ 7 ನಿಮಿಷ ಕಾಲಾವಕಾಶ ಇರುತ್ತದೆ. ಕನ್ನಡ, ಆಂಗ್ಲ, ಹಿಂದಿ ಭಾಷೆಯಲ್ಲಿ ವೈಯಕ್ತಿಕವಾಗಿ 1000 ಪದಗಳು ಮೀರದಂತೆ ಕಥೆ ಬರೆಯುವ ಸ್ಪರ್ಧೆಗೆ ಒಬ್ಬರಿಗೆ 60 ನಿಮಿಷಗಳ ಕಾಲಾವಕಾಶವಿರುತ್ತದೆ. ವಿಷಯವು ಆಕ್ರಮಣಕಾರಿಯಾಗಿರಬಾರದು, ಈಗಾಗಲೇ ಪ್ರಕಟವಾಗಿರಬಾರದು, ಸ್ಪಷ್ಟವಾಗಿರಬೇಕು, ಜಾತಿ, ಪಂಥ, ಧರ್ಮ, ವರ್ಣ, ಜನಾಂಗವನ್ನು ಒಳಗೊಂಡಿರಬಾರದು ಹಾಗೂ ಸೂಕ್ತವಲ್ಲದ ವಿಷಯ ಒಳಗೊಂಡಿರಬಾರದು. ಚಿತ್ರಕಲೆ ಸ್ಪರ್ಧೆಗೆ ಒಬ್ಬರಿಗೆ 90 ನಿಮಿಷಗಳ ಕಾಲಾವಕಾಶವಿರುತ್ತದೆ. ಚಿತ್ರಕಲೆಗೆ ಅಗತ್ಯ ಪರಿಕರಗಳನ್ನು ಸ್ಪರ್ಧಿಗಳೇ ತರಬೇಕು.

ಕನ್ನಡ, ಆಂಗ್ಲ, ಹಿಂದಿ ಭಾಷೆಯಲ್ಲಿ 500 ಪದಗಳು ಮೀರದಂತೆ ಕವಿತೆ ಬರೆಯುವ ಸ್ಪರ್ಧೆಗೆ ಒಬ್ಬರಿಗೆ 60 ನಿಮಿಷಗಳ ಕಾಲಾವಕಾಶವಿರುತ್ತದೆ. ಸ್ಪರ್ಧಿಗಳು ಸಿದ್ದ ಪಡಿಸಿಕೊಂಡಿರುವ ಆಯ್ದ ವಿಷಯಗಳ ಬಗ್ಗೆ ಭಾಷಣ ಮಾಡುವ ಸ್ಪರ್ಧೆಗೆ ಒಬ್ಬರಿಗೆ 3 ನಿಮಿಷಗಳ ಕಾಲಾವಕಾಶವಿದೆ. ಭಾಷಣವು ಹಿಂದಿ ಮತ್ತು ಆಂಗ್ಲ ಭಾಷೆಯಲ್ಲಿರಬೇಕು (ರಾಷ್ಟಮಟ್ಟದ ಯುವಜನೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಲು) ಕನ್ನಡ ಭಾಷೆಯನ್ನು ಜಿಲ್ಲಾಮಟ್ಟ ಮತ್ತು ರಾಜ್ಯಮಟ್ಟ ಯುವಜನೋತ್ಸವ ಕಾರ್ಯಕ್ರಮದ ವರೆಗೆ ಸೀಮಿತಗೊಳಿಸಿದೆ. ತೀರ್ಮಾನವು ಭಾಷೆಯ ನಿಖರತೆ, ಹರಿವು, ವಿಷಯಕ್ಕೆ ಸಂಬಂಧಿಸಿದಂತೆ ಮಂಡಿಸುವ ಶಬ್ದ, ಪದಗಳು ಪುನಾರವರ್ತನೆ ಆಗದಿರುವುದು. ವಿಷಯದ ಬಗ್ಗೆ ಅರಿವು ಮತ್ತು ಆತ್ಮವಿಶ್ವಾಸ ಹೊಂದಿರುವುದರ ಮೇಲೆ ಅವಲಂಬಿಸಿರುತ್ತದೆ. ವೈಯಕ್ತಿಕವಾಗಿ ಛಾಯಚಿತ್ರ ತೆಗೆಯುವ ಸ್ಪರ್ಧೆಗೆ ಪ್ರಗತಿಶೀಲ ಭಾರತ, ಆತ್ಮ ನಿರ್ಭರ ಭಾರತ, ಯೋಗ, ಕ್ರೀಡೆ, ಪ್ರಕೃತಿ ದೃಶ್ಯಗಳು ಹಾಗೂ ಫಿಟ್ನೆಸ್‌ಗಾಗಿ ದೈಹಿಕ ಚಟುವಟಿಕೆ ಕುರಿತ ವಿಷಯಗಳಲ್ಲಿ ಒಂದನ್ನು ಆಯ್ಕೆ ಮಾಡಿಕೊಂಡು ಛಾಯಾಚಿತ್ರ ತೆಗೆಯಬೇಕು. ಮೊಬೈಲ್‌ನಿಂದ ತೆಗೆದ ಚಿತ್ರಗಳನ್ನು ಸಹ ಪರಿಗಣಿಸಬಹುದಾಗಿದೆ.

ವಿಷಯಾಧಾರಿತ - ವಿಜ್ಞಾನಮೇಳ (ಗುಂಪು) ಸ್ಪರ್ಧೆಯಲ್ಲಿ 40 ಜನರು ಭಾಗವಹಿಸಬಹುದಾಗಿದ್ದು ವಿಜ್ಞಾನ ಮತ್ತು ತಂತ್ರಜ್ಞಾನದಲ್ಲಿ ಆಧುನಿಕತೆ ವಿಷಯದ ಬಗ್ಗೆ ಪ್ರದರ್ಶನವಿರಬೇಕು. ಇದರಲ್ಲಿ ನಾವಿನ್ಯತೆಗೆ ಪ್ರಾತಿನಿಧ್ಯ ನೀಡಲಾಗುವುದು ಹಾಗೂ ಸಕ್ರಿಯ ಮಾದರಿ ಪ್ರದರ್ಶನವಿರಬೇಕು. ವೈಯಕ್ತಿಕವಾಗಿಯೂ ವಿಜ್ಞಾನಮೇಳದಲ್ಲಿ ಭಾಗವಹಿಸಬಹುದಾಗಿದ್ದು ಗರಿಷ್ಠ 10 ಜನರು ಇರಬೇಕು. ಯುವಜನೋತ್ಸವ ಸ್ಪರ್ಧೆಗಳಲ್ಲಿ 15 ರಿಂದ 29ರ ವಯೋಮಿತಿಯಲ್ಲಿರುವ ಜಿಲ್ಲೆಯ ಎಲ್ಲಾ ಯುವಕ, ಯುವತಿಯರು, ಸಂಘ-ಸಂಸ್ಥೆಗಳ ಪ್ರತಿನಿಧಿಗಳು, ಶಾಲಾ, ಕಾಲೇಜು ವಿದ್ಯಾರ್ಥಿಗಳು ಭಾಗವಹಿಸಬಹುದು. ಸ್ಪರ್ಧೆಗಳು ಯುವಕ, ಯುವತಿಯರಿಗೆ ಪ್ರತ್ಯೇಕವಾಗಿರುವುದಿಲ್ಲ. ಸ್ಪರ್ಧಿಗಳಿಗೆ ಮಧ್ಯಾಹ್ನದ ಲಘು ಉಪಹಾರ ಇರುತ್ತದೆ.

ಎಲ್ಲಾ ಸ್ಪರ್ಧಿಗಳಿಗೂ ಪ್ರಯಾಣ ಭತ್ಯೆಯನ್ನು ನೀಡಲಾಗುತ್ತಿದ್ದು, ಸ್ಪರ್ಧಿಗಳು ಬ್ಯಾಂಕ್ ಖಾತೆಯ ಜೆರಾಕ್ಸ್ ಪ್ರತಿಯನ್ನು ತರಬೇಕು. ವಿಜೇತರಿಗೆ ವಿಜಯಫಲಕ ಮತ್ತು ಪ್ರಶಸ್ತಿಪತ್ರಗಳು ಹಾಗೂ ನಗದು ಬಹುಮಾನವನ್ನು ನೀಡಲಾಗುವುದು ಹಾಗೂ ಚಾಮರಾಜನಗರ ನೆಹರು ಯುವ ಕೇಂದ್ರದಿಂದಲೂ ಸಹ ನಗದು ಬಹುಮಾನವನ್ನು ನೀಡಲಾಗುತ್ತದೆ. ಜಿಲ್ಲಾಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದ ಸ್ಪರ್ಧಿಗಳನ್ನು ಮಾತ್ರ ರಾಜ್ಯಮಟ್ಟದ ಯುವಜನೋತ್ಸವ ಸ್ಪರ್ಧೆಯ ಕಾರ್ಯಕ್ರಮಕ್ಕೆ ಕಳುಹಿಸಲಾಗುತ್ತದೆ. ನೆಹರು ಯುವ ಕೇಂದ್ರದಿಂದ ರಾಜ್ಯಮಟ್ಟದ ಯುವಜನೋತ್ಸವ ನಡೆದಲ್ಲಿ ಅಲ್ಲಿಗೂ ಸಹ ಕಳುಹಿಸಲಾಗುವುದು. ಸ್ಪರ್ಧಿಗಳು ಡಿಸೆಂಬರ್ 3 ರಂದು 9.30 ಗಂಟೆಯೊಳಗೆ ನಗರದ ಡಾ. ಬಿ.ಆರ್ ಅಂಬೇಡ್ಕರ್ ಭವನದ ಸ್ಪರ್ಧಾ ವ್ಯವಸ್ಥಾಪಕರಲ್ಲಿ ವರದಿ ಮಾಡಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ದೂ.ಸಂ 08226-224932 ಅಥವಾ ಮೊ.ಸಂ 9880211027, 9844160841, 9916466659, 9844242672 ಅನ್ನು ಸಂಪರ್ಕಿಸಬಹುದು.

# ವಯಸ್ಕರ ಸಾಕ್ಷರತಾ ಕಾರ್ಯಕ್ರಮ

**ಮಂಡ್ಯ:** ತಾಲೂಕಿನ ಮುತ್ತೇಗೆರೆ ಗ್ರಾಮದಲ್ಲಿ ಡಿ ದೇವರಾಜ ಅರಸು ಹಿಂದುಳಿದ ವರ್ಗಗಳ ಇಲಾಖೆಯ ಬಾಲಕರ ವಿದ್ಯಾರ್ಥಿ ನಿಲಯದ ಆವರಣದಲ್ಲಿ ರೋಟರಿ ಇಂಡಿಯಾ ಲಿಟ್ರಸಿ ಮಿಷನ್, ರಾಜ್ ಮಹಲ್ ವಿಲಾಸ್ ,ಕಕ್ ಯಾನ ಕ್ಲಬ್ ಮತ್ತು ವಿಕಸನ ಗ್ರಾಮೀಣ ನಗರಾಭಿವೃದ್ಧಿ ಸಂಸ್ಥೆ ವತಿಯಿಂದ ವಯಸ್ಕರ ಸಾಕ್ಷರತಾ ಕಾರ್ಯಕ್ರಮವನ್ನು ಆಚರಿಸಿದರು. ಕಾರ್ಯಕ್ರಮದಲ್ಲಿ ರೋಟರಿ ಸಂಸ್ಥೆಯ ಅಧ್ಯಕ್ಷ ರಾಜೇಂದ್ರ ರೈ ಮಾತನಾಡಿ ಹಿಂದೆ ಯಾವುದೋ ಕಾರಣಕ್ಕೆ ವಿದ್ಯಾಭ್ಯಾಸ ಕಲಿಯಲು ಸಾಧ್ಯವಾಗದೆ ಶಾಲೆಯಿಂದ ಹೊರ ಗೋಳಿದಿರುತ್ತಾರೆ ಅಂತವರಿಗೆ ವ್ಯವಹಾರಿಕ ಜ್ಞಾನವನ್ನು ರೂಡಿಸಿಕೊಳ್ಳುವ ನಿಟ್ಟಿನಲ್ಲಿ ಗ್ರಾಮೀಣ ಭಾಗದ ಜನರು ವಿದ್ಯಾವಂತರಾಗಬೇಕು ಎನ್ನುವ ಉದ್ದೇಶದಿಂದ ರೋಟರಿ ಸಂಸ್ಥೆಗಳು ಸಹಕಾರ ನೀಡುತ್ತಾ ಬಂದಿದೆ ಇದರ ಸದುಪಯೋಗವನ್ನು ಎಲ್ಲರೂ ಬಳಸಿಕೊಂಡು ವಿದ್ಯಾವಂತರಾಗಬೇಕು ಎಂದು ಸಲಹೆ ನೀಡಿದರು. ಕಾರ್ಯಕ್ರಮದಲ್ಲಿ ಗುಲ್ ಮೋರ್ ಕ್ಲಬ್ ನ ಅಧ್ಯಕ್ಷ ಮುರಳಿ ಕೃಷ್ಣನ್ ವಿಕಸನ ಸಂಸ್ಥೆ ನಿರ್ದೇಶಕ ಮಹೇಶ್ ಚಂದ್ರ, ಗುರು ಹೊಂಬಾಳೆ ಸಂಸ್ಥೆಯ ಅಧ್ಯಕ್ಷ ಬಸವರಾಜು ರೋಟರಿ ಸಂಸ್ಥೆಯ ಡಾ. ರವಿ, ದರ್ಶನ್, ವೀರೇಂದ್ರ, ಸತೀಶ್ ಸೇರಿದಂತೆ ಹಲವರು ಭಾಗವಹಿಸಿದ್ದರು.




# ನಗರದ ಸ್ವಚ್ಛತಾ ಪ್ರಜ್ಞೆ ನಮ್ಮೆಲ್ಲರಲ್ಲೂ ಮೂಡಬೇಕು

**ಚಾಮರಾಜನಗರ:** ನಗರ ಸ್ವಚ್ಛತೆಗೆ ಎಲ್ಲರ ಸಹಕಾರ ಅಗತ್ಯವಾಗಿದ್ದು, ನಮ್ಮ ಮನೆ, ನಮ್ಮ ಬೀದಿ, ನಮ್ಮ ನಗರ ಎನ್ನುವ ಸಾಮೂಹಿಕ ಸ್ವಚ್ಛತಾ ಪ್ರಜ್ಞೆ ಪ್ರತಿಯೊಬ್ಬರಲ್ಲೂ ಮೂಡಬೇಕು. ಆಗಮಾತ್ರ ನಗರ, ಪಟ್ಟಣಗಳು ಸ್ವಚ್ಛ, ಸುಂದರ ನಗರಗಳಾಗಲು ಸಾಧ್ಯವಾಗಲಿದೆ ಎಂದು ಎಂ.ಎಸ್.ಐ.ಎಲ್ ಅಧ್ಯಕ್ಷರು ಹಾಗೂ ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಅವರು ತಿಳಿಸಿದರು.

ನಗರಸಭಾ ವ್ಯಾಪ್ತಿಯ ರಾಮಸಮುದ್ರದ 29 ವಾರ್ಡ್‌ನ ಸುಬೇದಾರ್ ಕಟ್ಟೆ ಬಳಿ ಇಂದು ಸ್ವಚ್ಛ ಸರ್ವೇಕ್ಷಣ್-2024ರ ಅಂಗವಾಗಿ ಜಿಲ್ಲಾಡಳಿತ, ಜಿಲ್ಲಾ ನಗರಾಭಿವೃದ್ಧಿ ಕೋಶ ಹಾಗೂ ನಗರಸಭೆ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ 'ಮೂಲದಲ್ಲಿಯೇ ತ್ಯಾಜ್ಯ ವಿಂಗಡಣೆ ಮಾಡಿಕೊಡಲು ಹಸಿಕಸ, ಒಣಕಸದ ಡಸ್ಟ್ ಬಿನ್ ವಿತರಣಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ನಗರ, ಪಟ್ಟಣಗಳು ಸ್ವಚ್ಛತೆಯಿಂದ ಕೂಡಿರಲು ಅಲ್ಲಿನ ನಾಗರಿಕರಾದ ನಾವೆಲ್ಲರೂ ಸ್ವಚ್ಛತಾ ನಿಯಮಗಳನ್ನು ಪಾಲಿಸಬೇಕು. ಸ್ವಚ್ಛತೆಯ ಅರಿವು ಪ್ರತಿಯೊಬ್ಬರಲ್ಲೂ ಬರಬೇಕು. ಅದರಲ್ಲೂ ಮಹಿಳೆಯರು ಸ್ವಚ್ಛತೆ ಬಗ್ಗೆ ಹೆಚ್ಚು ಜಾಗೃತರಾಗಬೇಕು. ನಮ್ಮ ನೆರೆಜಿಲ್ಲೆ ಮೈಸೂರು ಸ್ವಚ್ಛತೆಗೆ ಹೆಸರು ಮಾಡಿದೆ. ಅದೇ ಮಾದರಿಯಲ್ಲಿ ನಾವು ಸಹ ಸ್ವಚ್ಛತೆಗೆ ಆದ್ಯತೆ ನೀಡಬೇಕು. ಮಹಿಳೆಯರು ನಮ್ಮ ಸುತ್ತಮುತ್ತಲಿನ ಪರಿಸರ ಸ್ವಚ್ಛತೆಗೆ ಮುಂದಾಗಬೇಕು. ಪರಿಸರ ಸ್ವಚ್ಛತೆಯಿಂದ ಸಾಂಕ್ರಾಮಿಕ ರೋಗಗಳ ತಡೆ ಸಾಧ್ಯವಾಗಲಿದೆ. ಬಯಲು ಶೌಚಮುಕ್ತ ನಗರವಾಗಲು ಪ್ರತಿಯೊಬ್ಬರು ಶೌಚಾಲಯ ನಿರ್ಮಿಸಿಕೊಳ್ಳಬೇಕು. ನಗರದ ಸ್ವಚ್ಛತೆ ಕಾಪಾಡುವುದು ನಾಗರಿಕರಾದ ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ಎಂದರು.

ನಗರದ ಅಭಿವೃದ್ಧಿಗಾಗಿ ನಗರಸಭೆಗೆ ಹೆಚ್ಚಿನ ಅನುದಾನ, ಸಂಪನ್ಮೂಲ ಕ್ರೋಢೀಕರಣ ಅವಶ್ಯವಾಗಿದೆ. ಸರ್ಕಾರದಿಂದ ಬಿಡುಗಡೆಯಾಗುವ ಎಸ್.ಎಫ್ .ಸಿ ಅನುದಾನ, 12, 13, 15ನೇ ಹಣಕಾಸು, ಶಾಸಕರು, ಸಂಸದರ ನಿಧಿ ಹಾಗೂ



ಇತರೆ ಯೋಜನೆಗಳ ಅನುದಾನಗಳಿಂದ ನಗರಾಭಿವೃದ್ಧಿ ಸಾಧ್ಯವಾಗುವುದಿಲ್ಲ. ಇದರ ಜೊತೆಗೆ ನಾಗರಿಕರು ಕಡ್ಡಾಯವಾಗಿ ನೀರು ಹಾಗೂ ಮನೆ ಕಂದಾಯ ಪಾವತಿಸುವುದರಿಂದ ನಗರಸಭೆಗೆ ಹೆಚ್ಚಿನ ತೆರಿಗೆ ಸಂಗ್ರಹವಾಗಲಿದೆ. ಇದರಿಂದ ನಗರಸಭಾ ವ್ಯಾಪ್ತಿಯಲ್ಲಿ ಹೆಚ್ಚಿನ ಮೂಲಸೌಲಭ್ಯಗಳನ್ನು ನಗರವಾಸಿಗಳಿಗೆ ನೀಡಲು ಅನುಕೂಲವಾಗಲಿದೆ ಎಂದು ಶಾಸಕರು ಹೇಳಿದರು.

ಕುಡಿಯುವ ನೀರಿಗೆ 109 ಕೋಟಿ ಅನುದಾನ ಬಂದಿತ್ತು. ಪ್ರಸ್ತುತ 89 ಕೋಟಿ ರೂ.ಗಳ ಟೆಂಡರ್ ಅನುಮೋದನೆಯಾಗಿದೆ. 180 ಕೋಟಿ ರೂ. ವೆಚ್ಚದಲ್ಲಿ ಮಾಲಂಗಿಯಿಂದ ಕುಡಿಯುವ ನೀರು ಯೋಜನೆಗೆ ಅನುದಾನ ಬಿಡುಗಡೆ ಮಾಡುವುದಾಗಿ ನಗರಾಭಿವೃದ್ಧಿ ಸಚಿವರು ತಿಳಿಸಿದ್ದಾರೆ. ಸದ್ಯದಲ್ಲಿಯೇ ಕುಡಿಯುವ ನೀರಿನ ಸಮಸ್ಯೆ ಪರಿಹಾರವಾಗಲಿದೆ. ಇನ್ನುಳಿದಂತೆ 38-40 ಕೋಟಿ ರೂ. ವೆಚ್ಚದಲ್ಲಿ ಬಸ್‌ನಿಲ್ದಾಣ ನಿರ್ಮಾಣವಾಗಲಿದೆ. ಇವೆಲ್ಲವೂ ನಗರದ ಅಭಿವೃದ್ಧಿಗೆ ಪೂರಕವಾಗಿವೆ ಎಂದು ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ತಿಳಿಸಿದರು.

ನಗರಸಭಾ ಅಧ್ಯಕ್ಷರಾದ ಎಸ್. ಸುರೇಶ್ ಅವರು ಮಾತನಾಡಿ ಸ್ವಚ್ಛಭಾರತ್ ಅಭಿಯಾನದಡಿ ಮನೆಮನೆ ಕಸ ಸಂಗ್ರಹಣೆಗಾಗಿ ಹಸಿಕಸ, ಒಣಕಸದ ತ್ಯಾಜ್ಯ ವಿಂಗಡಣೆ ಮಾಡಿಕೊಡಲು ಡಸ್ಟ್‌ಬಿನ್ ವಿತರಣಾ ಕಾರ್ಯಕ್ರಮವನ್ನು 29ನೇ ವಾರ್ಡ್‌ನಿಂದ ಹಮ್ಮಿಕೊಳ್ಳಲಾಗಿದ್ದು, ನಗರವಾಸಿಗಳು ಸ್ವಚ್ಛತೆಗೆ ನಗರಸಭೆಯೊಂದಿಗೆ ಸಹಕರಿಸಬೇಕು ಎಂದರು.

ನಗರಸಭಾ ಪೌರಾಯುಕ್ತರಾದ ಎಸ್.ವಿ. ರಾಮದಾಸ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿ ಚಾಮರಾಜನಗರ ನಗರಸಭಾ ವ್ಯಾಪ್ತಿಯ 31 ವಾರ್ಡ್‌ಗಳಿಂದ 20 ಟನ್ ಕಸ ಸಂಗ್ರಹವಾಗುತ್ತಿದ್ದು, ಪ್ರತಿ ಮನೆಮನೆಗಳಲ್ಲಿನ ಮೂಲತ್ಯಾಜ್ಯ ನಿರ್ವಹಣೆಗಾಗಿ ಹಸಿಕಸ ಹಾಗೂ ಒಣಕಸಗಳಾಗಿ ಬೇರ್ಪಡಿಸಿ ಮನೆಬಾಗಿಲಿಗೆ ಬರುವ ನಗರಸಭೆಯ ಕಸಸಂಗ್ರಹಣೆಯ ವಾಹನಕ್ಕೆ ನೀಡಬೇಕು. ಇದಕ್ಕಾಗಿ ಹಸಿರು ಬಣ್ಣದ ಹಸಿಕಸ ಡಬ್ಬಿ ಹಾಗೂ ನೀಲಿ ಬಣ್ಣದ ಒಣಕಸ ಡಬ್ಬವನ್ನು ಇಂದು ಸಾಂಕೇತಿಕವಾಗಿ ವಿತರಿಸಲಾಗುತ್ತಿದೆ. ನಗರದ ಸ್ವಚ್ಛತೆಗೆ ನಾಗರಿಕರು ಕೈಜೋಡಿಸುವಂತೆ ಮನವಿ ಮಾಡಿದರು.

ನಗರಸಭಾ ಉಪಾಧ್ಯಕ್ಷರಾದ ಮಮತ, 29ನೇ ವಾರ್ಡ್ ಸದಸ್ಯರಾದ ಎಂ.ವಿ. ಸುಧಾ ಅವರು ಮೂಲತ್ಯಾಜ್ಯ ನಿರ್ವಹಣೆಗಾಗಿ ಹಸಿಕಸ ಹಾಗೂ ಒಣಕಸಗಳಾಗಿ ಬೇರ್ಪಡಿಸಿ ನೀಡುವುದರ ಉಪಯೋಗಗಳ ಬಗ್ಗೆ ಕಾರ್ಯಕ್ರಮದಲ್ಲಿ ಮಾತನಾಡಿದರು. ಇದೇ ವೇಳೆ ಹಸಿಕಸ ಹಾಗೂ ಒಣಕಸಗಳಾಗಿ ಬೇರ್ಪಡಿಸಿ ನೀಡುವ ಹಸಿರು ಹಾಗೂ ನೀಲಿ ಬಣ್ಣದ ಒಣಕಸ ಡಬ್ಬವನ್ನು ಸಾರ್ವಜನಿಕರಿಗೆ ವಿತರಣೆ ಮಾಡಲಾಯಿತು. ನಗರಸಭೆಯ ಯೋಜನಾಧಿಕಾರಿ ವೆಂಕಟ್‌ನಾಯಕ್, ಸಹಾಯಕ ಕಾರ್ಯಪಾಲಕ ಪರಿಸರ ಅಭಿಯಂತರರಾದ ರೂಪ, ಹಿರಿಯ ಆರೋಗ್ಯ ನಿರೀಕ್ಷಕರಾದ ಮಂಜುನಾಥ್, ಸುಷ್ಮಾ, ನಾರಾಯಣ್, ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ದಾಸಕೂಟದ ಚಕ್ರವರ್ತಿ ಶ್ರೀ ವಿಜಯದಾಸರು

**ಬೆಂಗಳೂರು:** ದಾಸವಾಣಿ ಕರ್ನಾಟಕದ ವತಿಯಿಂದ ಚಾಮರಾಜಪೇಟೆ ಶ್ರೀಪಾದರಾಜ ಮಠದಲ್ಲಿ ವಿಜಯ ದಾಸರ ಆರಾಧನೆಯನ್ನು ಆಯೋಜಿಸಲಾಗಿತ್ತು. ಕಾರ್ಯಕ್ರಮವನ್ನು ಉದ್ಘಾಟಿಸಿದ ಹಿರಿಯ ದಾಸಸಾಹಿತ್ಯ ವಿದ್ವಾಂಸ ಡಾ. ಅರಳುಮಲ್ಲಿಗೆ ಪಾರ್ಥಸಾರಥಿದವರು ಮಾತನಾಡುತ್ತಾ ಪರಿಶುದ್ಧತೆಗೆ ನೈತಿಕತೆಗೆ ಹೆಚ್ಚಿನ ಮಹತ್ವವನ್ನು ದಾಸರು ನೀಡಿದ್ದಾರೆ,ವ್ಯಕ್ತಿತ್ವದ ನಿರ್ಮಿತಿಯಲ್ಲಿ ಮೌಲ್ಯಗಳ ಪಾತ್ರವನ್ನು ಸೂಕ್ಷ್ಮವಾಗಿ ಹಿಡಿದಿಟ್ಟಿದ್ದಾರೆ. ಧರ್ಮ ತತ್ವ ಜ್ಞಾನಗಳು ಆಡಂಬರ ಡಾಂಭಿಕತೆಯ ಮುಸುಕಿನಲ್ಲಿ ಮರೆಯಾಗಿದ್ದವು, ಇವೆರಡಕ್ಕೂ ಅಂಟಿದ ಜಾಡ್ಯವನ್ನು ತೊಳೆದು ತಿಳಿಯಾಗಿಸಿದವರು ವಿಜಯದಾಸರು ಎಂದು ಅಭಿಪ್ರಾಯಪಟ್ಟರು. ನಿವೃತ್ತ ಪ್ರಾಧ್ಯಾಪಕಿ ಡಾ. ಶೀಲಾ ದಾಸ್ ವಿಜಯ ದಾಸರ ಸುಳಾದಿ ಗಳು ಕುರಿತು ಮಾತನಾಡುತ್ತಾ ಮಧ್ಯಕಾಲೀನ ಕರ್ನಾಟಕ ಸಂಸ್ಕೃತಿಯಲ್ಲಿ ದಾಸ ಸಾಹಿತ್ಯಕ್ಕೆ ಮಹತ್ವದ ಸ್ಥಾನವಿದೆ. ಕನ್ನಡದ ಸಮೃದ್ಧ ಪರಂಪರೆಗೆ ದಾಸ ಸಾಹಿತ್ಯ ರೂಪಗೊಳ್ಳಲು ವಿಜಯದಾಸರ ಕೊಡುಗೆ ಅಪಾರವಾದದ್ದು. ವಿಜಯದಾಸರು ಜೀವಿಸಿದ್ದ ಕಾಲದ ಪರಿಸ್ಥಿತಿಯನ್ನು ಅವಲೋಕಿಸಿದರೆ ಭಕ್ತಿ ಮಾರ್ಗ ದಾಸಪಂಥದ ಬೆಲೆ ತಿಳಿದೀತು ಎಂದು ತಿಳಿಸಿದರು. ಅನೇಕ ಮಹನೀಯರಿಗೆ ದಾಸವಾಣಿ ಕರ್ನಾಟಕ ಮಹಾಪೋಷಕರತ್ನ ಪ್ರಶಸ್ತಿ ಮತ್ತು ದಂಪತಿ ಗಾಯನ ಪ್ರಶಸ್ತಿಗಳನ್ನು ವಿಜಯ ದಾಸರ ಗಾಯನ ಸ್ಪರ್ಧೆಯ ಬಹುಮಾನ ವಿಜೇತರಿಗೆ ಬಹುಮಾನ ನೀಡಿ ಗೌರವಿಸಲಾಯಿತು. ಡಾ. ಹ.ರಾ ನಾಗರಾಜ ಆಚಾರ್ಯ , ವಿದುಷಿ ಶ್ರೀಮತಿ ಸ್ರೋತಸ್ವಿನಿ ಅಚ್ಯುತ , ನಿರ್ವಾಹಕರಾದ ಶ್ರೀಮತಿ ಪದ್ಮ ಎಸ್ ಆಚಾರ್ಯ ಮತ್ತು ಸುಬ್ರಹ್ಮಣ್ಯ ಆಚಾರ್ಯ, ಕೃಷ್ಣಮೂರ್ತಿ ಜಿಎಸ್ ಅವರು ಉಪಸ್ಥಿತರಿದ್ದರು. ದಾಸವಾಣಿ ಕರ್ನಾಟಕ ಸಂಸ್ಥಾಪಕ ಜಯರಾಜ್ ಕುಲಕರ್ಣಿ ಸ್ವಾಗತಿಸಿದರು. ಈ ಕಾರ್ಯಕ್ರಮದಲ್ಲಿ ಅನೇಕ ಸಾಂಸ್ಕೃತಿಕ ಕಾರ್ಯಕ್ರಮಗಳಾದ ಕೋಲಾಟ, ಗಾಯನ ನೆರವೇರಿತು. ಮಾನಸ ಕುಲಕರ್ಣಿ ಅವರ ನೇತೃತ್ವದಲ್ಲಿ ಸಮೂಹ ಗಾಯನದಲ್ಲಿ ಶ್ರೀಮತಿ ಗೌರಿ ಕುಲಕರ್ಣಿ, ಶ್ರೀಮತಿ ಪದ್ಮಜಾ ಪುರಾಣಿಕ್, ಶ್ರೀಮತಿ ಶೈಲಜಾ ಆನಂದ್, ಶ್ರೀಮತಿ ಲತಾ ಕುಲಕರ್ಣಿ ಇವರುಗಳು ಸಂಗೀತ ಕಾರ್ಯಕ್ರಮವನ್ನು ನಡೆಸಿಕೊಟ್ಟರು.



## ತೋಟಗಾರಿಕೆ ಇಲಾಖೆ : ಪ್ಲಾಸ್ಟಿಕ್ ಕ್ರೇಟ್‌ಗಳಿಗೆ ಸಹಾಯಧನ

**ಚಾಮರಾಜನಗರ:** ತೋಟಗಾರಿಕೆ ಇಲಾಖೆ ವತಿಯಿಂದ 2024-25ನೇ ಸಾಲಿನ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ ಹಾಗೂ ಸಮಗ್ರ ತೋಟಗಾರಿಕೆ ಅಭಿವೃದ್ಧಿ ಯೋಜನೆಯಡಿ ಇಲಾಖಾ ಅನುಮೋದಿತ ಏಜೆನ್ಸಿಗಳಿಂದ ಖರೀದಿಸಿದ ಪ್ಲಾಸ್ಟಿಕ್ ಕ್ರೇಟ್ಸ್‌ಗಳಿಗೆ ಶೇ. 50ರಂತೆ ಸಹಾಯಧನವನ್ನು ನೀಡಲಾಗುವುದು. ತೋಟಗಾರಿಗೆ ಬೆಳೆಗಳಿಗೆ ಉಂಟಾಗುವ ಕೊಯ್ಲೋತ್ತರ ನಷ್ಟವನ್ನು ತಡೆಯಲು ಹಾಗೂ ಸಮರ್ಪಕ ಕೊಯ್ಲೋತ್ತರ ನಿರ್ವಹಣೆಗೆ ಸಂಬಂಧಿಸಿದ ಚಟುವಟಿಕೆಗಳಲ್ಲಿ ಪ್ಲಾಸ್ಟಿಕ್ ಕ್ರೇಟ್ಸ್ ಬಳಕೆ ಪ್ರಮುಖ ಪಾತ್ರ ನಿರ್ವಹಿಸುತ್ತದೆ. ಆಸಕ್ತ ರೈತರು ಆಯಾ ತಾಲೂಕಿನ ತೋಟಗಾರಿಕೆ ಇಲಾಖೆಗೆ ಇತ್ತೀಚಿನ ಭಾವಚಿತ್ರ, ಪಹಣಿ, ಬೆಳೆ ದೃಢೀಕರಣ, ಆಧಾರ್ ಕಾರ್ಡ್, ಬ್ಯಾಂಕ್ ಪಾಸ್ ಪುಸ್ತಕದ ಜೆರಾಕ್ಸ್ ಪ್ರತಿ, ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡದ ರೈತರಾದಲ್ಲಿ ಆರ್.ಡಿ ಸಂಖ್ಯೆಯುಳ್ಳ ಜಾತಿ ಪ್ರಮಾಣ ಪತ್ರ, ಇನ್ನಿತರ ದಾಖಲಾತಿಗಳೊಂದಿಗೆ ಭೇಟಿ ನೀಡಿ ಮಾಹಿತಿ ಪಡೆಯಬಹುದು ಎಂದು ತೋಟಗಾರಿಕೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪುರುಷ ಕಾಣೆ : ಸುಳಿವಿಗೆ ಸಹಕರಿಸಲು ಮನವಿ

**ಚಾಮರಾಜನಗರ:** ನಗರದ ಸ್ವೀಪರ್ ಕಾಲೋನಿ ನಿವಾಸಿ ಸುಂದರ್ ಎಂಬುವವರು ಕಾಣೆಯಾಗಿದ್ದು ಇವರ ಪತ್ತೆಗೆ ಸಹಕರಿಸುವಂತೆ ಕೋರಲಾಗಿದೆ. 46 ವರ್ಷದ ಸುಂದರ್ 5.8 ಅಡಿ ಎತ್ತರ, ಎಣ್ಣೆಗೆಂಪು ಮೈ ಬಣ್ಣ, ಕೋಲು ಮುಖ, ಸಾಧಾರಣ ಮೈಕಟ್ಟು ಹೊಂದಿದ್ದು, ಒಂದು ಕೈಯಲ್ಲಿ ದಾಸ ಮತ್ತೊಂದು ಕೈಯಲ್ಲಿ ನಾಗ ಎಂಬ ಹಸಿರು ಹಚ್ಚೆ ಇರುತ್ತದೆ. ಬಲ ಕೈಯಲ್ಲಿ ಕಬ್ಬಿಣದ ಬಳೆ ಧರಿಸಿದ್ದು, ತಲೆಯಲ್ಲಿ ಹಳೇ ಗಾಯದ ಗುರುತು ಇರುತ್ತದೆ. ಕನ್ನಡ, ತೆಲುಗು, ತಮಿಳು ಭಾಷೆ ಮಾತನಾಡುತ್ತಾರೆ. ಮನೆಯಿಂದ ಹೋಗುವಾಗ ನೇರಳೆ ಬಣ್ಣದ ಶರ್ಟ್, ಗ್ರೇ ಕಲರ್ ಪ್ಯಾಂಟ್ ಧರಿಸಿದ್ದರು. ಇವರ ಸುಳಿವು ದೊರೆತಲ್ಲಿ ಚಾಮರಾಜನಗರ ಪಟ್ಟಣ ಪೊಲೀಸ್ ಠಾಣೆ ದೂ.ಸಂ 08226-222047, 08226-222090, 08226-226121 ಅಥವಾ ಪೊಲೀಸ್ ನಿಯಂತ್ರಣ ಕೊಠಡಿಗೆ ತಿಳಿಸುವಂತೆ ಪಟ್ಟಣ ಪೊಲೀಸ್ ಠಾಣೆಯ ಪೊಲೀಸ್ ಇನ್ಸ್‌ಪೆಕ್ಟರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 30ರಂದು ಗುಂಡ್ಲುಪೇಟೆ ತಾಲೂಕು ಕೆಡಿಪಿ ಸಭೆ

**ಚಾಮರಾಜನಗರ:** ಗುಂಡ್ಲುಪೇಟೆ ತಾಲೂಕಿನ ಕರ್ನಾಟಕ ಅಭಿವೃದ್ಧಿ ತ್ರೈಮಾಸಿಕ (ಕೆಡಿಪಿ) ಸಭೆಯು ಶಾಸಕರಾದ ಹೆಚ್. ಎಂ ಗಣೇಶ್ ಪ್ರಸಾದ್ ಅವರ ಅಧ್ಯಕ್ಷತೆಯಲ್ಲಿ ನವೆಂಬರ್ 30ರಂದು ಬೆಳಿಗ್ಗೆ 11 ಗಂಟೆಗೆ ಗುಂಡ್ಲುಪೇಟೆ ತಾಲೂಕು ಕಚೇರಿ ಕೆಡಿಪಿ ಸಭಾಂಗಣದಲ್ಲಿ ನಡೆಯಲಿದೆ ಎಂದು ಗುಂಡ್ಲುಪೇಟೆ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಂಜೆ ಟಿಪ್ಸ್

## ಎಕ್ಸ್.ಎ.ಟಿ. 2025 ನೋಂದಣಿ ಅಂತಿಮ ದಿನಾಂಕ ನಿಗದಿ

ಮುಂಚೂಣಿಯ ರಾಷ್ಟ್ರಮಟ್ಟದ ಎಂಬಿಎ ಪ್ರವೇಶ ಪರೀಕ್ಷೆ ದಿ ಕ್ಸೇವಿಯರ್ ಆಪ್ಟಿಟ್ಯೂಡ್ ಟೆಸ್ಟ್ ತನ್ನ ಎಕ್ಸ್.ಎ.ಟಿ. 2025ರ ನೋಂದಣಿಯ ಅಂತಿಮ ದಿನಾಂಕ ಪ್ರಕಟಿಸಿದೆ. ಸಂಭವನೀಯ ವಿದ್ಯಾರ್ಥಿಗಳಿಗೆ ನವೆಂಬರ್ 30, 2024ರವರೆಗೆ ಅವರ ನೋಂದಣಿಯನ್ನು ಪೂರ್ಣಗೊಳಿಸುವ ಅವಕಾಶವಿದ್ದು ಇದು ಅವರಿಗೆ ಬಿಸಿನೆಸ್ ಮ್ಯಾನೇಜ್ಮೆಂಟ್ ನಲ್ಲಿ ವೃತ್ತಿ ಪಡೆಯಲು ಪ್ರಮುಖ ಹೆಜ್ಜೆಯಾಗಿದೆ. ಈ ಪರೀಕ್ಷೆಯು ಜನವರಿ 5, 2025ರಂದು ಮಧ್ಯಾಹ್ನ 2.00ರಿಂದ ಸಂಜೆ 5.30ರವರೆಗೆ ನಡೆಯಲಿದೆ. 75 ವರ್ಷಗಳ ಪರಂಪರೆಯನ್ನು ಬಿಂಬಿಸುವ ಎಕ್ಸ್.ಎ.ಟಿ.ಯು ಭಾರತದಾದ್ಯಂತ ಮ್ಯಾನೇಜ್ಮೆಂಟ್ ಆಕಾಂಕ್ಷಿಗಳಿಗೆ ಪ್ರಮುಖ ಪರೀಕ್ಷೆಯಾಗಿ ಹೊರಹೊಮ್ಮಿದೆ. ನೋಂದಣಿ ಪ್ರಕ್ರಿಯೆಯು ಜುಲೈ 15, 2024ರಂದು ಪ್ರಾರಂಭವಾಗಿದ್ದು ಈಗಾಗಲೇ ಅಪಾರ ಪ್ರತಿಕ್ರಿಯೆ ಪಡೆದಿರುವುದು ಎಂಬಿಎ/ಪಿಜಿಡಿಎಂ ಆಕಾಂಕ್ಷಿಗಳಲ್ಲಿ ಈ ಪರೀಕ್ಷೆಗೆ ವೃದ್ಧಿಸುತ್ತಿರುವ ಪ್ರಾಮುಖ್ಯತೆಯನ್ನು ತೋರುತ್ತದೆ. ಎಕ್ಸ್.ಎ.ಟಿ.ಭಾರತದಲ್ಲಿ 250+ ಬಿಸಿನೆಸ್ ಸ್ಕೂಲ್ ಗಳಿಗೆ ಪ್ರವೇಶ ಪಡೆಯಲು ಹೆಬ್ಬಾಗಿಲಾಗಿದೆ. 'ಎಕ್ಸ್.ಎ.ಟಿ.75 ವರ್ಷಗಳಿಗೂ ಮೀರಿ ಮ್ಯಾನೇಜ್ಮೆಂಟ್ ಆಕಾಂಕ್ಷಿಗಳಿಗೆ ಶ್ರೇಷ್ಠತೆಯ ಹೆಬ್ಬಾಗಿಲಾಗಿದೆ ಮತ್ತು ಈ ವರ್ಷವೂ ಅದು ಭಿನ್ನವಾಗಿಲ್ಲ. ನವೆಂಬರ್ 30, 2024ರಂದು ನೋಂದಣಿಯ ಅಂತಿಮ ದಿನಾಂಕ ಹತ್ತಿರ ಬರುತ್ತಿರುವುದರಿಂದ ನಾವು ಎಲ್ಲ ಆಕಾಂಕ್ಷಿ ಅಭ್ಯರ್ಥಿಗಳಿಗೆ ಬಿಸಿನೆಸ್ ಮ್ಯಾನೇಜ್ಮೆಂಟ್ ನಲ್ಲಿ ಅವರ ವೃತ್ತಿಯ ಕನಸು ನನಸಾಗಿಸಿಕೊಳ್ಳಲು ಪ್ರಮುಖ ಹೆಜ್ಜೆ ಇರಿಸಲು ಉತ್ತೇಜಿಸುತ್ತೇವೆ. ಎಕ್ಸ್.ಎ.ಟಿ.ಯ ಸದೃಢ ಮೌಲ್ಯಮಾಪನ ವ್ಯವಸ್ಥೆಯು ದೇಶಾದ್ಯಂತ ವಿಸ್ತಾರ ಪ್ರತಿಭೆಗಳಿಗೆ ಅವಕಾಶ ಕಲ್ಪಿಸುತ್ತದೆ ಮತ್ತು ಪ್ರತಿ ಅಭ್ಯರ್ಥಿಗೂ ತಡೆರಹಿತ ಅನುಭವ ನೀಡಲು ಬದ್ಧರಾಗಿದ್ದೇವೆ'' ಎಂದು ಎಕ್ಸ್.ಎ.ಟಿ.2025ರ ಸಂಯೋಜಕರಾದ ಡಾ.ರಾಹುಲ್ ಶುಕ್ಲಾ ಹೇಳಿದರು. 100+ ಪರೀಕ್ಷಾ ನಗರಗಳಿದ್ದು ಈ ವರ್ಷ 34 ಹೊಸ ನಗರಗಳನ್ನು ಸೇರ್ಪಡೆ ಮಾಡಿರುವ ಎಕ್ಸ್.ಎ.ಟಿ.ಯು ಭಾರತದಾದ್ಯಂತ ಅಭ್ಯರ್ಥಿಗಳಿಗೆ ಲಭ್ಯತೆ ದೃಢೀಕರಿಸುತ್ತದೆ. ಪರೀಕ್ಷೆಯ ತಾಣಗಳಲ್ಲಿ ಪ್ರಮುಖ ನಗರಗಳೂ ಒಳಗೊಂಡಿದ್ದು ಎಲ್ಲ ಪ್ರದೇಶಗಳ ಅಭ್ಯರ್ಥಿಗಳೂ ಭಾಗವಹಿಸಬಹುದು. ಎಕ್ಸ್.ಎ.ಟಿ. ಪರೀಕ್ಷೆಯನ್ನು ಲಾಜಿಕಲ್ ರೀಸನಿಂಗ್, ಭಾಷಾ ಸಾಮರ್ಥ್ಯ ಮತ್ತು ನಿರ್ಧಾರ ಕೈಗೊಳ್ಳುವ ಸಾಮರ್ಥ್ಯ ಆಧರಿಸಿ ಮೌಲ್ಯಮಾಪನ ಮಾಡುವಂತೆ ವಿನ್ಯಾಸಗೊಳಿಸಲಾಗಿದೆ. ಫ್ರೇಮ್ ವರ್ಕ್ ಎಕ್ಸ್.ಎ.ಟಿ.ಯ ಸ್ಥಾನವನ್ನು ಭಾರತದ ಅತ್ಯಂತ ಪ್ರಮುಖ ಎಂಬಿಎ/ಪಿಜಿಡಿಎಂ ಪ್ರವೇಶ ಪರೀಕ್ಷೆಗಳಲ್ಲಿ ಒಂದಾಗಿಸಿದ್ದು ಮ್ಯಾನೇಜ್ಮೆಂಟ್ ಶಿಕ್ಷಣಕ್ಕೆ ಅಭ್ಯರ್ಥಿಯ ಆಪ್ಟಿಟ್ಯೂಡ್ ನ ಸಮಗ್ರ ಮೌಲ್ಯಮಾಪನ ನೀಡುತ್ತದೆ.

## ಬ್ರೊಕೊಲಿ ಪನೀರ್

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಬ್ರೊಕೊಲಿ ಪೀಸ್ – ಒಂದು ಕಪ್, ಪನೀರ್ ಪೀಸ್ – ಅರ್ಧ ಕಪ್, ಬೆಣ್ಣೆ ಸ್ವಲ್ಪ, ಎಳ್ಳು ಬೀಜಗಳು – ಟೀಸ್ಪೂನ್, ಬೆಳ್ಳುಳ್ಳಿ ಪೇಸ್ಟ್ – ಟೀಸ್ಪೂನ್, ಉಪ್ಪು – ರುಚಿಗೆ ತಕ್ಕಷ್ಟು, ಕಾಳುಮೆಣಸಿನ ಪುಡಿ – ಅರ್ಧ ಚಮಚ, ಈರುಳ್ಳಿ ಒಂದು, ಶುಂಠಿ ಪುಡಿ – ಒಂದು ಚಮಚ

### ಮಾಡುವ ವಿಧಾನ

ಮೊದಲು ಒಲೆಯ ಮೇಲೆ ಪಾತ್ರೆಯನ್ನು ಇಟ್ಟು ನೀರು ಸುರಿಯಿರಿ. ಇದಕ್ಕೆ ಬ್ರೊಕೊಲಿ ಪೀಸ್ಗಳನ್ನು ಮತ್ತು ಸ್ವಲ್ಪ ಉಪ್ಪು ಸೇರಿಸಿ ಮಿಶ್ರಣ ಮಾಡಿ. ನಂತರ ಮುಚ್ಚಿ ಮತ್ತು 5 ನಿಮಿಷ ಬೇಯಿಸಿ. ನಂತರ ಬ್ರೊಕೊಲಿ ಪೀಸ್ಗಳನ್ನು ಒಂದು ಪ್ಲೇಟ್ಗೆ ಹಾಕಿ.ಈಗ ಬಾಣಲೆಯನ್ನು ಒಲೆಯ ಮೇಲೆ ಇಟ್ಟು ಸ್ವಲ್ಪ ಬೆಣ್ಣೆಯನ್ನು ಹಾಕಿ ಬಿಸಿ ಮಾಡಿ. ನಂತರ ಪನೀರ್ ಪೀಸ್ಗಳನ್ನು ಹಾಕಿ ಸ್ಟವ್ ಅನ್ನು ಮಧ್ಯಮ ಉರಿಯಲ್ಲಿ ಇಡಿ ಮತ್ತು ಫ್ರೈ ಮಾಡಿ.ನಂತರ ಒಂದು ತಟ್ಟೆಯಲ್ಲಿ ಪನೀರ್ ಪೀಸ್ಗಳನ್ನು ತೆಗೆದುಕೊಳ್ಳಿ.ಈಗ ಅದೇ ಬಾಣಲೆಯಲ್ಲಿ ಸ್ವಲ್ಪ ಬೆಣ್ಣೆಯನ್ನು ಹಾಕಿ ಬಿಸಿ ಮಾಡಿ. ನಂತರ ಈರುಳ್ಳಿ ಚೂರುಗಳು, ತುರಿದ ಬೆಳ್ಳುಳ್ಳಿ ಮತ್ತು ತುರಿದ ಶುಂಠಿ ಹಾಕಿ ಫ್ರೈ ಮಾಡಿ.ಈರುಳ್ಳಿ ಗೋಲ್ಡನ್ ಬಣ್ಣ ಬರುವವರೆಗೆ ಹುರಿದುಕೊಳ್ಳಿ. ನಂತರ, ಬೇಯಿಸಿದ ಬ್ರೊಕೊಲಿ ಮತ್ತು ಪನೀರ್ ಪೀಸ್ಗಳನ್ನು ಸೇರಿಸಿ ಹಾಗೂ ಮಿಶ್ರಣ ಮಾಡಿ. ಜೊತೆಗೆ ಎಳ್ಳು, ಕಾಳುಮೆಣಸಿನ ಪುಡಿ ಹಾಗೂ ಉಪ್ಪು ಸೇರಿಸಿ ಮಿಶ್ರಣ ಮಾಡಿ.ಹೀಗೆ ಮಾಡಿದರೆ ತೂಕ ಇಳಿಸುವ ಬ್ರೊಕೋಲಿ ಬ್ರೇಕ್ ಫಾಸ್ಟ್ ರೆಡಿಯಾಗುತ್ತದೆ. ನೀವು ಬಯಸಿದರೆ, ನಿಮಗೆ ಇಷ್ಟವಾದರೆ ಮನೆಯಲ್ಲಿ ಟ್ರೈ ಮಾಡಿ ನೋಡಿ.

## ಎಷ್ಟು ಗಂಟೆ ನಿದ್ದೆ ಮಾಡಬೇಕು?

### ಹೆಲ್ತ್ ಟಿಪ್ಸ್

ದೈಹಿಕ ಮತ್ತು ಮಾನಸಿಕ ಆರೋಗ್ಯ ಕಾಪಾಡಿಕೊಳ್ಳಲು ಪ್ರತಿಯೊಬ್ಬ ವ್ಯಕ್ತಿಗೂ ಸಾಕಷ್ಟು ನಿದ್ರೆ ಅತ್ಯವಶ್ಯಕ. ಉತ್ತಮ ನಿದ್ರೆಯು ದಿನವಿಡೀ ನೀವು ಚೈತನ್ಯದಿಂದಿರುವಂತೆ ಮಾಡುತ್ತದೆ. ಆರೋಗ್ಯಕರ ನಿದ್ರೆಯು ನಿಮ್ಮ ಮನಸ್ಥಿತಿಯನ್ನು ಸುಧಾರಿಸುತ್ತದೆ. ಇದರಿಂದ ನೀವು ಉತ್ತಮ ಭಾವನೆಯ ಹೊಂದುವಿರಿ. ಒಂದು ವೇಳೆ ನಿಮಗೆ ಸಮರ್ಪಕ ನಿದ್ರೆಯಾಗದಿದ್ದಲ್ಲಿ ಅದರ ಪರಿಣಾಮ ದಿನವಿಡೀ ಇರುತ್ತದೆ. ಯಾವುದೇ ಕೆಲಸದಲ್ಲಿಯೂ ನಿಮಗೆ ಉತ್ಸಾಹ ಇರುವುದಿಲ್ಲ ಹಾಗೂ ದೇಹ ದಣಿದಿರುವಂತೆ ಭಾಸವಾಗುತ್ತದೆ.

ನಿದ್ರೆಯ ವೇಳೆ ನಮ್ಮ ದೇಹದಲ್ಲಿ ಉತ್ಪತ್ತಿಯಾಗುವ ಕೆಲವು ಹಾರ್ಮೋನುಗಳು ಜೀವಕೋಶಗಳನ್ನು ಸರಿಪಡಿಸುವ ಮೂಲಕ ದೇಹದ ಶಕ್ತಿಯ ಬಳಕೆ ನಿಯಂತ್ರಿಸಲು ಸಹಾಯ ಮಾಡುತ್ತದೆ. ಆದರೆ ಅನೇಕರು ತಮ್ಮ ಬಿಡುವಿಲ್ಲದ ಜೀವನಶೈಲಿ ಅಥವಾ ಅಭ್ಯಾಸಗಳಿಂದ ಸಾಕಷ್ಟು ನಿದ್ರೆ ಮಾಡುವುದಿಲ್ಲ. ಇಂತವರಿಗೆ ಕಾಲ ಕ್ರಮೇಣ ಹೃದಯರಕ್ತನಾಳದ ಕಾಯಿಲೆ, ಅಧಿಕ ರಕ್ತದೊತ್ತಡ, ಮಧುಮೇಹ, ಬೊಜ್ಜು, ಖಿನ್ನತೆ, ಹೃದಯಾಘಾತ ಹಾಗೂ ಪಾರ್ಶ್ವವಾಯುವಿನ ಅಪಾಯವನ್ನು ಹೊಂದಿರುತ್ತಾರೆ. ಆರೋಗ್ಯ ತಜ್ಞರ ಪ್ರಕಾರ, ರಾತ್ರಿ 6 ಗಂಟೆಗಳಿಗಿಂತ ಕಡಿಮೆ ನಿದ್ರೆ ಮಾಡುವ ಜನರು ಮಧುಮೇಹಕ್ಕೆ ತುತ್ತಾಗುವ ಸಾಧ್ಯತೆ ಹೆಚ್ಚಿರುತ್ತದೆ. ಸರಿಯಾಗಿ ನಿದ್ದೆ ಮಾಡದಿರುವುದುರಿಂದ ಎದುರಾಗುವ ಆರೋಗ್ಯದ ಅಪಾಯಗಳನ್ನು ತಿಳಿದ ನಂತರ, ನಿದ್ರೆಯ ವಿಚಾರದಲ್ಲಿ ಎಚ್ಚರಿಕೆ ವಹಿಸುವುದು ಅಗತ್ಯ. ಹಾಗಾದ್ರೆ, ಎಷ್ಟು ಗಂಟೆ ನಿದ್ರೆ ಮಾಡಬೇಕೆಂಬ ಪ್ರಶ್ನೆ ಮೂಡುತ್ತದೆ. ನಿದ್ರೆಯ ಅವಧಿ ಆಯಾ ವಯಸ್ಸಿಗೆ ಅನುಗುಣವಾಗಿರುತ್ತದೆ. ನ್ಯಾಷನಲ್ ಸ್ಲೀಪ್ ಫೌಂಡೇಶನ್(ಓಖಈ) ಅಧ್ಯಯನದ ಪ್ರಕಾರ ವಯಸ್ಸಿನ ಆಧಾರದ ಮೇಲೆ ನಿದ್ರೆ ಅವಧಿ ಅವಲಂಬಿತವಾಗಿರುತ್ತದೆ. ಈ ಕುರಿತ ಸಂಪೂರ್ಣ ಮಾಹಿತಿ ಇಲ್ಲಿದೆ...

**0-3 ತಿಂಗಳು:** ನಿದ್ರೆಯ ಸಮಯ 14-17 ಗಂಟೆಗಳಿರಬೇಕು. 9 ಗಂಟೆಗಿಂತ ಕಡಿಮೆಯಾಗಬಾರದು 19 ಗಂಟೆಗಿಂತ ಹೆಚ್ಚಾಗಬಾರದು.

**4-11 ತಿಂಗಳು:** 12-15 ಗಂಟೆಗಳ ನಿದ್ರೆ ಅವಶ್ಯಕ. 10 ಗಂಟೆಗಿಂತ



ಕಡಿಮೆ ಅಥವಾ 18 ಗಂಟೆಗಿಂತ ಹೆಚ್ಚು ನಿದ್ರೆ ಮಾಡಬಾರದು.

**1-2 ವರ್ಷ:** 11-14 ಗಂಟೆ ನಿದ್ರೆ ಮುಖ್ಯ. 9 ಗಂಟೆಗಿಂತ ಕಡಿಮೆ ಅಥವಾ 16 ಗಂಟೆಗಿಂತ ಹೆಚ್ಚು ನಿದ್ರೆ ಮಾಡಬಾರದು.

**3-5 ವರ್ಷ:** ಈ ವಯಸ್ಸಿನವರಿಗೆ 10-13 ಗಂಟೆಗಳ ನಿದ್ರೆ ಕಡ್ಡಾಯ. 8 ಗಂಟೆಗಿಂತ ಕಡಿಮೆ ಅಥವಾ 14 ಗಂಟೆಗಿಂತ ಹೆಚ್ಚು ನಿದ್ರೆ ಮಾಡುವಂತಿಲ್ಲ.

**6-13 ವರ್ಷ:** ನಿದ್ರೆಯ ಸಮಯ 9-11 ಗಂಟೆ ಇರಬೇಕು. 7 ಗಂಟೆಗಿಂತ ಕಡಿಮೆ ಅಥವಾ 12 ಗಂಟೆಗಿಂತ ಹೆಚ್ಚಿರಬಾರದು.

**14-17 ವರ್ಷ:** 8-10 ಗಂಟೆ ನಿದ್ರೆ ಅತ್ಯವಶ್ಯಕ. 7 ಗಂಟೆಗಿಂತ ಕಡಿಮೆ ಅಥವಾ 11 ಗಂಟೆಗಿಂತ ಹೆಚ್ಚಿರಬಾರದು.

**18-25 ವರ್ಷ:** ಈ ವಯಸ್ಸಿನವರಿಗೆ 7-9 ಗಂಟೆ ನಿದ್ರೆ ಅವಶ್ಯಕ. 6 ಗಂಟೆಗಿಂತ ಕಡಿಮೆ ಅಥವಾ 11 ಗಂಟೆಗಿಂತ ಹೆಚ್ಚಿನ ಸಮಯ ಮಲಗಬಾರದು.

**26-64 ವರ್ಷ:** ವಯಸ್ಸಿನವರಿಗೆ 7-9 ಗಂಟೆ ನಿದ್ರೆ ಬೇಕಾಗುತ್ತದೆ. 6 ಗಂಟೆಗಿಂತ ಕಡಿಮೆ, 10 ಗಂಟೆಗಿಂತ ಹೆಚ್ಚು ನಿದ್ರಿಸಬಾರದು.

**65+:** ಈ ವಯೋಮಾನದವರಿಗೆ 7-8 ಗಂಟೆ ನಿದ್ರೆ ಅತ್ಯವಶ್ಯಕ. 5 ಗಂಟೆಗಿಂತ ಕಡಿಮೆ ಮತ್ತು 9 ಗಂಟೆಗಿಂತ ಹೆಚ್ಚು ನಿದ್ರೆ ಮಾಡಬಾರದು.

## ನೇಲ್ ಪೇಂಟ್ ಬಳಕೆ ಎಷ್ಟು ಆರೋಗ್ಯಕರ?

### ಬ್ಯೂಟಿ ಟಿಪ್ಸ್



ನೀವು ಹಚ್ಚುವ ನೇಲ್ ಪೇಂಟ್ ಉತ್ಪನ್ನವು ಟಾಕ್ಸಿನ್ ಮುಕ್ತವಾಗಿದೆಯೇ ಎಂಬುದನ್ನು ಪರೀಕ್ಷಿಸಿ. ಹೀಗೆ ಟಾಕ್ಸಿನ್ ಮುಕ್ತ ಎಂದು ಹೇಳಿಕೊಳ್ಳುವ ಅನೇಕ ಉಗುರು ಬಣ್ಣಗಳು ಮಾರುಕಟ್ಟೆಯಲ್ಲಿ ಕಾಣಿಸುತ್ತವೆ. ಇಂತಹ ನೇಲ್ ಪೇಂಟ್ ಬಳಕೆ ಆರೋಗ್ಯಕರವೇ ಅಥವಾ ಅನಾರೋಗ್ಯಕರವೇ ಎಂದು ಇಲ್ಲಿ ತಿಳಿಯಿರಿ. ವಿವಿಧ ರೀತಿಯಲ್ಲಿ ಉಗುರುಗಳ ಮೇಲೆ ಉಗುರು ಬಣ್ಣ ಬಳಕೆ ಮಾಡುವುದನ್ನು ನೀವು ಕಾಣಬಹುದು. ಸೌಂದರ್ಯವರ್ಧಕಗಳ ವಿಷಯಕ್ಕೆ ಬಂದಾಗ, ವಿಷಕಾರಿಯಲ್ಲದ ಪೇಂಟ್ ಬಳಸಬೇಕು ಎಂಬುದನ್ನು ಮೊದಲು ತಿಳಿಯಿರಿ.ನೇಲ್ ಪಾಲಿಶ್ ಬ್ರ್ಯಾಂಡ್ಗಳು ಸಾಮಾನ್ಯವಾಗಿ ಫೈವ್ ಫ್ರೀಸ್ ಎಂಬ ಪದ ಬಳಸುತ್ತವೆ. ಐದು ಪದಾರ್ಥ ಮುಕ್ತ ನಿರ್ದಿಷ್ಟ ಪದಾರ್ಥಹೊಂದಿರದ ನೇಲ್ ಪಾಲಿಶ್ ಎಂದು ಅರ್ಥೈಸುತ್ತದೆ. ಫಾರ್ಮಾಲ್ಡಿಹೈಡ್, ಟೊಲುಯೆನ್, ಡೈಬ್ಯುಟೈಲ್ ಥಾಲೇಟ್, ಫಾರ್ಮಾಲ್ಡಿಹೈಡ್ ರೆಸಿನ್ಗಳು ಮತ್ತು ಕೆಂಪ್ಪರ್ ಅಥವಾ ಕರ್ಪೂರ. ಈ ಐದು ಅಂಶಗಳು ಇಲ್ಲದಿರುವ ನೇಲ್ ಪಾಲಿಶ್ ವಿಷಕಾರಿಯಲ್ಲ ಎಂದು ಹೇಳಲಾಗಿದೆ.ನೇಲ್ ಪಾಲಿಷ್ ಅಥವಾ ನೇಲ್ ಪೇಂಟ್ ಅನ್ನು ನೇಲ್ ಎನಾಮೆಲ್ ಅಥವಾ ನೇಲ್ ವಾರ್ನಿಷ್ ಎಂದೂ ಕರೆಯುತ್ತಾರೆ. ಇದು ದ್ರವ ಪದಾರ್ಥ. ಇದು ಮುಖ್ಯವಾಗಿ ಬೆರಳು, ಉಗುರು ಮತ್ತು ಕಾಲ್ಬೆರಳ ಉಗುರುಗಳ ಉಗುರು ಫಲಕದ ಮೇಲ್ಮೈಗೆ ಅನ್ವಯಿಸುತ್ತದೆ.

ಇದು ನೀರಿನ ನಿರೋಧಕ ಲೇಪನ. ಇದು ಸೌಂದರ್ಯವರ್ಧಕ ಬಳಕೆ ಬಗ್ಗೆ ಹೇಳುತ್ತದೆ. ಉಗುರು ಬಣ್ಣವು ಸಂತಾನೋತ್ಪತ್ತಿ ಅಂಗದಲ್ಲಿ ಸಮಸ್ಯೆ ಉಂಟು ಮಾಡಬಹುದು ಎಂದು ಹೇಳಲಾಗುತ್ತದೆ. ಇದರಲ್ಲಿ ಫಾರ್ಮಾಲ್ಡಿಹೈಡ್ ಅನ್ನು ಸಂರಕ್ಷಕವಾಗಿ ಬಳಸುತ್ತಾರೆ. ಇದು ಅಲರ್ಜಿಯಿಂದ ಉಂಟಾಗುವ ಉರಿಯೂತಕ್ಕೆ ಕಾರಣವಾಗುತ್ತದೆ. ಫಾರ್ಮಾಲ್ಡಿಹೈಡ್ ರಾಳ, ಡೈಬ್ಯುಟೈಲ್ ಥಾಲೇಟ್ ಮತ್ತು ಟೊಲ್ಯೂನ್ ಸಹ ಅಲರ್ಜಿಯ ಚರ್ಮದ ಕಾಯಿಲೆ ಉಂಟು ಮಾಡುತ್ತದೆ. ಕರ್ಪೂರದ ಎಣ್ಣೆ ಬಳಕೆ ಆಯುರ್ವೇದ ಮತ್ತು ಇತರ ಸಾಂಪ್ರದಾಯಿಕ ಔಷಧದಲ್ಲಿ ಬಳಸುತ್ತಾರೆ.

## ಒಟಿಟಿಗೆ ಬರುತ್ತಾ ನಾಗಚೈತನ್ಯ-ಶೋಭಿತಾ ಮದುವೆ ಕಾರ್ಯಕ್ರಮ?



ಟಾಲಿವುಡ್ ಸೂಪರ್ ಸ್ಟಾರ್ ನಟ ನಾಗಾರ್ಜುನ ಮಗ ನಾಗ ಚೈತನ್ಯ 2ನೇ ಮದುವೆಗೆ ರೆಡಿಯಾಗಿದ್ದಾರೆ. ಪ್ರೀತಿಸಿ ಮದುವೆಯಾದ ಸಮಂತಾಗೆ ವಿಚ್ಛೇದನ ನೀಡಿದ ಬಳಿಕ ಸೋಭಿತಾ ಜೊತೆ ಏಳು ಹೆಜ್ಜೆ ಇಡಲು ನಾಗ ಚೈತನ್ಯ ರೆಡಿ ಆಗಿದ್ದಾರೆ. ನಾಗ ಚೈತನ್ಯ ಮತ್ತು ಶೋಭಿತಾ ಮದುವೆ ನೋಡಲು ಅಭಿಮಾನಿಗಳು ಕಾತರದಿಂದ ಕಾಯುತ್ತಿದ್ದಾರೆ. ಇದೀಗ ಮದುವೆಗೆ ಸಂಬಂಧಿಸಿದ ಸುದ್ದಿಯೊಂದು ವೈರಲ್ ಆಗಿದೆ.

ನಾಗ ಚೈತನ್ಯ ಹಾಗೂ ಮಾಡೆಲ್, ನಟಿ ಶೋಭಿತಾ ಧೂಳಿಪಾಲ ಕೆಲ ವರ್ಷಗಳಿಂದ ಸೀಕ್ರೆಟ್ ಆಗಿ ಡೇಟಿಂಗ್ ಮಾಡ್ತಿದ್ರು. ಕೆಲ ತಿಂಗಳ ಹಿಂದೆ ನಾಗ ಚೈತನ್ಯ ಮತ್ತು ಶೋಭಿತಾ ಧೂಳಿಪಾಲ ಅವರು ಆಗಸ್ಟ್ 8 ರಂದು ಹೈದರಾಬಾದ್ ನಲ್ಲಿ ಸದ್ದಿಲ್ಲದೆ ನಿಶ್ಚಿತಾರ್ಥ ಮಾಡಿಕೊಂಡಿದ್ದರು. ಈ ನಿಶ್ಚಿತಾರ್ಥದ ಫೋಟೋಗಳನ್ನು ನಾಗಾರ್ಜುನ ಸೋಶಿಯಲ್ ಮೀಡಿಯಾದಲ್ಲಿ ಶೇರ್ ಮಾಡಿದ್ರು. ಇದೀಗ ಇಬ್ಬರ ಹಸೆಮಣೆ ಏರಲು ಮದುವೆ ದಿನಾಂಕ ಕೂಡ ಫಿಕ್ಸ್ ಆಗಿದೆ. ಮುಂದಿನ ತಿಂಗಳು ಡಿಸೆಂಬರ್ 4, 2024 ರಂದು ಮದುವೆ ನಡೆಯಲಿದೆ ಎಂದು ನಾಗ ಚೈತನ್ಯ–ಶೋಭಿತಾ ವಿವಾಹದ ವಿವರಗಳು ಓಟ್ ಪ್ಲೇ ನಲ್ಲಿ ಹೊರಬಂದಿವೆ. ಶೋಭಿತಾ ಮನೆಯಲ್ಲಿ ಅರಿಶಿನ ಶಾಸ್ತ್ರ ನಡೆದಿದ್ದು, ನಟಿ ಫೋಟೋಗಳನ್ನು ಶೇರ್ ಮಾಡಿದ್ರು. ನಾಗಾರ್ಜುನ ಅವರ ಅನ್ನಪೂರ್ಣ ಸ್ಟುಡಿಯೋದಲ್ಲಿ ಮದುವೆ ನಡೆಯಲಿದೆ ಎಂದು ನಾಗ ಚೈತನ್ಯ ಅವರ ಆಪ್ತರು ತಿಳಿಸಿದ್ದಾರೆ. ಸ್ಟುಡಿಯೋದ ಒಂದನೆ ಫ್ಲೋರ್ ನಲ್ಲಿ ಮದುವೆ ಸೆಟ್ ಹಾಕಲಾಗುತ್ತಂತೆ. ಆದ್ರೆ ಇವರ ಮದುವೆಗೆ ಕೆಲವೇ ಅತಿಥಿಗಳು ಬರಲಿದ್ದಾರೆ ಎಂದು ವರದಿಯಾಗಿದೆ.



ಚೈತು ಮತ್ತು ಶೋಭಿತಾ ಇಬ್ಬರಿಗೂ ಅದ್ದೂರಿ ಮದುವೆ ಇಷ್ಟವಿರಲಿಲ್ಲ ಎನ್ನಲಾಗ್ತಿದೆ. ಇದೀಗ ಮನೆಯವರು ಮದುವೆಯನ್ನು ಅದ್ದೂರಿಯಾಗಿ ಮಾಡಲು ನಿರ್ಧರಿಸಿದ್ದಾರಂತೆ. ಹೆಚ್ಚು ಜನರಿಲ್ಲದಿದ್ರು ಅದ್ದೂರಿತನಕ್ಕೇನು ಕಡಿಮೆ ಇರಲ್ಲ ಎನ್ನಲಾಗ್ತಿದೆ. ಈ ಸ್ಟಾರ್ ಜೋಡಿಯ ಮದುವೆ ಬಗ್ಗೆ ಹೊಸ ಸುದ್ದಿ ಹೊರಬಿದ್ದಿದೆ. ಶೋಭಿತಾ ಕುಟುಂಬ ನಾಗ ಚೈತನ್ಯ ಅವರಿಗೆ ವರದಕ್ಷಿಣೆಯಾಗಿ ಆಡಿ ಕಾರ್ ಜೊತೆಗೆ ಬೈಕ್ ನೀಡುತ್ತಿದೆ. ಅಷ್ಟೇ ಅಲ್ಲದೇ ಹೈದರಾಬಾದ್ ನಲ್ಲಿ ವಿಲ್ಲಾ ಮತ್ತು ಗೋಲ್ಡ್ ನೀಡಲಾಗುತ್ತಿದೆ ಎಂಬ ಸುದ್ದಿ ಹರಿದಾಡುತ್ತಿದೆ. ಇದರ ಜೊತೆಗೆ ಈ ಅದ್ದೂರಿ ಮದುವೆಯ ಸಾಕ್ಷ್ಯಚಿತ್ರ ಕೂಡ ಒಟಿಟಿಗೆ ಬರಲಿದೆ ಎನ್ನಲಾಗ್ತಿದೆ.

## ಪ್ರಾಸ್ಟೇಟ್ ಕ್ಯಾನ್ಸರ್ ಕುರಿತು ಜಾಗೃತಿ ಮೂಡಿಸಲು ಸೈಕ್ಲೋಥಾನ್ ಆಯೋಜನೆ

ಪ್ರಾಸ್ಟೇಟ್ ಕ್ಯಾನ್ಸರ್ ಜಾಗೃತಿ ಮಾಸದ ಅಂಗವಾಗಿ ಎಚ್ಸಿಜಿ ಕ್ಯಾನ್ಸರ್ ಸೆಂಟರ್ ಬೆಂಗಳೂರು 'ಸೈಕ್ಲೋಥಾನ್ ನಮ್ಮ ಬೆಂಗಳೂರು' ಅನ್ನು ಯಶಸ್ವಿಯಾಗಿ ಆಯೋಜಿಸಿತ್ತು.

6.5-ಕಿಲೋಮೀಟರ್ ಸೈಕ್ಲಿಂಗ್ ಪ್ರಾಸ್ಟೇಟ್ ಕ್ಯಾನ್ಸರ್ ಬಗ್ಗೆ ಜಾಗೃತಿ ಮೂಡಿಸಲು ಮತ್ತು ಪುರುಷರು ತಮ್ಮ ಆರೋಗ್ಯದ ಜವಾಬ್ದಾರಿಯನ್ನು ತೆಗೆದುಕೊಳ್ಳುವಂತೆ ಉತ್ತೇಜಿಸುವ ಗುರಿಯನ್ನು ಹೊಂದಿತ್ತು . 400 ಕ್ಕೂ ಹೆಚ್ಚು ಮಂದಿ ಇದರಲ್ಲಿ ಭಾಗವಹಿಸಿ, ಪ್ರಾಸ್ಟೇಟ್ ಕ್ಯಾನ್ಸರ್ ನನ್ನು ಆರಂಭಿಕ ಪತ್ತೆ ಮತ್ತು ನಿಯಮಿತ ಸ್ಕ್ರೀನಿಂಗ್ ನಡೆಸುವಂತೆ ಅರಿವು ಮೂಡಿಸಿತು. ಭಾನುವಾರ ಬೆಳಗ್ಗೆ 7:00 ಗಂಟೆಗೆ ಸೈಕ್ಲೋಥಾನ್ಗೆ ಚಾಲನೆ ನೀಡಲಾಯಿತು, ಮನೀಶಾ ಕುಮಾರ್, ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹೆಲ್ತ್ಕೇರ್ ಗ್ಲೋಬಲ್ ಎಂಟರ್ಪ್ರೈಸಸ್ ಲಿಮಿಟೆಡ್ ಕರ್ನಾಟಕ, ಡಾ. ರಘುನಾಥ್, ಎಚ್ಸಿಜಿ ಕೆಆರ್ ರಸ್ತೆಯಲ್ಲಿರುವ ಯುರೋ ಆಂಕೊಲಾಜಿ ನಿರ್ದೇಶಕ, ಹೊರಮಾವು ಸೈಕ್ಲಿಂಗ್ ಸ್ಕ್ವಾಡ್, ಅರ್ಚನಾ ರುದ್ರ ಮತ್ತು ಅರುಣ್ ಶಿವನೇಸನ್. ಏ.ಖ ನಲ್ಲಿರುವ ಊಅಉ ಕ್ಯಾನ್ಸರ್ ಸೆಂಟರ್ನಲ್ಲಿ ಸೈಕ್ಲೋಥಾನ್ಗೆ ಚಾಲನೆ ನೀಡಲಾಯಿತು. ರೆಸಿಡೆನ್ಸಿ ರಸ್ತೆ, ಕ್ವೀನ್ಸ್ ರಸ್ತೆ, ವಿಧಾನ ಸೌಧ, ಮತ್ತು ಕೆ.ಆರ್. ಸೇರಿದಂತೆ ಬೆಂಗಳೂರಿನ ಪ್ರಮುಖ ಮಾರ್ಗವಾಗಿ ಸೈಕ್ಲೋಥಾನ್ ನಡೆಸಿ, ಆಸ್ಪತ್ರೆಗೆ ಹಿಂದಿರಿಗಲಾಯಿತು.

ಪ್ರಾಸ್ಟೇಟ್ ಕ್ಯಾನ್ಸರ್ ಜಾಗೃತಿ ಮತ್ತು ಆರಂಭಿಕ ಪತ್ತೆಯ ಪ್ರಾಮುಖ್ಯತೆಯನ್ನು ಉತ್ತೇಜಿಸಲು ಈ ಜಾಗೃತಿ ಹೆಚ್ಚು ಪ್ರಾಮುಖ್ಯತೆ ಪಡೆದುಕೊಳ್ಳುತ್ತದೆ. ದೈಹಿಕ ಚಟುವಟಿಕೆಯನ್ನು ಮೀರಿ, ಸೈಕ್ಲೋಥಾನ್ ಪ್ರಾಸ್ಟೇಟ್ ಕ್ಯಾನ್ಸರ್ ತಡೆಗಟ್ಟುವ ಆರೈಕೆ ಮತ್ತು ಸ್ಕ್ರೀನಿಂಗ್ಗಳ ಕುರಿತು ಪ್ರಮುಖ ಹೆಜ್ಜೆಯನ್ನು ಪಡೆದುಕೊಳ್ಳುತ್ತದೆ.

ಹೆಲ್ತ್ಕೇರ್ ಗ್ಲೋಬಲ್ ಎಂಟರ್ಪ್ರೈಸಸ್ ಲಿಮಿಟೆಡ್ನ ಕರ್ನಾಟಕದ ಮುಖ್ಯ ಕಾರ್ಯನಿರ್ವಹಣಾಧಿಕಾರಿ



ಎಂ.ಎಸ್. ಮನೀಶಾ ಕುಮಾರ್ ಮಾತನಾಡಿ , ಸೈಕ್ಲೋಥಾನ್ ಪ್ರಮುಖ ಉದ್ದೇಶಕ್ಕಾಗಿ ಸಮುದಾಯವನ್ನು ಒಗ್ಗೂಡಿಸಲು ಉತ್ತಮ ವೇದಿಕೆಯಾಗಿ ಕಾರ್ಯನಿರ್ವಹಿಸಿದೆ. ಪ್ರಾಸ್ಟೇಟ್ ಕ್ಯಾನ್ಸರ್ ಬಗ್ಗೆ ಜಾಗೃತಿ ಮೂಡಿಸಲು ಮತ್ತು ಪುರುಷರಿಗೆ ತಮ್ಮ ಆರೋಗ್ಯದಲ್ಲಿ ಪೂರ್ವಭಾವಿ ಕ್ರಮಗಳನ್ನು ತೆಗೆದುಕೊಳ್ಳಲು ನಾವು ಹೆಮ್ಮೆಪಡುತ್ತೇವೆ. ಊಅಉ ಕ್ಯಾನ್ಸರ್ ಸೆಂಟರ್ನಲ್ಲಿ, ಪ್ರಾಸ್ಟೇಟ್ ಕ್ಯಾನ್ಸರ್ಗೆ ವಿಶ್ವ ದರ್ಜೆಯ ಆರೈಕೆಯನ್ನು ಒದಗಿಸಲು ನಾವು ಬದ್ಧರಾಗಿದ್ದೇವೆ. ಈ ರೀತಿಯ ಉಪಕ್ರಮಗಳು ಸಮುದಾಯದೊಂದಿಗೆ ತೊಡಗಿಸಿಕೊಳ್ಳಲು, ಸಾರ್ವಜನಿಕರಿಗೆ ಶಿಕ್ಷಣ ನೀಡಲು ಮತ್ತು ಕ್ಯಾನ್ಸರ್ ವಿರುದ್ಧದ ಹೋರಾಟದಲ್ಲಿ ನಿಜವಾದ ಬದಲಾವಣೆಯನ್ನು ಮಾಡಲು ನಮಗೆ ಅವಕಾಶ ಮಾಡಿಕೊಡುತ್ತವೆ ಎಂದರು.

ಬೆಂಗಳೂರಿನ ಕೆಆರ್ ರಸ್ತೆಯ ಎಚ್ಸಿಜಿ ಕ್ಯಾನ್ಸರ್ ಕೇಂದ್ರದ ಯುರೋ ಆಂಕೊಲಾಜಿಯ ನಿರ್ದೇಶಕ ಡಾ. ರಘುನಾಥ್ ಮಾತನಾಡಿ, ಪ್ರಾಸ್ಟೇಟ್ ಕ್ಯಾನ್ಸರ್ ಪುರುಷರಲ್ಲಿ ಹೆಚ್ಚುತ್ತಿರುವ ಸಮಸ್ಯೆಯಾಗಿದ್ದರೂ , ಆರಂಭಿಕ ಪತ್ತೆಯು ಅದನ್ನು ಅತ್ಯಂತ ಸಮರ್ಥವಾಗಿ ಗುಣಪಡಿಸಬಹುದಾದ ಕ್ಯಾನ್ಸರ್ ವಿಧಗಳಲ್ಲಿ ಒಂದಾಗಿದೆ. ಇಂದಿನ ಸೈಕ್ಲೋಥಾನ್ ನಾವೆಲ್ಲರೂ ನಮ್ಮ ಆರೋಗ್ಯದ ಜವಾಬ್ದಾರಿಯನ್ನು ಹೇಗೆ ತೆಗೆದುಕೊಳ್ಳಬಹುದು ಎಂಬುದರ ಪ್ರಬಲ ಜ್ಞಾಪನೆಯಾಗಿ ಕಾರ್ಯನಿರ್ವಹಿಸುತ್ತದೆ. ಈ ಸೈಕ್ಲೋಥಾನ್ನಲ್ಲಿ ಭಾಗವಹಿಸಿದ ಪ್ರತಿಯೊಬ್ಬರು ಈ ಜಾಗೃತಿಗೆ ಸ್ಫೂರ್ತಿದಾಯಕರಾಗಿದ್ದಾರೆ. ಊಅಉ ಕ್ಯಾನ್ಸರ್ ಕೇಂದ್ರದಲ್ಲಿ, ನಮ್ಮ ರೋಗಿಗಳಿಗೆ ಅತ್ಯಾಧುನಿಕ ಆರೈಕೆಯನ್ನು ಒದಗಿಸಲು ನಾವು ಹೆಮ್ಮೆಪಡುತ್ತೇವೆ. ಈ ಸೈಕ್ಲೋಥಾನ್ನಂತಹ ಉಪಕ್ರಮಗಳು ಜಾಗೃತಿ ಮೂಡಿಸುವ ನಮ್ಮ ಬದ್ಧತೆಯ ಪ್ರಮುಖ ಭಾಗವಾಗಿದೆ. ನಿಯಮಿತ ಸ್ಕ್ರೀನಿಂಗ್ಗಳ ಪ್ರಾಮುಖ್ಯತೆ ಮತ್ತು ಆರಂಭಿಕ ಪತ್ತೆಯ ಕುರಿತು ಸಾರ್ವಜನಿಕರಿಗೆ ಶಿಕ್ಷಣ ನೀಡುವ ಮೂಲಕ, ಹೆಚ್ಚಿನ ಜೀವಗಳನ್ನು ಉಳಿಸಲಾಗಿದೆ ಎಂದು ಹೇಳಿದರು. ಭಾಗವಹಿಸಿದವರು ಪ್ರಾಸ್ಟೇಟ್ ಕ್ಯಾನ್ಸರ್ ಬಗ್ಗೆ ಜಾಗೃತಿ ಮೂಡಿಸಲು ತಮ್ಮ ಕೊಡುಗೆ ನೀಡಿದ್ದರಿಂದ ಈ ಕಾರ್ಯಕ್ರಮವು ಏಕತೆ ಮತ್ತು ಉದ್ದೇಶದೊಂದಿಗೆ ಮುಕ್ತಾಯವಾಯಿತು. ಸೈಕ್ಲೋಥಾನ್ನ ಯಶಸ್ಸು ಸಮುದಾಯವನ್ನು ಪೂರ್ವಭಾವಿ ಆರೋಗ್ಯ ಉಪಕ್ರಮಗಳಲ್ಲಿ ತೊಡಗಿಸಿಕೊಳ್ಳಲು ಮತ್ತು ಪ್ರಾಸ್ಟೇಟ್ ಕ್ಯಾನ್ಸರ್ ವಿರುದ್ಧದ ಹೋರಾಟವನ್ನು ಬೆಂಬಲಿಸಲು HCG ಕ್ಯಾನ್ಸರ್ ಕೇಂದ್ರದ ಬದ್ಧತೆಯನ್ನು ಬಲಡಿಸುತ್ತದೆ.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

**ಮೇಷ:** ಅಧಿಕ ಖರ್ಚು, ಪರರಿಂದ ಮೋಸ, ಅಲ್ಪ ಕಾರ್ಯ ಸಿದ್ಧಿ, ಶತ್ರು ನಾಶ, ಉದ್ಯೋಗದಲ್ಲಿ ಕಿರಿಕಿರಿ.

**ವೃಷಭ:** ವ್ಯಾಪಾರದಲ್ಲಿ ಅಲ್ಪ ಲಾಭ, ಕುಟುಂಬ ಸೌಖ್ಯ, ಸುಖ ಭೋಜನ, ಬಂಧುಗಳಿಂದ ನಿಂದನೆ.

**ಮಿಥುನ:** ಆಸ್ತಿ ವಿಚಾರದಲ್ಲಿ ಕಲಹ, ಸ್ವಯಂಕೃತ ಅಪರಾಧದಿಂದ ಮನೋವ್ಯಥೆ, ವಾದ ವಿವಾದ.

**ಕಟಕ:** ಮನೆಯಲ್ಲಿ ಸಂತಸ, ಋಣ ಭಾದೆ, ಕೃಷಿಕರಿಗೆ ಲಾಭ, ಅನಾರೋಗ್ಯ, ಮನಸ್ಸಿಗೆ ನಾನಾ ರೀತಿಯ ಚಿಂತೆ, ದ್ರವ್ಯ ನಷ್ಟ.

**ಸಿಂಹ:** ಮಕ್ಕಳಿಂದ ನೋವು, ದುಃಖ, ಸಾಲ ಭಾದೆ, ವಿದ್ಯಾರ್ಥಿಗಳಲ್ಲಿ ಹಿನ್ನಡೆ, ಕುಟುಂಬದಲ್ಲಿ ಪ್ರೀತಿ, ಆಕಸ್ಮಿಕ ಧನ ವ್ಯಯ.

**ಕನ್ಯಾ:** ಆರೋಗ್ಯದ ಕಡೆ ಗಮನ ಕೊಡಿ, ಕಷ್ಟದಲ್ಲಿರುವವರಿಗೆ ಸಹಾನುಭೂತಿ ತೋರುವಿರಿ, ಹಿರಿಯರಲ್ಲಿ ಭಕ್ತಿ ಗೌರವ.

**ತುಲಾ:** ಮಿತ್ರರ ಸಲಹೆ, ವಾಸಗೃಹದಲ್ಲಿ ತೊಂದರೆ, ತಾಳ್ಮೆಯಿಂದ ಇರಿ, ಸಣ್ಣ ಪುಟ್ಟ ವಿಚಾರಗಳಿಂದ ಮನಸ್ತಾಪ.

**ವೃಶ್ಚಿಕ:** ಯಾರನ್ನು ನಂಬಬೇಡಿ, ಶೀತಸಂಬಂಧ ರೋಗ, ಕೆಲಸ ಕಾರ್ಯಗಳಲ್ಲಿ ಹಿನ್ನಡೆ, ಧನ ನಷ್ಟ, ಮನಸ್ತಾಪ, ಅಕಾಲ ಭೋಜನ.

**ಧನಸ್ಸು:** ಆರ್ಥಿಕ ಪರಿಸ್ಥಿತಿ ಬಿಕ್ಕಟ್ಟು, ಅನೇಕ ವಿಷಯಗಳ ಚರ್ಚೆ, ಮಾನಸಿಕ ನೋವು, ಗೊಂದಲಮಯ ವಾತಾವರಣ.

**ಮಕರ:** ದುಡುಕು ಸ್ವಭಾವ, ದೂರಾಲೋಚನೆ, ಅಧಿಕ ಖರ್ಚು, ಮಾತಿನ ಮೇಲೆ ನಿಗಾ ಇರಲಿ, ಕೆಲಸದ ಒತ್ತಡ.

**ಕುಂಭ:** ಅನ್ಯ ಜನರಲ್ಲಿ ವೈಮನಸ್ಸು, ಕೈ ಹಾಕಿದ ಕೆಲಸಗಳಲ್ಲಿ ವಿಳಂಬ, ಉತ್ತಮ ಬುದ್ಧಿಶಕ್ತಿ, ಅನಾರೋಗ್ಯ.

**ಮೀನ:** ಅನ್ಯರಿಗೆ ಉಪಕಾರ ಮಾಡುವಿರಿ, ಶತ್ರು ಭಾದೆ, ವ್ಯಾಪಾರದಲ್ಲಿ ಲಾಭ, ದಾಂಪತ್ಯದಲ್ಲಿ ವಿರಸ, ಆರೋಗ್ಯದಲ್ಲಿ ವಿಪರೀತ ತೊಂದರೆ.

## ಇಂಟರ್ನ್ಯಾಷನಲ್ ಕೇಕ್ ದಿನ




ಪ್ರತಿ ವರ್ಷ ನವೆಂಬರ್ 26 ರಂದು ಅಂತರರಾಷ್ಟ್ರೀಯ ಕೇಕ್ ದಿನವನ್ನು ಆಚರಿಸಲಾಗುತ್ತದೆ. ಕೇಕ್ ಸಾಮಾನ್ಯವಾಗಿ ಹಿಟ್ಟು, ಸಕ್ಕರೆ ಮತ್ತು ಇತರ ಪದಾರ್ಥಗಳಿಂದ ತಯಾರಿಸಿದ ಬೇಯಿಸಿದ ಆಹಾರವಾಗಿದೆ. ಅವರ ಹಳೆಯ ರೂಪಗಳಲ್ಲಿ, ಕೇಕ್ಗಳು ಬ್ರೆಡ್ನ ಮಾರ್ಪಾಡುಗಳಾಗಿವೆ, ಹೆಚ್ಚು ಅತ್ಯಾಧುನಿಕ ಪ್ರಕಾರವಾಗಿದೆ, ಆದರೆ ಈ ದಿನಗಳಲ್ಲಿ, ಕೇಕ್ಗಳು ಪೇಸ್ಟ್ರಿಗಳು, ಪೈಗಳು, ಇತ್ಯಾದಿಗಳಂತಹ ವ್ಯಾಪಕವಾದ ಬೇಯಿಸಿದ ಸಿಹಿತಿಂಡಿಗಳನ್ನು ಒಳಗೊಂಡಿವೆ. ವಿವಾಹಗಳು, ವಾರ್ಷಿಕೋತ್ಸವಗಳು ಮತ್ತು ಜನ್ಮದಿನಗಳಂತಹ ವಿಧ್ಯುಕ್ತ ಸಂದರ್ಭಗಳಲ್ಲಿ ಕೇಕ್ ಅನ್ನು ಹೆಚ್ಚಾಗಿ ನೀಡಲಾಗುತ್ತದೆ. ನಮ್ಮ ನೆಚ್ಚಿನ ಮಿಠಾಯಿ, ಕೇಕ್, ಸಾಕಷ್ಟು ಸುದೀರ್ಘ ಇತಿಹಾಸವನ್ನು ಹೊಂದಿದೆ. 'ಕೇಕ್' ಎಂಬ ಪದವು ವೈಕಿಂಗ್ ಮೂಲದ್ದಾಗಿದೆ ಮತ್ತು ಹಳೆಯ ನಾರ್ಸ್ ಪದ 'ಕಾಕಾ' ದಿಂದ ಬಂದಿದೆ. ಗ್ರೀಕರು ತಮ್ಮದೇ ಆದ ಕೇಕ್ ಅನ್ನು ಹೊಂದಿದ್ದರು, ಇದನ್ನು ಮೊಟ್ಟೆ, ಹಾಲು, ಬೀಜಗಳು ಮತ್ತು ಜೇನುತುಪ್ಪದಂತಹ ಇತರ ಪದಾರ್ಥಗಳೊಂದಿಗೆ ಬೆರೆಸಿದ ಹಿಟ್ಟನ್ನು ಬಳಸಿ ಬೇಯಿಸಲಾಗುತ್ತದೆ. ಅವರು 'ಸತುರಾ' ಎಂಬ ಕೇಕ್ ಅನ್ನು ಸಹ ಹೊಂದಿದ್ದರು, ಅದು ಚಪ್ಪಟೆಯಾಗಿತ್ತು ಮತ್ತು ಭಾರೀ ಸ್ಥಿರತೆಯನ್ನು ಹೊಂದಿತ್ತು. ರೋಮನ್ ಆಳ್ವಿಕೆಯ ಅವಧಿಯಲ್ಲಿ ಕೇಕ್ ಎಂಬ ಪದವು ವಿಭಿನ್ನ ಹೆಸರನ್ನು ಪಡೆದುಕೊಂಡಿತು ಮತ್ತು ಅದು 'ಪ್ಲಾಸೆಂಟಾ', ಕೇಕ್ ಎಂಬ ಪದದಿಂದ ಪಡೆದ ಗ್ರೀಕ್ ಭಕ್ಷ್ಯವಾಗಿದೆ. ಜರಾಯು ಹಿಟ್ಟಿನ ಹಲವು ಪದರಗಳಿಂದ ತಯಾರಿಸಲ್ಪಟ್ಟಿದೆ ಮತ್ತು ಇದನ್ನು ಸಾಮಾನ್ಯವಾಗಿ ಪೇಸ್ಟ್ರಿ ಬೇಸ್ನಲ್ಲಿ ಅಥವಾ ಪೇಸ್ಟ್ರಿ ಕೇಸ್ನೊಳಗೆ ಬೇಯಿಸಲಾಗುತ್ತದೆ. ಗ್ರೀಕರು ಅದನ್ನು ಹುಳಿ ಮಾಡಲು ಬಿಯರ್ ಅನ್ನು ಬಳಸಿದರು ಮತ್ತು ಮಿಶ್ರಣದಲ್ಲಿ ಮೇಕೆ ಹಾಲನ್ನು ಬಳಸಿ ಮಾಡಿದ ಚೀಸ್ ಅನ್ನು ಸೇರಿಸಲಾಯಿತು. ಮೂಲ ಬ್ರೆಡ್ ಹಿಟ್ಟನ್ನು ಕೆಲವೊಮ್ಮೆ ಬೆಣ್ಣೆ, ಮೊಟ್ಟೆ ಮತ್ತು ಜೇನುತುಪ್ಪದಿಂದ ಸಮೃದ್ಧಗೊಳಿಸಲಾಯಿತು, ಇದು ಒಂದು ಅತ್ಯಾಧುನಿಕ ರೀತಿಯ ಬ್ರೆಡ್ ಆಗಿ ಸಿಹಿ ಮತ್ತು ಕೇಕ್ ತರಹದ ಬೇಯಿಸಿದ ಸರಕನ್ನು ಉತ್ಪಾದಿಸುತ್ತದೆ. ಈ ಅಡುಗೆ ವಿಧಾನವು ಪ್ರಾಚೀನ ರೋಮನ್ ಅಭ್ಯಾಸವಾಗಿತ್ತು. ಇಂಗ್ಲೆಂಡ್ನಲ್ಲಿನ ಆರಂಭಿಕ ಕೇಕ್ಗಳು ಸಾಮಾನ್ಯ ಬ್ರೆಡ್ನಂತೆ ಪ್ರಾರಂಭವಾಯಿತು, ಅವುಗಳ ನಡುವಿನ ಅತ್ಯಂತ ಸ್ಪಷ್ಟವಾದ ವ್ಯತ್ಯಾಸವೆಂದರೆ ಅವುಗಳ ಆಕಾರ, ಅಂದರೆ ಹೆಚ್ಚು ದುಂಡಗಿನ, ಚಪ್ಪಟೆಯಾದ ಕೇಕ್ಗಳ ಆಕಾರ. ಮತ್ತೊಂದು ವ್ಯತ್ಯಾಸವೆಂದರೆ ಉತ್ಪಾದನೆಯ ವಿಧಾನ, ಅಲ್ಲಿ ಬೇಯಿಸುವಾಗ ಕೇಕ್ ಅನ್ನು ತಿರುಗಿಸಲಾಗುತ್ತದೆ, ಇದು ಬ್ರೆಡ್ ಅನ್ನು ಬೇಯಿಸುವ ಪ್ರಕ್ರಿಯೆಯ ಉದ್ದಕ್ಕೂ ನೇರವಾಗಿ ಬಿಡಲಾಗುತ್ತದೆ.



# ದಾವೂದು ಇಬ್ರಾಹಿಂ ಬೆದರಿಕೆಯೇ ನಾನು ಭಾರತ ತೊರೆಯಲು ಕಾರಣ

**ಹೊಸದಿಲ್ಲಿ:** ನಾನು 2010ರಲ್ಲಿ ಭಾರತ ತೊರೆದಿದ್ದು ಕಾನೂನು ಸಮಸ್ಯೆಗಳಿಂದಲ್ಲ; ಬದಲಿಗೆ ಭೂಗತ ದೊರೆ ದಾವೂದ್ ಇಬ್ರಾಹಿಂ ಜೀವ ಬೆದರಿಕೆ ಹಾಕಿದ ಕಾರಣಕ್ಕೆ ಎಂದು ಐಪಿಎಲ್ ಸಂಸ್ಥಾಪಕ ಲಲಿತ್ ಮೋದಿ ಬಹಿರಂಗಗೊಳಿಸಿದ್ದಾರೆ. ಅವರು ಈ ಹೇಳಿಕೆಯನ್ನು ರಾಜ್ ಶಮಾನಿಯ `Figuring Out'ಪಾಡ್ ಕಾಸ್ಟ್ ಸಂಚಿಕೆಯಲ್ಲಿ ನೀಡಿದ್ದಾರೆ.

'ನಾನು ಜೀವ ಬೆದರಿಕೆಯನ್ನು ಸ್ವೀಕರಿಸಿದ್ದರಿಂದ ನಾನು ದೇಶ ತೊರೆದೆ'' ಎಂದು ಅವರು ಸಂದರ್ಶನದಲ್ಲಿ ಹೇಳಿಕೊಂಡಿದ್ದಾರೆ. ''ಆರಂಭದಲ್ಲಿ ಯಾವುದೇ ಕಾನೂನು ಸಮಸ್ಯೆಗಳು ನನಗೆ ದೇಶ ತೊರೆಯುವಂಥ ಪರಿಸ್ಥಿತಿ ಸೃಷ್ಟಿಸಲಿಲ್ಲ. ಆದರೆ, ನಾನು ದಾವೂದ್ ಇಬ್ರಾಹಿಂನಿಂದ ಜೀವ ಬೆದರಿಕೆ ಕರೆಗಳನ್ನು ಸ್ವೀಕರಿಸಿದೆ. ದಾವೂದ್ ಇಬ್ರಾಹಿಂ ನನ್ನ ಬೆನ್ನು ಬಿದ್ದಿದ್ದ. ನಾನು ಮ್ಯಾಚ್ ಫಿಕ್ಸಿಂಗ್ ಮಾಡಬೇಕೆಂದು ಆತ ಬಯಸುತ್ತಿದ್ದ. ಆದರೆ, ನಾನು ಮ್ಯಾಚ್ ಫಿಕ್ಸಿಂಗ್ ಗೆ ಸಿದ್ಧನಿರಲಿಲ್ಲ. ನನಗೆ ಭ್ರಷ್ಟಾಚಾರ ವಿರೋಧಿ ಅಭಿಯಾನ ತುಂಬಾ ಮುಖ್ಯವಾಗಿತ್ತು ಹಾಗೂ ಪಂದ್ಯದ ಸಮಗ್ರತೆ ನನಗೆ ಬಹಳ ಮುಖ್ಯವಾಗಿತ್ತು'' ಎಂದು ಲಲಿತ್ ಮೋದಿ ಹೇಳಿದ್ದಾರೆ.

ವಿಮಾನ ನಿಲ್ದಾಣದಲ್ಲಿ ಸುರಕ್ಷತೆಗಾಗಿ ವಿಐಪಿ ನಿರ್ಗಮನವನ್ನು ಬಳಸುವಂತೆ ನನ್ನ ಅಂಗರಕ್ಷಕ ನನ್ನನ್ನು ಒತ್ತಾಯಿಸಿದ. ನಾನು ಹಿಟ್ ಲಿಸ್ಟ್ ನಲ್ಲಿದ್ದೇನೆ ಹಾಗೂ ನನಗೆ ಕೇವಲ 12 ಗಂಟೆಗಳ ಕಾಲ ಮಾತ್ರ ಭದ್ರತೆಯ ಭರವಸೆ ನೀಡಲು ಸಾಧ್ಯ ಎಂದು ಹಿರಿಯ ಅಧಿಕಾರಿಗಳು ತಿಳಿಸಿದ ನಂತರ, ಪರಿಸ್ಥಿತಿ ಪ್ರಕ್ಷುಬ್ಧಗೊಂಡಿತು ಎಂದು ಅವರು ಹೇಳಿದ್ದಾರೆ. 'ಪೊಲೀಸ್ ಉಪ ಆಯುಕ್ತ ಹಿಮಾಂಶು ರಾಯ್ ನನಗಾಗಿ ವಿಮಾನ ನಿಲ್ದಾಣದ ಬಳಿ ಕಾಯುತ್ತಿದ್ದರು. ನಾವಿನ್ನು ನಿಮ್ಮನ್ನು ರಕ್ಷಿಸಲು ಸಾಧ್ಯಪವಿಲ್ಲ. ನಿಮ್ಮ ಜೀವಕ್ಕೆ ಅಪಾಯವಿದೆ. ನಾವು ಮುಂದಿನ 12 ಗಂಟೆಗಳ ಕಾಲ ಮಾತ್ರ ನಿಮಗೆ ಸುರಕ್ಷತೆಯ ಖಾತರಿ ನೀಡಬಲ್ಲೆವು ಎಂದು ಹೇಳಿದರು. ನಂತರ, ಅಲ್ಲಿಂದ ನನ್ನನ್ನು ಬೆಂಗಾವಲಿನೊಂದಿಗೆ ಮುಂಬೈನಲ್ಲಿನ ಫೋರ್ ಸೀಸನ್ಸ್ ಹೋಟೆಲ್ ಗೆ ಕರೆದೊಯ್ಯಲಾಯಿತು'' ಎಂದೂ ಲಲಿತ್ ಮೋದಿ ಹೇಳಿದ್ದಾರೆ.



# ಮಳೆ ಬಗ್ಗೆ ಐಎಂಡಿ ಎಚ್ಚರಿಕೆ

**ದೆಹಲಿ:** ಉತ್ತರ ಭಾರತದ ಬಹುತೇಕ ರಾಜ್ಯಗಳಲ್ಲಿ ದಟ್ಟ ಮಂಜಿನಿಂದಾಗಿ ಜನ ತತ್ತರಿಸಿದ್ದಾರೆ. ಇನ್ನೂ ಕೆಲವು ದಿನಗಳವರೆಗೆ ಹಿಮಾಚಲ ಪ್ರದೇಶ, ಉತ್ತರಾಖಂಡ, ದೆಹಲಿ, ಪಂಜಾಬ್, ಹರಿಯಾಣ, ಉತ್ತರ ಪ್ರದೇಶ ಸೇರಿದಂತೆ ಹಲವು ರಾಜ್ಯಗಳಲ್ಲಿ ಶೀತ ವಾತಾವರಣ ಮುಂದುವರೆಯಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಇದೇ ಸಂದರ್ಭದಲ್ಲಿ ನವೆಂಬರ್ 25ರಿಂದ ನವೆಂಬರ್ 28ರವರೆಗೆ ದೇಶದ ಹಲವು ಭಾಗಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ಭವಿಷ್ಯ ನುಡಿದಿದೆ. ಐಎಂಡಿ ಪ್ರಕಾರ, ಬಂಗಾಳಕೊಲ್ಲಿಯಲ್ಲಿ ಚಂಡಮಾರುತ ತೀವ್ರ ಸ್ವರೂಪ ಪಡೆಯುವ ಸಾಧ್ಯತೆ ಇದ್ದು ಇದರಿಂದಾಗಿ ತಮಿಳುನಾಡು, ಶ್ರೀಲಂಕಾ ಭಾಗಗಳಲ್ಲಿ ನವೆಂಬರ್ 25ರಿಂದ ನವೆಂಬರ್ 27ರವರೆಗೆ ಭಾರೀ ಮಳೆಯಾಗಲಿದೆ. ಗಾಳಿಯ ತೀವ್ರತೆ ಗಂಟೆಗೆ 55 ಕಿ.ಮೀ. ವೇಗದಲ್ಲಿರುವುದರಿಂದ ಮೀನುಗಾರರನ್ನು ಸಮುದ್ರಕ್ಕೆ ಇಳಿಯದಂತೆ ಸೂಚಿಸಲಾಗಿದೆ. ಹವಾಮಾನ ಇಲಾಖೆ ನೀಡಿರುವ ಮುನ್ಸೂಚನೆ ಪ್ರಕಾರ, ತಮಿಳುನಾಡಿನ ಪುದುಚೇರಿ, ಕಾರೈಕಾಲ್ ನ ಪ್ರತ್ಯೇಕ ಭಾಗಗಳಲ್ಲಿ ಗುಡುಗು, ಮಿಂಚು ಸಹಿತ ಭರ್ಜರಿ ಮಳೆಯಾಗುವ ಸಾಧ್ಯತೆ ಇದೆ ಎನ್ನಲಾಗಿದೆ.



# ಇವಿಎಂ ದಕ್ಷತೆಯ ಬಗ್ಗೆ ಯಾವುದೇ ಅನುಮಾನವಿಲ್ಲ: ಸಂಸದ ಕಾರ್ತಿ ಚಿದಂಬರಂ



**ದೆಹಲಿ:** ವಿದ್ಯುನ್ಮಾನ ಮತ ಯಂತ್ರಗಳ ದಕ್ಷತೆಯ ಬಗ್ಗೆ ನನಗೆ ಯಾವುದೇ ಅನುಮಾನವಿಲ್ಲ ಎಂದು ಸೋಮವಾರ ಕಾಂಗ್ರೆಸ್ ಸಂಸದ ಕಾರ್ತಿ ಚಿದಂಬರಂ ಹೇಳಿದ್ದಾರೆ. ಮಹಾಯುತಿ ಮೈತ್ರಿಕೂಟದ ಬಿಜೆಪಿ ಹಾಗೂ ಇನ್ನಿತರ ಪಕ್ಷಗಳು ವಿದ್ಯುನ್ಮಾನ ಮತ ಯಂತ್ರಗಳನ್ನು ತಿರುಚಿವೆ ಎಂದು ಶಿವಸೇನೆ (ಉದ್ಧವ್ ಬಣ) ನಾಯಕ ಸಂಜಯ್ ರಾವತ್ ಸೇರಿದಂತೆ ಮಹಾವಿಕಾಸ್ ಅಘಾಡಿಯ ಹಲವು ನಾಯಕರು ಆರೋಪಿಸಿದ ಬೆನ್ನಿಗೇ ಅವರಿಂದ ಈ ಹೇಳಿಕೆ ಹೊರ ಬಿದ್ದಿದೆ.

'ನಾನು 2004ರಿಂದಲೂ ಇವಿಎಂ ಬಳಕೆಯ ಚುನಾವಣೆಗಳಲ್ಲಿ ಭಾಗವಹಿಸುತ್ತಾ ಬರುತ್ತಿದ್ದೇನೆ. ನನಗೆ ವೈಯಕ್ತಿಕವಾಗಿ ಯಾವುದೇ ಕೆಟ್ಟ ಅನುಭವವಾಗಿಲ್ಲ. ಅಥವಾ ವಿದ್ಯುನ್ಮಾನ ಮತ ಯಂತ್ರಗಳನ್ನು ತಿರುಚಿರುವುದನ್ನು ಅಥವಾ ಹಸ್ತಕ್ಷೇಪ ಮಾಡಿರುವುದನ್ನು ಸಾಬೀತು ಪಡಿಸಲು ನನ್ನ ಬಳಿ ಯಾವುದೇ ಪುರಾವೆಯಿಲ್ಲ. ಒಂದು ವೇಳೆ ಬೇರೆ ಯಾರಿಗಾದರೂ ವಿದ್ಯುನ್ಮಾನ ಮತ ಯಂತ್ರಗಳ ದಕ್ಷತೆಯ ಬಗ್ಗೆ ಅನುಮಾನಗಳಿದ್ದರೆ, ಅವರು ನಿಜಕ್ಕೂ ಹೇಳಬೇಕಿದೆ. ಆದರೆ, ನನಗೆ ವಿದ್ಯುನ್ಮಾನ ಮತ ಯಂತ್ರಗಳ ದಕ್ಷತೆಯ ಸದೃಢತೆ ಬಗ್ಗೆ ವೈಯಕ್ತಿಕವಾಗಿ ಯಾವುದೇ ಅನುಮಾನಗಳಿಲ್ಲ'' ಎಂದು ಅವರು ಹೇಳಿದ್ದಾರೆ.



ವಿದ್ಯುನ್ಮಾನ ಮತ ಯಂತ್ರ ತಿರುಚುವಿಕೆ ಕುರಿತು ವೈಜ್ಞಾನಿಕ ಪುರಾವೆ ದೊರೆಯುವವರೆಗೂ, ಈ ವಿಷಯದ ಕುರಿತ ನನ್ನ ದೃಷ್ಟಿಕೋನ ಬದಲಾಗುವುದಿಲ್ಲ ಎಂದೂ ಅವರು ಹೇಳಿದ್ದಾರೆ.

'ನಮ್ಮ ಪಕ್ಷದಲ್ಲಿ ಅನೇಕರಿಗೆ ಈ ಕುರಿತು ವಿಭಿನ್ನ ದೃಷ್ಟಿಕೋನಗಳಿವೆ. ಈ ಕುರಿತು ಅವರೇ ವಿವರಿಸಬೇಕಿದೆ. ಆದರೆ, ನನಗೆ ವೈಯಕ್ತಿಕವಾಗಿ ವಿದ್ಯುನ್ಮಾನ ಮತ ಯಂತ್ರಗಳ ದಕ್ಷತೆಯ ಸದೃಢತೆ ಕುರಿತು ಯಾವುದೇ ಅನುಮಾನವಿಲ್ಲ'' ಎಂದು ಹೇಳಿದ್ದಾರೆ.

ನವೆಂಬರ್ 3ರಂದು ಮಹಾರಾಷ್ಟ್ರ ವಿಧಾನಸಭಾ ಚುನಾವಣೆ ಫಲಿತಾಂಶ ಪ್ರಕಟಗೊಂಡ ನಂತರ, ''ನಾವು ಈ ಜನಮತವನ್ನು ಅಂಗೀಕರಿಸುವುದಿಲ್ಲ. ಚುನಾವಣಾ ಫಲಿತಾಂಶದಲ್ಲಿ ಏನೋ ಅನುಮಾಸ್ಪದವಾದುದಿದೆ'' ಎಂದು ಶಿವಸೇನೆ (ಉದ್ಧವ್ ಬಣ) ನಾಯಕ ಸಂಜಯ್ ರಾವತ್ ಸುದ್ದಿಗಾರರಿಗೆ ತಿಳಿಸಿದ್ದರು. ಫಲಿತಾಂಶ ಗಳು ಅಸ್ವೀಕಾರಾರ್ಹವಾಗಿರುವುದರಿಂದ, ಚುನಾವಣೆ ನಂತರದ ವಿದ್ಯುನ್ಮಾನ ಮತ ಯಂತ್ರಗಳ ಕಾರ್ಯದಕ್ಷತೆಯ ಕುರಿತು ಚರ್ಚೆಯಾಗಬೇಕಾದ ಅಗತ್ಯವಿದೆ ಎಂದು ಶಿವಸೇನೆ (ಉದ್ಧವ್ ಠಾಕ್ರೆ) ನಾಯಕಿ ಪ್ರಿಯಾಂಕಾ ಚತುರ್ವೇದಿ ಕೂಡಾ ಹೇಳಿದ್ದರು.

# ಪ್ಯಾನ್ 2.0 ಯೋಜನೆಗೆ ಕೇಂದ್ರ ಸಚಿವ ಸಂಪುಟ ಗ್ರೀನ್ ಸಿಗ್ನಲ್

**ನವದೆಹಲಿ:** ಕೇಂದ್ರ ಸಚಿವ ಸಂಪುಟ ಸೋಮವಾರ ಪ್ಯಾನ್ 2.0 ಗೆ ಅನುಮೋದನೆ ನೀಡಿದೆ, ಅಲ್ಲಿ ಕ್ಯೂಆರ್ ಕೋಡ್ನೊಂದಿಗೆ ಪ್ಯಾನ್ ಕಾರ್ಡ್'ಗೆ ಉಚಿತವಾಗಿ ನವೀಕರಣವನ್ನ ಹೊರತರಲಾಗುವುದು ಎಂದು ಕೇಂದ್ರ ಮಾಹಿತಿ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್ ಘೋಷಿಸಿದರು.

ಆದಾಯ ತೆರಿಗೆ ಕಾಯ್ದೆಯ ಸೆಕ್ಷನ್ 139 ಎ ಅಡಿಯಲ್ಲಿ 1972 ರಿಂದ ಪ್ಯಾನ್ ಬಳಕೆಯಲ್ಲಿದೆ ಮತ್ತು ವ್ಯಾಪಕವಾಗಿ ಅಳವಡಿಸಿಕೊಳ್ಳಲಾಗಿದೆ, 78 ಕೋಟಿ ಪ್ಯಾನ್ಗಳನ್ನು ವಿತರಿಸಲಾಗಿದೆ, ಇದು ಶೇಕಡಾ 98 ರಷ್ಟು ವ್ಯಕ್ತಿಗಳನ್ನು ಒಳಗೊಂಡಿದೆ ಎಂದು ವೈಷ್ಣವ್ ಹೇಳಿದರು. ಅಧಿಕೃತ ಹೇಳಿಕೆಯ ಪ್ರಕಾರ, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಅಧ್ಯಕ್ಷತೆಯಲ್ಲಿ ನಡೆದ ಆರ್ಥಿಕ




ವ್ಯವಹಾರಗಳ ಕ್ಯಾಬಿನೆಟ್ ಸಮಿತಿ ಆದಾಯ ತೆರಿಗೆ ಇಲಾಖೆಯ ಪ್ಯಾನ್ 2.0 ಯೋಜನೆಗೆ ತನ್ನ ಅನುಮೋದನೆ ನೀಡಿದೆ.

**ಏನಿದು ಪ್ಯಾನ್ 2.0. ಸಿಸ್ಟಮ್ ನವೀಕರಣ :** ಕಾರ್ಯಾಚರಣೆಯ ದಕ್ಷತೆಯನ್ನು ಹೆಚ್ಚಿಸಲು ಸಂಪೂರ್ಣವಾಗಿ ನವೀಕರಿಸಿದ, ತಂತ್ರಜ್ಞಾನ ಚಾಲಿತ ಚೌಕಟ್ಟು.

**ಸಾಮಾನ್ಯ ವ್ಯವಹಾರ ಗುರುತಿಸುವಿಕೆ :** ನಿರ್ದಿಷ್ಟ ವಲಯಗಳಲ್ಲಿ ವ್ಯವಹಾರ ಸಂಬಂಧಿತ ಚಟುವಟಿಕೆಗಳಿಗೆ ಪ್ಯಾನ್'ನ್ನ ಒಂದೇ ಗುರುತಿಸುವಿಕೆಯಾಗಿ ಸಂಯೋಜಿಸುವುದು.

**ಏಕೀಕೃತ ಪೋರ್ಟಲ್ :** ಎಲ್ಲಾ ಪ್ಯಾನ್ ಸಂಬಂಧಿತ ಸೇವೆಗಳಿಗೆ ಒನ್-ಸ್ಟಾಪ್ ಪ್ಲಾಟ್ಫಾರ್ಮ್.

**ಸೈಬರ್ ಭದ್ರತಾ ಕ್ರಮಗಳು :** ಬಳಕೆದಾರರ ಡೇಟಾವನ್ನು ರಕ್ಷಿಸಲು ದೃಢವಾದ ಸುರಕ್ಷಾ ಕ್ರಮಗಳ ಅನುಷ್ಠಾನ.

**ಪ್ಯಾನ್ ಡೇಟಾ ವಾಲ್ಟ್:** ಪ್ಯಾನ್ ಡೇಟಾವನ್ನು ಬಳಸುವ ಘಟಕಗಳಿಗೆ ಸುರಕ್ಷಿತ ಶೇಖರಣಾ ವ್ಯವಸ್ಥೆಯನ್ನು ಕಡ್ಡಾಯಗೊಳಿಸುವುದು.

# ಅದಾನಿ ಗ್ರೂಪ್ ನೀಡಿದ 100 ಕೋಟಿ ರೂ.ಗಳ ದೇಣಿಗೆ ತಿರಸ್ಕರಿಸಿದ ತೆಲಂಗಾಣ ಸರ್ಕಾರ

**ನವದೆಹಲಿ:** ಯಂಗ್ ಇಂಡಿಯಾ ಸ್ಕಿಲ್ ಯೂನಿವರ್ಸಿಟಿ ಸ್ಥಾಪನೆಗಾಗಿ ಅದಾನಿ ಗ್ರೂಪ್ ಅಧ್ಯಕ್ಷ ಗೌತಮ್ ಅದಾನಿ ನೀಡಿದ 100 ಕೋಟಿ ರೂ.ಗಳ ದೇಣಿಗೆಯನ್ನ ತೆಲಂಗಾಣ ರಾಜ್ಯ ಸರ್ಕಾರ ಸ್ವೀಕರಿಸುವುದಿಲ್ಲ ಎಂದು ಮುಖ್ಯಮಂತ್ರಿ ಎ.ರೇವಂತ್ ರೆಡ್ಡಿ ಸೋಮವಾರ ಪ್ರಕಟಿಸಿದ್ದಾರೆ. ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಮುಖ್ಯಮಂತ್ರಿ, ದೇಣಿಗೆಯು ರಾಜ್ಯ ಸರ್ಕಾರ ಅಥವಾ ಅದರ ನಾಯಕತ್ವಕ್ಕೆ ಅನುಕೂಲಕರವಾಗಿದೆ ಎಂಬ ಅನಗತ್ಯ ಚರ್ಚೆಗಳು ಅಥವಾ ಗ್ರಹಿಕೆಗಳನ್ನ ತಪ್ಪಿಸಲು ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ಹೇಳಿದರು. ಅದಾನಿ ಗ್ರೂಪ್ ಸೇರಿದಂತೆ ಯಾವುದೇ ಸಂಸ್ಥೆಯಿಂದ ತೆಲಂಗಾಣ ಸರ್ಕಾರ ಒಂದು ರೂಪಾಯಿಯನ್ನೂ ಸ್ವೀಕರಿಸಿಲ್ಲ. ರಾಜ್ಯ ಸರ್ಕಾರದ ಅಥವಾ ನನ್ನ ಪ್ರತಿಷ್ಠೆಗೆ ಧಕ್ಕೆ ತರುವಂತಹ ವಿವಾದಗಳಲ್ಲಿ ಭಾಗಿಯಾಗಲು ನಾನು ಅಥವಾ ನನ್ನ ಕ್ಯಾಬಿನೆಟ್ ಸಹೋದ್ಯೋಗಿಗಳು ಬಯಸುವುದಿಲ್ಲ'' ಎಂದು ರೆಡ್ಡಿ ಹೇಳಿದರು.




# ಇಮ್ರಾನ್ ಖಾನ್ ಬಿಡುಗಡೆಗೆ ಆಗ್ರಹಿಸಿ ಬೃಹತ್ ರ್ಯಾಲಿ

**ಇಸ್ಲಾಮಾಬಾದ್:** ಪಾಕಿಸ್ತಾನ್ ತೆಹ್ರೀಕ್ - ಇ - ಇನ್ಸಾಫ್ (ಪಿಟಿಐ) ಪಕ್ಷದ ಸರ್ಕಾರಿ ವಿರೋಧಿ 'ಅಂತಿಮ ಹೋರಾಟ' ಪ್ರತಿಭಟನಾ ರ್ಯಾಲಿಯು ಭಾನುವಾರ ಖೈಬರ್ ಪಖ್ತುನಖ್ವಾದ ಪೇಶಾವರದಿಂದ ಪ್ರಾರಂಭವಾಗಿದ್ದು, ಸದ್ಯ ಇಸ್ಲಾಮಾಬಾದಿನ ಹೊರವಲಯ ತಲುಪಿದೆ. ರ್ಯಾಲಿಯು ರಾಜಧಾನಿ ಇಸ್ಲಾಮಾಬಾದ್ ಒಳಗಡೆ ಪ್ರವೇಶಿಸದಂತೆ ತಡೆಯಲು ಭಾರಿ ಭದ್ರತಾ ವ್ಯವಸ್ಥೆಗಳನ್ನು ಮಾಡಲಾಗಿದೆ.

ಪಾಕಿಸ್ತಾನದ ಮಾಜಿ ಪ್ರಧಾನಿ ಇಮ್ರಾನ್ ಖಾನ್ ಅವರ ಪತ್ನಿ ಬುಶ್ರಾ ಬೀಬಿ ಪ್ರತಿಭಟನೆಯ ನೇತೃತ್ವ ವಹಿಸಿದ್ದು, ತನ್ನ ಪತಿ ಜೈಲಿನಿಂದ ಬಿಡುಗಡೆಯಾಗುವವರೆಗೂ ಪ್ರತಿಭಟನೆ ಮುಂದುವರಿಸುವುದಾಗಿ ಪ್ರತಿಜ್ಞೆಮಾಡಿದೆ.ಬುಶ್ರಾ ಬೀಬಿ ಅವರೊಂದಿಗೆ, ಖೈಬರ್ ಪಖ್ತುಂಖ್ವಾ ಮುಖ್ಯಮಂತ್ರಿ ಅಲಿ ಅಮೀನ್ ಗಂಡಾಪುರ್ ಕೂಡ ರ್ಯಾಲಿಯನ್ನು ಮುನ್ನಡೆಸುತ್ತಿದ್ದಾರೆ. ಸಾವಿರಾರು ಸಂಖ್ಯೆಯಲ್ಲಿ ಇಮ್ರಾನ್ ಖಾನ ಬೆಂಬಲಿಗರು ರ್ಯಾಲಿಗೆ ಜೊತೆಯಾಗುತ್ತಿದ್ದಾರೆ. ಭಾನುವಾರ ಇಸ್ಲಾಮಾಬಾದ್ನಿಂದ ಕೆಲ ಕಿಲೋಮೀಟರ್ ದೂರದಲ್ಲಿ ಕ್ಯಾಂಪ್ ಹೂಡಿದ್ದ ಪ್ರತಿಭಟನಾಕಾರರ ಮೇಲೆ ಭದ್ರತಾ ಪಡೆಗಳ ಯೋಧರು ರಬ್ಬರ್ ಗುಂಡುಗಳನ್ನು ಫೈರ್ ಮಾಡಿದ್ದಾರೆ. ಪ್ರತಿಭಟನಾಕಾರರು ರಾಜಧಾನಿಗೆ ಪ್ರವೇಶಿಸುವುದನ್ನು ತಡೆಯಲು ಇಸ್ಲಾಮಾಬಾದ್ ಗೆ ಹೋಗುವ ರಸ್ತೆಗಳಲ್ಲಿ ಹಲವಾರು ಹಡಗು ಕಂಟೇನರ್ಗಳನ್ನು ಅಡ್ಡಲಾಗಿ ಇರಿಸಲಾಗಿದೆ.ಪಿಟಿಐ ಬೆಂಬಲಿಗರನ್ನುದ್ದೇಶಿಸಿ ಮಾತನಾಡಿದ ಬುಶ್ರಾ ಬೀಬಿ, ಇಮ್ರಾನ್ ಖಾನ್ ಅವರ ಬಿಡುಗಡೆ ಖಚಿತಪಡಿಸಿಕೊಳ್ಳಲು ಎಲ್ಲರೂ ಮುಂದೆ ಸಾಗಬೇಕು ಎಂದು ಕರೆ ನೀಡಿದರು.

ನಾವು ನಮ್ಮ ರ್ಯಾಲಿಯನ್ನು ಮುಂದುವರಿಯುತ್ತೇವೆ ಮತ್ತು ಇಮ್ರಾನ್ ಖಾನ್ ಅವರನ್ನು ಬಿಡುಗಡೆ ಮಾಡಿಸಿಕೊಳ್ಳದೇ ಮರಳಿ ಹೋಗುವುದಿಲ್ಲ. ಇಮ್ರಾನ್ ಖಾನ್ ಬಿಡುಗಡೆಯಾಗುವವರೆಗೂ ನಾವು ಪ್ರತಿಭಟನೆಯನ್ನು ಹಿಂತೆಗೆದುಕೊಳ್ಳುವುದಿಲ್ಲ. ನನ್ನೊಂದಿಗೆ ಯಾರೂ ನಿಲ್ಲದಿದ್ದರೂ, ಇಮ್ರಾನ್ ಖಾನ್ ಇಲ್ಲದೇ ನಾನು ಹಿಂತಿರುಗುವುದಿಲ್ಲ. ಖೈಬರ್ ಪಖ್ತುಂಖ್ವಾದ ಪಠಾಣ್ಗಳು ತಮ್ಮ ಶಕ್ತಿಯನ್ನು ತೋರಿಸಬೇಕೆಂದು ಕರೆ ನೀಡುತ್ತೇನೆ. ಪಠಾಣ್ಗಳು ತಮ್ಮ ಗೌರವ ಮತ್ತು ಘನತೆಯೊಂದಿಗೆ ರಾಜಿ ಮಾಡಿಕೊಳ್ಳುವುದಿಲ್ಲ ಎಂಬುದು ನನಗೆ ಖಾತ್ರಿಯಿದೆ ಎಂದು ಅವರು ಹೇಳಿದರು.

# ಮೂರು ಪೂರಿ ಒಟ್ಟಿಗೆ ತಿನ್ನಲು ಹೋಗಿ ಗಂಟಲಿಗೆ ಸಿಕ್ಕಿಕೊಂಡು 11ರ ಬಾಲಕ ಸಾವು

**ಹೈದರಾಬಾದ್:** 11 ವರ್ಷದ ಬಾಲಕ ಪೂರಿ ತಿಂದು ಸಾವನ್ನಪ್ಪಿರುವ ಘಟನೆ ತೆಲಂಗಾಣದ ಸಿಕಂದರಾಬಾದ್‌ನ ಶಾಲೆಯೊಂದರಲ್ಲಿ ನಡೆದಿದೆ. ಮೃತ ಬಾಲಕನನ್ನು 6ನೇ ತರಗತಿಯ ವಿಕಾಸ್ ಜೈನ್ ಎಂದು ಗುರುತಿಸಲಾಗಿದೆ. ಸಿಕಂದರಾಬಾದ್‌ನ ತಿವೋಲಿ ಥಿಯೇಟರ್ ಬಳಿ ಇರುವ ಶಾಲೆಯಲ್ಲಿ ವಿಕಾಸ್ ಜೈನ್ 6ನೇ ತರಗತಿಯಲ್ಲಿ ಓದುತ್ತಿದ್ದ. ಮನೆಯಿಂದ ತಂದ ಪೂರಿಯನ್ನು ಮಧ್ಯಾಹ್ನ ಊಟದ ಸಮಯದಲ್ಲಿ ತಿನ್ನುವಾಗ ಈ ಘಟನೆ ಸಂಭವಿಸಿದೆ. ಸೋಮವಾರ (ನ.25) ಶಾಲೆಯಲ್ಲಿ ಮಧ್ಯಾಹ್ನ ಊಟದ ವೇಳೆ ಮೂರು ಪೂರಿ ಒಟ್ಟಿಗೆ ತಿಂದ ಪರಿಣಾಮ ಬಾಲಕನಿಗೆ ಉಸಿರುಗಟ್ಟಿ ನೆಲಕ್ಕೆ ಕುಸಿದಿದ್ದಾನೆ. ಎಷ್ಟೇ ಎಚ್ಚರಗೊಳಿಸಿದರೂ ಪ್ರಜ್ಞೆ ಬರದ ಕಾರಣ ಆತನನ್ನು ಕೂಡಲೇ ಹತ್ತಿರದ ಆಸ್ಪತ್ರೆಗೆ ದಾಖಲಿಸಲಾಯಿತು. ಬಳಿಕ ವೈದ್ಯರು ತಪಾಸಣೆ ಮಾಡಿ ಸಾವನ್ನಪ್ಪಿರುವುದಾಗಿ ಧೃಡಪಡಿಸಿದ್ದಾರೆ. ಶಾಲಾ ಆಡಳಿತ ಮಂಡಳಿ ಬಾಲಕನ ಪೋಷಕರಿಗೆ ಕರೆ ಮಾಡಿ ನಿಮ್ಮ ಮಗ ಊಟದ ಸಮಯದಲ್ಲಿ ಒಟ್ಟಿಗೆ ಮೂರು ಪೂರಿ ತಿಂದ ಪರಿಣಾಮ ಉಸಿರುಗಟ್ಟಿ ಸಾವನ್ನಪ್ಪಿದ್ದಾನೆ ಎಂದು ತಿಳಿಸಿದ್ದಾರೆ. ಸದ್ಯ ಪೊಲೀಸರು ಮೃತ ಬಾಲಕನ ಶವವನ್ನು ಮರಣೋತ್ತರ ಪರೀಕ್ಷೆಗಾಗಿ ಆಸ್ಪತ್ರೆಗೆ ರವಾನಿಸಿದ್ದು, ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸುತ್ತಿದ್ದಾರೆ. ಇಲ್ಲಿಯವರೆಗೂ ಆಂಧ್ರಪ್ರದೇಶದಲ್ಲಿ ಈ ರೀತಿಯ ಮೂರು ಘಟನೆಗಳು ವರದಿಯಾಗಿವೆ. ಕಳೆದ ತಿಂಗಳು ಆಂಧ್ರಪ್ರದೇಶದ ಕರ್ನೂಲ್ ಜಿಲ್ಲೆಯಲ್ಲಿ ವ್ಯಕ್ತಿಯೊಬ್ಬ ದೋಸೆ ತಿಂದು ಉಸಿರುಗಟ್ಟಿಸಿ ಸಾವನ್ನಪ್ಪಿದ್ದ. ವೆಂಕಟಯ್ಯ (43) ಅವರು ಸ್ಥಳೀಯ ಉಪಾಹಾರ ಗೃಹದಲ್ಲಿ ದೋಸೆ ತಿನ್ನುತ್ತಿದ್ದಾಗ ಅವರ ಗಂಟಲಿಗೆ ಆಹಾರ ಸಿಕ್ಕಿಹಾಕಿಕೊಂಡ ಪರಿಣಾಮ ಉಸಿರುಗಟ್ಟಿ ಸಾವನ್ನಪ್ಪಿದ್ದಾರೆ.ಜೂನ್‌ನಲ್ಲಿ ಹೈದರಾಬಾದ್‌ನಲ್ಲಿ 37 ವರ್ಷದ ವ್ಯಕ್ತಿಯೊಬ್ಬರು ಕೋಳಿಯ ಮೂಳೆಯ ತುಂಡು ಗಂಟಲಿಗೆ ಸಿಲುಕಿ ಉಸಿರುಗಟ್ಟಿ ಸಾವನ್ನಪ್ಪಿದ್ದರು. ಜನವರಿಯಲ್ಲಿ ಮಹಬೂಬ್‌ನಗರ ಜಿಲ್ಲೆಯಲ್ಲಿ ನಡೆದ ಇದೇ ರೀತಿಯ ಘಟನೆಯಲ್ಲಿ, ಊಟ ಮಾಡುವಾಗ ಕೋಳಿಯ ಮೂಳೆಯ ತುಂಡು ಗಂಟಲಿಗೆ ಸಿಲುಕಿ ಯುವಕನೊಬ್ಬ ಪ್ರಾಣ ಕಳೆದುಕೊಂಡಿದ್ದ.

# ಬಾಂಗ್ಲಾದೇಶದ ಇಸ್ಕಾನ್ ನಾಯಕ ಕೃಷ್ಣ ದಾಸ್ ಬ್ರಹ್ಮಚಾರಿ ಬಂಧನ

**ಢಾಕಾ:** ಬಾಂಗ್ಲಾದೇಶದ ಹಿಂದೂ ಮುಖಂಡ, ಇಸ್ಕಾನ್ ಸದಸ್ಯ ಕೃಷ್ಣ ದಾಸ್ ಬ್ರಹ್ಮಚಾರಿ ಅವರನ್ನು ಢಾಕಾ ವಿಮಾನ ನಿಲ್ದಾಣದಿಂದ ಅಧಿಕಾರಿಗಳು ವಶಕ್ಕೆ ಪಡೆದಿದ್ದಾರೆ ಎಂದು ಮೂಲಗಳು ತಿಳಿಸಿವೆ. ಅವರು ಬಾಂಗ್ಲಾದೇಶದ ಹಿಂದೂ ಅಲ್ಪಸಂಖ್ಯಾತರ ಪರ ವಕೀಲರಾಗಿ ಜನಪ್ರಿಯರಾಗಿದ್ದಾರೆ.



ಹಿಂದೂಗಳ ಮೇಲೆ ಮುಸ್ಲಿಮರು ನಡೆಸುವ ದಾಳಿಯನ್ನು ಖಂಡಿಸಿ ಚಿನ್ಮೋಯ್ ಕೃಷ್ಣ ದಾಸ್ ಬ್ರಹ್ಮಚಾರಿ (ಕೃಷ್ಣ ದಾಸ್ ಪ್ರಭು) ಬೃಹತ್ ಪ್ರತಿಭಟನೆ ಮತ್ತು ರ್ಯಾಲಿ ಆಯೋಜಿಸಿದ್ದಾರೆ. ಅಲ್ಲದೆ ಹಿಂದೂಗಳ ಮೇಲಿನ ದೌರ್ಜನ್ಯ ವಿರುದ್ಧ ಧ್ವನಿ ಎತ್ತಿದ್ದಕ್ಕೆ ಅವರನ್ನು ಬಂಧಿಸಲಾಗಿದೆ ಎಂದು ಹೋರಾಟಗಾರರು ತಿಳಿಸಿದ್ದಾರೆ. ಇದಕ್ಕೂ ಮೊದಲು ಬಾಂಗ್ಲಾ ದೇಶದ ಅಧಿಕಾರಿಗಳು ಬ್ರಹ್ಮಚಾರಿ ವಿರುದ್ಧ ದೇಶದ್ರೋಹದ ಪ್ರಕರಣ ದಾಖಲಿಸಿದ್ದರು. ಸದ್ಯ ಅವರ ಬಂಧನದ ಕುರಿತು ಅಧಿಕಾರಿಗಳು ಅದಿಕೃತ ಹೇಳಿಕೆ ಬಿಡುಗಡೆ ಮಾಡಿಲ್ಲ. ಕೃಷ್ಣ ದಾಸ್ ಬ್ರಹ್ಮಚಾರಿ ಅವರು ಇಸ್ಕಾನ್ ಹಿಂದೂ ಸಂಘಟನೆಯ ಸ್ಥಾಪಕರಲ್ಲಿ ಒಬ್ಬರು ಮತ್ತು ಬಾಂಗ್ಲಾದೇಶದ ಹಿಂದೂ ಅಲ್ಪಸಂಖ್ಯಾತರ ಪ್ರಮುಖ ವಕೀಲರು. ಅವರು ಸನಾತನ ಜಾಗರಣ್ ಮಂಚ್, ಬಾಂಗ್ಲಾದೇಶದ ಸನಾತನ ಜಾಗರಣ್ ಮಂಚ್ ಇದರ ವಕ್ತಾರರು ಮತ್ತು ಪುಂಡರಿಕ್ ಧಾಮ್ನ ಪ್ರಾಂಶುಪಾಲರು. ಬಾಂಗ್ಲಾದೇಶದಲ್ಲಿ ಹಿಂದೂಗಳು ಸೇರಿದಂತೆ ಧಾರ್ಮಿಕ ಅಲ್ಪಸಂಖ್ಯಾತರ ವಿರುದ್ಧದ ಹಿಂಸಾಚಾರದ ಬಗ್ಗೆ ಅವರು ನಿರಂತರವಾಗಿ ಧ್ವನಿ ಎತ್ತುತ್ತಿದ್ದಾರೆ.

ಕೆಲವು ತಿಂಗಳ ಹಿಂದೆ ಪ್ರಧಾನಿ ಶೇಕ್ ಹಸೀನಾ ಪಲಾಯನ ಮಾಡಿದ ಬಳಿಕ ದೇಶದಲ್ಲಿ ಹಿಂದೂಗಳ ಮೇಲಿನ ದೌರ್ಜನ್ಯ ಅಧಿಕವಾಗಿದೆ. ಅಲ್ಪ ಸಂಖ್ಯಾತರಿಗೆ ಸಂರಕ್ಷಣೆ ಒದಗಿಸಲು ವಿಫಲರಾದ ಮಧ್ಯಂತರ ಸರ್ಕಾರದ ಮುಖ್ಯ ಸಲಹೆಗಾರ ಮುಹಮ್ಮದ್ ಯೂನಸ್ ವಿರುದ್ಧ ವ್ಯಾಪಕ ಟೀಕೆ ಕೇಳಿ ಬಂದಿದೆ. ಕೃಷ್ಣ ದಾಸ್ ಅವರು ಬಾಂಗ್ಲಾದಲ್ಲಿನ ಹಿಂದೂಗಳ ಪ್ರಮುಖ ನಾಯಕರಾಗಿದ್ದು, ದೌರ್ಜನ್ಯವನ್ನು ಕಟುವಾದ ಶಬ್ದಗಳಲ್ಲಿ ಟೀಕಿಸುತ್ತಾರೆ. ಸದ್ಯ ಅವರ ಬಂಧನ ಹಿಂದೂಗಳಿಗೆ ಆತಂಕ ತಂದಿತ್ತಿದೆ. ಅವರನ್ನು ಬಂಧಿಸಿ ಅಜ್ಞಾತ ಸ್ಥಳಕ್ಕೆ ಕರೆದೊಯ್ಯಲಾಗಿದೆ ಎಂದು ಮೂಲಗಳು ವರದಿ ಮಾಡಿವೆ.

# ಸಂವಿಧಾನದ ಪೀಠಿಕೆಯಿಂದ 'ಸಮಾಜವಾದಿ', 'ಜಾತ್ಯತೀತ' ಪದ ತೆಗೆಯಲು ಸುಪ್ರಿಂ ಅಸಮ್ಮತಿ

**ದೆಹಲಿ:** ಮಹತ್ವದ ಬೆಳವಣಿಗೆಯೊಂದರಲ್ಲಿ ಸಂವಿಧಾನದ ಪೀಠಿಕೆ ಯಲ್ಲಿ 'ಸಮಾಜವಾದಿ' 'ಜಾತ್ಯತೀತ' ಮತ್ತು 'ಸಮಗ್ರತೆ' ಎಂಬ ಪದಗಳನ್ನು ಸೇರಿಸಿದ್ದ 1976ರ ತಿದ್ದುಪಡಿಯನ್ನು ಪ್ರಶ್ನಿಸಿ ಸಲ್ಲಿಸಲಾಗಿದ್ದ ಅರ್ಜಿಗಳನ್ನು ಸುಪ್ರೀಂ ಕೋರ್ಟ್ ವಜಾಗೊಳಿಸಿದೆ.

ಸಂವಿಧಾನದ ಪೀಠಿಕೆಯಲ್ಲಿ ಸಮಾಜವಾದಿ ಮತ್ತು ಜಾತ್ಯತೀತ ಪದಗಳನ್ನು ಸೇರಿಸುವುದನ್ನು ಪ್ರಶ್ನಿಸಿ ಮಾಜಿ ರಾಜ್ಯಸಭಾ ಸಂಸದ ಸುಬ್ರಮಣಿಯನ್ ಸ್ವಾಮಿ, ವಕೀಲ ವಿಷ್ಣು ಶಂಕರ್ ಜೈನ್ ಮತ್ತು ಇತರರು ಸಲ್ಲಿಸಿದ್ದ ಅರ್ಜಿಗಳ ವಿಚಾರಣೆ ನಡೆಸಿದ್ದ ಮುಖ್ಯ ನ್ಯಾಯಮೂರ್ತಿ ಸಂಜೀವ್ ಖನ್ನಾ ಮತ್ತು ನ್ಯಾಯಮೂರ್ತಿ ಸಂಜಯ್ ಕುಮಾರ್ ಅವರನ್ನೊಳಗೊಂಡ ನ್ಯಾಯಪೀಠ ನ. 22ರಂದು ತೀರ್ಪನ್ನು ಕಾಯ್ದಿರಿಸಿತ್ತು. ಈ ಬಗ್ಗೆ ಇಂದು ತೀರ್ಪು ಪ್ರಕಟಿಸಿದೆ. ಈ ಅರ್ಜಿಗಳ ಬಗ್ಗೆ ವಿವರವಾದ ವಿಚಾರಣೆ ನಡೆಸುವ ಅಗತ್ಯವಿಲ್ಲ ಎಂದು ಸಿಜೆಐ ಸಂಜೀವ್ ಖನ್ನಾ ಹೇಳಿದ್ದಾರೆ.

ತುರ್ತು ಪರಿಸ್ಥಿತಿಯ ವೇಳೆ 1976ರಲ್ಲಿ ಅಂದಿನ ಪ್ರಧಾನಿಯಾಗಿದ್ದ ಇಂದಿರಾ ಗಾಂಧಿ ಅವರು 42ನೇ ತಿದ್ದುಪಡಿಯ ಮೂಲಕ ಭಾರತದ ಸಂವಿಧಾನದ ಪೀಠಿಕೆಯಲ್ಲಿ 'ಜಾತ್ಯತೀತ' ಮತ್ತು 'ಸಮಾಜವಾದಿ' ಪದವನ್ನು ಸೇರಿಸಿದ್ದರು. ಈ ಪದಗಳ ಸೇರ್ಪಡೆಯು ಸಂವಿಧಾನ ಪೀಠಿಕೆಯ ಮೂಲ ಅಳವಡಿಕೆಗೆ ಅಸಮಂಜಸವಾಗಿಸಿದೆ ಎಂದು ಸುಬ್ರಮಣಿಯನ್ ಸ್ವಾಮಿ ವಾದಿಸಿದ್ದರು. ಪದಗಳು ಮೂಲ ಪಠ್ಯದ



ಭಾಗವೆಂದು ಸೂಚಿಸುವ ಬದಲು ಅವುಗಳನ್ನು ನಂತರದ ಸೇರ್ಪಡೆಗಳಾಗಿ ಗುರುತಿಸಬೇಕೆಂದು ಅವರು ಸಲಹೆ ನೀಡಿದ್ದರು.

'ಸಮಾಜವಾದಿ' ಮತ್ತು 'ಜಾತ್ಯತೀತ' ಎಂಬ ಎರಡು ಪದಗಳನ್ನು 1976ರಲ್ಲಿ ತಿದ್ದುಪಡಿಗಳ ಮೂಲಕ ಸೇರಿಸಲಾಯಿತು ಮತ್ತು ಸಂವಿಧಾನವನ್ನು 1949ರಲ್ಲಿ ಅಂಗೀಕರಿಸಲಾಯಿತು ಎಂಬ ಅಂಶದಲ್ಲಿ ಯಾವುದೇ ವ್ಯತ್ಯಾಸ ಉಂಟಾಗುವುದಿಲ್ಲ. ಮರುಪರಿಶೀಲನೆಯ ವಾದಗಳನ್ನು ಒಪ್ಪಿಕೊಂಡರೆ ಅದು ಎಲ್ಲ ತಿದ್ದುಪಡಿಗಳಿಗೆ ಅನ್ವಯಿಸುತ್ತದೆ. ಈ ಬಗ್ಗೆ ವಿವರವಾದ ವಿಚಾರಣೆ ನಡೆಸುವ ಅಗತ್ಯವಿಲ್ಲ'' ಎಂದು ಸಿಜೆಐ ಸಂಜೀವ್ ಖನ್ನಾ ಅವರು ತೀರ್ಪಿನಲ್ಲಿ ತಿಳಿಸಿದ್ದಾರೆ.

# ಬಾಂಗ್ಲಾದಲ್ಲಿ ಪ್ರತಿಭಟನೆ: ವಾಹನಗಳಿಗೆ ಬೆಂಕಿ

**ಢಾಕ:** ಬಾಂಗ್ಲಾದೇಶದಲ್ಲಿ ಮತ್ತೊಮ್ಮೆ ವಿದ್ಯಾರ್ಥಿಗಳು ಬೀದಿಗಿಳಿದು ಪ್ರತಿಭಟನೆ ನಡೆಸಿದ್ದು ಹಲವು ವಾಹನಗಳಿಗೆ ಬೆಂಕಿ ಹಚ್ಚಿದ್ದಾರೆ. ವೈದ್ಯಕೀಯ ವಿದ್ಯಾರ್ಥಿಯೊಬ್ಬನ ಸಾವಿಗೆ ಆಸ್ಪತ್ರೆಯ ಸಿಬ್ಬಂದಿಗಳ ನಿರ್ಲಕ್ಷ್ಯ ಕಾರಣ ಎಂದು ಆರೋಪಿಸಿ ವಿದ್ಯಾರ್ಥಿಗಳು ಪ್ರತಿಭಟನೆ ನಡೆಸುತ್ತಿರುವುದಾಗಿ ವರದಿಯಾಗಿದೆ. ಡೆಂಗ್ಯೂಯಿಂದ ಬಳಲುತ್ತಿದ್ದ 18 ವರ್ಷದ ವಿದ್ಯಾರ್ಥಿಯೊಬ್ಬನನ್ನು ಢಾಕಾ ರಾಷ್ಟ್ರೀಯ ವೈದ್ಯಕೀಯ ಕಾಲೇಜು ಆಸ್ಪತ್ರೆಗೆ ಸೇರಿಸಲಾಗಿದ್ದು ಆತ ನವೆಂಬರ್ 18ರಂದು ಸಾವನ್ನಪ್ಪಿದ್ದ. ವಿದ್ಯಾರ್ಥಿಯ ಸಾವಿಗೆ ಆಸ್ಪತ್ರೆಯಲ್ಲಿ ನೀಡಿದ ತಪ್ಪು ಚಿಕಿತ್ಸೆ ಕಾರಣ ಎಂದು ಆತನ ಮಿತ್ರರು ಫೇಸ್ಬುಕ್ನಲ್ಲಿ ಪೋಸ್ಟ್ ಮಾಡಿದ್ದರು. ಆಸ್ಪತ್ರೆಯ ಸಿಬ್ಬಂದಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿ ಕಳೆದ 3 ದಿನಗಳಿಂದ ವಿದ್ಯಾರ್ಥಿಗಳು ನಡೆಸುತ್ತಿದ್ದ ಪ್ರತಿಭಟನೆ ರವಿವಾರ ಹಿಂಸಾಚಾರಕ್ಕೆ ತಿರುಗಿದೆ.



ಢಾಕಾದ ಶಾಹಿದ್ ಸುಹ್ರವರ್ದಿ ಸರ್ಕಾರಿ ಕಾಲೇಜಿಗೆ ನುಗ್ಗಿದ ವಿದ್ಯಾರ್ಥಿಗಳ ಗುಂಪು 6 ವಾಹನಗಳನ್ನು ಜಖಂಗೊಳಿಸಿ ದಾಂಧಲೆ ನಡೆಸಿದೆ. ಬಳಿಕ ಢಾಕಾ ವೈದ್ಯಕೀಯ ಕಾಲೇಜು ಹಾಗೂ ಇತರ ಕಾಲೇಜಿಗೆ ನುಗ್ಗಲು ವಿದ್ಯಾರ್ಥಿಗಳ ಗುಂಪು ಯತ್ನಿಸಿದಾಗ ವಿದ್ಯಾರ್ಥಿಗಳ ಎರಡು ಗುಂಪಿನ ನಡುವೆ ಘರ್ಷಣೆ ನಡೆದು 30 ಮಂದಿ ಗಾಯಗೊಂಡಿದ್ದಾರೆ. ರವಿವಾರ ಬೆಳಿಗ್ಗೆ ಸುಹ್ರವರ್ದಿ ಕಾಲೇಜಿನ ಸುತ್ತಮುತ್ತ ಇರುವ ಅಂಗಡಿಗಳನ್ನು ವಿದ್ಯಾರ್ಥಿಗಳ ಗುಂಪು ಲೂಟಿ ಮಾಡಿದ ಹಿನ್ನೆಲೆಯಲ್ಲಿ ಢಾಕಾದ ಕಾಲೇಜುಗಳು, ಹಾಸ್ಟೆಲ್‌ಗಳು ಹಾಗೂ ಪ್ರಾರ್ಥನಾ ಸ್ಥಳಗಳ ಬಳಿ ಸೇನೆಯನ್ನು ನಿಯೋಜಿಸಲಾಗಿದೆ ಎಂದು ಮಾಧ್ಯಮಗಳು ವರದಿ ಮಾಡಿವೆ.

# ಪಾಕಿಸ್ತಾನದಲ್ಲಿ ಬುಡಕಟ್ಟು ಗುಂಪುಗಳ ಘರ್ಷಣೆ

**ಇಸ್ಲಾಮಾಬಾದ್:** ಪಾಕಿಸ್ತಾನದ ವಾಯುವ್ಯ ಕುರ್ರಾಮ್ ಜಿಲ್ಲೆಯ ಖೈಬರ್ ಪಖ್ತುಂಖ್ವಾ (ಕೆಪಿ) ಪ್ರಾಂತ್ಯದ ಎರಡು ಬುಡಕಟ್ಟು ಗುಂಪುಗಳು ಕದನ ವಿರಾಮಕ್ಕೆ ಒಪ್ಪಿಕೊಂಡಿವೆ. ಬುಡಕಟ್ಟು ಗುಂಪುಗಳ ಘರ್ಷಣೆಯಲ್ಲಿ 65 ಜನ ಸಾವಿಗೀಡಾಗಿದ್ದಾರೆ ಎಂದು ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಬುಡಕಟ್ಟು ಜನಾಂಗಗಳು ಏಳು ದಿನಗಳ ಕಾಲ ಕದನ ವಿರಾಮಕ್ಕೆ ಒಪ್ಪಿಕೊಂಡಿವೆ ಮತ್ತು ಉದ್ವಿಗ್ನತೆ ಕಡಿಮೆ ಮಾಡಲು ಎಲ್ಲ ಸಮಸ್ಯೆಗಳನ್ನು ಸೌಹಾರ್ದಯುತವಾಗಿ ಪರಿಹರಿಸುವ ಪ್ರಯತ್ನಗಳು ನಡೆಯುತ್ತಿವೆ ಎಂದು ಖೈಬರ್ ಪಖ್ತುಂಖ್ವಾ ಪ್ರಾಂತ್ಯದ ಮಾಹಿತಿ ಸಚಿವ ಮತ್ತು ಪ್ರಾಂತೀಯ ಸರ್ಕಾರದ ವಕ್ತಾರ ಮುಹಮ್ಮದ್ ಅಲಿ ಸೈಫ್ ಭಾನುವಾರ ಮಾಧ್ಯಮಗಳಿಗೆ ತಿಳಿಸಿದರು.

ಮಾತುಕತೆಗೆ ಅನುಕೂಲವಾಗುವಂತೆ ಸರ್ಕಾರದ ಕ್ರಮ: ಮಾತುಕತೆಗೆ ಅನುಕೂಲವಾಗುವಂತೆ ಸರ್ಕಾರದ ತಂಡವು ಸ್ಥಳೀಯ ನಾಯಕರೊಂದಿಗೆ ನಿಕಟವಾಗಿ ಕಾರ್ಯನಿರ್ವಹಿಸುತ್ತಿದೆ. ಪರಸ್ಪರರ ಸೆರೆಯಾಳುಗಳನ್ನು ಹಿಂದಿರುಗಿಸಲು ಪಕ್ಷಗಳು ಸಂಪೂರ್ಣ ಒಪ್ಪಂದಕ್ಕೆ ಬಂದಿವೆ ಎಂದು ಅವರು ಹೇಳಿದರು.



ಗುರುವಾರ, ಶಿಯಾ ಮುಸ್ಲಿಮರನ್ನು ಕರೆದೊಯ್ಯುತ್ತಿದ್ದ ಪ್ರಯಾಣಿಕರ ಬೋಗಿಗಳ ಬೆಂಗಾವಲು ವಾಹನದ ಮೇಲೆ ಅಪರಿಚಿತ ಬಂದೂಕುಧಾರಿಗಳು ದಾಳಿ ನಡೆಸಿದ ನಂತರ ಪ್ರಾಂತ್ಯದ ಕುರ್ರಾಮ್ ಜಿಲ್ಲೆಯಲ್ಲಿ ಘರ್ಷಣೆಗಳು ಭುಗಿಲೆದ್ದಿದ್ದು, 45 ಜನರು ಸಾವನ್ನಪ್ಪಿದ್ದಾರೆ ಮತ್ತು ಕನಿಷ್ಠ 16 ಜನರು ಗಾಯಗೊಂಡಿದ್ದಾರೆ ಎಂದು ಕ್ಸಿನ್ಹುವಾ ಸುದ್ದಿ ಸಂಸ್ಥೆ ವರದಿ ಮಾಡಿದೆ.

ಕನಿಷ್ಠ 65 ಸಾವು, ಡಜನ್ಗಟ್ಟಲೆ ಮಂದಿ ಸ್ಥಿತಿ ಗಂಭೀರ: ಸರ್ಕಾರಿ ಅಧಿಕಾರಿಗಳ ಪ್ರಕಾರ, ಗುರುವಾರದ ದಾಳಿಯ ನಂತರ ಸಾವಿನ ಸಂಖ್ಯೆ ಕನಿಷ್ಠ 65 ಕ್ಕೆ ಏರಿದೆ ಮತ್ತು ಎರಡೂ ಗುಂಪುಗಳು ಪ್ರತೀಕಾರದ ಹಿಂಸಾಚಾರಕ್ಕೆ ಇಳಿದಿದ್ದರಿಂದ ಡಜನ್ ಗಟ್ಟಲೆ ಜನರು ಗಾಯಗೊಂಡಿದ್ದಾರೆ.

ಕುರ್ರಾಮ್ ಜಿಲ್ಲೆಯು ಪಂಥೀಯ ಹಿಂಸಾಚಾರದ ಇತಿಹಾಸವನ್ನು ಹೊಂದಿದೆ. ಈ ವರ್ಷದ ಆರಂಭದಲ್ಲಿ, ಸೆಪ್ಟೆಂಬರ್ನಲ್ಲಿ ಪ್ರತ್ಯೇಕ ಘಟನೆಗಳಲ್ಲಿ ಎರಡೂ ಪಂಥಗಳ ಕನಿಷ್ಠ 60 ಜನರು ಸಾವನ್ನಪ್ಪಿದ್ದಾರೆ ಎಂದು ಪ್ರಾಂತೀಯ ಗವರ್ನರ್ ಫೈಸಲ್ ಕರೀಮ್ ಕುಂಡಿ ತಿಳಿಸಿದ್ದಾರೆ

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಮದುವೆ ಬಗ್ಗೆ ನೇರವಾಗಿ ಮಾತನಾಡಿದ ರಶ್ಮಿಕಾ ಮಂದಣ್ಣ



ರಶ್ಮಿಕಾ ಮಂದಣ್ಣ ಹಾಗೂ ವಿಜಯ ದೇವರಕೊಂಡ ಅವರು ತಮ್ಮ ಡೇಟಿಂಗ್ ವಿಚಾರ ಸೈಲೆಂಟ್ ಆಗಿದ್ದಾರೆ. ಈ ಫೋಟೋಗಳು ವೈರಲ್ ಆಗಿವೆ. ಇವರು ಪ್ರೀತಿ ಮಾಡುತ್ತಿದ್ದಾರೆ ಎನ್ನುವ ವಿಚಾರ ಈಗ ರಹಸ್ಯವಾಗಿ ಉಳಿದಿಲ್ಲ. ಇವರು ಶೀಘ್ರವೇ ವಿವಾಹ ಆಗುತ್ತಾರೆ ಎಂದು ಹೇಳಲಾಗುತ್ತಿದೆ. ಹೀಗಿರುವಾಗಲೇ ರಶ್ಮಿಕಾ ಮಂದಣ್ಣ ಅವರು ಮದುವೆ ವಿಚಾರ ಮಾತನಾಡಿದ್ದಾರೆ. ವಿಜಯ್ ನ ಮದುವೆ ಆಗುತ್ತಿರುವ ವಿಚಾರನ ಅವರು ಪರೋಕ್ಷವಾಗಿ ಒಪ್ಪಿಕೊಂಡಿದ್ದಾರೆ.

ರಶ್ಮಿಕಾ ಮಂದಣ್ಣ ಅವರು 'ಪುಷ್ಪ 2' ಸಿನಿಮಾ ಪ್ರಚಾರದಲ್ಲಿ ಬ್ಯುಸಿ ಇದ್ದಾರೆ. ಚೆನ್ನೈನಲ್ಲಿ ಭಾನುವಾರ (ನವೆಂಬರ್ 24) ರಾತ್ರಿ ಪ್ರಚಾರದಲ್ಲಿ ಭಾಗಿ ಆಗಿದ್ದಾರೆ. ಈ ವೇಳೆ ಅವರಿಗೆ ವೈಯಕ್ತಿಕ ವಿಚಾರದ ಬಗ್ಗೆ ಚರ್ಚೆ ನಡೆದಿದೆ. ಈ ವೇದಿಕೆ ಮೇಲೆ ಹೋಸ್ಟ್ ಅವರು ರಶ್ಮಿಕಾ ಮಂದಣ್ಣ ಬಳಿ ಮದುವೆ ಬಗ್ಗೆ ಪ್ರಶ್ನೆ ಮಾಡಿದ್ದಾರೆ. ಇದಕ್ಕೆ ರಶ್ಮಿಕಾ ಕಡೆಯಿಂದ ಸ್ಪಷ್ಟನೆ ಸಿಕ್ಕಿದೆ.

'ನೀವು ಸಿನಿಮಾ ಇಂಡಸ್ಟ್ರಿಯನ್ನು ಮದುವೆ ಆಗ್ತೀರಾ ಅಥವಾ ಹೊರಗಿನವರನ್ನು ಮದುವೆ ಆಗ್ತೀರಾ ನೀವು ಕ್ಲ್ಯಾರಿಟಿ ಕೊಟ್ಟರೆ ನಾವು ಹುಡುಗನ ಹುಡುಕುತ್ತೀರಿ' ಎಂದು ಹೋಸ್ಟ್ ಹೇಳಿದರು. 'ಎಲ್ಲರಿಗೂ ಆ ಬಗ್ಗೆ ಗೊತ್ತು' ಎಂದು ರಶ್ಮಿಕಾ ಹೇಳಿದ್ದಾರೆ. ಈ ಮಾತನ್ನು ಕೇಳಿ ಎಲ್ಲರೂ ಚಿಯರ್ ಮಾಡಿದರು. 'ನಿಮಗೆ ಯಾವ ಉತ್ತರ ಬೇಕು ಎಂಬುದು ನಂಗೆ ಗೊತ್ತು. ನನಗೆ ಚೆನ್ನಾಗಿ ಗೊತ್ತು' ಎಂದು ರಶ್ಮಿಕಾ ಹೇಳಿದರು.

ರಶ್ಮಿಕಾ ಹಾಗೂ ವಿಜಯ್ ದೇವರಕೊಂಡ ಡೇಟಿಂಗ್ ಮಾಡುತ್ತಿದ್ದಾರೆ. 'ನಾನು ನನ್ನ ಕೋಸ್ಟಾರ್ ಜೊತೆ ಡೇಟಿಂಗ್ ಮಾಡಿದ್ದೇನೆ. ನಾವು ಒಂದಲ್ಲಾ ಒಂದು ಸಂದರ್ಭದಲ್ಲಿ ಮದುವೆ ಆಗೇ ಆಗುತ್ತೇವೆ' ಎಂದು ವಿಜಯ್ ಹೇಳಿದ್ದಾರೆ. ವಿಜಯ್ ಹಾಗೂ ರಶ್ಮಿಕಾ 'ಗೀತ ಗೋವಿಂದಂ' ಸಿನಿಮಾ ಹಾಗೂ 'ಡಿಯರ್ ಕಾಮ್ರೇಡ್ ' ಸಿನಿಮಾದಲ್ಲಿ ಇವರು ಒಟ್ಟಾಗಿ ಕಾಣಿಸಿಕೊಂಡಿದ್ದರು.

# ನಟಿಯರ ಕೈಗೆ ಉಗಿಯುತ್ತಿದ್ದ ಆಮಿರ್ ಖಾನ್



ಆಮಿರ್ ಖಾನ್ ಅವರು ಇತ್ತೀಚೆಗೆ ಸಿನಿಮಾ ಮಾಡಿದ್ದು ಕಡಿಮೆ. ಅವರು ಹಲವು ಸೂಪರ್ ಹಿಟ್ ಚಿತ್ರಗಳನ್ನು ನೀಡಿದವರು. ಅವರು ಹೆಚ್ಚೆಚ್ಚು ಸಿನಿಮಾ ಮಾಡಲಿ ಎಂದು ಫ್ಯಾನ್ಸ್ ಕಾಯುತ್ತಿದ್ದಾರೆ. ಆಮಿರ್ ಖಾನ್ ಅವರು ಹೀರೋಯಿನ್ ಗಳ ಕೈಗೆ ಉಗಿಯುತ್ತಿದ್ದರು. ಇದಕ್ಕೆ ಅವರು ನೀಡುತ್ತಿದ್ದ ಕಾರಣ ವಿಚಿತ್ರವಾಗಿತ್ತು. ದಂಗಲ್ ನಟಿಯರಾದ ಫಾತಿಮಾ ಸನಾ ಶೇಖ್, ಸಾನ್ಯಾ ಮಲ್ಹೋತ್ರಾ ಮೊದಲಾದವರು ಇದನ್ನು ಖಚಿತಪಡಿಸಿದ್ದರು.

2016ರಲ್ಲಿ ಆಮಿರ್ ಖಾನ್ ಅವರ ಬಗ್ಗೆ ವೇದಿಕೆ ಮೇಲೆ ಫರಾ ಖಾನ್ ಹೇಳಿದ್ದರು. ಆಮಿರ್ ಖಾನ್ ಮಾಡಿದ ಪ್ರ್ಯಾಂಕ್ ಸಾಕಷ್ಟು ಚರ್ಚೆ ಹುಟ್ಟುಹಾಕಿತ್ತು. 'ಆಮಿರ್ ಖಾನ್ ಅವರು ಎಲ್ಲರಿಗೂ ಹೀಗೆಯೇ ಮಾಡುತ್ತಿದ್ದರು. ನಿಮ್ಮ ಕೈ ನೋಡಿ ಭವಿಷ್ಯ ಹೇಳುತ್ತೇನೆ ಎಂದು ಹೇಳಿ ಅವರು ಕೈ ಹಿಡಿದು ಅದಕ್ಕೆ ಉಗಿದು ಓಡಿ ಹೋಗುತ್ತಿದ್ದರು' ಎಂದಿದ್ದರು ಫರಾ ಖಾನ್.

'ನಾನು ಹೀರೋಯಿನ್ ಗಳ ಕೈಗೆ ಏಕೆ ಉಗಿಯುತ್ತಿದ್ದೆ ಎಂಬುದನ್ನು ತಿಳಿದುಕೊಳ್ಳಬೇಕಿತ್ತು. ನಾನು ಯಾವ ಹೀರೋಯಿನ್ ಗಳ ಕೈ ಮೇಲೆ ತುಪ್ಪೋತ್ತಿದ್ದೆನೋ ಅವರು ನಂಬರ್ ಒನ್ ಆಗುತ್ತಿದ್ದರು' ಎಂದಿದ್ದ ಆಮಿರ್ ಖಾನ್, ಫಾತಿಮಾ ಹಾಗೂ ಸಾನ್ಯಾ ಕೈಗಳ ಮೇಲೆ ಉಗಿದಿದ್ದನ್ನು ಒಪ್ಪಿಕೊಂಡಿದ್ದರು.

ಈ ವಿಡಿಯೋ ಈಗ ವೈರಲ್ ಆಗಿದೆ. 'ಆಮಿರ್ ಖಾನ್ ಅವರು ಲಾಲ್ ಸಿಂಗ್ ಚಡ್ಡಾ ಹಾಗೂ ಥಗ್ಸ್ ಆಫ್ ಹಿಂದೂಸ್ತಾನ ಸಿನಿಮಾಗಳ ಮೇಲೂ

## ಈ ಕೆಟ್ಟ ಸಂಪ್ರದಾಯದ ಹಿಂದಿನ ಕಾರಣ?

ಎಂಜಲು ಉಗಿಯಬೇಕಿತ್ತು. ಆಗಲಾದರೂ ಸಿನಿಮಾ ಹಿಟ್ ಆಗುತ್ತಿತ್ತೇನೋ' ಎಂದು ಕೆಲವರು ಕಾಲೆಳೆದಿದ್ದಾರೆ. 'ಸೆಲೆಬ್ರಿಟಿ ಹಾಗೂ ಶ್ರೀಮಂತರು ಏನೇ ಮಾಡಿದರೂ ಅದು ಫನ್ನಿ ಎಂದು ಅವರೇ ಅಂದುಕೊಳ್ಳಬೇಕು' ಎಂದಿದ್ದಾರೆ ಅವರು. 'ಇದೆಂಥಾ ಲಾಜಿಕ್ ಇದು ಪ್ರ್ಯಾಂಕ್ ಎನ್ನಬಹುದೇ ಇದನ್ನು ಒಪ್ಪಿಕೊಳ್ಳಲು ಸಾಧ್ಯವಿಲ್ಲ' ಎಂದು ಕೆಲವರು ಕಮೆಂಟ್ ಮಾಡಿದ್ದಾರೆ.

ಈ ಮೊದಲು ಆಮಿರ್ ಖಾನ್ ಹಾಗೂ ಮಾಧುರಿ ದೀಕ್ಷಿತ್ ಮಧ್ಯೆ ವೈಮನಸ್ಸು ಮೂಡಿತ್ತು. ಇದಕ್ಕೆ ಆಮಿರ್ ಖಾನ್ ಮಾಡಿದ್ದ ಪ್ರ್ಯಾಂಕ್ ಕಾರಣ. ಆಮಿರ್ ಖಾನ್ ಅವರು ಮಾಧುರಿ ದೀಕ್ಷಿತ್ ಅವರ ಕೈ ಹಿಡಿದುಕೊಂಡು ತುಪ್ಪಿದ್ದರು. ಇದು ಸಾಕಷ್ಟು ಚರ್ಚೆ ಹುಟ್ಟುಹಾಕಿತ್ತು.

ಆಮಿರ್ ಖಾನ್ ಅವರು ಸದ್ಯ ಸಿನಿಮಾ ನಿರ್ಮಾಣದಲ್ಲಿ ಬ್ಯುಸಿ ಇದ್ದಾರೆ. ಅವರು 'ಸಿತಾರೆ ಜಮೀನ್ ಪರ್' ಸಿನಿಮಾ ಕೆಲಸಗಳಲ್ಲಿ ಬ್ಯುಸಿ ಇದ್ದಾರೆ. ಈ ಚಿತ್ರಕ್ಕಾಗಿ ಫ್ಯಾನ್ಸ್ ಕಾದಿದ್ದಾರೆ.

# ಕೊನೆಗೂ ಐಶ್ವರ್ಯಾ ರೈಗೆ ಓಪನ್ ಆಗಿ ಧನ್ಯವಾದ ಹೇಳಿದ ಅಭಿಷೇಕ್



ಅಭಿಷೇಕ್ ಬಚ್ಚನ್ ಹಾಗೂ ಐಶ್ವರ್ಯಾ ರೈ ಮಧ್ಯೆ ಸಾಕಷ್ಟು ವಿಚಾರಗಳು ಚರ್ಚೆ ಆಗುತ್ತಿವೆ. ಅವರು ಬೇರೆ ಆಗಿದ್ದಾರೆ ಎಂದು ಕೆಲವರು ಹೇಳಿದ್ದಾರೆ. ಆದರೆ, ಅಭಿಷೇಕ್ ಬಚ್ಚನ್ ಹಾಗೂ ಅಮಿತಾಭ್ ಬಚ್ಚನ್ ಇದನ್ನು ಅಲ್ಲಗಳೆಯುತ್ತಾ ಬರುತ್ತಿದ್ದಾರೆ. ಆದರೆ, ಐಶ್ವರ್ಯಾ ಹಾಗೂ ಅಭಿಷೇಕ್ ಒಟ್ಟಾಗಿ ಮಾತ್ರ ಕಾಣಿಸಿಕೊಳ್ಳುತ್ತಿಲ್ಲ. ಹೀಗಾಗಿ, ಆ ಅನುಮಾನ ಹಾಗೆಯೇ ಇರುವಂತೆ ಮಾಡಿದ್ದಾರೆ. ಈಗ ಅಭಿಷೇಕ್ ಅವರು ತಾಯಿ ಆಗಿ ಐಶ್ವರ್ಯಾ ಹಾಗೂ ಜಯಾ ಬಚ್ಚನ್ ನಿರ್ವಹಿಸುತ್ತಿರುವ ಜವಾಬ್ದಾರಿ ಬಗ್ಗೆ ಮಾತನಾಡಿದ್ದಾರೆ.

'ನನ್ನ ತಾಯಿ ನಾನು ಜನಿಸಿದ ಬಳಿಕ ನಟನೆ ತೊರೆದರು. ಮಕ್ಕಳ ಜೊತೆ ಸಮಯ ಕಳೆಯುವ ಉದ್ದೇಶ ಅವರದ್ದಾಗಿತ್ತು. ನನ್ನ ತಂದೆ ಹತ್ತಿರ ಇಲ್ಲ ಎಂದು ಅನುಭವಿಸೋಕೆ ತಾಯಿ ಬಿಡಲಿಲ್ಲ. ರಾತ್ರಿ ತಂದೆ ಬರುತ್ತಿದ್ದರು' ಎಂದಿದ್ದಾರೆ ಅಭಿಷೇಕ್.

'ನನ್ನ ಮನೆಯಲ್ಲಿ ನಾನು ಹೊರಗೆ ಹೋಗಿ ಸಿನಿಮಾ ಮಾಡಲು ಲಕ್ಕಿ ನಾನು. ಐಶ್ವರ್ಯಾ ಅವರು ಯಾವಾಗಲೂ ಆರಾಧ್ಯಳೊಂದಿಗೆ ಮನೆಯಲ್ಲಿದ್ದಾರೆ. ಅದಕ್ಕಾಗಿ ನಾನು ಅವರಿಗೆ ಅಪಾರ ಧನ್ಯವಾದ ಹೇಳುತ್ತೇನೆ. ನಾನು ಮಕ್ಕಳ ಜೊತೆ ಇಲ್ಲ ಎಂಬ ಕಾರಣಕ್ಕೆ ಅವರು ನನ್ನನ್ನು ಮೂರನೇ ವ್ಯಕ್ತಿ ಆಗಿ ನೋಡಲ್ಲ. ಅವರಲ್ಲಿ ಒಬ್ಬರು ಎಂದು ನನ್ನ ನೋಡುತ್ತಾರೆ' ಎಂದಿದ್ದಾರೆ ಅಭಿಷೇಕ್.

ಅಭಿಷೇಕ್ ಬಚ್ಚನ್ ಅವರು 'ಐ ವಾಂಟ್ ಟು ಟಾಕ್' ಸಿನಿಮಾದಲ್ಲಿ ನಟಿಸಿದ್ದಾರೆ. ಈ ಚಿತ್ರದಲ್ಲಿ ಅವರು ಎಲ್ಲರ ಗಮನ ಸೆಳೆದಿದ್ದಾರೆ. ಅವರ ನಟನೆಯ ಬಗ್ಗೆ ಎಲ್ಲರಿಂದ ಮೆಚ್ಚುಗೆ ಸಿಗುತ್ತಿದೆ. ಅಭಿಷೇಕ್ ಬಚ್ಚನ್ ಅವರು ಭೇಷ್ ಎನಿಸಿಕೊಳ್ಳುತ್ತಿದ್ದಾರೆ. ಅವರು ಸಿಂಗಲ್ ಪೇರೆಂಟ್ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಈ ಕಾರಣಕ್ಕೆ ಕುಟುಂಬದ ಬಗ್ಗೆ, ಕುಟುಂಬದ ವಿಚಾರದ ಬಗ್ಗೆ ಅವರು ಚರ್ಚೆ ಮಾಡುತ್ತಿದ್ದಾರೆ.

ಇತ್ತೀಚೆಗೆ 'ಕೋಟ್ಯಾಧಿಪತಿ' ಕಾರ್ಯಕ್ರಮಕ್ಕೆ ಅಭಿಷೇಕ್ ಬಚ್ಚನ್ ಅತಿಥಿಯಾಗಿ ತೆರಳಿದ್ದರು. ಈ ವೇಳೆ ಅವರು ಮಗಳ ಬಗ್ಗೆ ಮಾತನಾಡಿದ್ದಾರೆ. 'ಆರಾಧ್ಯಾ ಯಾವಾಗಲೂ ನನ್ನ ಮಗಳು' ಎಂದಿದ್ದಾರೆ.



# ಆರ್‌ಸಿಬಿಗೆ ಎಂಟ್ರಿ ಕೊಟ್ಟ 8 ವಿದೇಶಿ ಆಟಗಾರರು



ಐಪಿಎಲ್ ಸೀಸನ್-18 ಕ್ಕಾಗಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಬಲಿಷ್ಠ ಪಡೆಯನ್ನು ರೂಪಿಸಿಕೊಂಡಿದೆ. 3 ಆಟಗಾರರನ್ನು ರಿಟೈನ್ ಮಾಡಿಕೊಂಡಿದ್ದ ಆರ್ ಸಿಬಿ ಇದೀಗ ಮೆಗಾ ಹರಾಜಿನ ಮೂಲಕ 19 ಆಟಗಾರರನ್ನು ಖರೀದಿಸಿದೆ. ಈ ಮೂಲಕ 22 ಸದಸ್ಯರ ತಂಡವನ್ನು ಕಟ್ಟಿದೆ.

ಐಪಿಎಲ್ ಮೆಗಾ ಹರಾಜಿನ ಮೂಲಕ ರಾಯಲ್ ಚಾಲೆಂಜರ್ಸ್ ಬೆಂಗಳೂರು ಫ್ರಾಂಚೈಸಿ ಬಲಿಷ್ಠ ಪಡೆಯನ್ನು ರೂಪಿಸಿದೆ. ಈ ಹರಾಜಿಗೂ ಮುನ್ನ ಮೂವರನ್ನು ರಿಟೈನ್ ಮಾಡಿಕೊಂಡಿದ್ದ ಆರ್ ಸಿಬಿಯು ಇದೀಗ 19 ಆಟಗಾರರನ್ನು ಖರೀದಿಸಿದೆ. ಈ 19 ಆಟಗಾರರಲ್ಲಿ 8 ವಿದೇಶಿ ಆಟಗಾರರಿದ್ದಾರೆ. ಅವರು ಯಾರೆಂದರೆ

**ಫಿಲ್ ಸಾಲ್ಟ್:** ಕಳೆದ ಸೀಸನ್ ನಲ್ಲಿ ಕೊಲ್ಕತ್ತಾ ನೈಟ್ ರೈಡರ್ಸ್ ತಂಡದಲ್ಲಿದ್ದ ಇಂಗ್ಲೆಂಡ್ ನ ಸ್ಫೋಟಕ ದಾಂಡಿಗ ಫಿಲ್ ಸಾಲ್ಟ್ ಅವರನ್ನು ಈ ಬಾರಿ ಆರ್ ಸಿಬಿ 11.50 ಕೋಟಿ ರೂ. ನೀಡಿ ಖರೀದಿಸಿದೆ. ಈ ಮೂಲಕ ಆರ್ ಸಿಬಿ ಓಪನಿಂಗ್ ಹಾಗೂ ವಿಕೆಟ್ ಕೀಪರ್ ನ ಸ್ಥಾನವನ್ನು ತುಂಬಿಕೊಂಡಿದೆ.

**ಲಿಯಾಮ್ ಲಿವಿಂಗ್ ಸ್ಟೋನ್:** ಇಂಗ್ಲೆಂಡ್ ತಂಡದ ಆಲ್ ರೌಂಡರ್ ಲಿಯಾಮ್ ಲಿವಿಂಗ್ ಸ್ಟೋನ್ ಕಳೆದ ಸೀಸನ್ ನಲ್ಲಿ ಪಂಜಾಬ್ ಕಿಂಗ್ಸ್ ಪರ ಕಣಕ್ಕಿಳಿದಿದ್ದರು. ಈ ಬಾರಿ ಲಿವಿಂಗ್ ಸ್ಟೋನ್ ಅವರನ್ನು 8.75 ಕೋಟಿ ರೂ. ನೀಡಿ ಖರೀದಿಸುವಲ್ಲಿ ಆರ್ ಸಿಬಿ ಯಶಸ್ವಿಯಾಗಿದೆ.

**ಜೋಶ್ ಹ್ಯಾಝಲ್ ವುಡ್:** ಐಪಿಎಲ್ 2023 ರಲ್ಲಿ ಆರ್ ಸಿಬಿ ತಂಡದಲ್ಲಿದ್ದ ಜೋಶ್ ಹ್ಯಾಝಲ್ ವುಡ್ ಕಳೆದ ಸೀಸನ್ ನಲ್ಲಿ ಕಾಣಿಸಿಕೊಂಡಿರಲಿಲ್ಲ. ಇದೀಗ ಮತ್ತೆ ಐಪಿಎಲ್ ಗೆ ಮರಳಿರುವ ಆಸ್ಟ್ರೇಲಿಯಾ ವೇಗಿಯನ್ನು ಆರ್ ಸಿಬಿ 12.50 ಕೋಟಿ ರೂ. ನೀಡಿ ಖರೀದಿಸಿದೆ.

**ಟಿಮ್ ಡೇವಿಡ್:** ಕಳೆದ ಸೀಸನ್ ನಲ್ಲಿ ಮುಂಬೈ ಇಂಡಿಯನ್ಸ್ ಪರ ಕಣಕ್ಕಿಳಿದಿದ್ದ ಆಸ್ಟ್ರೇಲಿಯಾದ ಹೊಡಿಬಡಿ ದಾಂಡಿಗ ಟಿಮ್ ಡೇವಿಡ್ ಅವರನ್ನು ಆರ್ ಸಿಬಿ ಫ್ರಾಂಚೈಸಿಯು 3 ಕೋಟಿ ರೂ.ಗೆ ಖರೀದಿಸುವಲ್ಲಿ ಯಶಸ್ವಿಯಾಗಿದೆ.

**ರೊಮಾರಿಯೊ ಶೆಫರ್ಡ್:** ವೆಸ್ಟ್ ಇಂಡೀಸ್ ನ ಆಲ್ ರೌಂಡರ್ ರೊಮಾರಿಯೊ ಶೆಫರ್ಡ್ ಕಳೆದ ಸೀಸನ್ ನಲ್ಲಿ ಮುಂಬೈ ಇಂಡಿಯನ್ಸ್ ತಂಡದಲ್ಲಿದ್ದರು. ಈ ಬಾರಿಯ ಮೆಗಾ ಹರಾಜಿನಲ್ಲಿ ಕೇವಲ 1.5 ಕೋಟಿ ರೂ. ನೀಡಿ ರೊಮಾರಿಯೊ ಅನ್ನು ತನ್ನ ತೆಕ್ಕೆಗೆ ತೆಗೆದುಕೊಳ್ಳುವಲ್ಲಿ ಆರ್ ಸಿಬಿ ಯಶಸ್ವಿಯಾಗಿದೆ.

**ಜೇಕೊಬ್ ಬೆಥೆಲ್:** ಇಂಗ್ಲೆಂಡ್ ನ ಯುವ ಆಲ್ ರೌಂಡರ್ ನನ್ನು ರಾಯಲ್ ಚಾಲೆಂಜರ್ಸ್ ಬೆಂಗಳೂರು ಫ್ರಾಂಚೈಸಿಯು 2.6 ಕೋಟಿ ರೂ. ನೀಡಿ ಖರೀದಿಸಿದೆ.

**ನುವಾನ್ ತುಷಾರ:** ಶ್ರೀಲಂಕಾದ ವೇಗದ ಬೌಲರ್ ನುವಾನ್ ತುಷಾರ ಕಳೆದ ಸೀಸನ್ ನಲ್ಲಿ ಮುಂಬೈ ಇಂಡಿಯನ್ಸ್ ತಂಡದಲ್ಲಿದ್ದರು. ಈ ಬಾರಿ ಆರ್ ಸಿಬಿ ಫ್ರಾಂಚೈಸಿ ನುವಾನ್ ಅವರನ್ನು 1.6 ಕೋಟಿ ರೂ. ನೀಡಿ ಖರೀದಿಸಿದೆ.

**ಲುಂಗಿ ಎನ್ ಗಿಡಿ:** ಸೌತ್ ಆಫ್ರಿಕಾದ ವೇಗದ ಬೌಲರ್ ನನ್ನು ರಾಯಲ್ ಚಾಲೆಂಜರ್ಸ್ ಬೆಂಗಳೂರು ಫ್ರಾಂಚೈಸಿಯು 1 ಕೋಟಿ ರೂ. ನೀಡಿ ಖರೀದಿಸಿದೆ. ಕಳೆದ ಸೀಸನ್ ನಲ್ಲಿ ಎನ್ ಗಿಡಿ ಡೆಲ್ಲಿ ಕ್ಯಾಪಿಟಲ್ಸ್ ಪರ ಕಣಕ್ಕಿಳಿದಿದ್ದರು.

**ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ:** ವಿರಾಟ್ ಕೊಹ್ಲಿ, ರಜತ್ ಪಾಟಿದಾರ್, ಯಶ್ ದಯಾಳ್, ಲಿಯಾಮ್ ಲಿವಿಂಗ್ ಸ್ಟೋನ್, ಫಿಲ್ ಸಾಲ್ಟ್, ಜಿತೇಶ್ ಶರ್ಮಾ, ಜೋಶ್ ಹ್ಯಾಝಲ್ ವುಡ್, ರಸಿಖ್ ಸಲಾಂ, ಸುಯೇಶ್ ಶರ್ಮಾ, ಕೃನಾಲ್ ಪಾಂಡ್ಯ, ಭುವನೇಶ್ವರ್ ಕುಮಾರ್, ಸ್ವಪ್ನಿಲ್ ಸಿಂಗ್, ಟಿಮ್ ಡೇವಿಡ್, ನುವಾನ್ ತುಷಾರ, ರೊಮಾರಿಯೋ ಶೆಫರ್ಡ್, ಜೇಕೊಬ್ ಬೆಥೆಲ್, ಮನೋಜ್ ಭಾಂಡಗೆ, ಸ್ವಸ್ತಿಕ್ ಚಿಕಾರ, ದೇವದತ್ ಪಡಿಕ್ಕಲ್, ಮೋಹಿತ್ ರಾಠಿ, ಅಭಿನಂದನ್ ಸಿಂಗ್, ಲುಂಗಿ ಎನ್ ಗಿಡಿ.

# ರಿಷಭ್‌ಗಾಗಿ ಏಕಾಏಕಿ 7 ಕೋಟಿ ರೂ. ಹೆಚ್ಚಿಸಿದ ಲಕ್ನೋ



ಇಂಡಿಯನ್ ಪ್ರೀಮಿಯರ್ ಲೀಗ್ ಇತಿಹಾಸದಲ್ಲಿ ಅತ್ಯಧಿಕ ಮೊತ್ತಕ್ಕೆ ಬಿಕರಿಯಾದ ಆಟಗಾರನ ದಾಖಲೆ ರಿಷಭ್ ಪಂತ್ ಹೆಸರಿಗೆ ಸೇರ್ಪಡೆಯಾಗಿದೆ. ಐಪಿಎಲ್ ಸೀಸನ್-18ರ ಮೆಗಾ ಹರಾಜಿ ಮೂಲಕ ಲಕ್ನೋ ಸೂಪರ್ ಜೈಂಟ್ಸ್ ಫ್ರಾಂಚೈಸಿಯು ಪಂತ್ ಅವರನ್ನು ತಮ್ಮದಾಗಿಸಿಕೊಂಡಿದ್ದಾರೆ. ಅದು ಕೂಡ ಬರೋಬ್ಬರಿ 27 ಕೋಟಿ ರೂ. ನೀಡುವ ಮೂಲಕ ಎಂಬುದು ವಿಶೇಷ.

ಕುತೂಹಲಕಾರಿ ವಿಷಯ ಎಂದರೆ ರಿಷಭ್ ಪಂತ್ ಬಿಡ್ಡಿಂಗ್ ಮೂಲಕ ಪಡೆದ ಮೊತ್ತ 20.75 ಕೋಟಿ ರೂ. ಮಾತ್ರ. ಪಂತ್ ಖರೀದಿಗಾಗಿ ಡೆಲ್ಲಿ ಕ್ಯಾಪಿಟಲ್ಸ್ ಹಾಗೂ ಲಕ್ನೋ ಸೂಪರ್ ಜೈಂಟ್ಸ್ ನಡುವೆ ಆರಂಭದಿಂದಲೇ ಪೈಪೋಟಿ ಏರ್ಪಟ್ಟಿತ್ತು.

ಈ ಪೈಪೋಟಿಯೊಂದಿಗೆ ಪಂತ್ ಅವರ ಮೊತ್ತವು 20 ಕೋಟಿ ರೂ. ದಾಟಿದೆ. ಈ ವೇಳೆ ಅಂತಿಮವಾಗಿ ಲಕ್ನೋ ಸೂಪರ್ ಜೈಂಟ್ಸ್ ಫ್ರಾಂಚೈಸಿಯು 20.75 ಕೋಟಿ ರೂ. ಹರಾಜು ಕೂಗಿದ್ದರು. ಇದೇ ವೇಳೆ ಡೆಲ್ಲಿ ಕ್ಯಾಪಿಟಲ್ಸ್ ಫ್ರಾಂಚೈಸಿ ಆರ್‌ಟಿಎಂ ಆಯ್ಕೆ ಬಳಸಿಕೊಂಡಿತು.

ಕಳೆದ ಸೀಸನ್ ನಲ್ಲಿ ರಿಷಭ್ ಪಂತ್ ಡೆಲ್ಲಿ ಕ್ಯಾಪಿಟಲ್ಸ್ ತಂಡದಲ್ಲಿದ್ದರು. ಹೀಗಾಗಿ ಅವರ ಮೇಲೆ ಆರ್ ಟಿಎಂ ಆಯ್ಕೆ ಬಳಸಿ ತಂಡದಲ್ಲೇ ಉಳಿಸಿಕೊಳ್ಳಲು ಡೆಲ್ಲಿ ಕ್ಯಾಪಿಟಲ್ಸ್ ಫ್ರಾಂಚೈಸಿಗೆ ಅವಕಾಶವಿತ್ತು. ಹೀಗಾಗಿಯೇ ಡೆಲ್ಲಿ ಕ್ಯಾಪಿಟಲ್ಸ್ ಫ್ರಾಂಚೈಸಿ 20.75 ಕೋಟಿ ರೂ. ನಾವೇ ನೀಡುತ್ತೇವೆ ಎಂದು ಪಂತ್ ಅವರನ್ನು ತಂಡದಲ್ಲಿ ಉಳಿಸಿಕೊಳ್ಳಲು ಮುಂದಾಗಿದೆ.

ಆದರೆ ಐಪಿಎಲ್ ಮೆಗಾ ಹರಾಜಿನ ಹೊಸ ನಿಯಮದ ಪ್ರಕಾರ, ಆರ್ ಟಿಎಂ ಬಳಕೆಯ ಬಳಿಕ ಕೊನೆಯ ಬಾರಿ ಬಿಡ್ ಮಾಡಿದ ಫ್ರಾಂಚೈಸಿಗೆ ಇನ್ನೊಮ್ಮೆ ಬಿಡ್ ಮಾಡಲು ಅವಕಾಶ ನೀಡಲಾಗುತ್ತದೆ. ಅದರಂತೆ ಲಕ್ನೋ ಸೂಪರ್ ಜೈಂಟ್ಸ್ ಗೆ ಅಂತಿಮ ಬಿಡ್ ಗೆ ಅವಕಾಶ ನೀಡಲಾಗಿದೆ.

ಅದಾಗಲೇ ಆರ್‌ಟಿಎಂ ಮೂಲಕ ರಿಷಭ್ ಪಂತ್ ಅವರನ್ನು ಉಳಿಸಿಕೊಳ್ಳಲು ಬಯಸಿದ್ದ ಡೆಲ್ಲಿ ಕ್ಯಾಪಿಟಲ್ಸ್ ಫ್ರಾಂಚೈಸಿಯ ತಂತ್ರ ಅರಿತಿದ್ದ ಲಕ್ನೋ ಸೂಪರ್ ಜೈಂಟ್ಸ್ ಫ್ರಾಂಚೈಸಿಯು ಏಕಾಏಕಿ 7 ಕೋಟಿ ರೂ. ಹೆಚ್ಚಿಸಿ ತಂತ್ರಕ್ಕೆ ಪ್ರತಿತಂತ್ರ ಹೆಣೆದರು.

ಅತ್ತ ಅಷ್ಟೊಂದು ದುಬಾರಿ ಮೊತ್ತ ನೀಡುವ ಪರಿಸ್ಥಿತಿಯಲ್ಲಿರದ ಡೆಲ್ಲಿ ಕ್ಯಾಪಿಟಲ್ಸ್ ಫ್ರಾಂಚೈಸಿ ರಿಷಭ್ ಪಂತ್ ಅವರನ್ನು ಕೈ ಬಿಟ್ಟಿದೆ. ಈ ಮೂಲಕ ಲಕ್ನೋ ಸೂಪರ್ ಜೈಂಟ್ಸ್ ಫ್ರಾಂಚೈಸಿಯು ದಾಖಲೆಯ ಮೊತ್ತಕ್ಕೆ ರಿಷಭ್ ಪಂತ್ ಅವರನ್ನು ಖರೀದಿಸುವಲ್ಲಿ ಯಶಸ್ವಿಯಾಗಿದೆ.

## ಸಿಎಂ ಸಿದ್ದರಾಮಯ್ಯ ಆದೇಶ

# ಚಾಮುಂಡೇಶ್ವರಿಗೆ ಚಿನ್ನದ ರಥ ನಿರ್ಮಾಣ

**ಮೈಸೂರು:** ನಾಡದೇವಿ ಮೈಸೂರಿನ ಚಾಮುಂಡೇಶ್ವರಿಗೆ ಚಿನ್ನದ ರಥ ನಿರ್ಮಿಸುವ ಸಂಬಂಧ ಪರಿಶೀಲಿಸಿ, ಕೂಡಲೇ ಪ್ರಸ್ತಾವನೆ ಸಲ್ಲಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕಂದಾಯ ಇಲಾಖೆ ಧಾರ್ಮಿಕ ದತ್ತಿ ವಿಭಾಗದ ಪ್ರಧಾನ ಕಾರ್ಯದರ್ಶಿ ಅವರಿಗೆ ಆದೇಶಿಸಿದ್ದಾರೆ. ಪರಿಷತ್ ಸದಸ್ಯ ದಿನೇಶ್ ಗೂಳಿಗೌಡ ಮನವಿ ಹಿನ್ನೆಲೆ ಸಿಎಂ ಈ ಆದೇಶ ಮಾಡಿದ್ದಾರೆ. ನಾಡದೇವಿಗೆ ಚಿನ್ನದ ರಥ ನಿರ್ಮಿಸಬೇಕು ಎಂಬ ಭಕ್ತರ, ಬೇಡಿಕೆಯನ್ನು ಅರಿತು, ಸಂಕಲ್ಪ ಮಾಡಿಕೊಂಡು ಪ್ರಯತ್ನಿಸಲಾಗಿತ್ತು. ಸಿಎಂ ಆದೇಶದಿಂದ ಈಗ ಆ ಪ್ರಯತ್ನದಲ್ಲಿ ಮೊದಲ ಹೆಜ್ಜೆಯನ್ನು ಇಟ್ಟಂತಾಗಿದೆ.

**ತಾಯಿ ಚಾಮುಂಡೇಶ್ವರಿ:** ಚಾಮುಂಡೇಶ್ವರಿ ದೇವಿ ಕನ್ನಡ ನಾಡಿನ ಅಸ್ಮಿತೆ. ಕನ್ನಡಿಗರ ಧಾರ್ಮಿಕ ಪ್ರತಿನಿಧಿ. ಮೈಸೂರಿನ ಚಾಮುಂಡಿ ಬೆಟ್ಟಕ್ಕೆ, ದೇವಸ್ಥಾನಕ್ಕೆ, ದೇವಿಗೆ ಪೌರಾಣಿಕ, ಐತಿಹಾಸಿಕ ಹಿನ್ನೆಲೆ ಇದೆ. ಅದಕ್ಕಾಗಿಯೇ ಮೈಸೂರಿನಲ್ಲಿ ನಡೆಯುವ ದಸರಾವನ್ನು ನಾಡಹಬ್ಬ ಎಂದು ಕರೆಯಲಾಗುತ್ತದೆ. ಈ ನಾಡದೇವಿಯನ್ನು ಚಿನ್ನದ ರಥದಲ್ಲಿ ಕೂರಿಸಿ ಮೆರೆಸಬೇಕು ಎಂಬುದು ಭಕ್ತ ಕೋಟಿಯ ಬೇಡಿಕೆಯಾಗಿತ್ತು. ಈ ಹಿನ್ನೆಲೆ ವಿಧಾನಪರಿಷತ್ ಸದಸ್ಯ ದಿನೇಶ್ ಗೂಳಿಗೌಡ ಸಿಎಂ ಸಿದ್ದರಾಮಯ್ಯಗೆ ಮನವಿ ಪತ್ರ ನೀಡಿದ್ದರು.

ಚಿನ್ನದ ರಥ ನಿರ್ಮಾಣಕ್ಕೆ ಬೇಕಾದ ಅಂದಾಜು ವೆಚ್ಚದ ಪ್ರಸ್ತಾವನೆಯನ್ನು ಸರ್ಕಾರ ತಯಾರಿಸಬೇಕು. ದೇವಸ್ಥಾನದಲ್ಲಿ ಈ ಉದ್ದೇಶಕ್ಕೋಸ್ಕರ ಪ್ರತ್ಯೇಕ ಹುಂಡಿಯೊಂದನ್ನು ಇಡಬೇಕು. ಭಕ್ತರು ಅದರಲ್ಲಿ ಹಣ ಹಾಗೂ ಚಿನ್ನವನ್ನು ಹಾಕಲು ಅವಕಾಶ ನೀಡಬೇಕು. ಸಂಗ್ರಹಿತ ಕಾಣಿಕೆ ಹಣಕ್ಕಿಂತ ಹೆಚ್ಚಿಗೆ ಬೇಕಾಗುವ ಹಣವನ್ನು ಸರ್ಕಾರ ಭರಿಸಬೇಕು ಎಂದು ಮನವಿ ಮಾಡಿದ್ದರು. ಇದಕ್ಕೆ ಸಿಎಂ ಸಿದ್ದರಾಮಯ್ಯ ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ.

**ಚಾಮುಂಡೇಶ್ವರಿ ಹಿನ್ನೆಲೆ :** ಪುರಾಣದ ದೇವಿ ಮಹಾತ್ಮೆಯಲ್ಲಿ ತಾಯಿ ಚಾಮುಂಡಿಯ ಪ್ರಸ್ತಾಪವಿದೆ. ಶಕ್ತಿ ದೇವತೆ ಬೆಟ್ಟದ ಮೇಲೆ ವಾಸವಾಗಿದ್ದ ಮಹಿಷಾಸುರನನ್ನು ವಧಿಸಿದಳೆಂಬ ಕಥೆ 'ದೇವಿ ಮಹಾತ್ಮೆ'ಯಲ್ಲಿ ವರ್ಣಿತವಾಗಿದೆ ಶ್ರೀ ಚಾಮುಂಡೇಶ್ವರಿಯಿಂದಲೇ ಈ ಬೆಟ್ಟಕ್ಕೆ ಚಾಮುಂಡಿಬೆಟ್ಟವೆಂಬ ಹೆಸರು ಬಂದಿದೆ. ಸ್ಕಂದ ಪುರಾಣದಲ್ಲಿ ಎಂಟು ಬೆಟ್ಟಗಳಿಂದ ಸುತ್ತುವರಿದ ತ್ರಿಮುಕುಟ ಕ್ಷೇತ್ರವೆಂಬ ಪವಿತ್ರ ಕ್ಷೇತ್ರ ಉಲ್ಲೇಖಿತವಾಗಿದೆ. ಅವುಗಳಲ್ಲಿ ಪಶ್ಚಿಮ ಭಾಗದಲ್ಲಿರುವ ಚಾಮುಂಡಿಬೆಟ್ಟವೂ ಒಂದಾಗಿದೆ. ಚಾಮುಂಡಿಬೆಟ್ಟದಲ್ಲಿರುವ ಶ್ರೀ ಮಹಾಬಲೇಶ್ವರ ದೇವಸ್ಥಾನವು ಅತ್ಯಂತ ಪ್ರಾಚೀನವಾದುದು. ಹಿಂದೆ ಬೆಟ್ಟವನ್ನು ಮಹಾಬಲಾದ್ರಿ, ಎಂದೂ ಸಹ ಕರೆಯಲಾಗುತ್ತಿತ್ತು. ಮುಖ್ಯ ದೇಗುಲದ ಗರ್ಭಗುಡಿಯಲ್ಲಿ ಮಹಿಷಮರ್ಧಿನಿಯಾದ ಚಾಮುಂಡೇಶ್ವರಿಯ



ವಿಗ್ರಹವು ವಿರಾಜಮಾನವಾಗಿದೆ. ಎಂಟು ಭುಜಗಳನ್ನು ಹೊಂದಿರುವ ಚಾಮುಂಡೇಶ್ವರಿ ಇಲ್ಲಿ ಆಸೀನಳಾಗಿದ್ದಾಳೆ. ಈ ವಿಗ್ರಹವು ಬಹಳಷ್ಟು ಪುರಾತನವಾದದ್ದು. ಈ ಶಿಲಾಮೂರ್ತಿಯನ್ನು ಮಾರ್ಕಂಡೇಯ ಋಷಿಗಳು ಸ್ಥಾಪಿಸಿದರೆಂದು ಸ್ಥಳ ಪುರಾಣ ಹೇಳುತ್ತದೆ

**ಐತಿಹಾಸಿಕ ಹಿನ್ನೆಲೆ:** ಚಾಮುಂಡೇಶ್ವರಿ ದೇವಸ್ಥಾನಕ್ಕೆ 500 ವರ್ಷಕ್ಕೂ ಹೆಚ್ಚಿನ ಇತಿಹಾಸವಿದೆ. ಚಾಮುಂಡಿ ಬೆಟ್ಟದಲ್ಲಿ ಹಿಂದೆ ದೇವಿಯ ಚಿಕ್ಕದೊಂದು ದೇವಸ್ಥಾನವಿದ್ದು, ಕ್ರಮೇಣ ಅಭಿವೃದ್ಧಿ ಹೊಂದಿ, ಹೆಚ್ಚಿನ ಪ್ರಾಮುಖ್ಯತೆ ಗಳಿಸಿ, ಶ್ರೀ ಚಾಮುಂಡೇಶ್ವರಿ ಕ್ಷೇತ್ರವೆಂಬ ದೊಡ್ಡ ಧಾರ್ಮಿಕ ಕೇಂದ್ರವಾಗಿ ಅಭಿವೃದ್ಧಿಯಾಗಿದೆ ಎಂದು ತಿಳಿದುಬರುತ್ತದೆ. ಹಾಗೂ ದೇವಾಲಯವನ್ನು ಮುನ್ನೆಲೆಗೆ ತಂದಿದ್ದಾರೆ. ಚಾಮುಂಡಿ ಬೆಟ್ಟ ಅಭಿವೃದ್ಧಿಯಲ್ಲಿ ಹೊಯ್ಸಳ, ವಿಜಯನಗರ ಅರಸರ ಕೊಡುಗೆಯಿದೆ. 12ನೇ ಶತಮಾನದ ಹೊಯ್ಸಳ ದೊರೆ ವಿಷ್ಣುವರ್ಧನ ಹಾಗೂ 17ನೇ ಶತಮಾನದ ವಿಜಯನಗರದ ಅರಸರ ಹಿನ್ನೆಲೆಯನ್ನು ಗುರುತಿಸಲಾಗಿದೆ.

**ಮೈಸೂರು ಅರಸರ ಕುಲದೇವತೆ:** ಪ್ರಮುಖವಾಗಿ 1399 ರಲ್ಲಿ ಅಧಿಕಾರಕ್ಕೆ ಬಂದ ಮೈಸೂರು ಅರಸರು ಈ ದೇವಿ ಅರಾಧಕರಾಗಿದ್ದು, ಶ್ರದ್ಧಾ ಭಕ್ತಿಯಿಂದ ದೇವಸ್ಥಾನವನ್ನು, ಲೋಕ ಕಲ್ಯಾಣಾರ್ಥವಾಗಿ ಅಭಿವೃದ್ಧಿಪಡಿಸಿ ಅದನ್ನು ದೊಡ್ಡದಾದ ದೇವಾಲಯವನ್ನಾಗಿಸಿದ್ದಾರೆ. 1827 ರಲ್ಲಿ ಮುಮ್ಮಡಿ ಕೃಷ್ಣರಾಜ ಒಡೆಯರು ಸಾವಿರ ವರ್ಷಕ್ಕೂ ಹಿಂದಿನ ಹಿನ್ನಲೆಯಿರುವ ದೇವಸ್ಥಾನದ ಜೀರ್ಣೋದ್ಧಾರ ಮಾಡಿ ಮಹಾದ್ವಾರದ ಮೇಲೆ ಈ ದೊಡ್ಡ ಗೋಪುರವನ್ನು ಕಟ್ಟಿಸಿದರು ಎಂಬ ಇತಿಹಾಸವಿದೆ. ನಮ್ಮ ರಾಜ್ಯಕ್ಕೆ ಕರ್ನಾಟಕ ಎಂದು ಹೆಸರು ಬರುವುದಕ್ಕೂ ಮೊದಲು ಮೈಸೂರು ರಾಜ್ಯ ಎಂಬ ಹೆಸರಿತ್ತು. ಮೈಸೂರಿನ ಅಧಿದೇವತೆ ಚಾಮುಂಡಿ ನಾಡದೇವಿಯಾಗಿದ್ದಳು.

ಮೈಸೂರಿನ ದಸರಾ ನಾಡ ಹಬ್ಬವಾಗಿತ್ತು. ಹಾಗಾಗಿ ಕನ್ನಡ ನಾಡಿಗೂ ಮೈಸೂರಿನ ಚಾಮುಂಡಿಗೂ ಅವಿನಾಭಾವ ಸಂಬಂಧವಿದೆ. ಪೌರಾಣಿಕ, ಐತಿಹಾಸಿಕ ಹಿನ್ನೆಲೆ ಮಾತ್ರವಲ್ಲದೆ ಜನರು ಭಾವನಾತ್ಮಕವಾಗಿಯೂ, ಆಧ್ಯಾತ್ಮಿಕವಾಗಿಯೂ ಚಾಮುಂಡಿ ಬೆಟ್ಟದ ಜತೆ ಸಂಬಂಧವನ್ನು ಹೊಂದಿದ್ದಾರೆ. ಈ ದೇವಿಯ ದರ್ಶನಕ್ಕಾಗಿ ಬಹುದೂರದಿಂದ, ದೇಶವಿದೇಶಗಳಿಂದ ಭಕ್ತಾಧಿಗಳು ಬಂದು ತಮ್ಮ ಹರಕೆಗಳನ್ನು ಸಲ್ಲಿಸಿ ಇಷ್ಟಾರ್ಥಗಳನ್ನು ಹೊಂದುತ್ತಿರುತ್ತಾರೆ. ಈ ದೇವಿಯು ಹರಕೆ ದೇವತೆಯಾಗಿ ಆಗಮೋಕ್ತ ಪೂಜಾದಿ ಉತ್ಸವಗಳನ್ನು ಕೈಗೊಳ್ಳುತ್ತಾ ಪರ್ವತಾಗ್ರದಲ್ಲಿ ಕುಳಿತು ಭಕ್ತರ ಇಷ್ಟಾರ್ಥಗಳನ್ನು ನೆರವೇರಿಸುತ್ತಾ ಸರ್ವರನ್ನು ರಕ್ಷಿಸುತ್ತಿರುತ್ತಾಳೆ ಎಂಬುದು ಜನರ ನಂಬಿಕೆ.

**ಚಾಮುಂಡಿ ರಥ:** 1827 ರಲ್ಲಿ ಮುಮ್ಮಡಿ ಕೃಷ್ಣರಾಜಒಡೆಯರು . 'ಸಿಂಹವಾಹನ' ರಥವನ್ನು ಒಂದನ್ನು ಮರದಲ್ಲಿ ನಿರ್ಮಿಸಿ ಕೊಡುಗೆ ನೀಡಿದರು. 'ಸಿಂಹ ವಾಹನ' ವನ್ನು ರಥೋತ್ಸವ ಸಂದರ್ಭದಲ್ಲಿ ಬಳಸಲಾಗುತ್ತಿದೆ. ಅದರಲ್ಲಿ ದೇವಿಯ ಉತ್ಸವ ಮೂರ್ತಿಯನ್ನಿಟ್ಟು ರಥವನ್ನು ಎಳೆಯಲಾಗುತ್ತದೆ. ಮುಮ್ಮಡಿ ಕೃಷ್ಣರಾಜಒಡೆಯರೇ ಮೂಲ ಮೂರ್ತಿಗೆ ಅನುಗುಣವಾಗಿ ಉತ್ಸವ ಮೂರ್ತಿಯನ್ನೂ ತಯಾರಿಸಿ ಶೈವಾಗಮದಲ್ಲಿ ನುರಿತ ದೀಕ್ಷಿತರನ್ನು ಕಂಚಿ ಕ್ಷೇತ್ರದಿಂದ ಕರೆ ತಂದು ಆಗಮೋಕ್ತವಾಗಿ ಪೂಜೆ ಸಲ್ಲಿಸುವಂತೆ ಮಾಡಿದರು ಎನ್ನುತ್ತದೆ ಇತಿಹಾಸ.

1928 ರಿಂದ ರಥೋತ್ಸವ ನಡೆಯುತ್ತ ಬಂತು ಎಂಬ ಇತಿಹಾಸವಿದೆ. ಆಶ್ವಯುಜ ಶುಕ್ಲ ಪೂರ್ಣಿಮೆಯ ಸಂದರ್ಭದಲ್ಲಿ ಪ್ರತಿ ವರ್ಷ ದೇವಿಯ ರಥಾರೋಹಣ ಮಾಡಿ, ರಥೋತ್ಸವ ನಡೆಸಲಾಗುತ್ತದೆ. ಈ ಸಂದರ್ಭದಲ್ಲಿ ಮಂಟಪೋತ್ಸವ, ಸಿಂಹವಾಹನೋತ್ಸವ, ಹಂಸವಾಹನೋತ್ಸವ ಮುಂತಾದ ಕಾರ್ಯಕ್ರಮಗಳು ಶಾಸ್ತ್ರೋಕ್ತವಾಗಿ ಹಾಗೂ ಬಹು ವಿಜೃಂಭಣೆಯಿಂದ ದೇವಸ್ಥಾನದ ಆವರಣದಲ್ಲಿ ಜರುಗುತ್ತವೆ.

**ಸುವರ್ಣ ರಥ ಸಂಕಲ್ಪ:** ನಮ್ಮ ಶರೀರದ ಒಳಗಡೆ ಹೇಗೆ ಪರಮಾತ್ಮನಿರುತ್ತಾನೋ ಹಾಗೇ 24 ತತ್ವಗಳಿರುವ ರಥದಲ್ಲೂ ಪರಮಾತ್ಮ ನೆಲೆಸಿರುತ್ತಾನೆ ಎಂಬುದು ಹಿಂದು ಶ್ರದ್ಧಾಳುಗಳ ನಂಬಿಕೆಯಾಗಿದೆ. 1982 ಕೊಯಮುತ್ತೂರಿನ ಭಕ್ತಾದಿಗಳು ಈಗಿನ ಮರದ ರಥವನ್ನು ಮಾಡಿಸಿದರು ಎನ್ನಲಾಗುತ್ತದೆ. ಹಾಲಿ ರಥವೂ ಶಿಥಿಲವಾಗುತ್ತ ಬಂದಿವೆ. ಹಾಗಾಗಿ ಹೊಸ ಚಿನ್ನದ ರಥ ನಿರ್ಮಿಸಿ ಚಾಮುಂಡಿ ದೇವಿಯ ರಥೋತ್ಸವ ಮಾಡಬೇಕು ಎಂಬುದು ಭಕ್ತರ ಸಂಕಲ್ಪ. ದೇವಿಗೆ ಹೊಸ ಚಿನ್ನದ ರಥ ನಿರ್ಮಿಸುವ ಪ್ರಸ್ತಾವ ಈ ಹಿಂದೆಯೇ ಬಂದಿತ್ತು. ಅದಕ್ಕೆ ಸುಮಾರು 100 ಕೋಟಿ ರೂ. ಬೇಕಾಗಬಹುದು ಎಂದು ಅಂದಾಜಿಸಲಾಗಿತ್ತು. ಆದರೆ, ವಿವಿಧ ಕಾರಣಗಳಿಂದ ಅದು ಈಡೇರಿರಲಿಲ್ಲ. ಚಿನ್ನದ ರಥ ಮಾಡಲು ಸರ್ಕಾರ ಹಣ ಹಣದ ಅವಶ್ಯಕತೆ ಜೊತೆಗೆ . ಭಕ್ತಾದಿಗಳು ದುಡ್ಡು ಮತ್ತು ಚಿನ್ನವನ್ನು ಹಾಕುತ್ತಾರೆ. ಅದಕ್ಕಾಗಿ ಹುಂಡಿಗಳನ್ನು ಪ್ರತಿಷ್ಠಾಪಿಸಬೇಕು. ಮುಂದಿನ ದಸರಾದ ಒಳಗಡೆ ರಥ ನಿರ್ಮಿಸಿ ದೇವಸ್ಥಾನದ ಒಳಗಡೆ ಆಕೆಯನ್ನು ಮೆರವಣಿಗೆ ಮಾಡಬೇಕು ಎಂಬುದು ಭಕ್ತರ ಬೇಡಿಕೆಯಾಗಿದೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com